ಸಂಪುಟ: 05 ಸಂಚಿಕೆ: 239 ಪುಟಗಳು: 08 ಗುರುವಾರ 13 ನವೆಂಬರ್ 2025

www.udayavahini.in · epaper.udayavahini.in · Udaya vahini news · Udaya vahini news · Udayavahini news youtube · udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 · +91 8035841833
₹5

**ಮುಂಜಾನೆ ಮಾತು**
ಜೀವನದಲ್ಲಿ ಎದುರಾಗುವ ಎಲ್ಲಾ ಸಮಸ್ಯೆಗಳಿಗೂ ಉತ್ತರವಿದೆ ಎನ್ನಲಾಗದು. ನಮ್ಮ ಮಿತಿಯನ್ನರಿತುಕೊಂಡು, ಸಮಸ್ಯೆಗಳ ಪರಿಹಾರಕ್ಕೆ ಪ್ರಯತ್ನಿಸುತ್ತ ಜೀವನ ಸಾಗುವುದೇ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಬೆಳಗಾವಿ ಅಧಿವೇಶನದಲ್ಲಿ ಸರ್ಕಾರದ ಸವಲತ್ತುಗಳನ್ನು ಪಡೆಯುವುದಿಲ್ಲ

• ಉದಯವಾಹಿನಿ, ಬೆಂಗಳೂರು

ಬೆಳಗಾವಿಯಲ್ಲಿ ನಡೆಯುವ ಚಳಿಗಾಲದ ವಿಧಾನಸಭೆ ಅಧಿವೇಶನದ ಸಂದರ್ಭದಲ್ಲಿ ಸರ್ಕಾರದ ಸವಲತ್ತುಗಳನ್ನು ಪಡೆಯುವುದಿಲ್ಲ ಎಂದು ಗುರುಮಠಕಲ್ ಕ್ಷೇತ್ರದ ಜೆಡಿಎಸ್ ಶಾಸಕ ಶರಣಗೌಡ ಕಂದಕೂರ್ ಅವರು ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಅವರಿಗೆ ಪತ್ರ ಬರೆದಿದ್ದಾರೆ. ಕಳೆದ ವರ್ಷ ಬೆಳಗಾವಿಯಲ್ಲಿ ನಡೆದ ಚಳಿಗಾಲದ ಅಧಿವೇಶನದ ಕಲಾಪದ ಚರ್ಚೆಯಲ್ಲಿ ಭಾಗವಹಿಸಿದಂತೆ ಈ ವರ್ಷದ ಬೆಳಗಾವಿ ಅಧಿವೇಶನದಲ್ಲಿ ಭಾಗವಹಿಸುವುದಾಗಿ ಅವರು ಹೇಳಿದ್ದಾರೆ. ಅಧಿವೇಶನದ ಸಂದರ್ಭದಲ್ಲಿ ಸರ್ಕಾರ ಶಾಸಕರಿಗೆ ಒದಗಿಸುವ ಊಟ, ಉಪಹಾರ, ಚಹಾ ಸೇರಿದಂತೆ ಯಾವುದೇ ತರಹದ ಭತ್ಯೆ, ವಸತಿ ವ್ಯವಸ್ಥೆ ಪಡೆಯುದಿವುಲ್ಲ. ಆದರೆ, ಹೊರಗಿನಿಂದ ಊಟ ತರಿಸಿಕೊಂಡು ಬಳಸಲು ಅನುವು ಮಾಡಿಕೊಡಬೇಕೆಂದು ಅವರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಉತ್ತರ ಕರ್ನಾಟಕದ ಸಮಸ್ಯೆ ಮತ್ತು ಬೇಡಿಕೆಗಳಿಗೆ ಸಂಬಂಧಿಸಿದಂತೆ ಪ್ರತಿ ವರ್ಷವೂ ನಡೆಸುವ ಚಳಿಗಾಲದ ಅಧಿವೇಶನದಿಂದ ಯಾವುದೇ ಪ್ರಯೋಜನವಾಗುತ್ತಿಲ್ಲ. ಕಳೆದ ಅಧಿವೇಶನದಲ್ಲಿ ನಡೆದ ಚರ್ಚೆಗಳ ವಿಷಯಗಳ ಕುರಿತು ಸರ್ಕಾರ ತೆಗೆದುಕೊಂಡ ಕ್ರಮಗಳ ಬಗ್ಗೆ ರಾಜ್ಯದ ಜನತೆಗೆ ಇದುವರೆಗೂ ತಿಳಿಸಿಲ್ಲ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

## ಕಬ್ಬು ಬೆಳೆಗಾರರ ರೀತಿಯಲ್ಲಿ ಮೆಕ್ಕೆಜೋಳ ಬೆಳೆಗಾರರು ಬೀದಿಗಿಳಿಯುತ್ತಾರೆ

• ಉದಯವಾಹಿನಿ, ಬೆಂಗಳೂರು

ಕಬ್ಬು ಬೆಳೆಗಾರರು ನಡೆಸಿದ ಹೋರಾಟದ ರೀತಿಯಲ್ಲಿ ಮೆಕ್ಕೆಜೋಳ ಬೆಳೆಗಾರರೂ ಸಹ ಬೀದಿಗಿಳಿದು ಪ್ರತಿಭಟನೆ ಮಾಡುವುದು ಅನಿವಾರ್ಯವಾಗಲಿದೆ. ನಮ್ಮ ಅನ್ನದಾತರ ಹೋರಾಟಕ್ಕೆ ಬಿಜೆಪಿ ಸಂಪೂರ್ಣ ಬೆಂಬಲ ನೀಡಲಿದೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ. ಎಕ್ಸ್‌ನಲ್ಲಿ ಈ ಕುರಿತು ಪೋಸ್ಟ್ ಮಾಡಿರುವ ಅವರು, ಮೆಕ್ಕೆಜೋಳ ರೈತರ ಹೊಟ್ಟೆ ಮೇಲೆ ಹೊಡೆಯುತ್ತಿರುವ ಕಾಂಗ್ರೆಸ್ ಸರ್ಕಾರಕ್ಕೆ ಧಿಕ್ಕಾರ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕಬ್ಬು ಬೆಳೆಗಾರರ ನಂತರ ಈಗ ಮೆಕ್ಕೆಜೋಳ ರೈತರು ಸಂಕಷ್ಟದ ಸುಳಿಗೆ ಸಿಲುಕಿದ್ದಾರೆ. ಆದರೆ ಎಂದಿನಂತೆ ಈ ದರಿದ್ರ ಕಾಂಗ್ರೆಸ್ ಸರ್ಕಾರ ರೈತರ ಸಂಕಷ್ಟಕ್ಕೆ ಕ್ಯಾರೆ ಅನ್ನದೇ ರೈತ ವಿರೋಧಿ ಧೋರಣೆ ಪ್ರದರ್ಶಿಸುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಎಂಎಸ್‌ಪಿಗಿಂತ ಕಡಿಮೆ ಬೆಲೆಯಲ್ಲಿ ಖರೀದಿ,ಗೋವಿನ ಜೋಳ ನಷ್ಟ ಪರಿಹಾರ ನೀಡುವಲ್ಲಿ ತಾರತಮ್ಯ, ಸಮೀಕ್ಷೆಯಲ್ಲಿ ಲೋಪದೋಷದಿಂದ ರೈತರಿಗೆ ನಷ್ಟವಾಗಿದೆ. ಇದಕ್ಕೆಲ್ಲಾ ಯಾರು ಹೊಣೆ? ಎಂದು ಪ್ರಶ್ನಿಸಿದರು. ಕಾಂಗ್ರೆಸ್ ಸರ್ಕಾರ ಈ ಕೂಡಲೇ ಮೆಕ್ಕೆಜೋಳ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಬೇಕು, ರೈತರ ಬೇಡಿಕೆಯಂತೆ, ಎಂಎಸ್‌ಪಿಗಿಂತ ಹೆಚ್ಚಿನ ದರ ಘೋಷಿಸಿ ಖರೀದಿಸಬೇಕು ಎಂದು ಆಗ್ರಹಿಸಿದರು.


## ಇಸ್ಲಾಂನಲ್ಲಿ ಭಯೋತ್ಪಾದನೆಗೆ ಅವಕಾಶ ಇಲ್ಲ: ಜಮೀರ್ ಅಹ್ಮದ್ ಖಾನ್

• ಉದಯವಾಹಿನಿ, ಬೆಂಗಳೂರು

ಇಸ್ಲಾಂ ಧರ್ಮದಲ್ಲಿ ಭಯೋತ್ಪಾದನೆಗೆ ಅವಕಾಶ ಇಲ್ಲ. ಹಾಗಾಗಿ ಭಯೋತ್ಪಾದಕರು ಮುಸ್ಲಿಮರಾಗಲು ಸಾಧ್ಯವಿಲ್ಲ ಎಂದು ಸಚಿವ ಜಮೀರ್ ಅಹ್ಮದ್ ಖಾನ್ ಹೇಳಿದರು. ಬೆಂಗಳೂರಿನಲ್ಲಿ ಮಾತನಾಡಿದ ಅವರು, ದೆಹಲಿ ಕಾರ್ ಸ್ಫೋಟ ಪ್ರಕರಣ ಹಾಗೂ ಉಗ್ರಗಾಮಿ ಚಟುವಟಿಕೆಯ ಆರೋಪದಲ್ಲಿ ಬಂಧಿತರಾಗಿರುವ ವೈದ್ಯರ ನೆಟ್‌ವರ್ಕ್ ಬಗ್ಗೆ ಮಾತನಾಡಿದರು. ಬಿಹಾರ ಚುನಾವಣೆ ಒಂದು ದಿನದ ಮುಂಚೆ ಬ್ಲಾಸ್ಟ್ ಹೇಗಾಯಿತು? ಹಾಗೇನಾದರೂ ಆಗಿದ್ರೆ, ಯಾರಿಗೂ ಒಳ್ಳೆಯದಾಗಲ್ಲ. ಯಾರೂ ಇಲ್ಲಿಯೇ ಗೂಟ ಹೊಡೆದುಕೊಂಡು ಇಲ್ಲಿಯೇ ಇರುವುದಿಲ್ಲ. ಸಿಎಂ ಆಗ್ಲಿ ಪ್ರಧಾನಿ ಆಗಲು ಯಾರೂ ಶಾಶ್ವತವಾಗಿ ಇಲ್ಲಿಯೇ ಗೂಟ ಹೊಡೆದು ಇರುವುದಿಲ್ಲ ಎಂದು ಹೇಳಿದರು.

ಸ್ಫೋಟದ ಬಗ್ಗೆ ಅನುಮಾನ ಇದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಅವರು, ಬ್ಲಾಸ್ಟ್ ಕುರಿತಾಗಿ ನನಗೆ ಅನುಮಾನ ಇಲ್ಲ. ಆದರೆ ಈ ಪ್ರಶ್ನೆಯನ್ನು ನಾನು ಕೇಳುತ್ತಿದ್ದೇನೆ. ಭಯೋತ್ಪಾದಕರಿಗೆ ಜಾತಿಯೇ ಇಲ್ಲ. ಇಸ್ಲಾಂ ಧರ್ಮದಲ್ಲಿ ಟೆರರಿಸಂಗೆ ಯಾರೂ ಅವಕಾಶನೇ ಕೊಟ್ಟಿಲ್ಲ ಎಂದರು.

ಇಸ್ಲಾಂ ಧರ್ಮದ ಪ್ರಕಾರ ಭಯೋತ್ಪಾದನೆ ಮಾಡುವವನು ಮುಸ್ಲಿಂ ಅಲ್ಲ. ಹಾಗೇನಾದರೂ ಇಂತಹ ಕೃತ್ಯ ಎಸಗಿದರೆ ಹುಳ ಬಿದ್ದು ಸಾಯ್ತಾನೆ ಅವನು. ಆದರೆ ಕಾರ್ ಸ್ಫೋಟ ಪ್ರಕರಣದ ಬಗ್ಗೆ ಒಂದಿಷ್ಟು ಪ್ರಶ್ನೆಗಳು ಇವೆ. ನವೆಂಬರ್ 11 ಕ್ಕೆ ಬಿಹಾರ ಚುನಾವಣೆ ನಡೆಯಿತು. ಒಂದು ದಿನದ ಮುಂದೆ ಬ್ಲಾಸ್ಟ್ ಆಗಿದೆ. ಅದು ಹೇಗೆ ಎಂದು ಪ್ರಶ್ನಿಸಿದರು.



# ತನಿಖೆಗೆ ಹೈ ಅಸ್ತು ತಿಮರೋಡಿ ಗ್ಯಾಂಗ್ ಸುಸ್ತು



• ಉದಯವಾಹಿನಿ, ಬೆಂಗಳೂರು

ಧರ್ಮಸ್ಥಳದಲ್ಲಿ ನೂರಾರು ಮೃತದೇಹಗಳನ್ನು ಹೂತಿಟ್ಟಿದ್ದಾರೆ ಎನ್ನಲಾದ ಪ್ರಕರಣದ ಬಗ್ಗೆ ವಿಶೇಷ ತನಿಖಾ ತಂಡ (ಎಸ್‌ಐಟಿ) ನಡೆಸುತ್ತಿದ್ದ ತನಿಖೆಗೆ ನೀಡಿದ್ದ ಮಧ್ಯಂತರ ತಡೆಯಾಜ್ಞೆಯನ್ನು ಹೈಕೋರ್ಟ್ ತೆರವುಗೊಳಿಸಿದೆ. ಈ ಆದೇಶದಿಂದ ಪ್ರಕರಣದಲ್ಲಿ ಎಸ್‌ಐಟಿ ತನಿಖೆ ಮುಂದುವರೆಯಲಿದ್ದು, ಪಿತೂರಿ ನಡೆಸಿದ ಆರೋಪ ಎದುರಿಸುತ್ತಿದ್ದ ವಿಠಲಗೌಡ, ಗಿರೀಶ್ ಮಟ್ಟಣ್ಣವರ್, ಮಹೇಶ್ ತಿಮರೋಡಿ ಮತ್ತು ಟಿ. ಜಯಂತ್ ಅವರು ಎಸ್‌ಐಟಿ ಮುಂದೆ ವಿಚಾರಣೆಗೆ ಹಾಜರಾಗಬೇಕಾಗಿದೆ. ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ತಮ್ಮ ವಿರುದ್ಧ ದಾಖಲಿಸಿರುವ ಪ್ರಕರಣ (ಎಫ್‌ಐಆರ್39/2025) ಸಂಬಂಧ ವಿಚಾರಣೆಗೆ ಹಾಜರಾಗುವಂತೆ ಬೆಳ್ತಂಗಡಿ ಪೊಲೀಸರು ಜಾರಿ ಮಾಡಿದ್ದ ನೋಟಿಸ್ ಪ್ರಶ್ನಿಸಿ, ಗಿರೀಶ್ ಮಟ್ಟಣ್ಣವರ್, ಮಹೇಶ್ ಶೆಟ್ಟಿ ತಿಮರೋಡಿ, ಟಿ. ಜಯಂತ್ ಮತ್ತು ವಿಠಲ್‌ಗೌಡ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಪಿ. ಎಂ. ನವಾಜ್ ಅವರಿದ್ದ ನ್ಯಾಯಪೀಠ ತಡೆಯಾಜ್ಞೆ ತೆರವುಗೊಳಿಸಿ ಆದೇಶಿಸಿದೆ.

**ವಕೀಲರ ವಾದ:** ವಿಚಾರಣೆ ವೇಳೆ, ಸರ್ಕಾರದ ಪರ ವಕೀಲರು, ಅರ್ಜಿದಾರರಿಗೆ ಈ ಹಿಂದೆ ಹಲವು ಬಾರಿ ನೋಟಿಸ್ ನೀಡಿರುವುದು 150 ತಾಸು ವಿಚಾರಣೆ ನಡೆಸುವುದಾಗಿ ತಿಳಿಸಿದ್ದಾರೆ. ಆದರೆ, ಆ ನೋಟಿಸ್ ಮತ್ತು ವಿಚಾರಣೆ ನಡೆಸಿರುವ ಸಂದರ್ಭದಲ್ಲಿ ಅರ್ಜಿದಾರರನ್ನು ಸಾಕ್ಷಿಗಳನ್ನಾಗಿ ಪರಿಗಣಿಸಲಾಗಿತ್ತು. ಇದೀಗ ಅರ್ಜಿದಾರರನ್ನು ಆರೋಪಿಗಳನ್ನಾಗಿ ಪರಿಗಣಿಸಿ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಲಾಗಿದೆ'' ಎಂದು ಪೀಠಕ್ಕೆ ವಿವರಿಸಿದರು. ವಾದ ಆಲಿಸಿದ ಪೀಠ, ತಡೆಯಾಜ್ಞೆ ತೆರವುಗೊಳಿಸಿ ವಿಚಾರಣೆಯನ್ನು ಮುಂದೂಡಿತು. ಈ ಹಿಂದೆ ಅರ್ಜಿಯ ಸಂಬಂಧ ವಿಚಾರಣೆ ನಡೆದ ಸಂದರ್ಭದಲ್ಲಿ ಅರ್ಜಿದಾರರ ಪರ ವಕೀಲರು, ಅರ್ಜಿದಾರರಿಗೆ ಈಗಾಗಲೇ 9 ಬಾರಿ ನೋಟಿಸ್ ಜಾರಿಗೊಳಿಸಿ ವಿಚಾರಣೆ ನಡೆಸಿದ್ದಾರೆ. ಆದರೆ ಎಫ್‌ಐಆರ್‌ನಲ್ಲಿ ಅವರನ್ನು ಆರೋಪಿಗಳೆಂದು ಉಲ್ಲೇಖಿಸಿಲ್ಲ. ಖುದ್ದಾಗಿ ನೋಟಿಸ್ ಜಾರಿ ಮಾಡದೇ ವಾಟ್ಸ್‌ಆ್ಯಪ್, ಇಮೇಲ್ ಮೂಲಕ ಜಾರಿ ಮಾಡಿದ್ದಾರೆ. ಬಿಎನ್ಎಸ್ಎಸ್ ಸೆಕ್ಷನ್ 35(3) ಅಡಿ ಸಮನ್ಸ್ ನೀಡಲಾಗಿದೆ.

ಎಸ್‌ಐಟಿ ಸಮನ್ಸ್ ನೀಡಿರುವುದು ಕಾನೂನುಬಾಹಿರ. ಅರ್ಜಿದಾರರು ಆರೋಪಿಗಳೂ ಅಲ್ಲ, ಸಾಕ್ಷಿಗಳೂ ಅಲ್ಲ. ಹಾಗಾಗಿ, ನೋಟಿಸ್ ರದ್ದುಗೊಳಿಸಬೇಕು ಎಂದು ಮನವಿ ಮಾಡಿದ್ದರು. ಅಲ್ಲದೇ, ರಾಜಕೀಯ ವೈರತ್ವ, ಧಾರ್ಮಿಕ ವೈರತ್ವ, ಸಂಘಟನಾತ್ಮಕ ವೈರತ್ವದಿಂದ ನೋಟಿಸ್‌ಗಳನ್ನು ನೀಡಲಾಗಿದೆ. ಇದೀಗ 10ನೇ ನೋಟಿಸ್ ನೀಡಿ ಬೆಳಗ್ಗೆಯಿಂದ ಮಧ್ಯರಾತ್ರಿವರೆಗೆ ಕೂರಿಸುತ್ತಾರೆ. ಈಗಾಗಲೇ 150 ಗಂಟೆಗೂ ಅಧಿಕ ಕಾಲ ದೂರುದಾರರನ್ನು ವಿಚಾರಣೆ ನಡೆಸಲಾಗಿದೆ. ಆರಂಭದಲ್ಲಿ 211(ಎ) ಅಡಿ ಎಫ್‌ಐಆರ್ ದಾಖಲಿಸಿ ಬಳಿಕ ಇತರ ಸೆಕ್ಷನ್‌ಗಳನ್ನು ಸೇರ್ಪಡೆ ಮಾಡಿದ್ದಾರೆ. ಅದೂ ಎರಡೂವರೆ ತಿಂಗಳ ನಂತರ ಹೊಸ ಸೆಕ್ಷನ್‌ಗಳನ್ನು ಸೇರ್ಪಡೆ ಮಾಡಲಾಗಿದೆ ಎಂದು ಪೀಠಕ್ಕೆ ತಿಳಿಸಿದ್ದರು.

ಎಸ್‌ಐಟಿ ಪರ ವಕೀಲರು ಅರ್ಜಿದಾರರ ಪ್ರಚೋದನೆ ಮೇಲೆಯೇ ಚಿನ್ನಯ್ಯ ದೂರು ನೀಡಿದ್ದಾನೆ. ನಂತರ 164 ಹೇಳಿಕೆ ನೀಡಿ ಅರ್ಜಿದಾರರ ಮೇಲೆ ಆರೋಪ ಮಾಡಿದ್ದಾರೆ. ಆರಂಭದಲ್ಲಿ ಸಾಕ್ಷಿಗಳಾಗಿ ಅರ್ಜಿದಾರರ ಪ್ರಚೋದನೆ ನಡೆಸಲಾಗಿತ್ತು. ಧರ್ಮಸ್ಥಳ ಗ್ರಾಮದ 20 ಕಡೆ ಅಗೆದು ಪರಿಶೀಲನೆ ನಡೆಸಲಾಯಿತು. ಆನಂತರ ಆರೋಪ ಬಹುತೇಕ ಸುಳ್ಳೆಂದು ದೃಢಪಟ್ಟ ಹಿನ್ನೆಲೆಯಲ್ಲಿ ದೂರುದಾರರನ್ನು ಆರೋಪಿಗಳನ್ನಾಗಿ ಮಾಡಿ ತನಿಖೆ ನಡೆಸುತ್ತಿದ್ದು, ವಿಚಾರಣೆಗೆ ಹಾಜರಾಗಲು ನೋಟಿಸ್ ಜಾರಿ ಮಾಡಲಾಗಿದೆ ಎಂದು ತಿಳಿಸಿದರು. ವಾದ ಆಲಿಸಿದ್ದ ನ್ಯಾಯಪೀಠ ಎಸ್‌ಐಟಿ ತನಿಖೆಗೆ ತಡೆ ನೀಡಿ ಆದೇಶಿಸಿತ್ತು.

**1** ಎಸ್‌ಐಟಿ ವಿಚಾರಣೆಗೆ ಹೈಕೋರ್ಟ್ ಗ್ರೀನ್ ಸಿಗ್ನಲ್

**2** ಧರ್ಮಸ್ಥಳ ಅನಧಿಕೃತ ಶವ ಹೂತ ಪ್ರಕರಣದಲ್ಲಿ ಚಿನ್ನಯ್ಯ ಹೇಳಿಕೆ ಆಧರಿಸಿ ತಿಮರೋಡಿ ಗ್ಯಾಂಗ್ ವಿಚಾರಣೆ

**3** ಕರ್ನಾಟಕ ಹೈಕೋರ್ಟ್ ಮಹತ್ವದ ತೀರ್ಪು

**4** ಆರೋಪಿಗಳಿಗೆ ಕಿರುಕುಳ ನೀಡದಂತೆ ಮಧ್ಯಂತರ ಆದೇಶ

### ತೀವ್ರ ವಿಚಾರಣೆ ಬಳಿಕ ಮಹತ್ವದ ತೀರ್ಪು

ನ್ಯಾಯಮೂರ್ತಿ ಮೊಹಮ್ಮದ್ ನವಾಜ್ ಅವರ ಪೀಠ ತೀವ್ರವಾದ ವಿಚಾರಣೆ ಬಳಿಕ ಈ ತೀರ್ಪು ನೀಡಿದೆ. ಪೀಠವು ಎಸ್‌ಐಟಿ ತನಿಖೆಗೆ ಯಾರೂ ಹಸ್ತಕ್ಷೇಪ ಮಾಡುವ ಅಗತ್ಯ ಇಲ್ಲ. ಕಾನೂನಿನ ಅಡಿಯಲ್ಲಿ ತನಿಖೆ ಮುಂದುವರಿಯಬಹುದು. ಆದರೆ ತನಿಖೆಯ ವೇಳೆ ಅರ್ಜಿದಾರರಿಗೆ ಯಾವುದೇ ರೀತಿಯ ಕಿರುಕುಳ ನೀಡಬಾರದು ಎಂದು ನಿರ್ದೇಶನ ನೀಡಿದೆ.

### ವಿಚಾರಣೆಗೆ ತಡೆ ನೀಡಬೇಕು ಎಂದು ಮನವಿ

ಈ ಅರ್ಜಿಯಲ್ಲಿ, ಅವರು ಎಫ್‌ಐಆರ್ , ಎಸ್‌ಐಟಿ ನೀಡಿರುವ ವಿಚಾರಣಾ ನೋಟೀಸ್ ಮತ್ತು ಪ್ರಸ್ತುತ ಬೆಳ್ತಂಗಡಿ ನ್ಯಾಯಾಲಯದಲ್ಲಿ ನಡೆಯುತ್ತಿರುವ ವಿಚಾರಣೆಗೆ ತಡೆ ನೀಡಬೇಕು ಎಂದು ಮನವಿ ಮಾಡಿದ್ದರು. ತನಿಖಾ ತಂಡವು ಈಗಾಗಲೇ ತಮ್ಮನ್ನು 100 ಗಂಟೆಗಳಿಗೂ ಹೆಚ್ಚು ಕಾಲ ವಿಚಾರಣೆ ನಡೆಸಿದೆ. ಸಂಗ್ರಹಿಸಲಾದ 164 ಹೇಳಿಕೆಗಳಲ್ಲಿ ತಮ್ಮ ವಿರುದ್ಧ ಯಾವುದೇ ಆರೋಪಗಳು ಕಂಡುಬಂದಿಲ್ಲ. ಆದರೂ, ಅಕ್ಟೋಬರ್ 24ರಂದು ವಿಚಾರಣೆಗೆ ಹಾಜರಾಗುವಂತೆ ಮತ್ತೆ ನೋಟಿಸ್ ನೀಡಲಾಗಿತ್ತು ಎಂದು ಅರ್ಜಿದಾರರು ದೂರಿದ್ದರು. ವಾಟ್ಸ್‌ಆ್ಯಪ್ ಮತ್ತು ಇ-ಮೇಲ್ ಮೂಲಕ ನೋಟಿಸ್ ಅನ್ನು ಕಳುಹಿಸಲಾಗಿದ್ದು, ಖುದ್ದಾಗಿ ಬಂದು ನೀಡಿಲ್ಲ. ಒಂದು ವೇಳೆ ವಿಚಾರಣೆಗೆ ಹಾಜರಾದರೆ ತಮ್ಮನ್ನು ಬಂಧಿಸುವ ಸಾಧ್ಯತೆ ಇದೆ ಎಂಬ ಭೀತಿಯಿಂದ ಪ್ರಕರಣವನ್ನೇ ರದ್ದುಗೊಳಿಸುವಂತೆ ನ್ಯಾಯಾಲಯಕ್ಕೆ ಹೋಗಿರುವುದಾಗಿ ಅರ್ಜಿಯಲ್ಲಿ ಉಲ್ಲೇಖಿಸಿದ್ದರು.

### ಆರಂಭ ಆಗಲಿದೆ ಎಸ್ ಐಟಿ ತನಿಖೆ

ಚಿನ್ನಯ್ಯನ ಹೇಳಿಕೆ ಆಧಾರದ ಮೇಲೆ ನಾಲ್ವರ ಮೇಲೆ ಎಫ್ ಐಆರ್ ದಾಖಲಾಗಿತ್ತು. ಈ ಎಫ್ ಐಆರ್ ಆಧಾರದಲ್ಲಿ ತನಿಖೆಗೆ ನೋಟಿಸ್ ನೀಡಲಾಗಿತ್ತು. ಆದರೆ ತನಿಖೆಗೆ ಹಾಜರಾಗದೆ ಮಹೇಶ್ ಶೆಟ್ಟಿ ತಲೆ ಮರೆಸಿಕೊಂಡಿದ್ದರು. ಬಾರಿ ಬಾರಿ ನೋಟಿಸ್ ಕೊಡಲಾಗಿತ್ತು. ಹೀಗಾಗಿ ಬಂಧನದ ಭೀತಿ ಎದುರಾಗಿದ್ದರಿಂದ ಹೈಕೋರ್ಟ್ ಕದ ತಟ್ಟಿದ್ದರು. ಪ್ರಕರಣದಲ್ಲಿ ಅನಗತ್ಯವಾಗಿ ತನಿಖೆ ನಡೆಸಲಾಗುತ್ತಿದೆ. ಹಲವಾರು ಬಾರಿ ತನಿಖೆಗೆ ಕರೆಯಲಾಗಿದೆ. ವಿಚಾರಣೆ ಹಾದಿ ತಪ್ಪುತ್ತಿದೆ ಎಂದು ತಿಮರೋಡಿ ಗ್ಯಾಂಗ್ ಹೈಕೋರ್ಟ್‌ಗೆ ಸಲ್ಲಿಸಿದ್ದ ಅರ್ಜಿಯಲ್ಲಿ ತಿಳಿಸಿದ್ದರು. ಹೀಗಾಗಿ ಮತ್ತೆ ಎಸ್ ಐಟಿ ತನಿಖೆಯ ಬಿಸಿ ಮುಟ್ಟಲಿದೆ. ಈಗಾಗಲೇ ಎಸ್‌ಐಟಿ ತನಿಖಾ ವರದಿ ಸಲ್ಲಿಕೆ ಅಕ್ಟೋಬರ್ 31ಕ್ಕೆ ಸಲ್ಲಿಕೆಯಾಗಬೇಕಿತ್ತು, ಆದರೆ ಕೆಲವೊಂದು ಕಾರಣದಿಂದ ವಿಳಂಬವಾಗಿದೆ ಎಂದು ಗೃಹಸಚಿವ ಪರಮೇಶ್ವರ್ ಹೇಳಿದ್ದರು. ಹೀಗಾಗಿ ಸದ್ಯದಲ್ಲೇ ಪ್ರಕರಣಕ್ಕೆ ತಾರ್ಕಿಕ ಅಂತ್ಯ ಕಂಡುಬರುವ ಸಾಧ್ಯತೆ ಇದೆ.

### ಸಾಕ್ಷಿ ಸಂಗ್ರಹ ಪುನಾರಂಭ

ಎಸ್‌ಐಟಿ ತನಿಖೆಗೆ ತಾತ್ಕಾಲಿಕವಾಗಿ ಬಂದಿದ್ದ ಅಡ್ಡಿ ದೂರವಾಗಿದೆ. ಈಗ ತನಿಖಾಧಿಕಾರಿಗಳು ಹೊಸ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿ ಪ್ರಕರಣದ ನಿಜಾಂಶ ಪತ್ತೆಹಚ್ಚುವ ಕಾರ್ಯಾಚರಣೆಗೆ ತಯಾರಾಗಿದ್ದಾರೆ. ಮೂಲಗಳ ಪ್ರಕಾರ, ಎಸ್‌ಐಟಿ ಈಗಾಗಲೇ ಹಲವಾರು ಸಾಕ್ಷ್ಯ ಪತ್ರಗಳು, ದೂರವಾಣಿ ಸಂಭಾಷಣೆಗಳು ಹಾಗೂ ಬ್ಯಾಂಕ್ ಲೆಕ್ಕಾಚಾರಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಸಂಗ್ರಹಿಸಿದೆ. ತನಿಖೆ ನಿಲ್ಲಿಸಿದ್ದ ಅವಧಿಯಲ್ಲಿ ಸಾಕ್ಷಿದಾರರ ಹೇಳಿಕೆಗಳನ್ನು ದಾಖಲಿಸುವ ಪ್ರಕ್ರಿಯೆಯಿಂದ ತಡೆಗೊಂಡಿತ್ತು. ಈಗ ತೀರ್ಪು ಹೊರಬಂದ ಹಿನ್ನೆಲೆಯಲ್ಲಿ, ಸಾಕ್ಷಿದಾರರ ವಿಚಾರಣೆ ಹಾಗೂ ಹೊಸ ತಾಂತ್ರಿಕ ಸಾಕ್ಷ್ಯಗಳನ್ನು ಸಂಗ್ರಹಿಸುವ ಪ್ರಕ್ರಿಯೆ ಪುನಃ ಆರಂಭವಾಗಲಿದೆ.

## ಎರಡು ತಿಂಗಳೊಳಗಾಗಿ ಸಾಮಾಜಿಕ, ಶೈಕ್ಷಣಿಕ ಸಮೀಕ್ಷಾ ವರದಿ ಸಲ್ಲಿಕೆ: ತಂಗಡಗಿ

• ಉದಯವಾಹಿನಿ, ಬೆಂಗಳೂರು

ಹಿಂದುಳಿದ ವರ್ಗಗಳ ಶಾಶ್ವತ ಆಯೋಗದಿಂದ ನಡೆಸಲಾಗಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಗ್ರಾಮೀಣ ಭಾಗದಲ್ಲಿ ಶೇ.98ರಷ್ಟು ಪೂರ್ಣಗೊಂಡಿದ್ದು, ಗ್ರೇಟರ್ ಬೆಂಗಳೂರಿನಲ್ಲಿ ಬಾಕಿ ಇದೆ. ಎಲ್ಲವನ್ನೂ ಕ್ರೋಢೀಕರಿಸಿ ಎರಡು ತಿಂಗಳ ಒಳಗಾಗಿ ಸರ್ಕಾರಕ್ಕೆ ವರದಿ ಸಲ್ಲಿಕೆಯಾಗಲಿದೆ ಎಂದು ಹಿಂದುಳಿದ ವರ್ಗಗಳ ಅಭಿವೃದ್ಧಿ ಸಚಿವ ಶಿವರಾಜ ತಂಗಡಗಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಆನ್ ಲೈನ್‌ನಲ್ಲಿ ಸಮೀಕ್ಷೆಗೆ ಮಾಹಿತಿ ನೀಡುವ ಗಡುವನ್ನು ಈ ತಿಂಗಳ 30ರವರೆಗೂ ವಿಸ್ತರಣೆ ಮಾಡಲಾಗಿದೆ. ಗ್ರಾಮೀಣ ಭಾಗದಲ್ಲಿ ಸರಾಸರಿ ಶೇ.98ರಷ್ಟು ಸಮೀಕ್ಷೆಯಾಗಿದೆ. ಕೆಲವು ಜಿಲ್ಲೆಗಳಲ್ಲಿ ಪೂರ್ಣಗೊಂಡಿದೆ. ಇನ್ನೂ ಕೆಲವು ಜಿಲ್ಲೆಗಳಲ್ಲಿ ಶೇ.92ರಷ್ಟು ಸಮೀಕ್ಷೆಯಾಗಿದೆ ಎಂದಿದ್ದಾರೆ. ಕಚೇರಿಯಲ್ಲಿ ಕುಳಿತು ಸಮೀಕ್ಷೆ ನಡೆಸಲಾಗಿದೆ ಎಂಬ ಆರೋಪ ನಿರಾಧಾರ. ಜಿಪಿಎಸ್ ಆಧಾರಿತವಾಗಿ ಸಮೀಕ್ಷೆ ನಡೆದಿದೆ. ಸಮೀಕ್ಷಾ ಕಾರ್ಯಕ್ಕೆ ನಿಯೋಜನೆಗೊಂಡಿದ್ದವರು ಮನೆ ಮನೆಗೆ ತೆರಳಿ ಮಾಹಿತಿ ಕಲೆ ಹಾಕಿದ್ದಾರೆ. ಇತಿಹಾಸದಲ್ಲೇ ಈ ರೀತಿ ಕರಾರುವಕ್ಕಾಗಿ ಮಾಹಿತಿ ಕಲೆ ಹಾಕಿದ ಸಮೀಕ್ಷೆ ಬೇರೊಂದಿಲ್ಲ. ಯಾರು ಏನೇ ಟೀಕೆ ಮಾಡಿದರೂ, ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಮಾತ್ರ ಅತ್ಯುತ್ತಮವಾಗಿ ನಡೆದಿದೆ ಎಂದು ಸಮರ್ಥಿಸಿಕೊಂಡರು.



ಆನ್ ಲೈನ್ ಸಮೀಕ್ಷೆಯಲ್ಲಿ ಭಾಗವಹಿಸಲು ಇದೇ ತಿಂಗಳ 30ರವರೆಗೂ ಗಡುವು ನೀಡಲಾಗಿದೆ. ಬೆಂಗಳೂರಿನಲ್ಲಿ ಸಮೀಕ್ಷೆ ಪೂರ್ಣಗೊಂಡಿಲ್ಲ. ಉಳಿದ ಎಲ್ಲಾ ಜಿಲ್ಲೆಗಳ ಅಂಕಿ-ಸಂಖ್ಯೆಗಳನ್ನೂ ಕ್ರೋಢೀಕರಿಸುವ ಪ್ರಕ್ರಿಯೆಗಳು ನಡೆಯುತ್ತಿವೆ ಎಂದರು. ಬೆಂಗಳೂರು ಸೇರಿದಂತೆ ಎಲ್ಲಾ ಮಾಹಿತಿಗಳನ್ನು ಸಂಗ್ರಹಿಸಿದ ಬಳಿಕ ಮುಂದಿನ ರೂಪುರೇಷೆ ಸಿದ್ಧ ಪಡಿಸಲಾಗುವುದು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಚರ್ಚೆ ಮಾಡಿ, ಒಂದೂವರೆ ಅಥವಾ ಎರಡು ತಿಂಗಳ ಒಳಗಾಗಿ ವರದಿ ಪಡೆದುಕೊಳ್ಳಲಾಗುವುದು ಎಂದರು. ಸಮೀಕ್ಷೆಯಲ್ಲಿ ಭಾಗವಹಿಸಬೇಡಿ ಎಂದು ಕರೆ ನೀಡಿದ್ದ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಸಂಸದ ತೇಜಸ್ವಿ ಸೂರ್ಯ ಅವರಿಗೆ ಮುಖಭಂಗವಾಗಿದೆ. ಸಮೀಕ್ಷೆಯಲ್ಲಿ ಭಾಗವಹಿಸುವುದಿಲ್ಲ ಎಂದು ಹೇಳಿದ್ದ ಇನ್ಫೋಸಿಸ್ ನ ನಾರಾಯಣ ಮೂರ್ತಿ ಹಾಗೂ ಸುಧಾ ಮೂರ್ತಿ ಅವರ ಮಾತುಗಳನ್ನು ಜನ ಕೇಳಿಲ್ಲ. ಎಲ್ಲರೂ ಬುದ್ಧಿವಂತರಾಗಿ ಸಮೀಕ್ಷೆಯಲ್ಲಿ ಭಾಗವಹಿಸುವ ಮೂಲಕ ಮಾಹಿತಿಗಳನ್ನು ನೀಡಿದ್ದಾರೆ ಎಂದು ನುಡಿದರು.

**ಕುತೂಹಲ ಕೆರಳಿಸಿದ ಸಮೀಕ್ಷೆ:** ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ನೇತೃತ್ವದಲ್ಲಿ ನಡೆದ ಸಮೀಕ್ಷೆ ತೀವ್ರ ಕುತೂಲಹ ಕೆರಳಿಸಿದೆ. ರಾಜ್ಯದ ಜನಸಂಖ್ಯೆಯನ್ನು 6.85 ಕೋಟಿ ಎಂದು ಅಂದಾಜಿಸಲಾಗಿದೆ. ಅದರಲ್ಲಿ ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ 6.14 ಕೋಟಿ ಜನರನ್ನು ಸೆಪ್ಟಂಬರ್ 22ರಿಂದ ಅಕ್ಟೋಬರ್ 31ರ ಒಳಗೆ ಮನೆ ಮನೆಗೆ ತೆರಳಿ ಸಮೀಕ್ಷೆಗೆ ಒಳಪಡಿಸಲಾಗಿದೆ ಎಂದರು.

### ಪಿಎಸ್ ಆಧಾರಿತವಾಗಿ ಸಮೀಕ್ಷೆ

## ಕಬ್ಬು ದರ ಜಟಾಪಟಿ: ಸಿದ್ದರಾಮಯ್ಯಗೆ ಬಹಿರಂಗ ಪತ್ರ ಬರೆದ ಪ್ರಲ್ಹಾದ್ ಜೋಶಿ

### ಕೇಂದ್ರ ಕೈಗೊಂಡ ಪರಿವರ್ತನಾತ್ಮಕ ಸುಧಾರಣೆಗಳು ಮತ್ತು ಮೂಲಭೂತ ವಾಸ್ತವಗಳನ್ನು ಕಡೆಗಣಿಸುವಂತೆ ತೋರುತ್ತಿರುವುದು ದುರದೃಷ್ಟಕರ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಕಬ್ಬು ಬೆಳೆಗಾರರ ಹೋರಾಟ ನಿಲ್ಲುತ್ತಿಲ್ಲ. ಸರ್ಕಾರ ಘೋಷಿಸಿದ 3300ರೂ. ಗೆ ಬೆಳಗಾವಿ ರೈತರು ಜೈ ಎಂದಿದ್ದರೆ, ಬೀದರ್ ಮತ್ತು ಬಾಗಲಕೋಟೆಯಲ್ಲಿ ರೈತರು 3500ರೂ.ಗೆ ಪಟ್ಟು ಹಿಡಿದಿದ್ದಾರೆ. ಈ ಮಧ್ಯೆ ಕಬ್ಬು ಬೆಳೆಗಾರರಿಗೆ ದರ ಪಾವತಿ ವಿಚಾರವಾಗಿ ಸಿಎಂ ಸಿದ್ದರಾಮಯ್ಯಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಬಹಿರಂಗ ಪತ್ರ ಬರೆದಿದ್ದಾರೆ.

**ಸಚಿವ ಪ್ರಲ್ಹಾದ್ ಜೋಶಿ ಬರೆದ ಪತ್ರದಲ್ಲೇನಿದೆ?**

ನಿಮ್ಮ ಇತ್ತೀಚಿಗಿನ ಕಬ್ಬು ಬೆಳೆಗಾರರ ಕಲ್ಯಾಣದ ಬಗೆಗಿನ ಕಾಳಜಿಯನ್ನು ಪ್ರಶಂಸಿಸುತ್ತೇನೆ. ಆದರೆ ರೈತರ ಹಿತಾಸಕ್ತಿಯನ್ನು ರಕ್ಷಿಸಲು ಮತ್ತು ಸಕ್ಕರೆ ಕ್ಷೇತ್ರದ ದೀರ್ಘಾವಧಿ ಸುಸ್ಥಿರತೆಯನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಸರ್ಕಾರ ಕೈಗೊಂಡ ಪರಿವರ್ತನಾತ್ಮಕ ಸುಧಾರಣೆಗಳು ಮತ್ತು ಮೂಲಭೂತ ವಾಸ್ತವಗಳನ್ನು ಕಡೆಗಣಿಸುವಂತೆ ತೋರುತ್ತಿರುವುದು ದುರದೃಷ್ಟಕರ. ಈ ನಿಟ್ಟಿನಲ್ಲಿ ಕೆಲವು ಪ್ರಮುಖ ಸಂಗತಿಗಳನ್ನು ನಾನು ಪುನಃ ಹೇಳಲು ಬಯಸುತ್ತೇನೆ ಎಂದಿದ್ದಾರೆ.

### ಕೇಂದ್ರ ಸರ್ಕಾರ ರೈತರ ಕಲ್ಯಾಣಕ್ಕೆ ಬದ್ಧ

**ಸಚಿವ ಪ್ರಲ್ಹಾದ್ ಜೋಶಿ ಟ್ವೀಟ್:** 2025-26ರ ಸಾಲಿನಲ್ಲಿ ಕ್ವಿಂಟಲ್‌ಗೆ 355 ರೂ. ನ್ಯಾಯಯುತ ಮತ್ತು ಲಾಭದಾಯಕ ಬೆಲೆ ಅನ್ನು 10.25% ಇಳುವರಿ ದರದಲ್ಲಿ, ಕೃಷಿ ವೆಚ್ಚ ಮತ್ತು ಬೆಲೆಗಳ ಆಯೋಗದ ಶಿಫಾರಸುಗಳ ಆಧಾರದ ಮೇಲೆ ನಿಗದಿಪಡಿಸಲಾಗಿದೆ. ಈ ಬೆಲೆಯು ಉತ್ಪಾದನಾ ವೆಚ್ಚದ ಮೇಲೆ 105% ಕ್ಕಿಂತ ಹೆಚ್ಚಿನ ಅಂತರವನ್ನು ಒದಗಿಸುತ್ತದೆ. ಇದು ರೈತರ ರಕ್ಷಣೆಯಲ್ಲಿ ಅಭೂತಪೂರ್ವ ಮಟ್ಟವಾಗಿದೆ. FRP ಕೇವಲ ಕನಿಷ್ಠ ಮಾನದಂಡವಾಗಿ ಕಾರ್ಯನಿರ್ವಹಿಸುತ್ತದೆ. ರಾಜ್ಯಗಳು ಹೆಚ್ಚಿನ ರಾಜ್ಯ ಸಲಹಾ ಬೆಲೆ ಘೋಷಿಸಲು ಮುಕ್ತವಾಗಿವೆ. ಆದಾಗ್ಯೂ, ಕರ್ನಾಟಕದಲ್ಲಿ ಎಸ್‌ಎಪಿ ಅನ್ನು ಘೋಷಿಸಿಲ್ಲ.



ಕೇಂದ್ರ ಸರ್ಕಾರವು ಎಥೆನಾಲ್ ಮಿಶ್ರಣ ಕಾರ್ಯಕ್ರಮದ ಮೂಲಕ ಸಕ್ಕರೆ ಕ್ಷೇತ್ರವನ್ನು ಬಲಪಡಿಸಿದೆ. ಇದು ಸಕ್ಕರೆ ಕಾರ್ಖಾನೆಗಳಿಗೆ ಪರ್ಯಾಯ ಮತ್ತು ಸ್ಥಿರ ಆದಾಯದ ಮೂಲವನ್ನು ಒದಗಿಸಿದ್ದು, ರೈತರಿಗೆ ಕಬ್ಬಿನ ಮಾರಾಟದ ಬೆಲೆಯನ್ನು ಸುಧಾರಿಸಿದೆ.

ಎಥೆನಾಲ್ ಸರಬರಾಜು ವರ್ಷ 2013-14 ರಿಂದ, ಡಿಸ್ಟಿಲರಿಗಳು 2.18 ಲಕ್ಷ ಕೋಟಿ ರೂ.ಗಿಂತಲೂ ಹೆಚ್ಚು ಆದಾಯ ಗಳಿಸಿವೆ. ಇದರಲ್ಲಿ ಕಬ್ಬು ಆಧಾರಿತ ಡಿಸ್ಟಿಲರಿಗಳಿಂದ ತೈಲ ಮಾರುಕಟ್ಟೆ ಕಂಪನಿಗಳಿಗೆ ಎಥೆನಾಲ್ ಮಾರಾಟದಿಂದ 1.29 ಲಕ್ಷ ಕೋಟಿ ರೂ ಸೇರಿದೆ. ಇದು ಸಕ್ಕರೆ ಕಾರ್ಖಾನೆಗಳ ಬಾಕಿಯನ್ನು ತ್ವರಿತವಾಗಿ ಪಾವತಿಸಲು ಮತ್ತು ರೈತರಿಗೆ ಆದಾಯದ ಸ್ಥಿರತೆಯನ್ನು ಒದಗಿಸಲು ಅನುವು ಮಾಡಿಕೊಟ್ಟಿದೆ. ಜೊತೆಗೆ ಚಿಲ್ಲರೆ ಮತ್ತು ಮುಕ್ತ ಸಕ್ಕರೆ ಮಾರುಕಟ್ಟೆಗಳಲ್ಲಿ ಬೆಲೆಯ ಸ್ಥಿರತೆಯನ್ನು ಖಚಿತಪಡಿಸಿದೆ ಎಂದು ತಿಳಿಸಿದ್ದಾರೆ.

**ಎಥೆನಾಲ್ ಪೂರೈಕೆಯಲ್ಲಿ ಕರ್ನಾಟಕ ಸಾಧನೆ:** ಈ ಕ್ಷೇತ್ರದಲ್ಲಿ ಕರ್ನಾಟಕ ಸಾಧಿಸಿರುವ ಪ್ರಗತಿ ಗಮನಾರ್ಹವಾಗಿದೆ. 2013 ರವರೆಗೆ, ಇಡೀ ದೇಶದಲ್ಲಿ OMC ಗಳಿಗೆ ಎಥೆನಾಲ್ ಪೂರೈಕೆಯು ಕೇವಲ 38 ಕೋಟಿ ಲೀಟರ್ ಆಗಿತ್ತು. ಮಿಶ್ರಣ ಮಟ್ಟವು ಕೇವಲ 1.53% ಇತ್ತು. ಇಂದು ಕರ್ನಾಟಕ ಮೂಲದ ಡಿಸ್ಟಿಲರಿಗಳು ESY 2024-25ರ ಅವಧಿಯಲ್ಲಿ 139.8 ಕೋಟಿ ಲೀಟರ್ ಎಥೆನಾಲ್ ಅನ್ನು ಪೂರೈಸಿವೆ. ESY 2025-26 ಕ್ಕಾಗಿ, ಕರ್ನಾಟಕ ಡಿಸ್ಟಿಲರಿಗಳಿಗೆ ಈಗಾಗಲೇ 133 ಕೋಟಿ ಲೀಟರ್‌ಗಳ ಹಂಚಿಕೆ ಮಾಡಲಾಗಿದೆ ಎಂದರು.

**ಕೇಂದ್ರ ಸರ್ಕಾರ ಮೂಲ ಸಮಸ್ಯೆ ದಿಂದ ತಪ್ಪಿಸಿಕೊಳ್ಳುತ್ತಿದೆ ಎನ್ನುವುದು ಸರಿಯಲ್ಲ:** 2014-15 ಮತ್ತು 2020-21ರ ನಡುವೆ, ಸಕ್ಕರೆ ಕಾರ್ಖಾನೆಗಳಲ್ಲಿ ದ್ರವ್ಯತೆ (liquidity) ಸುಧಾರಿಸಲು ಮತ್ತು ಕಬ್ಬಿನ ಬಾಕಿಗಳನ್ನು ಸಕಾಲದಲ್ಲಿ ಪಾವತಿಸಲು ಅನುಕೂಲವಾಗುವಂತೆ ಕೇಂದ್ರ ಸರ್ಕಾರವು ಸರಣಿಯ ಸಮಗ್ರ ಸಹಾಯ ಯೋಜನೆಗಳನ್ನು ಜಾರಿಗೆ ತಂದಿತು. ಅವುಗಳಲ್ಲಿ ಹೆಚ್ಚಿನವು UPA ಅವಧಿಗೆ ಸಂಬಂಧಿಸಿವೆ. ಇವುಗಳಲ್ಲಿ ಬಫರ್ ಸ್ಟಾಕ್ ರಚನೆಗೆ ಬೆಂಬಲ, ರಫ್ತು ನೆರವು ಮತ್ತು ಸಾಗಣೆ ವೆಚ್ಚಗಳ ಮರುಪಾವತಿ ಸೇರಿವೆ. ಆದ್ದರಿಂದ ಕೇಂದ್ರ ಸರ್ಕಾರವು ಮೂಲ ಸಮಸ್ಯೆ ದಿಂದ ತಪ್ಪಿಸಿಕೊಳ್ಳುತ್ತಿದೆ ಎಂದು ಹೇಳುವುದು ಸರಿಯಲ್ಲ. ಇದಕ್ಕೆ ವಿರುದ್ಧವಾಗಿ, ಕೇಂದ್ರವು ಬೆಲೆ ಸ್ಥಿರತೆ ಮತ್ತು ಮಾರುಕಟ್ಟೆ ವೈವಿಧ್ಯತೆ ಎರಡನ್ನೂ ಖಚಿತಪಡಿಸಿದೆ. ಆದರೆ ಪಾವತಿ ಜಾರಿ, ನೀರಾವರಿ ಮತ್ತು ಸಬ್ಸಿಡಿ ವಿತರಣೆಯಂತಹ ಸ್ಥಳೀಯ ಅನುಷ್ಠಾನದ ಜವಾಬ್ದಾರಿಯು ರಾಜ್ಯ ಸರ್ಕಾರದ ಮೇಲಿದೆ ಎಂದು ಹೇಳಿದ್ದಾರೆ.

ರಾಜ್ಯ ಸರ್ಕಾರವು ರೈತರ ಮೇಲಿನ ಹೊರೆ ಕಡಿಮೆ ಮಾಡಲು ಕೆಲಸ ಮಾಡಬೇಕಿತ್ತು ಆದರೆ ನಿಮ್ಮ ಸರ್ಕಾರವು, ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಆರ್ಥಿಕತೆಯ ಉತ್ಪಾದಕ ವಲಯಗಳನ್ನು ಹಿಂಡಿ ಹಾಕಿದೆ. ಸಕ್ಕರೆ ಕಾರ್ಖಾನೆಗಳಿಗೆ ನೀರು ಸರಬರಾಜು ಮತ್ತು ಲಿಫ್ಟಿಂಗ್ ಶುಲ್ಕವನ್ನು ವರ್ಷಕ್ಕೆ 5 ಲಕ್ಷದಿಂದ 1 ಕೋಟಿಗೆ ಏರಿಸಲಾಗಿದೆ. ವಿದ್ಯುತ್ ಪ್ರತಿ ಯೂನಿಟ್‌ಗೆ 60 ಪೈಸೆ ಎನರ್ಜಿ ಸೆಸ್ ವಿಧಿಸಲಾಗಿದೆ.

ಡೀಸೆಲ್ ಮೇಲಿನ ವ್ಯಾಟ್ ಅನ್ನು ಶೇಕಡಾ 50 ರಷ್ಟು ಹೆಚ್ಚಿಸಿದ್ದು, ಹೆಚ್ಚುವರಿ ಆದಾಯವಾಗಿ 7 ಸಾವಿರದಿಂದ 7,500 ಕೋಟಿ ರೂ ಗಳಿಸಿದೆ. 30ಕ್ಕೂ ಹೆಚ್ಚು ಉತ್ಪನ್ನಗಳ ಮೇಲೆ ಶೇಕಡಾ 276% ರಷ್ಟು ತೆರಿಗೆಗಳೊಂದಿಗೆ, ಈ ವರ್ಷ ಕೇವಲ ಮದ್ಯದ ಅಬಕಾರಿಯಿಂದಲೇ 39 ಸಾವಿರ ಕೋಟಿ ರೂ. ಸಂಗ್ರಹಿಸುವ ನಿರೀಕ್ಷೆಯನ್ನು ರಾಜ್ಯ ಸರ್ಕಾರ ಹೊಂದಿದೆ ಎಂದಿದ್ದಾರೆ.



### ರಾಜ್ಯ ಸರ್ಕಾರದ ವಿರುದ್ಧ ಕಿಡಿ

ಕಬ್ಬು ಬೆಳೆಗಾರರ ಹೋರಾಟದ ಎಂಟನೇ ದಿನದವರೆಗೆ ರಾಜ್ಯ ಸರ್ಕಾರದ ಯಾವುದೇ ಸಚಿವರು ಹೋರಾಟ ನಿರತ ರೈತರೊಂದಿಗೆ ಸಂಪರ್ಕ ಸಾಧಿಸದಿರುವುದು ಸಹ ಅಷ್ಟೇ ಕಳವಳಕಾರಿಯಾಗಿದೆ. ರಾಜ್ಯವು ಅನುಸರಿಸಿದ ಹಣಕಾಸು ಮತ್ತು ನಿಯಂತ್ರಕ ಕ್ರಮಗಳು ವಾಸ್ತವವಾಗಿ ಸಕ್ಕರೆ ಕಾರ್ಖಾನೆಗಳು ಮತ್ತು ಕಬ್ಬು ಬೆಳೆಗಾರರ ಇಬ್ಬರ ಸಂಕಷ್ಟವನ್ನು ಉಲ್ಬಣಗೊಳಿಸಿವೆ.

**ಈ ದಿನದ ದರ** | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹12,551/Gram(24ct) ₹11,505/Gram(22ct) | ಬೆಳ್ಳಿ: ₹162.00/Gram

# 30 ದಿನ ಪೂರೈಸಿದ ರೈತರ ಅಹೋರಾತ್ರಿ ಧರಣಿ

## ರೈತ ಸಂಘ ಸದಸ್ಯರು ಬಾರುಕೋಲು ಚಳುವಳಿ ನಡೆಸುವ ಮೂಲಕ ನೇರ ಎಚ್ಚರಿಕೆ



• **ಉದಯವಾಹಿನಿ, ಗುಂಡ್ಲುಪೇಟೆ**

ವಿವಿಧ ಹಕ್ಕೊತ್ತಾಯಗಳ ಈಡೇರಿಕೆಗೆ ಪಟ್ಟಣದ ತಹಶೀಲ್ದಾರ್ ಕಚೇರಿ ಆವರಣದಲ್ಲಿನ ರೈತ ಸಂಘ ಅಹೋರಾತ್ರಿ ಧರಣಿ 30 ದಿನ ಪೂರೈಸಿದೆಯಾದರು ಬೇಡಿಕೆಗಳನ್ನ ಈಡೇರಿಸುವಲ್ಲಿ ಸರ್ಕಾರ ಹಾಗೂ ಜಿಲ್ಲಾಡಳಿತ ಸಂಪೂರ್ಣವಾಗಿ ವಿಫಲವಾಗಿದೆ ಎಂದು ರೊಚ್ಚಿಗೆದ್ದ ರೈತಸಂಘ ಸದಸ್ಯರು ಬಾರುಕೋಲು ಚಳುವಳಿ ನಡೆಸುವ ಮೂಲಕ ನೇರ ಎಚ್ಚರಿಕೆ ಕೊಟ್ಟಿದ್ದಾರೆ.

ರೈತಪರ ಬೇಡಿಕೆಗಳಿಗೆ ಆಗ್ರಹಿಸಿ 30 ದಿನಗಳು ಸರಿದುಹೋಗಿದೆ , ಚಳುವಳಿ ಆರಂಭವಾದ ದಿನಗಳಲ್ಲಿ ಗಾಢನಿದ್ರೆಗೆ ಜಾರಿದ್ದ ಇಲಾಖೆ ಅಧಿಕಾರಿಗಳು ಕ್ರಮೇಣವಾಗಿ ಧರಣಿ ನಿರತ ರೈತರನ್ನ ಭೇಟಿಯಾಗಿ ತಮ್ಮ ಇಲಾಖೆಯಲ್ಲಿನ ಸವಲತ್ತುಗಳನ್ನು ತಲುಪಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂಬ ಮಾತಿನ ಚಾಣಕ್ಯತನ ತೋರಿಸಿ ಹೋದವರು ಮರುಪತ್ತೆಯಾಗಿಲ್ಲ , ರೈತರ ಮೊದಲ ಬೇಡಿಕೆಯಂತೆ ಉತ್ತೂರು ಕೆರೆಗೆ ನೀರು ತುಂಬಿಸಲು ನವೆಂಬರ್ 4ರ ಗಡುವು ನೀಡಿದ್ದ ಶಾಸಕರು ಈಗ ಡಿಸೆಂಬರ್ ಅಂತ್ಯದ ಮಾತುಗಳನ್ನಾಡುತ್ತಿದ್ದಾರೆ, ಅಂತರ್ಜಲ ಕುಸಿತದಿಂದ ಈಗಾಗಲೆ ರೈತಾಪಿ ವರ್ಗ ಸಂಕಷ್ಟಕ್ಕೆ ಸಿಲುಕಿದೆ ಇದನ್ನ ಪರಿಗಣಿಸದ ಸರ್ಕಾರ ರೈತರ ಚರ್ಮಶ್ಲೋಕ ಪಠಿಸಲು ಮುಂದಾಗಿರುವುದು ಸರಿಯಲ್ಲ ಎಂದು ಶಿವಪುರ ಮಹದೇವಪ್ಪ ಕಿಡಿಕಾರಿದರು.

**ರಾಜ್ಯ ನಾಯಕರ ಸಮ್ಮುಖದಲ್ಲಿ ಸಮಾವೇಶಕ್ಕೆ ಸಿದ್ಧತೆ**

**ಹಕ್ಕೊತ್ತಾಯಗಳ ಮನವಿ ಮೂಲೆ ಸೇರಿತೆ :** ಕೆರೆಗಳಿಗೆ ನೀರು, ಸಾಗುವಳಿ, ನಿರಾಪೇಕ್ಷಣ ಪತ್ರ, ವನ್ಯಜೀವಿ ಉಪಟಳ ಸೇರಿದಂತೆ ಹಲವು ಬೇಡಿಕೆಗಳ ಪಟ್ಟಿಯನ್ನ ಕಾವೇರಿ ನೀರಾವರಿ ನಿಗಮ, ಅರಣ್ಯ ಇಲಾಖೆ, ಕಂದಾಯ ಇಲಾಖೆ ಸೇರಿದಂತೆ ಅರಣ್ಯ ಸಚಿವರ ಹಾದಿಯಾಗಿ ಶಾಸಕರಿಗೂ ತಲುಪಿಸಲಾಗಿತ್ತು ಆದರೆ ಧರಣಿ ನಿರತರ ಒತ್ತಾಯದ ಪುಟವನ್ನ ತಿರುವು ಹಾಕುವ ಗೋಜಿಗೂ ಇಲಾಖೆ ಅಧಿಕಾರಿಗಳು ಗಮನಹರಿಸಿಲ್ಲ ಎಂದು ಮಹದೇವಪ್ಪ ಆರೋಪಿಸಿದ್ದಾರೆ.

ರೈತ ದೇಶದ ಬೆನ್ನೆಲುಬು ಎಂಬುದು ಪಾಠ ಪ್ರವಚನಗಳಿಗೆ ಮಾತ್ರ ಸೀಮಿತವಾಗಿದೆ, ಸ್ವಾಭಿಮಾನದ ಜೀವನ ನಡೆಸಲು ಬಾಬಾ ಸಾಹೇಬ್ ಅಂಭೇಡ್ಕರ್ ಅವರು ನೀಡಿರುವ ಸಂವಿಧಾನದಡಿ ತಲುಪಬೇಕಾದ ಸವಲತ್ತುಗಳಿಗೆ ಬೀದಿಗೆ ಬಂದು ಕೂರುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆಕ್ರೋಶ ಹೊರಹಾಕಿದರು.

ನವೆಂಬರ್ 18 ರಂದು ತಹಶೀಲ್ದಾರ್ ಕಚೇರಿ ಆವರಣದಲ್ಲಿಯೇ ರಾಜ್ಯ ನಾಯಕರ ಸಮ್ಮುಖದಲ್ಲಿ ಸಮಾವೇಶಕ್ಕೆ ಸಿದ್ಧತೆ ಮಾಡಿಕೊಳ್ಳಲು ತೀರ್ಮಾನಿಸಲಾಗಿದೆ, ಮುಂದಿನ ದಿನಗಳಲ್ಲಿ ಉಗಿಯುವ ಚಳುವಳಿ ಪೊರಕೆ ಚಳುವಳಿಯು ನಡೆಯುತ್ತದೆ ಎಂದು ಎಚ್ಚರಿಸಿದರು. ಈ ಸಂಧರ್ಭದಲ್ಲಿ ರೈತ ಸಂಘ ತಾಲ್ಲೂಕು ಅಧ್ಯಕ್ಷ ದಿಲೀಪ್ ಹಂಗಳ, ಉಪಾಧ್ಯಕ್ಷ ನಾಗರಾಜು, ಶಿವಣ್ಣ , ಮಹದೇವಸ್ವಾಮಿ, ಶಿವಕುಮಾರ್ ಪಡಗೂರು ,ಮಹೇಂದ್ರ, ಸೇರಿದಂತೆ ಹಲವರು ಭಾಗವಹಿಸಿದ್ದರು.

**ಇಲಾಖೆಗಳಲ್ಲಿ ವ್ಯಾಪಕ ಭ್ರಷ್ಟಾಚಾರ**

**ಪೂರ್ವಿಕರ ಕಾಲದಿಂದಲೂ ಬೇಸಾಯ ಮಾಡಿಕೊಂಡು ಜೀವನ ನಡೆಸುತ್ತಿರುವ ರೈತರಿಗೆ ಸಾಗುವಳಿ ನೀಡಲು ಇಂತಿಷ್ಟು ಹಣವನ್ನ ಕಪ್ಪವಾಗಿ ನೀಡಲು ಅಧಿಕಾರಿಗಳೇ ಸೂಚಿಸುತ್ತಿದ್ದಾರೆ, ಆರ್ಥಿಕ ಸಂಕಷ್ಟದಲ್ಲಿರುವ ರೈತರ ರಕ್ತಹೀರುವ ಅಧಿಕಾರಿಗಳ ಪರಿಪೂರ್ಣ ಮಾಹಿತಿಯನ್ನ ದಾಖಲೆ ಸಮೇತವಾಗಿ ನೀಡಲು ಸಿದ್ಧರಿದ್ದೇವೆ ಜಿಲ್ಲಾಧಿಕಾರಿಗಳು ಅವರ ವಿರುದ್ಧ ಕ್ರಮ ಕೈಗೊಳ್ಳಲಿ ಎಂದು ಸವಾಲು ಹಾಕಿದರು.**

# ಕೂಲಿ ಕೊಡದೆ ಪರಾರಿಯಾದ ಗಾರ್ಮೆಂಟ್ಸ್ ಮಾಲೀಕ: ಪ್ರತಿಭಟನೆ

• **ಉದಯವಾಹಿನಿ, ತುಮಕೂರು**

ಗಾರ್ಮೆಂಟ್ಸ್‌ನಲ್ಲಿ ಕೆಲಸ ಮಾಡಿಸಿಕೊಂಡು ಕೂಲಿ ಕೊಡದೆ ಪರಾರಿಯಾದ ಗಾರ್ಮೆಂಟ್ಸ್ ಮಾಲೀಕರ ವಿರುದ್ಧ ಕ್ರಮಕ್ಕೆ ಒತ್ತಾಯಿಸಿ ಕಾರ್ಮಿಕರು ಜನವಾದಿ ಮಹಿಳಾ ಸಂಘಟನೆ ನೇತೃತ್ವದಲ್ಲಿ ನಗರದ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದರು.

ಕ್ಯಾತ್ಸಂದ್ರದ ಆರ್.ವಿ.ಲೈಫ್ ಸ್ಟೈಲ್ ಗಾರ್ಮೆಂಟ್ಸ್‌ನಲ್ಲಿ ಕೆಲಸ ಮಾಡಿದ ಕಾರ್ಮಿಕರಿಗೆ 3-4 ತಿಂಗಳಿನಿಂದ ಕೂಲಿ ನೀಡಿಲ್ಲ. ಅವರು ನೀಡಿದ್ದ ಚೆಕ್ ಬೌನ್ಸ್ ಆಗಿದೆ. ಈಗ ಮಾಲೀಕರು ಕಾರ್ಖಾನೆ ಮುಚ್ಚಿಕೊಂಡು ಪರಾರಿಯಾಗಿದ್ದಾರೆ. 25-30 ಮಹಿಳಾ ಕಾರ್ಮಿಕರಿಗೆ ವೇತನ ಕೊಟ್ಟಿಲ್ಲ ಎಂದು ಜನವಾದಿ ಮಹಿಳಾ ಸಂಘಟನೆ ಜಿಲ್ಲಾ ಸಂಚಾಲಕಿ ಟಿ.ಆರ್.ಕಲ್ಪನಾ ಹೇಳಿದರು. ಸುಮಾರು 9 ತಿಂಗಳು ಕಾಲ ಕ್ಯಾತ್ಸಂದ್ರ, ಬಡ್ಡಿಹಳ್ಳಿ ಭಾಗದಲ್ಲಿ ಉತ್ಪಾದನಾ ಚಟುವಟಿಕೆ ನಡೆಸಿದ್ದರು. ಭಾನುವಾರ ಸಹ ರಜೆ ನೀಡದೆ ಕೆಲಸ ಮಾಡಿಸಿಕೊಂಡಿದ್ದರು. ಇದಕ್ಕೆ ನೀಡಬೇಕಾದ ವೇತನ ಸಹ ನೀಡಿಲ್ಲ ಎಂದರು. ಕಾರ್ಮಿಕರಿಗೆ ಬರಬೇಕಾದ ಕೂಲಿ ಕೊಡಿಸಿ. ಅವರ ಬದುಕಿಗೆ ನೆರವಾಗಬೇಕು ಎಂದು ಒತ್ತಾಯಿಸಿ ಕಾರ್ಮಿಕ ಅಧಿಕಾರಿ, ಡಿವೈಎಸ್‌ಪಿ, ಹೆಚ್ಚುವರಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

ಸಿಐಟಿಯು ಜಿಲ್ಲಾ ಕಾರ್ಯಕಾರಿ ಮಂಡಳಿಯ ಸದಸ್ಯ ಸುಜಿತ್ ನಾಯಕ ಇತರರು ಪಾಲ್ಗೊಂಡಿದ್ದರು.



## ಮಿನಿ ನ್ಯೂಸ್

### ದೇಗುಲದ ಹುಂಡಿಗೆ ಕನ್ನ ಹಾಕಿದ ಕಳ್ಳರು

• **ಉದಯವಾಹಿನಿ, ಗುಂಡ್ಲುಪೇಟೆ**

ತಾಲ್ಲೂಕಿನ ಚನ್ನಂಜಯ್ಯನಹುಂಡಿ ಹಾಗೂ ಯಡಹುಂಡಿ ಗ್ರಾಮದ ಶನೇಶ್ವರ ಸ್ವಾಮಿ ಮತ್ತು ಗಣಪತಿ ದೇಗುಲದ ಬಾಗಿಲು ಮೀಟಿದ ಕಳ್ಳರು ಹುಂಡಿಯನ್ನ ಹೊತ್ತೊಯ್ದಿರುವ ಘಟನೆ ರಾತ್ರಿ ನಡೆದಿದೆ. ಎಂದಿನಂತೆ ಅರ್ಚಕರು ಬೆಳಗ್ಗೆ ದೇವಾಲಯಕ್ಕೆ ಬಂದಾಗ ಬಾಗಿಲು ಮೀಟಿರುವುದು ಕಂಡುಬಂದಿದೆ, ಒಳಗೆ ಪರಿಶೀಲಿಸಿದಾಗ ಹುಂಡಿ ಕಳವಾಗಿರುವ ಕುರಿತು ಸ್ಪಷ್ಟವಾಗಿದೆ. ಹುಂಡಿಯಲ್ಲಿ ಸುಮಾರು 50 ಸಾವಿರಕ್ಕೂ ಹೆಚ್ಚು ಹಣ ಸಂಗ್ರಹವಾಗಿರಬಹುದು ಎಂದು ಅಂದಾಜಿಸಲಾಗಿದೆ. ಕಳ್ಳರ ಕುಕೃತ್ಯದಿಂದ ಆತಂಕಕ್ಕೊಳಗಾಗಿರುವ ಗ್ರಾಮಸ್ಥರು ಪೊಲೀಸ್ ಗಸ್ತು ವ್ಯವಸ್ಥೆ ಮಾಡಬೇಕು ಎಂದು ಒತ್ತಾಯಿಸಿದ್ದಾರೆ. ಘಟನಾ ಸಂಬಂದ ತೆರಕಣಾಂಬಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.



### ಛಲವಾದಿ ಕ್ಷೇಮಾಭಿವೃದ್ಧಿ ಸಂಘಕ್ಕೆ ಅಧ್ಯಕ್ಷ ಉಪಾಧ್ಯಕ್ಷರ ಆಯ್ಕೆ



• **ಉದಯವಾಹಿನಿ, ಗುಂಡ್ಲುಪೇಟೆ**

ಕರ್ನಾಟಕ ರಾಜ್ಯ ಛಲವಾಧಿ ಕ್ಷೇಮಾಭಿವೃದ್ಧಿ ಸಂಘದ ಗುಂಡ್ಲುಪೇಟೆ ತಾಲ್ಲೂಕು ಘಟಕದ ಅಧ್ಯಕ್ಷರಾಗಿ ದೊಡ್ಡರಾಜು ಬೆಂಡರವಾಡಿ ಹಾಗೂ ಉಪಾಧ್ಯಕ್ಷರನ್ನಾಗಿ ಹುಲಸಗುಂದಿ ಪರಮೇಶ್ ಅವರನ್ನ ಆಯ್ಕೆ ಮಾಡಲಾಯಿತು. ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರೆಯಲಾಗಿದ್ದ ಪೂರ್ವಭಾವಿ ಸಭೆಯಲ್ಲಿ ಸರ್ವ ಸದಸ್ಯರ ಸಮ್ಮತಿ ಮೇರೆಗೆ ಆಯ್ಕೆಮಾಡಲಾಗಿ ಸಂಘದ ಗುರಿ ಮತ್ತು ಸಮುದಾಯದ ಏಳ್ಗೆಯ ಕುರಿತಾಗಿ ಮಾರ್ಗದರ್ಶನ ನೀಡಲಾಯಿತು.

ಈ ಸಂಧರ್ಭದಲ್ಲಿ ಸಂಘದ ಚಾಮರಾಜನಗರ ಜಿಲ್ಲಾಧ್ಯಕ್ಷ ಶಿವಣ್ಣ ಮತ್ತು ಉಪಾಧ್ಯಕ್ಷ ಕೃಷ್ಣರಾಜು, ಪ್ರದಾನ ಕಾರ್ಯದರ್ಶಿ ಸೋಮಸುಂದರ್, ಖಜಾಂಚಿ ಶಿವಣ್ಣ, ಚಿನ್ನಸ್ವಾಮಿ ಬೆಂಡರವಾಡಿ, ಕೃಷ್ಣ, ಮಂಗಲ ಸುನಿ, ಕೂಸಯ್ಯ ಸೇರಿದಂತೆ ಹಲವರು ಹಾಜರಿದ್ದರು.

### ನಗರದಲ್ಲಿ ರಾತ್ರಿ ಮನೆ ಬೀಗ ಒಡೆದು ನಗದು, ಚಿನ್ನಾಭರಣ ಕಳವು

• **ಉದಯವಾಹಿನಿ, ಪಾವಗಡ**

ಪಟ್ಟಣದ ಕಾಳಿದಾಸ ನಗರದಲ್ಲಿ ರಾತ್ರಿ ಮನೆ ಬೀಗ ಒಡೆದು, ನಗದು ಮತ್ತು ಚಿನ್ನಾಭರಣಗಳನ್ನು ದೋಚಿ ಪರಾರಿಯಾಗಿದ್ದಾರೆ. ಓಬಳಮ್ಮ ಅವರ ಮನೆ ಬೀಗ ಒಡೆದ ಕಳ್ಳರು ರೂ.2 ಲಕ್ಷ ನಗದು, ಚಿನ್ನಾಭರಣ ದೋಚಿ ಪರಾರಿಯಾಗಿದ್ದಾರೆ. ಮನೆಗೆ ಬೀಗ ಹಾಕಿ ಮಹಡಿ ಮೇಲೆ ಮಲಗಿದ್ದರು. ಮನೆಯ ಕಾರ್ಯಕ್ರಮಕ್ಕಾಗಿ ನಗದನ್ನು ಮನೆಯಲ್ಲಿರಿಸಲಾಗಿತ್ತು. ಮನೆಯ ಗೇಟ್ ಹಾರಿ, ಬೀಗ ಒಡೆದು ಕೃತ್ಯ ಎಸಗಲಾಗಿದೆ. ಬೆಳಿಗ್ಗೆ ನಗದು, ಚಿನ್ನದ ಆಭರಣ ಕಳುವಾಗಿರುವುದು ತಿಳಿಯಿತು ಎಂದು ಓಬಳಮ್ಮ ತಿಳಿಸಿದ್ದಾರೆ.

### 35ನೇ ದಿನಕ್ಕೆ ಕಾಲಿಟ್ಟ ರೈತ ಸಂಘದ ಅಹೋರಾತ್ರಿ ಧರಣಿ



• **ಉದಯವಾಹಿನಿ, ಹುಳಿಯಾರು**

ಪಟ್ಟಣ ಪಂಚಾಯಿತಿ ಮುಂದೆ ಸಂತೆ ಸ್ಥಳಾಂತರ, ಕಸ ವಿಲೇವಾರಿ ಘಟಕಕ್ಕೆ ಸೂಕ್ತ ಜಾಗ ಗುರುತಿಸುವಂತೆ ಆಗ್ರಹಿಸಿ ರೈತ ಸಂಘ ನಡೆಸುತ್ತಿದ್ದ ಅಹೋರಾತ್ರಿ ಧರಣಿ 35ನೇ ದಿನಕ್ಕೆ ಕಾಲಿಟ್ಟಿದೆ. ಪ್ರತಿಭಟನೆಯ ತೀವ್ರತೆ ಹೆಚ್ಚಿದ ಹಿನ್ನೆಲೆಯಲ್ಲಿ ಪಟ್ಟಣದ ವೈದ್ಯರು ಸ್ಥಳಕ್ಕೆ ಭೇಟಿ ನೀಡಿ ಧರಣಿ ನಿರತರೊಂದಿಗೆ ಮಾತುಕತೆ ನಡೆಸಿ ನೈತಿಕ ಬೆಂಬಲ ಸೂಚಿಸಿದರು.

ಸ್ಪಂದನ ನರ್ಸಿಂಗ್ ಹೋಂ ವ್ಯವಸ್ಥಾಪಕ ಡಾ. ಕೆ.ಎಚ್.ನಾಗರಾಜು ಮಾತನಾಡಿ ಮತ್ತು ರೈತಸಂಘದ ಸದಸ್ಯರು ಧರಣಿ ಮೂಲಕ ಒತ್ತಾಯಿಸುತ್ತಿರುವುದು ನ್ಯಾಯಬದ್ಧವಾಗಿದೆ. ಹೋರಾಟಕ್ಕೆ ಸ್ಪಂದಿಸಿ ಭರವಸೆ ಈಡೇರಿಸಬೇಕಿತ್ತು. ಧರಣಿಯಲ್ಲಿ ಪಾಲ್ಗೊಂಡು ಅವರ ಆರೋಗ್ಯ ಕೂಡ ಹದಗೆಡುತ್ತಿದೆ. ಕೂಡಲೇ ಜಿಲ್ಲಾಡಳಿತ ಸಮಸ್ಯೆ ಬಗೆಹರಿಸಬೇಕು ಎಂದು ಮನವಿ ಮಾಡಿದರು.

# ರಾಗಿ ಬೆಳೆಗೆ ಬೇಕು ಹದ ಮಳೆ: ಕೆಂಪು ರಾಗಿಗೆ ಹೊರ ರಾಜ್ಯಗಳಲ್ಲೂ ಭಾರಿ ಬೇಡಿಕೆ

• **ಉದಯವಾಹಿನಿ, ಮಾಗಡಿ**



ತಾಲ್ಲೂಕಿನಲ್ಲಿ ಸುಮಾರು 30.000 ಹೆಕ್ಟೇರ್ ಪ್ರದೇಶದಲ್ಲಿ ಬೆಳೆದಿರುವ ರಾಗಿ ಬೆಳೆಯು ಇನ್ನೂ ಎರಡು ಹಂತದ ಹದವಾದ ಮಳೆ ಮೇಲೆ ನಿಂತಿದೆ. ಆದರೂ, ರೈತರು ಭರ್ಜರಿ ಬೆಳೆ ನಿರೀಕ್ಷೆಯಲ್ಲಿದ್ದಾರೆ. ಮಳೆ ಕೈಕೊಟ್ಟರೆ ಬೆಳ ಉತ್ಪಾದನೆಯಲ್ಲಿ ಶೇ40-50 ಇಳಿಕೆ ಆಗುವ ಆತಂಕದಲ್ಲಿ ಇದ್ದಾರೆ ರೈತರು. ಜುಲೈಯಲ್ಲಿ ಬಿತ್ತನೆ ಮಾಡಿದ ರಾಗಿ ಬೆಳೆ ಕೊಯ್ಲಿಗೆ ಸಿದ್ಧವಾಗಿದೆ. ಇನ್ನೂ ಸ್ವಲ್ಪ ಮಳೆ ಬಂದರೆ ಉತ್ತಮ ಇಳುವರಿ ನಿರೀಕ್ಷಿಸಬಹುದು. ಆದರೆ, ಆಗಸ್ಟ್ ತಿಂಗಳಲ್ಲಿ ಬಿತ್ತನೆ ಮಾಡಿದ ಬೆಳೆಗೆ ಮಳೆ ಅತ್ಯವಶ್ಯ. ಈ ಎರಡೂ ಹಂತದ ಬೆಳೆಗಳಿಗೂ ಸರಿಯಾದ ಮಳೆ ಬಂದರೆ ಶೇ90 ಭರ್ಜರಿ ಬೆಳೆ ನಿರೀಕ್ಷೆ ಇದೆ. ರೈತರು ಮಳೆಗಾಗಿ ಆಕಾಶದತ್ತ ಮುಖ ಮಾಡಿದ್ದಾರೆ.

**ಮಾಗಡಿ ರಾಗಿ ಪ್ರಸಿದ್ಧಿ:** ತಾಲ್ಲೂಕು ಅರೆ-ಮಲೆನಾಡು ಪ್ರದೇಶ. ರಾಗಿ ಬೆಳೆಗೆ ಹೆಸರುವಾಸಿ. ಎಂಆರ್-1, ಜಿಪಿ-28 ಮತ್ತು ಎಂಎಲ್-365 ತಳಿಗಳನ್ನು ಹೆಚ್ಚಾಗಿ ಬೆಳೆಯಲಾಗಿದೆ. ಕರ್ನಾಟಕ ಸೇರಿದಂತೆ ಹೊರ ರಾಜ್ಯಗಳಲ್ಲೂ ಮಾಗಡಿ ಕೆಂಪು ರಾಗಿಗೆ ಉತ್ತಮ ಬೇಡಿಕೆ ಮತ್ತು ಬೆಲೆ ಇದೆ. ಸರ್ಕಾರವೂ ಬೆಂಬಲ ಬೆಲೆಯಲ್ಲಿ ರಾಗಿ ಖರೀದಿ ಮಾಡುತ್ತದೆ.

**ಹಸಿರಿನಿಂದ ಕಂಗೊಳಿಸುವ ಹೊಲಗಳು:** ತಾಲ್ಲೂಕಿನ ಕುದೂರು, ತಿಪ್ಪಸಂದ್ರ, ಸೋಲೂರು. ಮಾಡಬಾಳ್, ಕಸಬಾ ಹೋಬಳಿಗಳಲ್ಲಿ ರಾಗಿ, ಭತ್ತ, ಅವರೆ ಬೆಳೆಯಲಾಗಿದೆ. ರಾಗಿ ಕಾಳು ಕಟ್ಟಲು ಆರಂಭಿಸಿದೆ. ಅವರೆ, ಅಲಸಂದೆ, ಜೋಳ, ಸಾಸಿವೆ, ತೊಗರಿ ಮಿಶ್ರ ಬೆಳೆಯಾಗಿ ಬೆಳೆಯುವುದು ಇಲ್ಲಿ ಸಾಮಾನ್ಯ. ಹೊಲಗಳು ಹಸಿರಿನಿಂದ ಕಂಗೊಳಿಸುತ್ತಿವೆ.

**ಕೀಟನಾಶಕ ಸಿಂಪಡಣೆ ಮತ್ತು ಕೊಯ್ಲು:** ಹಸಿರು ಹುಲ್ಲಿನ ಜತೆಗೆ ಮಿಶ್ರ ಬೆಳೆ ಬಂದಿರುವುದರಿಂದ ಕೀಟಬಾಧೆ ಆತಂಕವೂ ರೈತರನ್ನು ಬಾಧಿಸುತ್ತಿದೆ. ಇದರಿಂದಾಗಿ ಕೃಷಿ ಇಲಾಖೆ ಸೂಚನೆ ಮೇರೆಗೆ ಕೀಟನಾಶಕ ಸಿಂಪಡಣೆ ಕಾರ್ಯವನ್ನು ರೈತರು ಆರಂಭಿಸಿದ್ದಾರೆ. ಈಗಾಗಲೇ ಮೂರು ಹಂತದಲ್ಲಿ ರಾಗಿ ಕೊಯ್ಲು ಆರಂಭವಾಗಿದೆ. ಮುಂಚಿತವಾಗಿ ಬಿತ್ತನೆಯಾದ ರಾಗಿ ಕೊಯ್ಲಿಗೆ ಬಂದಿದ್ದರೆ, ತಡವಾಗಿ ಬಿತ್ತನೆಯಾದ ಬೆಳೆ 15-20 ದಿನಗಳಲ್ಲಿ ಕೊಯ್ಲಿಗೆ ಬರುವ ನಿರೀಕ್ಷೆ ಇದೆ. ಬಹುತೇಕ ರೈತರು ಈಗ ಕೊಯ್ಲು ಯಂತ್ರ ಬಳಸುತ್ತಿದ್ದಾರೆ. ಆದರೆ, ಯಂತ್ರದ ಕೊಯ್ಲಿನಿಂದ ಸುಮಾರು ಶೇ10 ರಾಗಿ ಜಮೀನಿನಲ್ಲೇ ಉಳಿದು ಹಾಳಾಗುತ್ತಿದೆ ಎಂಬ ಆತಂಕವನ್ನೂ ರೈತರು ವ್ಯಕ್ತಪಡಿಸಿದ್ದಾರೆ.

**ಇನ್ನೊಂದು ವಾರದಲ್ಲಿ ಮಳೆ ಬಾರದಿದ್ದರೆ ರಾಗಿ ಬೆಳೆಗೆ ನಷ್ಟ ಉಂಟಾಗಲಿದೆ. ಶೇ 50ರಷ್ಟು ಮಾತ್ರ ಬೆಳೆ ನಿರೀಕ್ಷೆ ಮಾಡಬಹುದು.** -ಮಹೇಶ್, ಪ್ರಗತಿರ ರೈತ ಚಕ್ರಬಾವಿ

**ತಾಲ್ಲೂಕಿನಲ್ಲಿ ಬೆಳೆಯುವ ರಾಗಿಗೆ ಸಾಕಷ್ಟು ಬೇಡಿಕೆ ಇದೆ. ರೈತರಿಗೆ ಉತ್ತಮ ಗುಣಮಟ್ಟದ ಬಿತ್ತನೆ ಬೀಜ ವಿತರಣೆ ಮಾಡಲಾಗಿದೆ. ಮಳೆ ನಿರೀಕ್ಷೆಯಲ್ಲಿ ರೈತರು ಇದ್ದಾರೆ.** -ವಿಜಯ ಶವಣೂರು, ಸಹಾಯಕ ಕೃಷಿ ನಿರ್ದೇಶಕ

# ಸಾಮಾನ್ಯ ಹೆರಿಗೆಗೆ ಆದ್ಯತೆ ನೀಡಿ: ವೈದ್ಯರಿಗೆ ಶಾಸಕ ಸೂಚನೆ



• **ಉದಯವಾಹಿನಿ, ಗೌರಿಬಿದನೂರು**

ತಾಲ್ಲೂಕು ಪಂಚಾಯಿತಿಯ ಸಾಮರ್ಥ್ಯಸೌಧದ ಸಭಾಂಗಣದಲ್ಲಿ ಕೆಡಿಪಿ ಸಭೆ ಹಮ್ಮಿಕೊಳ್ಳಲಾಯಿತು. ಸಭೆಯಲ್ಲಿ ಮಾತನಾಡಿದ ಶಾಸಕ ಕೆ.ಎಚ್. ಪುಟ್ಟಸ್ವಾಮಿ ಗೌಡ, ಆಸ್ಪತ್ರೆಗಳಲ್ಲಿ ವೈದ್ಯರು ಸಿಜೇರಿಯನ್ ಬದಲಿಗೆ ಸಾಮಾನ್ಯ ಹೆರಿಗೆಗೆ ಹೆಚ್ಚು ಒತ್ತು ನೀಡಬೇಕು ಎಂದು ತಾಲ್ಲೂಕು ವೈದ್ಯರಿಗೆ ಸೂಚನೆ ನೀಡಿದರು.

ಹೆರಿಗೆಗೆ ಬರುವವರನ್ನು ವಿನಾಕಾರಣ ಸಿಜೇರಿಯನ್ ಮಾಡಬಾರದು. ಸಾಮಾನ್ಯ ಹೆರಿಗೆ ಮಾಡಿಸಲು ವೈದ್ಯರು ಗರಿಷ್ಠ ಪ್ರಯತ್ನ ಮಾಡಬೇಕು. ಇದರಿಂದ ಹೆಣ್ಣು ಮಕ್ಕಳು ಆರೋಗ್ಯವಾಗಿರಲು ಸಾಧ್ಯವಾಗಲಿದೆ ಎಂದು ಹೇಳಿದರು.

ತಾಲ್ಲೂಕಿನಲ್ಲಿ ಈ ಬಾರಿ ಹತ್ತನೇ ತರಗತಿ ಫಲಿತಾಂಶದಲ್ಲಿ ಜಿಲ್ಲೆಯಲ್ಲಿ ಪ್ರಥಮ ಅಥವಾ ದ್ವಿತೀಯ ಸ್ಥಾನ ಪಡೆಯಲೇಬೇಕು. ಇದಕ್ಕೆ ಶಿಕ್ಷಕರು ವಿದ್ಯಾರ್ಥಿಗಳ ಕಡೆ ಹೆಚ್ಚು ಗಮನ ನೀಡಬೇಕು ಎಂದು ಬಿಇಒ ಗಂಗರೆಡ್ಡಿಗೆ ಸೂಚಿಸಿದರು. ನಗರದ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಆವರಣದಲ್ಲಿ ಮುಚ್ಚಿರುವ ಜನೌಷಧಿ ಕೇಂದ್ರ ತೆರೆಯಲು ಕ್ರಮ ಕೈಗೊಳ್ಳಬೇಕು ಎಂದು ತಾಲ್ಲೂಕು ಆಡಳಿತ ವೈದ್ಯಾಧಿಕಾರಿ ಲಕ್ಷ್ಮಿಕಾಂತ್ ಗೆ ಸೂಚನೆ ನೀಡಿದರು.


ಬೆಲೆ ನಷ್ಟವಾದ ರೈತರಿಗೆ ಬೆಳೆ ವಿಮೆ ಪಡೆಯಲು ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಜೆಜೆಎಂ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕು. ಈ ಸಂಬಂಧ ಶೀಘ್ರವೇ ಸಭೆ ಕರೆಯಲಾಗುವುದು. ಗ್ರಾಮೀಣ ಭಾಗದಲ್ಲಿ ಕೆಟ್ಟ ನಿಂತಿರುವ ಶುದ್ಧ ನೀರಿನ ಘಟಕವನ್ನು ಪಂಚಾಯಿತಿಯವರು ನಿಭಾಯಿಸಬೇಕು.

ಲೋಕೋಪಯೋಗಿ ಇಲಾಖೆಗೆ ವಹಿಸಿದ ಕೋಟ್ಯಾಂತರ ರೂಪಾಯಿ ಕೆಲಸವನ್ನು ಮಳೆ ಕಾರಣಕ್ಕೆ ನಿಲ್ಲಿಸಲಾಗಿತ್ತು. ಈಗ ಮಳೆ ನಿಂತಿದ್ದು ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಅಧಿಕಾರಿಗಳಿಗೆ ಶಾಸಕ ಕಿವಿಮಾತು ಹೇಳಿದರು. ತಹಶೀಲ್ದಾರ್ ಅರವಿಂದ್ ಕೆ.ಎಂ ಮಾತನಾಡಿ, ನಗರ ಭಾಗದಲ್ಲಿ ಅತಿ ಹೆಚ್ಚು ಬೀಡಿ. ಸಿಗರೇಟ್ ಅಂಗಡಿಗಳಿವೆ. ಇದಕ್ಕೆ ಆರೋಗ್ಯ ಇಲಾಖೆಗೆ ದಂಡ ವಿಧಿಸುವ ಜವಾಬ್ದಾರಿ ನೀಡಲಾಗಿದೆ. ಸಾರ್ವಜನಿಕರಿಗೆ ಅರಿವು ಮೂಡಿಸುವ ಕೆಲಸವನ್ನೂ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

**ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಜಿ.ಕೆ. ಹೊನ್ನಯ್ಯ ಮಾತನಾಡಿ, ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಸರ್ಕಾರಿ ಸೌಲಭ್ಯಗಳ ಕುರಿತು ಗ್ರಾಮೀಣ ಭಾಗದ ಜನರಿಗೆ ಅರಿವು ಮೂಡಿಸಬೇಕು. ಕುಡಿಯುವ ನೀರಿಗೆ ಸಂಬಂಧಪಟ್ಟ ಕಾಮಗಾರಿಗಳನ್ನು ವೇಗವಾಗಿ ಪೂರ್ಣಗೊಳಿಸಬೇಕು, ಜನರಿಗೆ ಯಾವುದೇ ತೊಂದರೆಯಾಗದಂತೆ ಕ್ರಮವಹಿಸಬೇಕು. ಸಕಾಲದಲ್ಲಿ ಜನರ ಕೆಲಸಗಳನ್ನು ಮಾಡಿ ಕೊಡಬೇಕು ಎಂದರು.**

# ಓಬವ್ವನ ಹೋರಾಟ ಸ್ಫೂರ್ತಿದಾಯಕ: ಹೆಚ್ಚುವರಿ ಆರ್. ಚಂದ್ರಯ್ಯ

• **ಉದಯವಾಹಿನಿ, ರಾಮನಗರ**



ಚಿತ್ರದುರ್ಗದ ಏಳು ಸುತ್ತಿನ ಕೋಟೆ ಹಾಗೂ ಆ ಸಂಸ್ಥಾನದ ರಕ್ಷಣೆಗೆ ಪ್ರಾಣದ ಹಂಗು ತೊರೆದು ಹೋರಾಡಿದ ವೀರ ನಾರಿ ಒನಕೆ ಓಬವ್ವನ ಕೆಚ್ಚೆದೆಯ ಹೋರಾಟ ಪ್ರೇರಣದಾಯಕವಾಗಿದೆ. ಹೆಣ್ಣು ಅಡುಗೆ ಮನೆಗೆ ಮಾತ್ರ ಸೀಮಿತವಲ್ಲ. ಶತ್ರುಗಳ ವಿರುದ್ಧ ಹೋರಾಡಬಲ್ಲರು ಎಂಬುದಕ್ಕೆ ಓಬವ್ವನಿಗಿಂತ ದೊಡ್ಡ ನಿದರ್ಶನ ಮತ್ತೊಂದಿಲ್ಲ' ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಬಣ್ಣಿಸಿದರು.ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ವೀರರಾಣಿ ಒನಕೆ ಓಬವ್ವ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ, ಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ಕೆಲವರ ಒಳ ಸಂಚಿನಿಂದಾಗಿ ಕೋಟೆಯ ಹಿಂಭಾಗದಿಂದ ಚಿತ್ರದುರ್ಗವನ್ನು ವಶಪಡಿಸಿಕೊಳ್ಳಲು ಹೈದರ್ ಅಲಿ ದಾಳಿ ಮಾಡುತ್ತಾನೆ. ಶತ್ರುಗಳು ಕೋಟೆ ಒಳಕ್ಕೆ ನುಸುಳುತ್ತಿರುವುದನ್ನು ಗಮನಿಸಿದ ಓಬವ್ವ, ಕೋಟೆಯ ಕಿಂಡಿಯಿಂದ ನುಸುಳಿದ ಸೈನಿರನ್ನು ಕೊಂದು ನಾಯಕರ ಸಂಸ್ಥಾನವನ್ನು ರಕ್ಷಿಸಿದಳು' ಎಂದು ಹೇಳಿದರು.

ಹಿಂದೆ ಹೆಣ್ಣನ್ನು ತೀರಾ ಕಡೆಗಣಿಸುತ್ತಿದ್ದ ಕಾಲವೀಗ ಬದಲಾಗಿದೆ. ಹೆಣ್ಣು ಈಗ ತೊಟ್ಟಿಲು ತೂಗುವುದರಿಂದಿಡಿದು ದೇಶ ಆಳುವವರೆಗೆ ಬೆಳೆದಿದ್ದಾರೆ. ಹೆಣ್ಣು ಮತ್ತು ಗಂಡಿನ ನಡುವೆ ಇದ್ದ ತಾರತಮ್ಯದ ಗೆರೆಗಳು ಇದೀಗ ಅಳಿಸಿವೆ. ಗಂಡಿನಂತೆ ಹೆಣ್ಣು ಕೂಡ ಸರಿಸಮಾನಳು ಎಂಬುದಕ್ಕೆ ಎಲ್ಲಾ ಕ್ಷೇತ್ರಗಳಲ್ಲೂ ಅವರು ಮಾಡಿರುವ ಸಾಧನೆಯೇ ಸಾಕ್ಷಿ' ಎಂದು ತಿಳಿಸಿದರು. ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯ ಡಾ. ಲೋಕೇಶ್ ಮೌರ್ಯ ಮಾತನಾಡಿ, 'ಬ್ರಿಟಿಷರನ್ನೇ ಸೋಲಿಸಿದ್ದ ಹೈದರ್ ಅಲಿ ಪಡೆಯನ್ನೇ ಎದುರಿಸಿದ ದಿಟ್ಟ ಮಹಿಳೆ ಒನಕೆ ಓಬವ್ವ. ಅಂದು ತನ್ನ ಸಂಸ್ಥಾನವನ್ನು ಕಾಪಾಡಲು ಟೊಂಕ ಕಟ್ಟಿ ನಿಂತಿದ್ದಳು. ಆಕೆಯ ಹೋರಾಟದಿಂದಾಗಿ ಕೋಟೆಯುವ ಹೈದರ್ ಅಲಿ ಕೈವಶವಾಗುವುದು ತಪ್ಪಿತು' ಎಂದರು.

**'ಮದಕರಿ ನಾಯಕ ಆಳ್ವಿಕೆ ನಡೆಸುತ್ತಿದ್ದ ಸಂದರ್ಭದಲ್ಲಿ ಹೈದರಾಲಿ ಚಿತ್ರದುರ್ಗದ ಕೋಟೆ ವಶಪಡಿಸಿಕೊಳ್ಳಲು ಯತ್ನಿಸಿದ. ಬ್ರಿಟಿಷರಿಗೆ ಸೋಲುಣಿಸಿದ್ದ ಹೈದರ್ ಅಲಿ 1766ರಲ್ಲಿ ಮದಕರಿ ನಾಯಕರ ಮೇಲೆ 4 ಬಾರಿ ಯುದ್ಧಕ್ಕೆ ಯತ್ನಿಸಿದ. ಚಿತ್ರದುರ್ಗದ ಕೋಟೆ 203 ಬಾಗಿಲುಗಳನ್ನು ಒಳಗೊಂಡಿದ್ದು, 101 ಕಳ್ಳ ಬಾಗಿಲನ್ನು ಹೊಂದಿತ್ತು. ಅದನ್ನು ವಶಪಡಿಸಿಕೊಳ್ಳಲು ವಿಫಲನಾದ ಹೈದರ್ 4 ತಿಂಗಳು ಕೋಟೆಯ ಮುಂದೆಯೇ ಬೀಡು ಬಿಟ್ಟಿದ್ದ' ಎಂದು ಹೇಳಿದರು.**

# ಜೈಲಿನಲ್ಲಿ ಕೈದಿಗಳ ಮೋಜು ಕಾಂಗ್ರೆಸ್‌ನ 6ನೇ ಗ್ಯಾರಂಟಿ: ನಿಖಿಲ್ ಕುಮಾರಸ್ವಾಮಿ

• **ಉದಯವಾಹಿನಿ, ಕೋಲಾರ**

ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲಿ ಕೈದಿಗಳ ರಾಜಾತಿಥ್ಯ ವಿಡಿಯೋ ನೋಡಿದ್ದೇನೆ. ಸರ್ಕಾರ ಯಾವ ರೀತಿ ನಡೆದುಕೊಳ್ಳುತ್ತಿದೆ ಎನ್ನುವುದಕ್ಕೆ ಇದೇ ಸಾಕ್ಷಿ. ಮಾತೆತ್ತಿದರೆ ಗ್ಯಾರಂಟಿ ಎನ್ನುತ್ತಾರೆ. ಕೈದಿಗಳ ಮೋಜು, ಮಸ್ತಿಗೆ ಕಾಂಗ್ರೆಸ್‌ನ ಮತ್ತೊಂದು ಗ್ಯಾರಂಟಿ ಕೊಟ್ಟಿದೆ ಎಂದು ಜೆಡಿಎಸ್ ರಾಜ್ಯ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ವಾಗ್ದಾಳಿ ನಡೆಸಿದರು. ನಗರ ಹೊರವಲಯದಲ್ಲಿ ಮಂಗಳವಾರ ಮಂಗಮ್ಮ ಮುನಿಸ್ವಾಮಿ ಅವರ ಜನ್ಮದಿನದ ಕಾರ್ಯಕ್ರಮದ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, 'ಅನುದಾನ ತಾರತಮ್ಯ ಬರೀ ಜೆಡಿಎಸ್, ಬಿಜೆಪಿ ಶಾಸಕರಿಗೆ ಸಂಬಂಧಿಸಿದ್ದಲ್ಲ. ಕಾಂಗ್ರೆಸ್ ಶಾಸಕರ ಸ್ಥಿತಿಯೂ ಚಿಂತಾಜನಕವಾಗಿದೆ' ಎಂದು ಟೀಕಿಸಿದರು.

ಅನುದಾನ ವಿಚಾರದಲ್ಲಿ ಮುಖ್ಯಮಂತ್ರಿ ಆರೋಪ ವಿಚಾರಕ್ಕೆ ಪ್ರತಿಕ್ರಿಯಿಸಿ, ಮೈತ್ರಿ ಸರ್ಕಾರದ ಅವಧಿಯಲ್ಲಿ ಅನುದಾನ ವಿಚಾರಕ್ಕೆ ಶ್ವೇತಾ ಪತ್ರ ಹೊರಡಿಸಲು ನಾವು ಸಿದ್ಧರಿದ್ದೇವೆ. ಕಾಂಗ್ರೆಸ್ ಸರ್ಕಾರವೂ ಹೊರಡಿಸಲಿ. ಕುಮಾರಣ್ಣ ರೈತರ ಸಾಲಮನ್ನಾ ಮಾಡಿದರು. ಅವರ ಆಡಳಿತದಲ್ಲಿ ಅಭಿವೃದ್ಧಿ ಯಾವತ್ತೂ ಕುಂಠಿತವಾಗಿಲ್ಲ. ಆ ಪಕ್ಷ ಈ ಪಕ್ಷವೆಂದು ತಾರತಮ್ಯ ಮಾಡದೆ ಎಲ್ಲಾ ಶಾಸಕರಿಗೂ ಸಮನಾಗಿ ಅನುದಾನ ಬಿಡುಗಡೆ ಮಾಡಿದರು' ತಿರುಗೇಟು ನೀಡಿದರು.



ಕೋರ್ ಕಮಿಟಿ ಪರಿಷ್ಕರಣೆ ಸಂಬಂಧ ಪ್ರತಿಕ್ರಿಯಿಸಿ, 'ಕುಮಾರಣ್ಣ, ಎಚ್.ಡಿ.ದೇವೇಗೌಡರು ಸೇರಿ ಚರ್ಚೆ ಮಾಡಿ ತೀರ್ಮಾನ ಕೈಗೊಂಡಿದ್ದಾರೆ. ಇದು ಒಮ್ಮತದ ತೀರ್ಮಾನ. ಮುಂದೆ ಪಕ್ಷ ಬಲಪಡಿಸಲು ನೀಲನಕ್ಷೆ ಮಾಡಿಕೊಂಡು ಕೋರ್ ಕಮಿಟಿ ಅಧ್ಯಕ್ಷರನ್ನಾಗಿ ಕೃಷ್ಣಾರೆಡ್ಡಿ ಅವರನ್ನು ಮಾಡಿದ್ದಾರೆ' ಎಂದರು.

ದೆಹಲಿ ಬಾಂಬ್ ಸ್ಫೋಟದ ಸಂಬಂಧ ತನಿಖೆ ನಡೆಸಿ ಸತ್ಯ ಹೊರಗಡೆ ತರಬೇಕು.

ಯಾರೇ ಭಾಗಿಯಾಗಿದ್ದರೂ ಕಠಿಣ ಶಿಕ್ಷೆ ವಿಧಿಸಬೇಕು. ಇದೊಂದು ಅತ್ಯಂತ ನೋವಿನ ಸಂಗತಿ. ಅನೇಕ ಸಾವು ನೋವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

**ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಗಟ್ಟಿಯಾಗಿ ಮುಂದುವರಿಯಲಿದೆ. ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮೈತ್ರಿ ಪಕ್ಷಗಳು ಯಾವ ರೀತಿ ಸಾಗಬೇಕೆಂದು ಅತೀ ಶೀಘ್ರದಲ್ಲಿ ಎರಡೂ ಪಕ್ಷಗಳ ಮುಖಂಡರು ತೀರ್ಮಾನಿಸಲಿದ್ದಾರೆ. ಸಮಿತಿ ರಚನೆ ಮಾಡಿ ಯಾವ ರೀತಿ ಮೈತ್ರಿ ಬಲಪಡಿಸಬೇಕೆಂದು ಚರ್ಚಿಸಲಿದ್ದಾರೆ ಎಂದು ಹೇಳಿದರು.**

# 2013ರಲ್ಲಿ ಸಿಎಂ ಹುಲಿಯಾ, ಈಗ ಇಲಿಯಾ: ಪ್ರತಾಪ್ ಸಿಂಹ ವ್ಯಂಗ್ಯ

## ರಾಹುಲ್ ಗಾಂಧಿ ಭೇಟಿಗೆ ಸಿದ್ದರಾಮಯ್ಯ ಗೇಟ್‌ನಲ್ಲಿ ಕಾಯುತ್ತಿರುವುದು ಬೇಸರ ತರಿಸಿದೆ

• **ಉದಯವಾಹಿನಿ, ಮೈಸೂರು**

ರಾಹುಲ್ ಗಾಂಧಿ ಸಿದ್ದರಾಮಯ್ಯ ಮುಂದೆ ಬಚ್ಚಾ ಆದರೆ, ಮತ್ತು ದೆಹಲಿಯಲ್ಲಿ ಅವರ ಭೇಟಿಗಾಗಿ ಸಿಎಂ ಕಾಯ್ತಿರೋದು ಬೇಸರ ತಂದಿದೆ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಅವರು ಮಾತನಾಡಿದರು. ಜೊತೆಗೆ ದೆಹಲಿಯಲ್ಲಿ ಕಾರು ಸ್ಫೋಟವಾದ ಪ್ರಕರಣದ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದರು. ಸಿದ್ದರಾಮಯ್ಯನವರು ದೆಹಲಿಯಲ್ಲಿ ರಾಹುಲ್ ಗಾಂಧಿ ಭೇಟಿಗೆ ಅವಕಾಶ ಸಿಗದೆ ಕಾಯಬೇಕಾದ ಪರಿಸ್ಥಿತಿ ಬಂದಿರುವುದು ಕನ್ನಡಿಗನಾಗಿ, ಮೈಸೂರಿನವನಾಗಿ ನನಗೆ ಬೇಸರ ತರಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಈ ದೈನೇಸಿ ಸ್ಥಿತಿ ಬರಬಾರದಿತ್ತು ಎಂದು ಅವರು ಮೈಸೂರಿನಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.



**ಸಿಎಂ ಸ್ಥಿತಿ ನೋಡೋಕಾಗ್ತಿಲ್ಲ**

2013ರಲ್ಲಿ ಸಿದ್ದರಾಮಯ್ಯ ಹುಲಿಯಾಗಿದ್ದರು. ಈಗ ಇಲಿಯಾಗಿದ್ದಾರೆ. ಹಿಂದೆ ಇಂದಿರಾಗಾಂಧಿ, ಸೋನಿಯಾ ಗಾಂಧಿಯವರನ್ನೇ ಟೀಕಿಸುತ್ತಿದ್ದ ಸಿದ್ದರಾಮಯ್ಯ, ಅವರ ಮೊಮ್ಮಗನ ಪಾದಪೂಜೆ ಮಾಡಲು ಸಿದ್ಧವಾಗಿರುವುದು ನೋವಿನ ಸಂಗತಿ.

ಸಿದ್ದರಾಮಯ್ಯನವರ ಮುಂದೆ ರಾಹುಲ್ ಗಾಂಧಿ ಒಬ್ಬ ಬಚ್ಚಾ. ಅಂಥವನ ಭೇಟಿಗಾಗಿ ಗೇಟ್‌ನಲ್ಲಿ ಕಾಯುತ್ತಿರುವುದು ನಮಗೆ ಬೇಸರ ತರಿಸಿದೆ ಎಂದು ಪ್ರತಾಪ್ ಸಿಂಹ ವ್ಯಂಗ್ಯವಾಡಿದರು.

ಇದೇ ಸಂದರ್ಭದಲ್ಲಿ ದೆಹಲಿ ಬಾಂಬ್ ಸ್ಫೋಟ ಪ್ರಕರಣದ ಬಗ್ಗೆ ಮಾಜಿ ಸಂಸದ ಪ್ರತಾಪ್‌ಸಿಂಹ ಮಾತನಾಡಿ, ವಿದ್ಯಾವಂತ ಮುಸ್ಲಿಮರೇ ಭಯೋತ್ಪಾದಕರಾಗಿ ಬದಲಾಗುತ್ತಿರುವುದು ಅತ್ಯಂತ ಅಪಾಯಕಾರಿ.

ಮುಸ್ಲಿಮರ ಸಮಸ್ಯೆ ಬಡತನವಲ್ಲ, ಅವರೊಳಗಿನ ಧರ್ಮಾಂಧತೆಯೇ ನಿಜವಾದ ಸಮಸ್ಯೆ. ಪುರುಸೊತ್ತಿಲ್ಲದೆ ಮಕ್ಕಳನ್ನು ಹುಟ್ಟಿಸುವುದಷ್ಟೇ ಅವರ ಕೆಲಸವಾಗಿದೆ ಎಂದು ಟೀಕೆ ಮಾಡಿದ್ದಾರೆ. ಟಾಂಗಾ ಸಾಬಿ, ಜಟ್ಕಾ ಸಾಬಿಗಿಂತ ವಿದ್ಯಾವಂತ ಮುಸ್ಲಿಮರ ಬಗ್ಗೆ ಜನರು ಹೆಚ್ಚು ಎಚ್ಚರಿಕೆಯಿಂದ ಇರಬೇಕು. ವಿದ್ಯಾವಂತ ಮುಸ್ಲಿಮರು ಭಯೋತ್ಪಾದಕರಾದರೆ ಅವರನ್ನು ಪತ್ತೆಹಚ್ಚುವುದು ಹೇಗೆ ಎಂದರು.

ಯುಪಿಎ ಸರ್ಕಾರದ ಅವಧಿಯಲ್ಲಿ ಸರಣಿ ಬಾಂಬ್ ಸ್ಫೋಟಗಳಾಗಿದ್ದವು. ನರೇಂದ್ರ ಮೋದಿಯವರು ಅಧಿಕಾರಕ್ಕೆ ಬಂದ ನಂತರ ದೇಶದೊಳಗೆ ನಡೆದ ಮೊದಲ ದೊಡ್ಡ ಸ್ಫೋಟವಿದು. ಮೊದಲು ಪಾಕಿಸ್ತಾನದಿಂದ ಬಂದು ಬಾಂಬ್ ಇಡುತ್ತಿದ್ದರು, ಈಗ ನಮ್ಮ ದೇಶದೊಳಗಿನ ಮುಲ್ಲಾಗಳೇ ಇದಕ್ಕೆ ತಯಾರಾಗುತ್ತಿದ್ದಾರೆ. ದೇಶದ ಒಳಗಿನವರೇ ಬಾಂಬ್ ಇಡಲು ಮುಂದಾದರೆ ಮೋದಿ ತಡೆಯಲು ಸಾಧ್ಯವೇ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಹೇಳಿದರು.



**ಜೈಷೆ ಮಹಿಳಾ ಘಟಕ ಸ್ಥಾಪಿಸುವ ಟಾಸ್ಕ್**


**ಫರೀದಾಬಾದ್ ಟೆರರ್ ಮಾಡ್ಯೂಲ್ ಪ್ರಕರಣದಲ್ಲಿಬಂಧನಕ್ಕೊಳಗಾದ ಲಖನೌ ವೈದ್ಯೆ ಡಾ.ಶಹೀನ್ ಸಯೀದ್‌ಗೆ ಪಾಕಿಸ್ತಾನದ ಉಗ್ರ ಸಂಘಟನೆ 'ಜೈಷೆ ಮೊಹಮ್ಮದ್' ಜತೆ ನಂಟು ಇರುವುದು ತನಿಖೆ ವೇಳೆ ಬಯಲಿಗೆ ಬಂದಿದೆ. ಈಕೆಗೆ ಭಾರತದಲ್ಲಿಜೈಷೆ ಮೊಹಮ್ಮದ್ ಸಂಘಟನೆಯ ಮಹಿಳಾ ಘಟಕ 'ಜಮಾತ್ ಉಲ್-ಮೊಮಿನಾತ್' ಸ್ಥಾಪಿಸುವ ಹೊಣೆ ನೀಡಲಾಗಿತ್ತು. ಈ ಸಂಘಟನೆಗೆ ಮಹಿಳೆಯರನ್ನು ನೇಮಿಸಿಕೊಳ್ಳುವ ಜವಾಬ್ದಾರಿಯನ್ನು ಹೊತ್ತಿದ್ದಳು ಎಂದು ಮೂಲಗಳು ಹೇಳಿವೆ. ಬಂಧಿತ ಡಾ. ಶಕೀಲ್‌ಗೆ ಸೇರಿದ್ದೆಂದು ಹೇಳಲಾದ ಕಾರನ್ನು ಈಕೆ ಸೋಮವಾರ ಲಖನೌದಲ್ಲಿಚಲಾಯಿಸುತ್ತಿದ್ದ ವೇಳೆ, ಕಾರಿನಿಂದ ಒಂದು ಎಕೆ-47 ರೈಫಲ್‌ಅನ್ನು ಪೊಲೀಸರು ವಶಕ್ಕೆ ಪಡೆದಿದ್ದರು.**

**ಜೈಲಿನಲ್ಲಿ ಕೈದಿಗಳಿಂದ ಮೊಬೈಲ್ ಬಳಕೆ**

**ಭಾರತವನ್ನು ಹಿಂದೂ ರಾಷ್ಟ್ರ ಆಗಲು ಬಿಡುವುದಿಲ್ಲ ಎಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಇದನ್ನು ಮುಸ್ಲಿಂ ರಾಷ್ಟ್ರ ಮಾಡಲು ಹೊರಟಿದ್ದಾರೆಯೇ ಎಂದು ಸಿಂಹ ಪ್ರಶ್ನಿಸಿದರು. ಸಿದ್ದರಾಮಯ್ಯನವರಂತಹ ನಾಯಕರು ಇರುವಾಗ ನಾವು ದೇಶದೊಳಗೆ ಇಂತಹ ಪರಿಸ್ಥಿತಿಯನ್ನು ಎದುರಿಸಲೇಬೇಕು. ಅವರ ಸರ್ಕಾರದ ಯೋಗ್ಯತೆಗೆ ಜೈಲಿನಲ್ಲಿರುವ ಭಯೋತ್ಪಾದಕನನ್ನೇ ಬಿಗಿಯಾಗಿ ಇಡಲು ಆಗುತ್ತಿಲ್ಲ. ಇನ್ನು ಇವರೇನು ಕೇಂದ್ರ ಸರ್ಕಾರದ ಬಗ್ಗೆ ಮಾತನಾಡುವುದು ಎಂದು ಕಿಡಿಕಾರಿದರು.**

## ಅಂತರಾಳದಿಂದ... EDITORIAL

# ದೆಹಲಿಯಲ್ಲಿ ಸ್ಫೋಟ: ಹೇಯಕೃತ್ಯ: ಸುರಕ್ಷತೆ ಸರ್ಕಾರದ ಆದ್ಯತೆಯಾಗಲಿ



ದೆಹಲಿಯಲ್ಲಿ ನಡೆದಿರುವ ಕೃತ್ಯವು ಭಯೋತ್ಪಾದನೆಯ ಅಪಾಯ ಇನ್ನೂ ಇದೆ ಎನ್ನುವುದರ ಸಂಕೇತ. ಆಂತರಿಕ ಭದ್ರತೆ ಮತ್ತು ಗುಪ್ತಚರ ವೈಫಲ್ಯದ ಬಗ್ಗೆ ಅನುಮಾನ ಮೂಡಿಸಿದೆ. ದೆಹಲಿಯ ಕೆಂಪು ಕೋಟೆಯ ಬಳಿ ಕಾರೊಂದರಲ್ಲಿ ಸಂಭವಿಸಿದ ಸ್ಫೋಟದಿಂದ 12 ಜನ ಸಾವನ್ನಪ್ಪಿ, 20ಕ್ಕೂ ಅಧಿಕ ಮಂದಿ ಗಾಯಗೊಂಡ ಘಟನೆಯು ಭಯೋತ್ಪಾದನೆಯ ಭೀತಿಯನ್ನು ಮತ್ತೆ ಮುನ್ನೆಲೆಗೆ ತಂದಿದೆ. ಈ ಹೇಯಕೃತ್ಯವು ಆಂತರಿಕ ಭದ್ರತೆಯ ವಿಷಯವಾಗಿ ಕಳವಳ ಪಡುವಂತೆಯೂ ಮಾಡಿದೆ. ಇದೊಂದು ಆತ್ಮಹತ್ಯಾ ದಾಳಿಯಾಗಿತ್ತು ಎನ್ನುವುದು ಈಗ ನಿಚ್ಚಳವಾಗಿದ್ದು, ಸಂಚುಕೋರರಲ್ಲಿ ಒಬ್ಬನನ್ನು ಡಾ. ಉಮರ್ ನಬಿ ಎಂದು ಗುರ್ತಿಸಲಾಗಿದೆ. ರಾಷ್ಟ್ರ ರಾಜಧಾನಿಯ ಹೃದಯಭಾಗದಲ್ಲಿರುವ ಜನದಟ್ಟಣೆ ಪ್ರದೇಶದಲ್ಲಿ ಸಂಭವಿಸಿದ ಈ ಘಟನೆಯು ಒಂದು ಭಯೋತ್ಪಾದನೆಯ ದಾಳಿಯಾಗಿತ್ತು ಎನ್ನುವ ಸಂಕೇತಗಳು ಸ್ಪಷ್ಟವಾಗಿ ಗೋಚರಿಸಿವೆ. ಕೃತ್ಯ ನಡೆಸಲು ಆಯ್ಕೆ ಮಾಡಿಕೊಂಡ ಸ್ಥಳ ಮತ್ತು ಸಮಯವನ್ನು ಗಮನಿಸಿದಾಗ, ಜನರನ್ನು ಕೊಲ್ಲುವ, ಮತ್ತು ಸಾಧ್ಯವಾದಷ್ಟು ಹಾನಿ ಉಂಟು ಮಾಡುವ ಮತ್ತು ಗರಿಷ್ಠ ಪ್ರಮಾಣದಲ್ಲಿ ಸಾರ್ವಜನಿಕ ಗಮನವನ್ನು ಸೆಳೆಯುವ ಉದ್ದೇಶ ಇದರ ಹಿಂದಿತ್ತು ಎನ್ನುವುದು ಸುಸ್ಪಷ್ಟ, ಯಾವುದೇ ಭಯೋತ್ಪಾದನಾ ಕೃತ್ಯದ ಮುಖ್ಯ ಉದ್ದೇಶವೂ ಇದೇ ಆಗಿರುತ್ತದೆ. ಕೆಂಪು ಕೋಟೆಯು ಭಾರತದ ಪರಂಪರೆಯ ಸಂಕೇತವಾಗಿದ್ದು, ಅದರ ಅಕ್ಕಪಕ್ಕದ ಪ್ರದೇಶಗಳು ಸದಾ ಜನದಟ್ಟಣೆಯಿಂದ ಕೂಡಿರುತ್ತವೆ. ಅಲ್ಲಿ ನಡೆಯುವ ಇಂತಹ ಕೃತ್ಯದ ಪರಿಣಾಮವು ಆ ಪ್ರದೇಶಗಳನ್ನಷ್ಟೇ ಅಲ್ಲದೆ ಅವುಗಳ ಆಚೆಗೂ ತುಂಬಾ ವ್ಯಾಪಕವಾಗಿ ಪ್ರಭಾವವನ್ನು ಉಂಟು ಮಾಡುವಂಥದ್ದಾಗಿರುತ್ತದೆ.ಸಂಚುಕೋರರು ಹೊಂದಿದ್ದ ಸಂಪರ್ಕ ಹಾಗೂ ಸಂಬಂಧಗಳನ್ನು ಗುರ್ತಿಸುವಲ್ಲಿ ತನಿಖಾ ತಂಡಗಳು ಈಗಾಗಲೇ ಯಶಸ್ವಿಯಾಗಿವೆ. ತನಿಖೆಯು ಪ್ರಗತಿ ಸಾಧಿಸಿದಂತೆ. ಈ ಕೃತ್ಯದ ಹಿಂದಿರುವ ಜಾಲ, ಅದರ ವ್ಯಾಪ್ತಿ ಮತ್ತು ಹಿಂದಿನ ಪಿತೂರಿ ಸಂಪೂರ್ಣ ಬಯಲಾಗಲಿದೆ. 2019ರ ಪುಲ್ವಾಮಾ ದಾಳಿಗೂ ಈ ಕೃತ್ಯಕ್ಕೂ ಸಂಬಂಧ ಇರುವಂತೆಯೂ ತೋರುತ್ತಿದೆ. ಸಂಚುಕೋರರು ಜೈಷ್-ಎ-ಮೊಹಮ್ಮದ್ ಸಂಘಟನೆಯೊಂದಿಗೆ ಸಂಪರ್ಕ ಹೊಂದಿದ ಕುರಿತೂ ಶಂಕೆ ಬಲವಾಗಿದೆ. ಫರಿದಾಬಾದ್‌ನಲ್ಲಿ ಶಂಕಿತರ ಜಾಲ ಭೇದಿಸಿದ ಹೊತ್ತಿನಲ್ಲೇ ಗುಜರಾತ್‌ನ ಭಯೋತ್ಪಾದನಾ ನಿಗ್ರಹ ಪಡೆಯು ಅಂತರರಾಷ್ಟ್ರೀಯ ಸಂಪರ್ಕ ಹೊಂದಿದ ಕೆಲವು ವ್ಯಕ್ತಿಗಳನ್ನು ಅಹಮದಾಬಾದ್‌ನಲ್ಲಿ ಬಂಧಿಸಿದೆ. ಈ ಎಲ್ಲಾ ಘಟನಾವಳಿಗಳ ಹಿನ್ನೆಲೆಯಲ್ಲಿ ಪೂರ್ಣಚಿತ್ರ ಒಡಮೂಡಲು ತನಿಖೆಯ ಫಲಶ್ರುತಿಗಾಗಿ ಕಾಯಬೇಕಿದೆ. ದೆಹಲಿಯಲ್ಲಿ ಭಯೋತ್ಪಾದಕರ ದಾಳಿ ನಡೆದು ಹಲವು ವರ್ಷಗಳೇ ಗತಿಸಿದ್ದವು. ಜಮ್ಮು ಕಾಶ್ಮೀರ ಹೊರತುಪಡಿಸಿದರೆ ದೇಶದ ಬೇರೆ ಭಾಗಗಳಲ್ಲಿ ಇತ್ತೀಚಿನ ವರ್ಷಗಳಲ್ಲಿ ಯಾವ ದಾಳಿಯೂ ನಡೆದಿರಲಿಲ್ಲ.ಭಯೋತ್ಪಾದನೆಯಿಂದ ದೇಶವನ್ನು ಮುಕ್ತಗೊಳಿಸಲಾಗಿದೆ ಎಂದು ಕೇಂದ್ರ ಸರ್ಕಾರ ಪದೇ ಪದೇ ಹೆಮ್ಮೆಯಿಂದ ಹೇಳಿಕೊಂಡಿದ್ದುಂಟು. ದೆಹಲಿಯಲ್ಲಿ ನಡೆದಿರುವ ಕೃತ್ಯವು ಆಘಾತವನ್ನು ಉಂಟುಮಾಡಿದೆ ಮತ್ತು ಭಯೋತ್ಪಾದನೆಯ ಅಪಾಯ ಇನ್ನೂ ಇದೆ ಎಂಬುದನ್ನು ಮನದಟ್ಟುಮಾಡಿದೆ. ಪ್ರತಿಯೊಂದು ಭಯೋತ್ಪಾದನಾ ದಾಳಿಯೂ ಆಂತರಿಕ ಭದ್ರತೆ ಮತ್ತು ಗುಪ್ತಚರ ವೈಫಲ್ಯದ ಕುರಿತು ಪ್ರಶ್ನೆಗಳನ್ನು ಎತ್ತುವಂತೆ ಮಾಡುತ್ತದೆ. ಅದರಲ್ಲೂ ಅತ್ಯಂತ ಹೆಚ್ಚಿನ ಭದ್ರತೆ ಇರುವ ಪ್ರದೇಶದಲ್ಲಿಯೇ ಈಗಿನ ಕೃತ್ಯ ನಡೆದಿದೆ. ಇದೊಂದು ಹೃದಯಹೀನ ಭಯೋತ್ಪಾದಕರ ಕೃಷ್ಣ ಎಂದು ಹೇಳಿ ಸರ್ಕಾರ ಹಾಗೂ ಭದ್ರತಾ ಏಜೆನ್ಸಿಗಳು ತಮ್ಮ ಹೊಣೆಯಿಂದ ನುಣುಚಿಕೊಳ್ಳುವಂತಿಲ್ಲ. ಏಕೆಂದರೆ, ಈ ದುಷ್ಕೃತ್ಯದಿಂದ ಅಮೂಲ್ಯ ಜೀವಗಳು ಬಲಿಯಾಗಿವೆ ಮತ್ತು ಜನರಲ್ಲಿದ್ದ ಸುರಕ್ಷತೆಯ ಭಾವಕ್ಕೂ ಗಾಸಿಯಾಗಿದೆ. ದೇಶದ ಜನರು ನೆಮ್ಮದಿಯಿಂದ ಮತ್ತು ಸುರಕ್ಷತೆಯ ಭಾವದಿಂದ ಬದುಕು ಸಾಗಿಸುವ ಹಕ್ಕನ್ನು ಹೊಂದಿದ್ದಾರೆ, ಅವರ ಈ ಹಕ್ಕನ್ನು ಸಂರಕ್ಷಿಸುವುದು ಎಲ್ಲಾ ಸರ್ಕಾರಗಳ ಹೊಣೆಯಾಗಿದೆ.

**ದೆಹಲಿಗೆ ಹತ್ತಿರದಲ್ಲಿರುವ ಫರೀದಾಬಾದ್‌ನಲ್ಲಿ ಪೊಲೀಸರು ಅಪಾರ ಪ್ರಮಾಣದ ಸ್ಫೋಟಕ ಮತ್ತು ಶಸ್ತ್ರಾಸ್ತ್ರ ವಶಪಡಿಸಿಕೊಂಡ ಘಟನೆಗೂ ಕಾರಿನಲ್ಲಿ ಸಂಭವಿಸಿದ ಸ್ಫೋಟ ಕೃತ್ಯಕ್ಕೂ ಸಂಬಂಧ ಇರುವುದು ಮೇಲ್ನೋಟಕ್ಕೆ ಸ್ಪಷ್ಟ, ತನಿಖೆಯ ಜಾಡು ಈಗ ಜಮ್ಮು ಕಾಶ್ಮೀರವನ್ನೂ ತಲುಪಿದೆ. ಏಕೆಂದರೆ, ಫರೀದಾಬಾದ್‌ನಲ್ಲಿ ಬಂಧನಕ್ಕೆ ಒಳಗಾಗಿರುವ ಶಂಕಿತರ ಸಂಪರ್ಕಗಳು ಕಾಶ್ಮೀರ ಕಣಿವೆಯೊಂದಿಗೆ ಬೆಸೆದಿವೆ. ದೆಹಲಿಯಲ್ಲಿ ಸ್ಫೋಟಗೊಂಡ ಕಾರಿನ ಮಾಲೀಕನೂ ಕಾಶ್ಮೀರದ ಪುಲ್ವಾಮಾ ಪ್ರದೇಶಕ್ಕೆ ಸೇರಿದವನು ಎಂಬ ಮಾಹಿತಿ ಕೂಡ ಬೆಳಕಿಗೆ ಬಂದಿದೆ.**

## ರಾಮಾಯಣ



### ಜಟಾಯು ಮರಣ

• ಹಿಂದಿನ ಸಂಚಿಕೆಯಿಂದ — 120 ನೆಯ ಅಧ್ಯಾಯ

ಮಾರ್ಗದಲ್ಲಿ ಹೋಗುತ್ತಿದ್ದ ಸೀತಾನದಿಯ ಮುಡಿಕಟ್ಟಿನಿಂದ ಸಡಲಿ ಬೀಳುತ್ತಿದ್ದ ಪುಷ್ಪಗಳು ಆಕಾಶದಿಂದ ಬಿ ಶಿವ ದೃಯಿಲೆ ಭೂಮಿಯಲ್ಲಿ ಬೀಳುತ್ತಿದ್ದವು. ಆ ಪುಷ್ಪವೃಷ್ಟಿಗಳ ಮಧ್ಯದಲ್ಲಿದ್ದ ರಾವಣ ನಕ್ಷತ್ರಮಂಡಲದಿಂದ ಸುತ್ತುವರಿಯಲ್ಪಟ್ಟ ಮೇರು ಪರ್ವತದಂತೆ ಒಪ್ಪುತ್ತಿದ್ದನು. ಸೀತಾದೇವಿಯ ಪಾದಗಳಲ್ಲಿದ್ದ ರತ್ನ ಖಚಿತವಾದ ಕಾಲುದಿಗೆಗಳು ಮನೋಹರವಾಗಿ ಸರಗ ಯುತ್ತಿ ಭೂಮಿಗೆ ಬದು ಸೀತಾದೇವಿಯ ಆಭರಣಗಳು ನಕ್ಷತ್ರಮಂಡಲದಿಂದ ಭುಕುನವು ತೀರಿ ಭೂಲೋಕದಲ್ಲಿ ಬೀಳುವ ನಕ್ಷತ್ರಗಳ ಒಪ್ಪುತ್ತಿದ್ದವು. ಸ್ವನಮಂಡಲದ ಮಧ್ಯಪ್ರದೇಶದಲ್ಲಿದ್ದ ಮುತ್ತಿನ ಸರವು ಆಕಾಶದಿಂದ ಭೂಮಿಗೆ ಬೀಳುವಾಗ ದೇವಿಗಂಗೆಯಂತೆ ಮನೋಹರವಾಗಿ ತೋರಿತು. ರಾವಣನು ಸೀತಾದೇವಿಯನ್ನು ಅಪಹರಿಸಿಕೊಂಡು ಹೋಗುತ್ತಿದ್ದ ಸಮಯದಲ್ಲಿ ಆವನ ಬೆಗದಿಂದುಂಟಾದ ವಾಯುವಿನಿಂದ ವೃಕ್ಷಗಳು ಅಲುಗಾಡುವ ತಮ್ಮ ಎಲೆಗಳೆಂಬ ಹಸ್ತಗಳಿಂದ ಸೀತಾದೇವಿಗೆ ಅಂಜಬೇಡವೆಂದು ಅಭಯವನ್ನು ಕೊಡುತ್ತಿದ್ದ ಹಾಗೂ ತಮ್ಮ ಕೊಂಬೆಗಳಲ್ಲಿದ್ದ ನಾನಾ ವಿಧ ಪಕ್ಷಿಗಳ ಧ್ವನಿಗಳಿಂದ ಅಂಜಬೇಡವೆಂದು ಕೂಗುತ್ತಿದ್ದ ಹಾಗೂ ತೋರುತ್ತಿದ್ದವು. ತಾವರೆಯ ಕೊಳಗಳು ಸೀತಾದೇವಿಯನ್ನು ಕಂಡು ತಮ್ಮಲ್ಲಿದ್ದ ಕಮಲಗಳಿಂದ ಸಡಲಿ ಬೀಳುತ್ತಿದ್ದ ಎಸಳುಗಳಿಂದ ಕಣ್ಣೀರನ್ನು ಬಿಡುವಂತೆಯೂ ತಮ್ಮಲ್ಲಿದ್ದ ಜಲಚರಪಕ್ಷಿಗಳ ಸ್ವರಗಳಿಂದ ರೋದನಮಾಡುವಂತೆಯೂ ಒತ್ತಿದ್ದವು. ದಂಡಕಾರಣ್ಯದಲ್ಲಿದ್ದ ಸಿಂಹ ವ್ಯಾಘ್ರಾದಿ ಮೃಗಗಳೂ ಹಂಸ ಮೊದಲಾದ ಪಕ್ಷಿಗಳೂ ಸೀತಾದೇವಿಯನ್ನು ಹಿಂಬಾಲಿಸಿ ಆ ದೇವಿಯ ನೆಳಲಲ್ಲಿ ಆಕೆಯನ್ನೇ ನೋಡುತ್ತ ಹೋಗುತ್ತಿದ್ದವು. ಮಾರ್ಗದಲ್ಲಿದ್ದ ಪರ್ವತಗಳು ತಮ್ಮ ಕೋಡುಗಲ್ಲುಗಳಲ್ಲಿ ಚಲಿಸುತ್ತಿದ್ದ ವೃಕ್ಷಗಳಿಂದ ಕರತಾಡನೆಗಳನ್ನು ಮಾಡುವಂತೆಯೂ ಜರಿಯುವ ಪ್ರವಾಹಗಳಿಂದ ಕಣ್ಣೀರು ಬಿಡುವಂತೆಯೂ ಮೃಗಾದಿಗರ್ಜನೆಗಳಿಂದ ರೋದನ ಮಾಡುವಂತೆಯೂ ಒಪ್ಪುತ್ತಿದ್ದವು. ಹಾಗೆ ರಾವಣನು ಬಲಾತ್ಕಾರದಿಂದ ಹಿಡಿದುಕೊಂಡು ಹೋಗುತ್ತಿದ್ದ ಸೀತಾದೇವಿಯನ್ನು ಕಂಡು ಸೂರ್ಯನು ದುಃಖಪಡುತ್ತಿದ್ದಾನೋ ಎಂಬಂತೆ ಬಿಳುಪೇರಿದ ಮಂಡಲವುಳ್ಳವನಾದನು. ಆ ವನದೇವತೆಗಳು ಅಯ್ಯೋ ಮಹಾತ್ಮನಾದ ಶ್ರೀರಾಮನ ಪಟ್ಟದ ರಾಣಿಯಾದ ಸೀತಾದೇವಿಯನ್ನು ದುರಾತ್ಮನಾದ ರಾವಣನು ಹಿಡಿದುಕೊಂಡು ಹೋಗುತ್ತಾನೆ. ಇನ್ನು ಲೋಕದಲ್ಲಿ ಧರ್ಮವೆತ್ತಣದು ಸತ್ಯವತ್ರಣದು ಯಜುಮಾರ್ಗವೆತ್ತಣದು ಪೌರುಷವೆತ್ತಣದು ಎಂದು ಅಲ್ಲಲ್ಲಿ ಒಟ್ಟುಗೂಡಿಕೊಂಡು ರೋದನಮಾಡುತ್ತಿದ್ದರು ಈ ರೀತಿಯಲ್ಲಿ ಸೀತಾದೇವಿಯು ಹಾ ರಾಮ ಹಾ ಲಕ್ಷ್ಮಣ ಎಂದು ಮೊರೆಯಿಡುತ್ತ ಅಡಿಗಡಿಗೆ ತನ್ನ ಪ್ರಾಣಕಾಂತನಾದ ಶ್ರೀರಾಮನು ಲಕ್ಷ್ಮಣಸಮೇತನಾಗಿ ಬರುವನೆಂದು ತಿರುಗಿ ನೋಡುತ್ತಿದ್ದಳು.

**ಮುಂದುವರಿಯುವುದು...**

# ಕನ್ನಡದ ಬೆಳವಣಿಗೆಗೆ ನಾವೇನು ಮಾಡಬಹುದು?



☛ ವಿಶ್ವಾಸ್.ಡಿ.ಗೌಡ



ಕನ್ನಡದ ಬೆಳವಣಿಗೆಗೆ ನಾವೇನು ಮಾಡಬಹುದೆಂದು ನನ್ನನ್ನು ಆಗಿಂದಾಗ ಉತ್ಸಾಹಿ ಯುವಕ ಯುವತಿಯರು ಕೇಳುತ್ತಿರುತ್ತಾರೆ. ಅವರಿಗೆ ತೋರ್ಗಂಬವಾಗಿ ಕೆಲವು ಸಲಹೆಗಳನ್ನು ಇಲ್ಲಿ ಕೊಟ್ಟಿದ್ದೇನೆ. ಇವುಗಳನ್ನು ಅಳವಡಿಸಿಕೊಳ್ಳಿ ಎಂದು ನನ್ನ ವಿನಂತಿ. ಇದೇ ಮಾದರಿಯ ಇತರ ಉಪಾಯಗಳನ್ನು ನಿಮ್ಮ ಬ್ಲಾಗುಗಳಲ್ಲಿ, 6 - ಪತ್ರಿಕೆಗಳಲ್ಲಿ ಇತರರಿಗೂ ತಿಳಿಸಿ-ನಿಷ್ಠೆಯಿಂದ ಆಚರಣೆಗೆ ತನ್ನಿ.

1) ನಿಮ್ಮ ದೂರವಾಣಿಯಿಂದಲೋ, ಮೊಬೈಲ್‌ನಿಂದಲೋ ಅನೇಕ ಸೇವೆಗಳಿಗಾಗಿ ಬ್ಯಾಂಕ್, ವಿಮೆ ಇತ್ಯಾದಿ- ಕರೆಮಾಡುತ್ತಿರುತ್ತೀರಿ. ಆಗ ನಿಮಗೆ ಎದುರಾಗುವುದು ಇಂಟರಾಕ್ಟಿವ್ ವಾಯ್ಸ್ ರೆಸ್ಪಾನ್ಸ್' ಸಿಸ್ಟಮ್, ಅಲ್ಲಿ ಬರುವ ಮೊದಲ ಹೇಳಿಕೆ- 'ಇಂಗ್ಲಿಷ್‌ಗಾಗಿ ಒಂದನ್ನು ಒತ್ತಿ, ಕನ್ನಡಕ್ಕಾಗಿ ಎರಡನ್ನು ಒತ್ತಿ ಇತ್ಯಾದಿ. ದಯವಿಟ್ಟು ಕನ್ನಡವನ್ನೇ ಆರಿಸಿಕೊಳ್ಳಿ. ಈ ಆಯ್ಕೆಗಳ ಅಂಕಿ ಅಂಶಗಳ ಬಲದಿಂದ ಆ ಉದ್ಯಮಗಳು ಯಾವ ಭಾಷೆಗೆ ಒತ್ತು ನೀಡಬೇಕೆನ್ನುವ ನಿರ್ಧಾರ ಕೈಗೊಳ್ಳುತ್ತವೆ. ಕನ್ನಡದ ಆಯ್ಕೆಯಿಂದ ಕನ್ನಡ ಬೆಳೆಯುತ್ತದೆ.

2)ನೀವು ಆಗಿಂದಾಗ ಅಂತರ್ಜಾಲದಲ್ಲಾಗಲೀ ಮತ್ತು ನೇರವಾಗಿಯಾಗಲೀ ಉದ್ಯಮಗಳು ನಡೆಸುವ ಸರ್ವೆಗಳಲ್ಲಿ ಭಾಗವಹಿಸುತ್ತಿರುತ್ತೀರಿ.

ಮುಂದೆ ಆ ರೀತಿ ಭಾಗವಹಿಸುವಾಗ ನಿಮಗೆ ಗೊತ್ತಿರುವ ಭಾಷೆಯ ಬಗ್ಗೆ ಇರುವ ಪ್ರಶ್ನೆಗೆ 'ಕನ್ನಡ' ಎಂದು ಮಾತ್ರ ದಾಖಲಿಸಿ, ನೀವು ಓದುವ ಪತ್ರಿಕೆಗಳ ಬಗ್ಗೆ ಇರುವ ಪ್ರಶ್ನೆಗೆ ಕನ್ನಡದ ದಿನಪತ್ರಿಕೆಗಳ, ನಿಯತ ಕಾಲಿಕಗಳ ಹೆಸರನ್ನು ಮರೆಯದೆ ನಮೂದಿಸಿ. ಇದರಿಂದ ಆ ಸರ್ವೆಯ ಫಲವಾಗಿ ನಡೆಯುವ ಎಲ್ಲಾ ಕಾವ್ಯಗಳಲ್ಲೂ ಕನ್ನಡದ ಬಳಕೆಗೆ ಇಂಬುಕೊಟ್ಟಂತಾಗುತ್ತದೆ.

3) ಅನೇಕ ವಿಮೆ, ಬ್ಯಾಂಕ್ ಮತ್ತು ಹಣಕಾಸಿನ ವ್ಯವಹಾರದ ಸಂಸ್ಥೆ ಮುಂತಾದ ಉದ್ಯಮಗಳು ತಮ್ಮ ಮಾರಾಟದ ಜಾಲಕ್ಕೆ ಅನೇಕ ಯುವಕರನ್ನು ನೇಮಿಸಿಕೊಂಡಿದೆ. ಇವರಲ್ಲಿ ನಿಜವಾಗಿ ಹೆಚ್ಚು ಮಂದಿ ಹೊರ ರಾಜ್ಯಗಳಿಂದ ಅಕ್ಕಪಕ್ಕದ - ರಾಜ್ಯಗಳಿಂದ ಇಲ್ಲಿಗೆ ಬಂದವರು. ನಮ್ಮ ಜೊತೆ ವ್ಯವಹರಿಸಲು ಕನ್ನಡ ಬಲ್ಲವರನ್ನೇ ಕಳುಹಿಸಬೇಕೆಂದು ನಾವು ಒತ್ತಾಯಿಸಿ ಕೇಳಬೇಕು. ಇದರಿಂದ ಈ ಉದ್ಯಮಗಳು ತಮ್ಮ ವ್ಯವಹಾರದಲ್ಲಿ ಕನ್ನಡವನ್ನು ಬಳಸಲೇಬೇಕಾದ ಪರಿಸ್ಥಿತಿ ಒದಗಿ ಬರುತ್ತದೆ. ಕನ್ನಡಿಗರಿಗೆ ಉದ್ಯೋಗಾವಕಾಶಗಳು ಒದಗುತ್ತವೆ.

4) ನಿಮ್ಮ ಮನೆಗಳಿಗೆ ಕಡೆಯಪಕ್ಷ ಒಂದು ಕನ್ನಡ ವಾರ್ತಾಪತ್ರಿಕೆಯನ್ನೂ ಒಂದು ನಿಯತಕಾಲಿಕವನ್ನೂ ತರಿಸಿ-ಅವನ್ನು ಮನೆಯವರೆಲ್ಲಾ ಓದಿ.

5)ನೀವು ಎಲ್ಲೇ ಇದ್ದರೂ ನಿಮ್ಮ ಮಕ್ಕಳೊಂದಿಗೆ ಕನ್ನಡದಲ್ಲಿ ಮಾತನಾಡಿ, ಇತರ ಕನ್ನಡಿಗರೊಡನೆ ಕನ್ನಡದಲ್ಲೇ ಮಾತನಾಡಲು ಪ್ರೋತ್ಸಾಹಿಸಿ, ಅವರಲ್ಲಿ ಕನ್ನಡ ಪ್ರೇಮದ ಜೊತೆ ಮುಂದಾಳತ್ವದ ಗುಣಗಳು ಹೆಚ್ಚುವಂತೆ ಮಾಡಿ. ಕನ್ನಡ ತಾಯಿಯರು ಈ ಕೆಲಸವನ್ನು ಪ್ರೀತಿಯಿಂದ ಮಾಡಿರಿ.

6) ನಿಮ್ಮ ಪ್ರದೇಶದಲ್ಲಿ ನಡೆಯುವ ಕನ್ನಡದ ಕಾರಕ್ರಮಗಳಲ್ಲಿ ತಪ್ಪದೆ ಭಾಗವಹಿಸಿ.

**ಮುಂದುವರೆಯುತ್ತದೆ**

# ಶುಗರ್ ಕಂಟ್ರೋಲ್‌ನಲ್ಲಿ ಇಟ್ಟುಕೊಳ್ಳಬಹುದು



ದೀರ್ಘಕಾಲ ಕಾಡುವ ಕೆಲವೊಂದು ಕಾಯಿಲೆಗಳು ಮನುಷ್ಯನನ್ನು ಕುಗ್ಗಿಸಿಬಿಡುತ್ತವೆ, ಇದರಲ್ಲಿ ಮಧುಮೇಹ ಕೂಡ ಒಂದು. ಹೀಗಾಗಿ ಈ ಕಾಯಿಲೆಯ ರೋಗಲಕ್ಷಣಗಳನ್ನು ಆರಂಭದಿಂದಲೂ ಹತೋಟಿ ಮಾಡುವ ಕೆಲವೊಂದು ಬೀಜಗಳ ಬಗ್ಗೆ ಮಾಹಿತಿಯನ್ನು ಇಂದಿನ ಲೇಖನದಲ್ಲಿ ಹಂಚಿಕೊಂಡಿದ್ದೇವೆ. ದೈಹಿಕ ಚಟುವಟಿಕೆ ಇಲ್ಲದ ಜೀವನಶೈಲಿ,ಅನಾರೋಗ್ಯಕರ ಆಹಾರಪದ್ಧತಿ ಇತ್ಯಾದಿಗಳಿಂದಾಗಿ ಮಧುಮೇಹ ಅಥವಾ ಈ ಸಕ್ಕರೆಕಾಯಿಲೆ ಎನ್ನುವುದು ಸಮಯಕ್ಕೆ ಮೊದಲೇ ಮನುಷ್ಯನ ದೇಹವನ್ನು ಒಕ್ಕರಿಸಿಕೊಂಡು ಬಿಡುತ್ತಿರುವುದು ಇಂದಿನ ದಿನಗಳಲ್ಲಿ ಸಾಮಾನ್ಯ ಸಮಸ್ಯೆಯಾಗಿ ಬಿಟ್ಟಿದೆ. ಸಣ್ಣ ಮಕ್ಕಳಿಂದ ಹಿಡಿದು, ಹದಿಹರೆಯದವರು ವಯಸ್ಸಾದವರ ತನಕವೂ ಕೂಡ ಈಗ, ಈ ಕಾಯಿಲೆಯೂ ಸಾಮಾನ್ಯವಾಗಿ ಬಿಟ್ಟಿದೆ.

ಇದೇ ಕಾರಣಕ್ಕೆ ಇಂದು ಮಧುಮೇಹ ಕಾಯಿಲೆಯಿಂದ ಬಳಲುತ್ತಿರುವವರ ಸಂಖ್ಯೆಯೂ ಕೂಡ ವಿಶ್ವಮಟ್ಟದಲ್ಲಿ ಹೆಚ್ಚಾಗುತ್ತಲಿದೆ. ಹಾಗಾದ್ರೆ ಈ ಕಾಯಿಲೆಯ ನಿಯಂತ್ರಣ ಸಾಧ್ಯ ವಿಲ್ಲವೇ ಎಂದು ಕೇಳಿದರೆ ಆಗ ಖಂಡಿತವಾಗಿಯೂ ಇದನ್ನು ನಿಯಂತ್ರಿಸಬಹುದು ಅದರಲ್ಲೂ ವೈದ್ಯರು ನೀಡಿರುವ ಸಲಹೆಗಳನ್ನು ಅನುಸರಿಸಿಕೊಂಡು ಹೋಗುವುದರ ಜೊತೆಗೆ, ಕೆಲವೊಂದು ನೈಸರ್ಗಿಕ ಸಲಹೆಗಳನ್ನು ಕೂಡ ತಮ್ಮ ದೈನಂದಿನ ಆಹಾರ ಪದ್ಧತಿಯಲ್ಲಿ ಸೇರಿಸಿಕೊಂಡರೆ, ಬಹಳ ಸುಲಭವಾಗಿ ಈ ಕಾಯಿಲೆಯನ್ನು ನಿಯಂತ್ರಣದಲ್ಲಿ ಇಟ್ಟು ಕೊಳ್ಳಬಹುದು



**ಮಧುಮೇಹ ಕಾಯಿಲೆಯ ನಿಯಂತ್ರಣಕ್ಕೆ ನೈಸರ್ಗಿಕ ಬೀಜಗಳು :** ಇಲ್ಲಿ ಒಂದಂತೂ ನೆನಪಿನಲ್ಲಿ ಇಟ್ಟುಕೊಳ್ಳಬೇಕು, ಮಧುಮೇಹ ಕಾಯಿಲೆಯನ್ನು ಸಂಪೂರ್ಣವಾಗಿ ನಿವಾರಣೆ ಮಾಡುವುದು ಅಸಾಧ್ಯದ ಮಾತು ಹೀಗಾಗಿ ಈ ಕಾಯಿಲೆಯನ್ನು ನಿಯಂತ್ರಣದಲ್ಲಿ ಇಟ್ಟುಕೊಂಡರೆ (ಪ್ರಮುಖವಾಗಿ ರಕ್ತದಲ್ಲಿ ಶುಗರ್ ಲೆವೆಲ್ ಅನ್ನು ನಿಯಂತ್ರಣದಲ್ಲಿ ಇಟ್ಟು ಕೊಂಡರೆ) ಆಗ ಖಂಡಿತ ವಾಗಿಯೂ, ಈ ಕಾಯಿಲೆಯಿಂದಾಗಿ ಬರುವ ಇನ್ನಿತರ ಆರೋಗ್ಯ ಸಮಸ್ಯೆಗಳನ್ನು ಕೂಡ ದೂರ ಇಟ್ಟುಕೊಳ್ಳುವುದರ ಜೊತೆಗೆ, ತಮ್ಮ ಜೀವಿತಾವಧಿ ಹೆಚ್ಚಿಸಬಹುದು. ಪ್ರಸ್ತುತ ಇಂದಿನ ಲೇಖನದಲ್ಲಿ ಕಾಯಿಲೆಯ ರೋಗಲಕ್ಷಣಗಳನ್ನು ಆರಂಭ ದಿಂದಲೂ ಹತೋಟಿ ಮಾಡುವ ಕೆಲವೊಂದು ನೈಸರ್ಗಿಕ ಬೀಜಗಳ ಬಗ್ಗೆ ಮಾಹಿತಿ ಯನ್ನು ಹಂಚಿಕೊಂಡಿದ್ದೇವೆ, ಮುಂದೆ ಓದಿ

**ಚಿಯಾ ಬೀಜ ನೆನೆಹಾಕಿದ ನೀರು :** ಚಿಯಾ ಬೀಜಗಳಲ್ಲಿ ನಾರಿನಾಂಶ ಮತ್ತು ಉತ್ಕರ್ಷಣ ನಿರೋಧಕಗಳು ಅಧಿಕವಾಗಿದ್ದು, ಇದು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಇದಕ್ಕಾಗಿ, ಒಂದು ಟೀ ಚಮಚ ಚಿಯಾ ಬೀಜಗಳನ್ನು ತೆಗೆದು ಕೊಂಡು, ನೀರಿನಲ್ಲಿ ನೆನೆಸಿ, ರಾತ್ರಿಯಿಡೀ ಹಾಗೆಯೇ ಬಿಡಿ. ಬೆಳಗ್ಗೆ ಈ ನೀರನ್ನು ಕುಡಿಯಿರಿ. ಇದು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಗಮನಾರ್ಹವಾಗಿ ಕಡಿಮೆ ಮಾಡುತ್ತದೆ. ತೂಕ ನಷ್ಟಕ್ಕೂ ಇದು ಪರಿಣಾಮಕಾರಿ ಎಂದು ಪರಿಗಣಿಸಬಹುದು.

**ಅಗಸೆ ಬೀಜಗಳು:** ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು,ಅಗಸೆ ಬೀಜಗಳು ತುಂಬಾನೇ ನೆರವಿಗೆ ಬರುತ್ತದೆ ಎಂದು ಹೇಳಲಾಗುತ್ತದೆ. ಇದಕ್ಕೆ ಪ್ರಮುಖ ಕಾರಣ ಈ ಪುಟ್ಟ ಬೀಜಗಳಲ್ಲಿ ಕಂಡುಬರುವ ಒಮೆಗಾ-3 ಕೊಬ್ಬಿನಾಮ್ಲಗಳು ಮತ್ತು ನಾರಿನಾಂಶ ರಕ್ತದಲ್ಲಿನ ಸಕ್ಕರೆಮಟ್ಟವನ್ನು ನಿಯಂತ್ರಣದಲ್ಲಿ ಇಟ್ಟು ಕೊಳ್ಳುವುದರ ಜೊತೆಗೆ, ಮಧುಮೇಹ ಕಂಟ್ರೋಲ್ ತಪ್ಪದಂತೆ ನೋಡಿಕೊಳ್ಳುತ್ತದೆ. ಸ್ವಲ್ಪ ಅಗಸೆ ಬೀಜಗಳನ್ನು ಚೆನ್ನಾಗಿ ಪುಡಿ ಮಾಡಿಕೊಂಡು ನೀರಿನೊಂದಿಗೆ ಬೆರೆಸಿ, ಬೆಳಗ್ಗೆ ಕುಡಿಯುವ ಅಭ್ಯಾಸ ಮಾಡಿಕೊಂಡರೆ, ಸಕ್ಕರೆ ಮಟ್ಟವನ್ನು ಕಡಿಮೆ ಮಾಡ ಬಹುದು. ದಿನಕ್ಕೆ ಒಂದರಿಂದ ಎರಡು ಟೇಬಲ್ ಚಮಚದಷ್ಟು ಅಗಸೆ ಬೀಜಗಳು ಸುರಕ್ಷಿತ ಮತ್ತು ಪರಿಣಾಮಕಾರಿ ಎಂದು ವೈದ್ಯರು ಸಲಹೆ ನೀಡುತ್ತಾರೆ.

**ಕುಂಬಳಕಾಯಿ ಬೀಜಗಳು:** ಕುಂಬಳಕಾಯಿ ಬೀಜಗಳಲ್ಲಿ ಗ್ಲೈಸೆಮಿಕ್ ಸೂಚ್ಯಾಂಕ ಬಹಳ ಕಡಿಮೆ ಪ್ರಮಾಣ ದಲ್ಲಿ ಕಂಡುಬರುತ್ತದೆ ಹೀಗಾಗಿ ಅಧ್ಯಯನಗಳು ಹೇಳುವಂತೆ ಆಗಾಗ ಕುಂಬಳ ಕಾಯಿ ಬೀಜಗಳನ್ನು ಹುರಿದು ತಿನ್ನುವ ಅಭ್ಯಾಸ ಇಟ್ಟುಕೊಂಡರೆ ಮಧುಮೇಹ ವನ್ನು ಸುಲಭವಾಗಿ ಕಂಟ್ರೋಲ್‌ನಲ್ಲಿ ಇಟ್ಟುಕೊಳ್ಳಬಹುದು.

ಇನ್ನೂ ಮುಖ್ಯವಾಗಿ ಈ ಬೀಜಗಳಲ್ಲಿ ಕಂಡು ಬರುವ ಮೆಗ್ನೀಸಿಯಮ್ ಅಂಶವು, ಗ್ಲೂಕೋಸ್ ಚಯಾಪಚಯ ಕ್ರಿಯೆಯನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಆರೋಗ್ಯವಂತ ವಯಸ್ಕರ 2018 ರ ಅಧ್ಯಯನವು 65 ಗ್ರಾಂ (ಸುಮಾರು 2 ಔನ್ಸ್) ಕುಂಬಳಕಾಯಿ ಬೀಜಗಳನ್ನು ಸೇವಿಸಿದ ವ್ಯಕ್ತಿಗಳು ಹೆಚ್ಚಿನ ಕಾರ್ಬೋಹೈಡ್ರೇಟ್ ಊಟದ ನಂತರ ಕಡಿಮೆ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಹೊಂದಿದ್ದಾರೆಂದು ತೋರಿಸಿದೆ.

**ಜೀರಿಗೆ ಹಾಗೂ ಸಾಸಿವೆ ಬೀಜಗಳು**

**ಹಲವಾರು ಅಧ್ಯಯನಗಳು ಜೀರಿಗೆ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಕಡಿಮೆ ಮಾಡಲು ಮತ್ತು ಇನ್ಸುಲಿನ್ ಸೂಕ್ಷ್ಮತೆಯನ್ನು ಸುಧಾರಿಸಲು ಸಹಾಯ ಮಾಡುತ್ತದೆ ಎಂದು ತೋರಿಸುತ್ತವೆ. ಸಾಸಿವೆ ಬೀಜಗಳು ರಕ್ತದಲ್ಲಿನ ಸಕ್ಕರೆ ಮಟ್ಟ ಮತ್ತು ಚಯಾ ಪಚಯ ಕ್ರಿಯೆಯ ಮೇಲೆ ಸಕಾರಾತ್ಮಕ ಪರಿಣಾಮ ಬೀರುವ ಸಂಯುಕ್ತಗಳನ್ನು ಹೊಂದಿರುತ್ತವೆ.**

**ಮೆಂತೆಕಾಳು ನೆನೆಹಾಕಿದ ನೀರು:** ತನ್ನಲ್ಲಿ ಕಹಿ ಗುಣಗಳನ್ನು ಒಳಗೊಂಡಿರುವ ಮೆಂತೆಕಾಳಿನಲ್ಲಿ ಗ್ಯಾಲಕ್ಟೋ ಮನ್ನನ್ ಎನ್ನುವ ನಾರಿನಾಂಶ ಅಡಗಿದ್ದು, ಇದು ಮಧುಮೇಹಿ ರೋಗಿಗಳ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಣದಲ್ಲಿಡುವಲ್ಲಿ ನೆರವಿಗೆ ಬರುತ್ತದೆ. ಇದಕ್ಕಾಗಿ ಒಂದು ಟೇಬಲ್ ಚಮಚದಷ್ಟು ಮೆಂತೆಕಾಳುಗಳನ್ನು ಒಂದು ಲೋಟ ನೀರಿನಲ್ಲಿ ರಾತ್ರಿ ಪೂರ್ತಿ ನೆನೆಹಾಕಿ, ಮರುದಿನ ಬೆಳಗ್ಗೆ ಖಾಲಿ ಹೊಟ್ಟೆಗೆ ನಿರಂತ ರವಾಗಿ ಕುಡಿಯುವ ಅಭ್ಯಾಸ ಮಾಡಿಕೊಳ್ಳಿ. ಇದರಿಂದ ಕ್ರಮೇಣವಾಗಿ ರಕ್ತದಲ್ಲಿ ಸಕ್ಕರೆಮಟ್ಟ ನಿಯಂತ್ರಣಕ್ಕೆ ಬರುವುದರ ಜೊತೆಗೆ ಹೊಟ್ಟೆಯುಬ್ಬರ ಗ್ಯಾಸ್ಟ್ರಿಕ್ ಸಮಸ್ಯೆ ಕೂಡ ನಿಯಂತ್ರಣಕ್ಕೆ ಬರುತ್ತದೆ. ಪ್ರಮುಖವಾಗಿ ಈ ಕಾಳಿನ ಪಾನೀಯ ದೇಹದಲ್ಲಿ ಇನ್ಸುಲಿನ್ ಪ್ರಮಾಣ ಅಗತ್ಯಕ್ಕೆ ತಕ್ಕಂತೆ ಉತ್ಪತ್ತಿಯಾಗುವಂತೆ ನೆರವಿಗೆ ಬರುತ್ತದೆ.

**ಸೂರ್ಯಕಾಂತಿ ಬೀಜಗಳು:** ಇದು ಮೆಗ್ನೀಸಿಯಮ್ ಮತ್ತು ವಿಟಮಿನ್ ಇ ನಂತಹ ಪೋಷಕಾಂಶಗಳನ್ನು ಹೊಂದಿದ್ದು, ಇದು ಇನ್ಸುಲಿನ್ ಸೂಕ್ಷ್ಮತೆಯನ್ನು ಬೆಂಬಲಿಸುತ್ತದೆ ಮತ್ತು ಮಧುಮೇಹ ಸಂಬಂಧಿತ ತೊಡಕುಗಳ ಅಪಾಯವನ್ನು ಕಡಿಮೆ ಮಾಡುತ್ತದೆ.

# ಫಂಗಲ್ ಇನ್‌ಫೆಕ್ಷನ್ ಎಚ್ಚರ!

**ಈ ಶಿಲೀಂಧ್ರ ಹೇಗೆ ಹರಡುತ್ತದೆ**

**ಆಸ್ಪರ್ಜಿಲಸ್ ಗಾಳಿಯಲ್ಲಿ ಬಿಡುಗಡೆ ಯಾಗುತ್ತದೆ. ನಾವು ಅದನ್ನು ಪ್ರತಿದಿನ ಉಸಿರಾಡುತ್ತೇವೆ. ಹೆಚ್ಚಿನ ಸಂದರ್ಭಗಳಲ್ಲಿ ದೇಹದ ಪ್ರತಿರಕ್ಷಣಾ ವ್ಯವಸ್ಥೆಯು ಅವುಗಳನ್ನು ನಾಶಪಡಿಸುತ್ತದೆ. ಆದರೆ ದೇಹವು ಅವುಗಳನ್ನು ತೆರವುಗೊಳಿಸಲು ಸಾಧ್ಯವಾಗದಿದ್ದರೆ, ಈ ಶಿಲೀಂಧ್ರವು ದೇಹದೊಳಗೆ ಬೆಳೆಯಲು ಪ್ರಾರಂಭಿಸುತ್ತದೆ ಮತ್ತು ನಿಧಾನವಾಗಿ ಅಂಗಗಳನ್ನು ಹಾನಿಗೊಳಿಸುತ್ತದೆ.**

ಹವಾಮಾನ ಬದಲಾವಣೆಯ ಪರಿಣಾಮದಿಂದಾಗಿ ನಾನಾ ಕಾಯಿಲೆಗಳು ಕಾಡಲಾರಂಭಿಸಿವೆ. ಹವಾಮಾನ ಬದಲಾವಣೆಯಿಂದಾಗಿ ಸಣ್ಣ ಪುಟ್ಟ ಜ್ವರ, ಶೀತ, ಕೆಮ್ಮಿನಂತಹ ಸಮಸ್ಯೆ ಬರೋದು ಸಾಮಾನ್ಯ. ಆದರೆ ಇದು ಮಾನವ ದೇಹವನ್ನು ಒಳಗಿನಿಂದಲೇ ತಿನ್ನಬಲ್ಲ ಫಂಗಲ್ ಇನ್‌ಫೆಕ್ಷನ್‌ಗೆ ಕಾರಣವಾಗುತ್ತಿದೆ.

ದೇಶದ ಕೆಲವು ಕಡೆ ವಿಪರೀತ ಬಿಸಿಲು ಇದ್ದರೆ ಇನ್ನೂ ಕೆಲವು ಕಡೆಗಳಲ್ಲಿ ವಿಪರೀತ ಮಳೆ ಬೀಳುತ್ತಿದೆ. ಈ ರೀತಿಯ ಹವಾಮಾನದ ಬದಲಾವಣೆಯು ನಾನಾ ರೀತಿಯಲ್ಲಿ ಆರೋಗ್ಯದ ಮೇಲೆ ಪರಿಣಾಮ ಬೀರಲಿದೆ. ಹೆಚ್ಚುತ್ತಿರುವ ತಾಪಮಾನದಿಂದಾಗಿ, ಅತ್ಯಂತ ಅಪಾಯಕಾರಿ ಶಿಲೀಂಧ್ರವಾದ ಆಸ್ಪರ್ಜಿಲಸ್ ಸಾಂಕ್ರಾಮಿಕ ರೋಗವಾಗಿ ಪರಿಣಮಿಸಬಹುದು ಎಂಬ ವಿಜ್ಞಾನಿಗಳ ವರದಿಯು ಪ್ರಪಂಚದಾದ್ಯಂತ ಸಂಚಲನ ಮೂಡಿಸಿದೆ. ಈ ಶಿಲೀಂಧ್ರವುಗಾಳಿಯ ಮೂಲಕ ಮಾತ್ರ ದೇಹವನ್ನು ಪ್ರವೇಶಿಸುತ್ತದೆ ಮತ್ತು ಶ್ವಾಸಕೋಶದಿಂದ ಮೆದುಳಿನವರೆಗೆ ಸೋಂಕನ್ನುಂಟು ಮಾಡುತ್ತದೆ. ಈ ಶಿಲೀಂಧ್ರ ಯಾವುದು, ಅದು ಹೇಗೆ ಹರಡುತ್ತದೆ ಮತ್ತು ಅದರ ಅಪಾಯಕಾರಿ ಲಕ್ಷಣಗಳು ಯಾವುವು ಎಂಬುದನ್ನು ನಾವಿಲ್ಲಿ ತಿಳಿಯೋಣ.



**ಆಸ್ಪರ್ಜಿಲಸ್ ಶಿಲೀಂಧ್ರ ಎಂದರೇನು:** ಶಿಲೀಂಧ್ರಗಳಲ್ಲಿ ಹಲವು ವಿಧಗಳಿವೆ ಆದರೆ ಆಸ್ಪರ್ಜಿಲಸ್ ಅಂತಹ ಒಂದು ಶಿಲೀಂಧ್ರವಾಗಿದ್ದು, ಇದು ಶತಮಾನ ಗಳಿಂದ ನಮ್ಮ ಸುತ್ತಲಿನ ಪರಿಸರದಲ್ಲಿ ಇದೆ. ಇದು ಮಣ್ಣು, ಗಾಳಿ ಮತ್ತು ಕೊಳೆತ ಸಸ್ಯಗಳಲ್ಲಿ ಬೆಳೆಯುತ್ತದೆ. ಇದು ಸತ್ತ ಸಾವಯವ ಪದಾರ್ಥಗಳನ್ನು ನೈಸರ್ಗಿಕವಾಗಿ ಒಡೆಯಲು ಸಹಾಯ ಮಾಡುತ್ತದೆ.

**ಯಾರು ಇದರ ಹೆಚ್ಚಿನ ಅಪಾಯದಲ್ಲಿದ್ದಾರೆ:** ಕ್ಯಾನ್ಸರ್ ರೋಗಿಗಳು ಅಥವಾ ಗಂಭೀರ ಕಾಯಿಲೆಯಿಂದ ಬಳಲುತ್ತಿರುವ ಜನರಂತಹ ದುರ್ಬಲ ರೋಗನಿರೋಧಕ ಶಕ್ತಿ ಹೊಂದಿರುವ ಜನರು ಈ ಶಿಲೀಂಧ್ರದಿಂದ ಹೆಚ್ಚು ಅಪಾಯಕ್ಕೆ ಒಳಗಾಗುತ್ತಾರೆ. ಆರೋಗ್ಯವಂತ ಜನರಲ್ಲಿ ಇದರ ಪರಿಣಾಮ ಕಡಿಮೆ ಇರಬಹುದು, ಏಕೆಂದರೆ ಅವರ ರೋಗನಿರೋಧಕ ಶಕ್ತಿ ಆ ಶಿಲೀಂಧ್ರದ ವಿರುದ್ಧ ಹೋರಾಡುತ್ತದೆ.



# ಹುಣಸೆ ಹುಳಿ ರಸಂ ಮಾಡುವ ವಿಧಾನ

**ಹುಣಸೆ ಹುಳಿಯ ರಸಂ ಮಾಡಲು ಬೇಕಾಗುವ ಪದಾರ್ಥಗಳು**

- ಹುಣಸೆ ಹಣ್ಣು -ನಿಂಬೆಹಣ್ಣು ಗಾತ್ರದಷ್ಟು
- ಜೀರಿಗೆ
- ಕಾಳು ಮೆಣಸು
- ಕೊತ್ತಂಬರಿ ಸೊಪ್ಪು
- ಕರಿಬೇವಿನ ಸೊಪ್ಪು
- ಎಣ್ಣೆ
- ಸಾಸಿವೆ
- ಇಂಗು
- ಬೆಳ್ಳುಳ್ಳಿ
- ಒಣ ಮೆಣಸಿನಕಾಯಿ
- ಅರಿಶಿನದ ಪುಡಿ
- ಉಪ್ಪು



ರಸಂ ಅಂದ್ರೆ, ಎಲ್ಲರ ಬಾಯಲ್ಲೂ ನೀರು ಬರೋದು ಖಚಿತ. ಅದ್ರಲ್ಲೂ ಊಟದ ಕೊನೆಯಲ್ಲಿ ರಸಂ ಮೂಲಕ ಒಂದೆರಡು ತುತ್ತು ಸವಿದರೆ ಊಟ ಪೂರ್ಣವಾದಂತೆ ಆಗಲಿದೆ. ಹಾಗೆ ಈ ರಸಂನಲ್ಲಿಯೂ ಹತ್ತು ಹಲವು ವಿಧಗಳಿವೆ. ಟೊಮೆಟೋ ಬಳಸಿ ಮಾಡುವ ರಸಂನಿಂದ ಹಿಡಿದು ವಿವಿಧ ರೀತಿಯ ರಸಂಗಳು ನಿಮಗೆ ಉತ್ತಮ ರುಚಿ ನೀಡಲಿದೆ. ಹಾಗೆ ಈ ರುಚಿಯಲ್ಲಿ ರಸಂ ಮಾಡಿದ್ರೆ, ಎಲ್ಲರು ಸವಿಯೋದು ಖಚಿತ. ಹಾಗೆ ನಾವಿಂದು ಊಟದ ರುಚಿ ಹೆಚ್ಚಿಸುವಂತಹ ಹುಣಸೆ ಹುಳಿಯ ರಸಂ ಅನ್ನು ಮಾಡಿ ಸವಿಯುವ ಕುರಿತಾಗಿ ತಿಳಿದುಕೊಳ್ಳೋಣ. ಇದನ್ನ ಊಟದೊಂದಿಗೆ ಸವಿಯಲು ಬಹಳ ರುಚಿ ನೀಡಲಿದೆ. ಹಾಗೆ ಊಟದ ಮುಗಿದ ಬಳಿಕ ಒಂದು ಗ್ಲಾಸ್‌ನಲ್ಲಿ ಹಾಕಿ ಕುಡಿಯಲು ಕೂಡ ಇದು ರುಚಿ ನೀಡಲಿದೆ. ಈ ರಸಂ ಮಾಡಲು ಬಳಸುವ ಹಲವು ವಸ್ತುಗಳು ನಿಮ್ಮ ಆರೋಗ್ಯಕ್ಕೂ ಉತ್ತಮವಾಗಿರಲಿದೆ. ಇದಕ್ಕೆ ಜೀರಿಗೆ, ಕಾಳು ಮೆಣಸಿನಂತಹ ಪದಾರ್ಥಗಳ ಬಳಸುವುದರಿಂದ ನಿಮ್ಮಲ್ಲಿರುವ ಕೆಮ್ಮು, ಶೀತ, ನೆಗಡಿಯಂತಹ ಸಮಸ್ಯೆಗಳಿಗೂ ಕೂಡ ಉತ್ತಮವಾಗಿರಲಿದೆ. ಹಾಗೆ ಈ ರಸಂ ಮಾಡುವುದು ಎಲ್ಲರಿಗೂ ಇಷ್ಟವಾಗುತ್ತೆ. ನಾವಿಂದು ಸುಲಭವಾಗಿ ಹುಣಸೆ ಹುಳಿಯನ್ನು ಬಳಸಿಕೊಂಡು ಮಾಡುವ ರಸಂ ಕುರಿತಾಗಿ ತಿಳಿದುಕೊಳ್ಳೋಣ. ಹುಣಸೆ ಹುಳಿಯ ರಸಂ ಮಾಡಲು ಯಾವೆಲ್ಲಾ ವಸ್ತುಗಳು ಬೇಕು?, ಮಾಡುವ ವಿಧಾನವೇನು? ಎಷ್ಟು ಸಮಯ ಹಿಡಿಯಲಿದೆ ಎಂಬುದನ್ನು ನಾವಿಂದು ತಿಳಿದುಕೊಳ್ಳೋಣ.

**ಕೆಮ್ಮು, ನೆಗಡಿಗೆ ಇದು ಬೆಸ್ಟ್!**

**ಹುಣಸೆ ಹುಳಿಯ ರಸಂ ಮಾಡುವ ಸುಲಭದ ವಿಧಾನವೇನು:** ಮೊದಲಿಗೆ ಹುಣಸೆ ಹಣ್ಣನ್ನು ನೆನೆಸಿಡಬೇಕು. ದೊಡ್ಡ ನಿಂಬೆ ಗಾತ್ರದ ಹುಳಿ ತೆಗೆದುಕೊಂಡು ಬಿಸಿ ನೀರಿನಲ್ಲಿ ನೆನೆಸಿಡಬೇಕು. ನಂತರ ಒಂದು ಮಿಕ್ಸಿ ಜಾರ್ ತೆಗೆದುಕೊಂಡು ಅದಕ್ಕೆ ಜೀರಿಗೆ, ಕಾಳು ಮೆಣಸು ಹಾಕಿಕೊಂಡು ಪುಡಿ ಮಾಡಿಕೊಳ್ಳಿ. ಪುಡಿ ಮಾಡಿದ ಮಸಾಲೆಯನ್ನು ತೆಗೆದು ಒಂದು ಬೌಲ್‌ಗೆ ಹಾಕಿಟ್ಟುಕೊಳ್ಳಿ. ಈಗ ನೆನೆಸಿಟ್ಟ ಹುಣಸೆಹಣ್ಣನ್ನು ಕಿವುಚಿ ಅದರ ನೀರು ರೆಡಿ ಮಾಡಿಕೊಳ್ಳಿ. ದಪ್ಪವಾಗಿ ಈ ರಸ ಇರಲಿ. ಸ್ವಲ್ಪ ನೀರು ಕೂಡ ಸೇರಿಸಿಕೊಂಡು ಕಿವುಚಿಕೊಳ್ಳಿ. ರಸಂ ಮಾಡಲು ಒಂದು ಬಾಣಲೆ ಒಲೆ ಮೇಲೆ ಇಟ್ಟು ಅದಕ್ಕೆ ಎಣ್ಣೆ ಹಾಕಿಕೊಂಡು ಬಿಸಿಯಾಗಲು ಬಿಡಿ. ಬಿಸಿಯಾದ ಎಣ್ಣೆ ಸಾಸಿವೆ, ಇಂಗು, ಬೆಳ್ಳುಳ್ಳಿ, ಒಣ ಮೆಣಸು ಸಹ ಹಾಕಿಕೊಂಡು ಫ್ರೈ ಆಗಲು ಬಿಡಿ. 1 ನಿಮಿಷ ಫ್ರೈ ಮಾಡಿಕೊಂಡ ಬಳಿಕ ಇದಕ್ಕೆ ಕರಿವೇವು ಹಾಕಿ ಮಿಕ್ಸ್ ಮಾಡಿಕೊಳ್ಳಿ.

ಈಗ ಕಿವುಚಿಕೊಂಡಿದ್ದ ಹುಣಸೆ ಹುಳಿ ನೀರನ್ನು ಇದಕ್ಕೆ ಹಾಕಿ ಮೊಲದು ಪುಡಿ ಮಾಡಿಕೊಂಡಿದ್ದ ಜೀರಿಗೆ ಕಾಳು ಮೆಣಸಿನ ಪುಡಿ ಸಹ ಹಾಕಿಕೊಳ್ಳಿ. ಈಗ ಅರ್ಧ ಸ್ಪೂನ್ ಅರಶಿಣದ ಪುಡಿಯನ್ನು ಸಹ ಇದಕ್ಕೆ ಹಾಕಿಕೊಳ್ಳಬೇಕು. ಹಾಗೆ ರುಚಿಗೆ ತಕ್ಕಷ್ಟು ಉಪ್ಪು ಹಾಕಿ ಎಲ್ಲಾ ಪದಾರ್ಥ ಬೆರೆಯುವಂತೆ ಮಿಕ್ಸ್ ಮಾಡಿಕೊಳ್ಳಿ. ಈಗ ನಿಮಗೆ ಎಷ್ಟು ನೀರು ಬೇಕೋ ಅಷ್ಟು ನೀರು ಹಾಕಿ. ನೀರು ಸ್ವಲ್ಪ ಹೆಚ್ಚಾಗಿ ಬಳಸಿಕೊಳ್ಳಿ. ಹಾಗೆ ಉರಿಯನ್ನು ದೊಡ್ಡದಾಗಿ ಇಟ್ಟುಕೊಂಡು ಕುದಿಬರಲು ಬಿಡಿ. ಇಷ್ಟಾದರೆ ನಿಮ್ಮ ಮುಂದೆ ರುಚಿ ರುಚಿಯ ಹುಣಸೆ ಹುಳಿ ತಿಳಿಸಾರು ರೆಡಿ. ಕೊನೆಯಲ್ಲಿ ಕೊತ್ತಂಬರಿ ಸೊಪ್ಪು ಹಾಕಿ ಇಳಿಸಿಕೊಂಡರೆ ಆಯಿತು.

# ಶರಾವತಿ ಪಂಪ್ ಸ್ಟೋರೇಜ್: ಜನಾಭಿಪ್ರಾಯ ರೂಪಿಸಲು ಪರಿಸರಾಸಕ್ತರ ತೀರ್ಮಾನ

## ಯೋಜನೆಗೆ ತಾತ್ಕಾಲಿಕ ತಡೆ; ಕಣ್ಮರೆಸುವ ತಂತ್ರ: ಶರಾವತಿ ನದಿ ಕಣಿವೆ ಉಳಿಸಿ ಸಮಿತಿ, 2ನೇ ಹಂತದಲ್ಲಿ ಕಾನೂನು ಹೋರಾಟ

• ಉದಯವಾಹಿನಿ, ಶಿವಮೊಗ್ಗ

ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆಗೆ ತಾತ್ಕಾಲಿಕ ತಡೆ ನೀಡಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿರುವುದು ಕೇವಲ ಕಣ್ಮರೆಸುವ ತಂತ್ರ ಎಂದು ಶರಾವತಿ ನದಿ ಕಣಿವೆ ಉಳಿಸಿ ಸಮಿತಿ, ಅಭಿಪ್ರಾಯಪಟ್ಟಿದೆ ಮೊದಲ ಹಂತದಲ್ಲಿ ಯೋಜನೆಯ ವಿರುದ್ಧ ರಾಜ್ಯದಾದ್ಯಂತ ಜನಾಭಿಪ್ರಾಯ ಮೂಡಿಸಲು ಹಾಗೂ 2ನೇ ಹಂತದಲ್ಲಿ ಕಾನೂನು ಹೋರಾಟ ನಡೆಸಲೂ ತೀರ್ಮಾನಿಸಿದೆ.

ಜನಾಭಿಪ್ರಾಯ ರೂಪಿಸಲು ರೈತಸಂಘ, ದಲಿತ ಸಂಘರ್ಷ ಸಮಿತಿ ಹಾಗೂ ಕನ್ನಡಪರ ಮತ್ತು ಪರಿಸರಾಸಕ್ತ ಸಂಘಟನೆಗಳ ಮುಖಂಡರೊಂದಿಗೆ ಸಭೆ ನಡೆಸಿ ಮುಂದಿನ ಹೋರಾಟದ ರೂಪುರೇಷೆ ಬಗ್ಗೆ ಚರ್ಚಿಸಲು ಇಲ್ಲಿ ಶರಾವತಿ ನದಿ ಕಣಿವೆ ಉಳಿಸಿ ಸಮಿತಿ ನೇತೃತ್ವದಲ್ಲಿ ನಡೆದ ಪರಿಸರಾಸಕ್ತರ ಹಾಗೂ ಪರಿಸರ ಹೋರಾಟಗಾರರ ದುಂಡುಮೇಜಿನ ಸಭೆಯಲ್ಲಿ ಈ ನಿಲುವು ತಳೆಯಲಾಗಿದೆ.ಸಭೆಗೆ ಮುನ್ನ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬಂಗಾರಮಕ್ಕಿ ಕ್ಷೇತ್ರದ ಮಾರುತಿ ಗುರೂಜಿ, ಪಂಪ್ ಸ್ಟೋರೇಜ್ ಯೋಜನೆಗೆ ಕೇಂದ್ರದಿಂದ ತಾತ್ಕಾಲಿಕ ತಡೆ ನೀಡಿರುವ ಸಂದೇಶ ಬಿತ್ತರವಾಗಿದೆ. ಇದು ಪರಿಸರ ಹೋರಾಟಗಾರರ ಸಂಘಟನೆಯನ್ನು ಒಡೆಯುವ ಹಾಗೂ ಸಮಾಜವನ್ನು ದಿಕ್ಕು ತಪ್ಪಿಸುವ ತಂತ್ರ ಎಂದರು.

**ಅನುಮತಿ ಮುನ್ನವೇ ಟೆಂಡರ್ ಕೊಟ್ಟಿದ್ದು ಹೇಗೆ?**
ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆಯನ್ನು ಮೆಗಾ ಎಂಜಿನಿಯರಿಂಗ್ ಕಂಪೆನಿಗೆ ಟೆಂಡರ್ ಕರೆದು ಗುತ್ತಿಗೆ ನೀಡಲಾಗಿದೆ. ಯೋಜನೆಯ ಅನುಷ್ಠಾನಕ್ಕೆ ಬೇರೆ ಬೇರೆ ಇಲಾಖೆಗಳು ಇನ್ನೂ ಅನುಮತಿ ಕೊಟ್ಟಿಲ್ಲ. ಅನುಮತಿಯೇ ಇಲ್ಲದೇ ಹೇಗೆ ಟೆಂಡರ್ ಕರೆದರು ಎಂದು ಮಾಜಿ ಶಾಸಕ ಎ.ಟಿ.ರಾಮಸ್ವಾಮಿ ಪ್ರಶ್ನಿಸಿದರು. ಅವರಿಗೆಲ್ಲ (ಸರ್ಕಾರ) ಮುಂದಿನ ಚುನಾವಣೆಯ ಬಗ್ಗೆ ಆಸಕ್ತಿಯೇ ಹೊರತು ನೆಲದ ಮಕ್ಕಳ ಬಗ್ಗೆ ಅಲ್ಲ. ಇವರು ಇಷ್ಟೊಂದು ಕೃತಜ್ಞಹೀನರು ಆಗುತ್ತಾರೆ ಎಂದು ಭಾವಿಸಿರಲಿಲ್ಲ. ಸೇವೆ ಮಾಡುವ ಜಾಗದಲ್ಲಿ ಸೇವಿಸುತ್ತಿದ್ದಾರೆ. ಸಂಪದ್ಭರಿತ ಸುಸಂಸ್ಕೃತ ರಾಜ್ಯ ಕರ್ನಾಟಕ ಅಸಂಸ್ಕೃತರ ಕೈಗೆ ಸಿಕ್ಕು ಸಂಕಷ್ಟಕ್ಕೆ ಒಳಗಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಪಂಪ್ಡ್ ಸ್ಟೋರೇಜ್ ಯೋಜನೆ ಅನುಷ್ಠಾನದ ನಿಟ್ಟಿನಲ್ಲಿ ನವೆಂಬರ್‌ನಲ್ಲಿ ಪರಿಸರ ಅಧ್ಯಯನಕ್ಕೆ ತಜ್ಞರ ನಿಯೋಗವನ್ನು ಕರ್ನಾಟಕಕ್ಕೆ ಕಳುಹಿಸಿ ವರದಿ ಪಡೆದು ನಂತರ ಮುಂದುವರಿಯುವುದಾಗಿ ಕೇಂದ್ರ ಸಚಿವ ಭೂಪೇಂದ್ರ ಯಾದವ್ ಅಧಿಕೃತವಾಗಿಯೇ ಹೇಳಿದ್ದರು. ಆ ನಿಯೋಗ ಬರುವ ಮುನ್ನವೇ ತಾತ್ಕಾಲಿಕ ತಡೆ ಎಂದು ಹೇಳುತ್ತಿದ್ದಾರೆ. ಈ ತಂತ್ರಕ್ಕೆ ಹೋರಾಟಗಾರರು ತಲೆ ಬಾಗುವುದಿಲ್ಲ' ಎಂದು ಹೇಳಿದರು.

'ಶರಾವತಿ ಪಂಪ್ಡ್ ಸ್ಟೋರೇಜ್ ಸೇರಿದಂತೆ ಪರಿಸರಕ್ಕೆ ಮಾರಕವಾದ ಯಾವುದೇ ಯೋಜನೆಗಳನ್ನು ಪಶ್ಚಿಮಘಟ್ಟದಲ್ಲಿ ಕೈಗೆತ್ತಿಕೊಳ್ಳುವುದಿಲ್ಲ ಎಂದು ಸರ್ಕಾರ ಗೆಜೆಟ್ ನೋಟಿಫಿಕೇಶನ್ ಹೊರಡಿಸುವವರೆಗೂ ನಮ್ಮ ಹೋರಾಟ ನಿರಂತರವಾಗಿರುತ್ತದೆ. ನಮ್ಮನ್ನು (ಹೋರಾಟಗಾರರು) ಒಡೆಯುವ ಕೆಲಸ ಬೇಡ ಎಂದು ಸರ್ಕಾರಕ್ಕೆ ಎಚ್ಚರಿಸುತ್ತೇವೆ ಎಂದು ಅವರು ತಿಳಿಸಿದರು.

ಯೋಜನೆಗಾಗಿ ಅರಣ್ಯ ಭೂಮಿ 54 ಹೆಕ್ಟೇರ್ ಅಲ್ಲ 142.7 ಹೆಕ್ಟೇರ್ ಬಳಕೆ ಆಗುತ್ತಿದೆ. ಸಿಂಹ ಬಾಲದ ಸಿಂಗಳೀಕಗಳ ನೆಲೆಯಲ್ಲಿ ಕ್ವಾರಿಗಳನ್ನು ಬಳಕೆ ಮಾಡಲಾಗುತ್ತಿದೆ. ವಿದ್ಯುತ್ ಪ್ರಸರಣಕ್ಕೆ ಹೆಚ್ಚುವರಿ ಭೂಮಿ ಬೇಕಿದೆ. ಇಷ್ಟೆಲ್ಲ ಸಂಗತಿ ಮುಚ್ಚಿಟ್ಟು ಕೆಪಿಸಿಎಲ್ ಸುಳ್ಳು ಹೇಳುತ್ತಿರುವುದು ಕಾನೂನು ಬಾಹಿರ ಎಂದು ಸುಪ್ರೀಂಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಸಂತೋಷ ಹೆಗ್ಡೆ ಹೇಳಿದರು.



ಉದಯವಾಹಿನಿ ಚಿತ್ರ

### 21 ಲಕ್ಷ ಮರಗಳ ಹನನಕ್ಕೆ ಸಿದ್ಧತೆ; ಮಾರುತಿ ಗುರೂಜಿ

**'ಯೋಜನೆಗೆ 16000 ಮರಗಳನ್ನು ಕಡಿಯಲಾಗುತ್ತಿದೆ ಎಂದು ಕೆಪಿಸಿಎಲ್ ಹೇಳುತ್ತಿದೆ. ಆದರೆ ಅರಣ್ಯ ಇಲಾಖೆಯ ಪರಿವೇಶ್ ಪೋರ್ಟಲ್‌ನಲ್ಲಿ 1.20 ಲಕ್ಷ ಮರಗಳು ಎಂಬ ಉಲ್ಲೇಖವಿದೆ. ಇನ್ನು ಶರಾವತಿಯಿಂದ ಬೆಂಗಳೂರಿಗೆ ಕುಡಿಯುವ ನೀರು ಒಯ್ಯಲು 2 ಲಕ್ಷ ಮರಗಳನ್ನು ಕಡಿಯುವ ಪ್ರಸ್ತಾವ ಇದೆ. ಪಂಪ್ಡ್ ಸ್ಟೋರೇಜ್ ಸೇರಿದಂತೆ ಶರಾವತಿ ಕಣಿವೆಯಲ್ಲಿ 12 ಬೇರೆ ಬೇರೆ ಯೋಜನೆಗಳ ಅನುಷ್ಠಾನಕ್ಕೆ ಸಿದ್ಧತೆ ನಡೆದಿದ್ದು 21 ಲಕ್ಷ ಮರಗಳ ಕಡಿಯುವ ಯೋಜನೆ ಇದೆ. ಈ ಬಗ್ಗೆ ಮಾಧ್ಯಮಗಳು ಹೆಚ್ಚು ಹೆಚ್ಚು ಬೆಳಕು ಚೆಲ್ಲಬೇಕಿದೆ' ಎಂದು ಬಂಗಾರಮಕ್ಕಿ ಕ್ಷೇತ್ರದ ಮಾರುತಿ ಗುರೂಜಿ ಮನವಿ ಮಾಡಿದರು.**

> **ಕೆಲವರ ಲಾಭಕ್ಕಾಗಿ ಬಹಳಷ್ಟು ಜನರ ಭವಿಷ್ಯ ಬಲಿಕೊಡುವ ಯತ್ನನಡೆಯುತ್ತಿದೆ. ಭವಿಷ್ಯದ ಪೀಳಿಗೆಗೂ ಇಂತಹ ಯೋಜನೆಗಳು ಬೇಡ. ಜನರನ್ನು ಒಗ್ಗೂಡಿಸಿ ಅವರ ನೆರವು ಪಡೆದು ಹೋರಾಟ ರೂಪಿಸಬೇಕಿದೆ.**
> **- ಸಂತೋಷ ಹೆಗ್ಡೆ, ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ**

> **ಪಶ್ಚಿಮಘಟ್ಟವನ್ನೇ ನಾಶ ಮಾಡುವ ಪ್ರಯತ್ನ ಸರ್ಕಾರದಿಂದಲೇ ಆಗುತ್ತಿದೆ. ಸೋಲಾರ್ ಪವನ ವಿದ್ಯುತ್ ಪರ್ಯಾಯ ಇದ್ದರೂ ಪಂಪ್ಡ್ ಯೋಜನೆಗೆ ವೆಚ್ಚ ಮಾಡುತ್ತಿರುವ 10474 ಕೋಟಿ ರೂ. ಸಾರ್ವಜನಿಕರ ಹಿತಾಸಕ್ತಿಗೆ ಅಲ್ಲ.**
> **- ಗೋಪಾಲಗೌಡ, ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ**

# ವಿವಿಧ ಬೇಡಿಕೆಗಳು ಈಡೇರಿಸಲು: ಕರ್ನಾಟಕ ಪ್ರಾಂತ ರೈತ ಸಂಘ ಪ್ರತಿಭಟನೆ

• ಉದಯವಾಹಿನಿ,ಚಿಂಚೋಳಿ

ಪಟ್ಟಣದ ಬಸ್ ನಿಲ್ದಾಣ ಎದುರು ಕರ್ನಾಟಕ ಪ್ರಾಂತ ರೈತ ಸಂಘದ ವತಿಯಿಂದ ರೈತರ ಸಾಲಮನ್ನಾ, ಬೆಳೆ ವಿಮೆ ಜಾರಿ, ಕಬ್ಬು ದರ ಹೆಚ್ಚಿಸಲು, ಪ್ರವಾಹ ಸಂತ್ರಸ್ತರಿಗೆ ಪರಿಹಾರ, ರಾಷ್ಟ್ರೀಯ ವಿಪತ್ತು ತುರ್ತು ಪರಿಹಾರ ಸೇರಿದಂತೆ ಇನ್ನಿತರ ಬೇಡಿಕೆಗಳು ಈಡೇರಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿಪತ್ರ ಸಲ್ಲಿಸಿದರು.

ಪ್ರತಿಭಟನೆ ಉದ್ದೇಶಿಸಿ ಕೆಪಿಆರ್ ಸಂಘದ ಜಿಲ್ಲಾಧ್ಯಕ್ಷ ಶರಣಬಸಪ್ಪ ಮಮಶೆಟ್ಟಿ ಮಾತನಾಡಿ ಡಾ.ಎಂಎಸ್ ಸ್ವಾಮಿನಾಥನ್ ಆಯೋಗ ವರದಿ ಸಿ2+50 ಪರ್ಸೆಂಟ್ ಸೇರಿಸಿ ಬೆಂಬಲ ಬೆಲೆ ಕಾನೂನು ಜಾರಿಗೆ ತನ್ನಿ,ರೈತರು ಬೆಳೆದ ಪ್ರತಿ ಕ್ವಿಂಟಲ್ ತೊಗರಿಬೇಳೆಗೆ 12,500ರೂ. ಬೆಲೆ ನೀಡಬೇಕು,ಎಲ್ಲಾ ರೈತರಿಗೆ ಬೆಳೆವಿಮೆ ಜಾರಿಗೊಳಿಸಿ,ರೈತರ ಸಂಪೂರ್ಣ ಸಾಲಮನ್ನಾ ಮಾಡಬೇಕು,ಸತತ ಮಳೆಯಿಂದ ಹಾನಿಯಾದ ಜಿಲ್ಲೆಯಲ್ಲಿ ರಾಷ್ಟ್ರೀಯ ವಿಪತ್ತು ಪರಿಹಾರ ಘೋಷಿಸಿ, ಜಿಲ್ಲೆಯಾದ್ಯಂತ ಹಸಿ ಬರಗಾಲವೆಂದು ಘೋಷಿಸಿ, ರೈತರ ಆತ್ಮಹತ್ಯೆ ತಡೆಗಟ್ಟಿ ಋಣಮುಕ್ತ ಕಾಯ್ದೆ ಜಾರಿಗೆ ತನ್ನಿ, ಚಂದ್ರಂಪಳ್ಳಿ ಮತ್ತು ನಾಗರಾಳ ಜಲಾಶಯಗಳ ನೀರಿನಿಂದ ನಷ್ಟವಾದವರಿಗೆ ಶಾಶ್ವತ ಪರಿಹಾರ ನೀಡಿ, ಬಡ ರೈತರಿಗೆ ಒಕ್ಕಲೆಬ್ಬಿಸುವುದು ತಡೆಗಟ್ಟಿ ಅರಣ್ಯ ಭೂಮಿ ಸಾಗುವಳಿದಾರರಿಗೆ ಹಕ್ಕುಪತ್ರ ನೀಡಿ, ವಯಸ್ಸಾದವರಿಗೆ ಪಿಂಚಣಿ ಮಂಜೂರುಗೊಳಿಸಿ,ಕುಂಚಾವರಂ ಕ್ರಾಸ್ ದಿಂದ ಕರ್ಚಖೇಡ ವರೆಗೆ ಹದಗೆಟ್ಟ ರಸ್ತೆ ದುರಸ್ತಿ ಮಾಡಬೇಕು,ಮನೆಗಳಲ್ಲಿ ಮಳೆ ಹೋಗಿದ ಬಡವರಿಗೆ ನೂತನ ಮನೆಗಳು ನಿರ್ಮಿಸಿ,ನೀರಾವರಿ ಪಂಪ್ ಸೇಟ್ ಗಳಿಗೆ ಸ್ಮಾರ್ಟ್ ಮೀಟರ್ ಅಳವಡಿಸುವುದು ಕೈಬೀಡಬೇಕು, ರೈತರಿಗೆ 12ಗಂಟೆ ವಿದ್ಯುತ್ ಸಂಪರ್ಕ ಕಲ್ಪಿಸಿ, ತಾಲ್ಲೂಕಿನಾದ್ಯಂತ ಹದಗೆಟ್ಟ ರಸ್ತೆಗಳು ದುರಸ್ಥಿಗೊಳಿಸಬೇಕು ಎಂದರು.

ಕೆಪಿಆರ್ ಸಂಘದ ತಾಲ್ಲೂಕು ಅಧ್ಯಕ್ಷ ಜಾಫರ್ ಖಾನ್ ಮಿರಿಯಾಣ ಮಾತನಾಡಿ ರೈತರ ಜಮೀನು ಅಳತೆ ಮಾಗಲು ಅರ್ಜಿ ಸಲ್ಲಿಸಿದ ರೈತರಿಗೆ ಅಲೆದಾಡಿಸುವುದು ಬಿಡಿ, ಟಿಪ್ಪಣಿ ಮಾಡಿಸುವ ಹೆಸರಿನಲ್ಲಿ ಹಣ ವಸೂಲಿಗೆ ಇಳಿದ ಅಧಿಕಾರಿಗಳ ಮೇಲೆ ಕ್ರಮಕ್ಕೈಗೊಳ್ಳಿ, ಎಲ್ಲಾ ರೈತರಿಗೆ ಡ್ರಿಪ್, ಸ್ಪಿಂಕ್ಲರ್ ಪೈಪ್‌ಗಳು ವಿತರಿಸಿ, ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಸಮರ್ಪಕವಾಗಿ ಜಾರಿಗೆತನ್ನಿ, ಕಬ್ಬು, ತೊಗರಿಬೇಳೆ, ಬಾಳೆ, ಹೂವು, ಹಣ್ಣಿನ ಮರಗಳು ಬೆಳೆಸಲು ಸರ್ಕಾರ ಸಾಲನೀಡಿ ಸಬ್ಸಿಡಿ ಕೊಡಬೇಕು, ಕಬ್ಬಿನ ಉಪ ಉತ್ಪನಗಳಾದ ಮೊಲಾಸಸ್, ಕಾಕಂಬಿ, ಡಿಸ್ಟಿಲರಿಸ್, ಸಹವಿದ್ಯುತ್, ಬಯೋಕಂಪೋಸ್, ಪಶು ಆಹಾರ ಇತರೆ ಲಾಭಂಶ ರೈತರಿಗೆ ಪಾಲು ನೀಡಿ, ಕಾರ್ಖಾನೆ ಮತ್ತು ಕಬ್ಬು ಬೆಳೆಗಾರರ ನಡುವೆ ದ್ವಿಪಕ್ಷೀಯ ಒಪ್ಪಂದ ಮಾಡಿಕೊಳ್ಳಲು ಸಮಿತಿ ರಚಿಸಿ,ಸಕ್ಕರೆ ಇಳುವರಿ ರೈತರ ಸಮ್ಮುಖದಲ್ಲಿ ತೆಗೆಯಬೇಕು,ಕಬ್ಬಿನ ರೈತರಿಗೆ ತೂಕದಲ್ಲಿ ಮೋಸ,ಕಾರ್ಖಾನೆ ಗೇಟ್ ನಲ್ಲಿ ತೂಕ ಯಂತ್ರ ಅಳವಡಿಸಿ ತೂಕ ಮಾಡಿದ ನಂತರ ಕಾರ್ಖಾನೆ ಒಳಗೆ ಬಿಡಬೇಕು,ಕಬ್ಬು ತೂಕ ಮಾಡಿದ 14ದಿನಗಳಲ್ಲಿ ರೈತರಿಗೆ ಹಣ ಸಂದಾಯ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಸಿದ್ದಲಿಂಗಯ್ಯ ಸ್ವಾಮಿ, ಶಂಕ್ರಯ್ಯಸ್ವಾಮಿ, ಪರಮೇಶ್ವರ ಕಾಂತಾ, ವೈಜನಾಥ ಸಾತಪ್ಪನೋರ, ಗೋವರ್ಧನ ರೆಡ್ಡಿ, ನಾಮದೇವ, ಗೋಪಾಲ, ಶಿವಕುಮಾರ, ಅನೇಕರಿದ್ದರು.


ಉದಯವಾಹಿನಿ ಚಿತ್ರ

# ತಹಶೀಲ್ದಾರ್ ಕಾರ್ಯಾಲಯ ಎದುರು ರೈತರ ಧರಣಿ

• ಉದಯವಾಹಿನಿ, ಮುಂಡರಗಿ:


ವಿವಿಧ ಬೆಳೆಗಳ ಬೆಂಬಲ ಬೆಲೆ ಖರೀದಿ ಕೇಂದ್ರ ಆರಂಭ ಸೇರಿದಂತೆ ರೈತರ ವಿವಿಧ ಬೇಡಿಕೆ ಈಡೇರಿಸಬೇಕು ಆಗ್ರಹಿಸಿ ತಾಲ್ಲೂಕಿನ ನೂರಾರು ರೈತರು ಮಂಗಳವಾರ ತಹಶೀಲ್ದಾರ್ ಕಾರ್ಯಾಲಯ ಎದುರಿನ ರಾಜ್ಯ ಹೆದ್ದಾರಿ ಮೇಲೆ ಧರಣಿ ನಡೆಸಿದರು. ಕೋಟೆ ಆಂಜನೇಯ ದೇವಸ್ಥಾನದಿಂದ ಟ್ರ್ಯಾಕ್ಟರ್‌ಗಳ ಮೂಲಕ ಬೃಹತ್ ಪ್ರತಿಭಟನೆ ಆರಂಭಿಸಿದ ರೈತರು ಜಾಗೃತ ವೃತ್ತ, ಗಾಂಧೀ ವೃತ್ತ, ಅಂಬಾ ಭವಾನಿ ನಗರ, ಕೇಂದ್ರ ಬಸ್ ನಿಲ್ದಾಣ, ಕೊಪ್ಪಳ ವೃತ್ತ ಮಾರ್ಗವಾಗಿ ಸಂಚರಿಸಿ ತಹಶೀಲ್ದಾರ್ ಕಾರ್ಯಾಲಯ ಎದುರು ಧರಣಿ ಆರಂಭಿಸಿದರು.

ತಾಲ್ಲೂಕಿನಲ್ಲಿ ಸಾವಿರಾರು ಎಕರೆ ಜಮೀನಿನಲ್ಲಿ ಮೆಕ್ಕೆಜೋಳ, ಈರುಳ್ಳಿ, ಭತ್ತ, ತೊಗರಿ, ಶೇಂಗಾ ಮೊದಲಾದ ಬೆಳೆಗಳನ್ನು ರೈತರು ಬೆಳೆದಿದ್ದು, ಬೆಳೆಗಳಿಗೆ ಸೂಕ್ತ ಬೆಲೆ ಲಭಿಸದ ಕಾರಣ ನಷ್ಟ ಅನುಭವಿಸುತ್ತಿದ್ದಾರೆ. ಸರ್ಕಾರ ತಕ್ಷಣ ತಾಲ್ಲೂಕಿನ ಪ್ರಮುಖ ಭಾಗಗಳಲ್ಲಿ ಖರೀದಿ ಕೇಂದ್ರ ತೆರೆಯಬೇಕು ಎಂದು ಆಗ್ರಹಿಸಿದರು.

### ರೈತರ ವಿವಿಧ ಬೇಡಿಕೆ ಈಡೇರಿಸಿ

**ಅತೀವೃಷ್ಟಿಯಿಂದ ಹಾನಿಯಾದ ರೈತರ ಬೆಳೆಗಳಿಗೆ ಬೆಳೆಹಾನಿ ಪರಿಹಾರ ಹಾಗೂ ಬೆಳೆವಿಮೆ ಪರಿಹಾರ ಬೆಳೆ ಒಕ್ಕಲು ಕಾರ್ಯ ನಡೆಸಲು ಖಣ ನಿರ್ಮಾಣ ಹಾಗೂ ಉತ್ತಮ ಗುಣಮಟ್ಟದ ಬಿತ್ತನೆ ಬೀಜ ಪೂರೈಕೆ ಪ್ರತಿ ಟನ್ ಕಬ್ಬಿಗೆ 3300ರೂ. ಬೆಲೆ ರೈತರ ಸಾಲ ಮನ್ನಾ ಸೇರಿದಂತೆ ಶಿಂಗಟಾಲೂರ ಏತ ನೀರಾವರಿ ಯೊಜನೆಯ ಅಡಿಯಲ್ಲಿ ಕಾಲುವೆ ಮೂಲಕ ರೈತರ ಜಮೀನಿಗೆ ನೀರು ಒದಗಿಸಬೇಕು' ಎಂದು ಆಗ್ರಹಿಸಿದರು.**

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹಾಗೂ ತಹಶೀಲ್ದಾರ್ ಎರ್ರಿಸ್ವಾಮಿ ಪಿಎಸ್ ಪ್ರತಿಭಟನಾ ನಿರತ ರೈತರೊಂದಿಗೆ ಚರ್ಚಿಸಿ, ರಾಜ್ಯ ಹಾಗೂ ಕೇಂದ್ರ ಸರ್ಕಾರಗಳೊಂದಿಗೆ ಚರ್ಚಿಸಿ ಖರೀದಿ ಕೇಂದ್ರ ಸೇರಿದಂತೆ ರೈತರ ವಿವಿಧ ಬೇಡಿಕೆ ಈಡೇರಿಸಲಾಗುವುದು ಎಂದು ಭರವಸೆ ನೀಡಿದರು.


ಉದಯವಾಹಿನಿ ಚಿತ್ರ

# ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ರಸ್ತೆ ನುಂಗಿದ ಜಾಲಿಕಂಟಿ: ಮೈ-ಕೈ ಪರಚಿಕೊಳ್ಳುತ್ತಿರುವ ರೈತರು

• ಉದಯವಾಹಿನಿ, ಇಂಡಿ

ತಾಲ್ಲೂಕಿನ ಹಳೆ ಶಿರಗೂರ ಗ್ರಾಮದ ಸಿದ್ದರಾಯ ದೇವಾಸ್ಥಾನ ಬಲ ಭಾಗದಿಂದ ಪಡನೂರ ಗ್ರಾಮಕ್ಕೆ ತೆರಳುವ ರಸ್ತೆಯ ಎರಡೂ ಬದಿಗಳಲ್ಲಿ ಜಾಲಿ ಕಂಟಿ ಬೆಳೆದು ರೈತರು ಹಾಗೂ ಜಾನುವಾರುಗಳ ಓಡಾಟಕ್ಕೆ ಅಡ್ಡಿಯಾಗುತ್ತಿದೆ. ಈ ರಸ್ತೆ ವಾಸ್ತವದಲ್ಲಿ 30 ಅಡಿ ಇದೆ. ಆದರೆ ಕಂಟಿ ಬೆಳೆದಿರುವುದರಿಂದ 6 ಅಡಿಯಷ್ಟು ಮಾತ್ರ ಜಾಗ ಕಾಣಿಸುತ್ತಿದೆ. ಈ ರಸ್ತೆ ಅಕ್ಕಪಕ್ಕದಲ್ಲಿ ಜಂಗಲ್ ಕಟ್ಟಿಂಗ್ ಮಾಡದೆ ಇರುವುದರಿಂದ ಜಾಲಿ ಕಂಟಿ ರಸ್ತೆ ಮೇಲೆ ಚಾಚಿಕೊಂಡಿದೆ. ಸದ್ಯ ಈ ರಸ್ತೆ ಮೂಲಕ ಅಕ್ಕಪಕ್ಕದ ಗ್ರಾಮಗಳು ಹಾಗೂ ಹೊಲ ಗದ್ದೆಗಳಿಗೆ ತೆರಳುವ ರೈತರು ಇನ್ನಿಲ್ಲದ ತೊಂದರೆ ಅನುಭವಿಸುವಂತಾಗಿದೆ.


ಉದಯವಾಹಿನಿ ಚಿತ್ರ

ಸುಮಾರು 2.5 ಕಿಮಿ ಇರುವ ಈ ರಸ್ತೆಯುದ್ದಕ್ಕೂ ಜಾಲಿ ಕಂಟಿ ಚಾಚಿಕೊಂಡಿದ್ದು, ರಸ್ತೆ ಯಾವುದೊ ಬೆಲಿ ಯಾವುದೊ ಎಂಬುವುದೇ ಕಾಣದಂತಾಗಿದೆ. ಗ್ರಾಮದ ರೈತರು ದಿನನಿತ್ಯದ' ಕೃಷಿ ಚಟುವಟಿಗೆಳಿಗೆ ಓಡಾಡಲು ಈ ರಸ್ತೆ ಅತ್ಯವಶ್ಯಕ. ಆದ್ರೆ ಈ ರಸ್ತೆ ಇದೀಗ ಜಾಲಿ ಕಂಟಿಗಳಿಂದ ಮುಚ್ಚಿಹೋಗಿದ್ದು ರೈತರು ಅದರಲ್ಲೇ ಮೈಕೈ ತರಚಿ ಕೊಂಡು ಓಡಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಇನ್ನು ಎತ್ತಿನಗಾಡಿ ಮೂಲಕ ತೆರಳುವ ರೈತರಂತೂ ಈ ರಸ್ತೆ ಮೂಲಕ ಸಾಗಲು ಸರ್ಕಸ್ ಮಾಡಬೇಕಾಗಿದೆ. ಆ ಜಾಲಿ ಕಂಟಿಗಳು ಕಣ್ಣಿಗ ಬಡಿಯುವುದರ ಜೊತೆಗೆ ಜಾನುವಾರುಗಳನ್ನೂ ಗಾಯಗೊಳಿಸುತ್ತಿವೆ. ಇದಷ್ಟೇ ಅಲ್ಲದೆ ಹೊಲ ಗದ್ದೆಗಳಲ್ಲೇ ಮನೆ ಕಟ್ಟಿಕೊಂಡು ವಾಸಿಸುತ್ತಿರುವ ರೈತರ ಮಕ್ಕಳೂ ಇದೇ ರಸ್ತೆಯ ಮೂಲಕ ಗ್ರಾಮದ ಶಾಲೆಗೆ ತೆರಳಬೇಕು. ರಸ್ತೆಯ ಪರಿಸ್ಥಿತಿ ನೋಡಿ ಕೆಲ ದಿನಗಳಿಂದ ಪೊಷಕರು ಮಕ್ಕಳನ್ನ ಶಾಲೆಗೆ ಕಳುಹಿಸಲು ಕೂಡ ಹಿಂಜರಿಯುತ್ತಿದ್ದಾರೆ. ಇನ್ನು ಈ ಸಮಸ್ಯೆ ಕುರಿತು ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ಗಮನಕ್ಕೆ ತಂದರೂ ಕ್ಯಾರೆ ಎನ್ನುತ್ತಿಲ್ಲ. ಸದ್ಯ ಅಧಿಕಾರಿಗಳ ನಿರ್ಲಕ್ಷ್ಯದಿಂದ ಬೇಸತ್ತ ರೈತರು, ಅಳಲನ್ನು ತೋಡಿಕೊಂಡಿದ್ದಾರೆ.

ಈ ಕುರಿತು ಗ್ರಾಮಸ್ಥರೊಬ್ಬರು ಮಾತನಾಡಿ, 'ಸುಮಾರು ದಿನಗಳಿಂದ ರೈತರು ಈ ಸಮಸ್ಯೆ ಎದುರಿಸುತ್ತಿದ್ದರೂ ಸಂಬಂಧಪಟ್ಟ ಆಧಿಕಾರಿಗಳು ಇತ್ತಕಡೆ ಗಮನ ಹರಿಸುತ್ತಿಲ್ಲ. ಗ್ರಾಮದ ಮುಖ್ಯಸ್ಥರನ್ನ ಕರೆದುಕೊಂಡು ಹೋಗಿ ಈ ಬಗ್ಗೆ ಅವರ ಗಮನಕ್ಕೆ ತಂದಿದ್ದೇವೆ. ಆದ್ರೆ ಅಧಿಕಾರಿಗಳು ತಮಗೂ ಇದಕ್ಕೂ ಸಂಬಂಧವೇ ಇಲ್ಲವೇನೋ ಎನ್ನುವಂತೆ ವರ್ತಿಸುತ್ತಿದ್ದಾರೆ.

# ನ್ಯೂಮೋನಿಯಾ ಭಯ ಬೇಡ, ಜಾಗ್ರತೆ ವಹಿಸಿ

• ಉದಯವಾಹಿನಿ, ಕಲಬುರಗಿ

ವಿಪರಿತಜ್ವರ, ಚಳಿಯಾಗುವುದು, ಉಸಿರುಗಟ್ಟುವುದು, ಕೆಮ್ಮು, ಕಫದಲ್ಲಿರಕ್ತ, ಮೈ-ಕೈ ನೋವು, ಸುಸ್ತು, ವಾಕರಿಕೆ, ಸಂಧಿವಾತ, ಸ್ನಾಯು ಎಳೆತದಂತಹ ಲಕ್ಷಣಗಳು ನ್ಯೂಮೋನಿಯಾದಾಗಿವೆ. ಇವುಗಳು ಕಂಡುಬಂದರೆ ಭಯ ಪಡದೆ, ನಿರ್ಲಕ್ಷ್ಯ ಮಾಡದೆ ಸೂಕ್ತ ಚಿಕಿತ್ಸೆ ಪಡೆಯುವ ಮೂಲಕ ಆರೋಗ್ಯಯುತವಾಗಬೇಕು ಎಂದು ವೈದ್ಯಾಧಿಕಾರಿ ಡಾ. ಅನುಪಮಾಎಸ್.ಕೇಶ್ವಾರ ಹೇಳಿದರು.

ನಗರದ ಶೇಖರೋಜಾದಶಹಾಬಜಾರ ನಗರ ಪ್ರಾಥಮಿಕಆರೋಗ್ಯಕೇಂದ್ರದಲ್ಲಿ ಬಸವೇಶ್ವರ ಸಮಾಜ ಸೇವಾ ಬಳಗದ ಸಹಯೋಗದೊಂದಿಗೆಜರುಗಿದ ವಿಶ್ವನ್ಯುಮೋನಿಯಾ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ನ್ಯೂಮೋನಿಯಾ ಜ್ವರ ಶ್ವಾಸಕೋಶಕ್ಕೆ ಸಂಬಂಧಿಸಿದ ಸಾಂಕ್ರಾಮಿಕ ಕಾಯಿಲೆಯಾಗಿರುತ್ತದೆ. ಇದು ಎಲ್ಲಾ ವಯೋಮಾನದವರಲ್ಲಿ ಕಂಡುಬರುತ್ತದೆ. ವಿಶೇಷವಾಗಿ ಮಕ್ಕಳಲ್ಲಿ ಮತ್ತು ವಯೋವೃದ್ಧರಲ್ಲಿರೋಗನಿರೋಧಕ ಶಕ್ತಿ ಕಡಿಮೆಯಿರುವುದುರಿಂದ ಹೆಚ್ಚು ಬಾಧಿಸುತ್ತದೆ. ಆಗ ಶ್ವಾಸಕೋಶದಲ್ಲಿ ಬ್ಯಾಕ್ಟರೀಯಾ, ವೈರಸ್, ಶೀಲಿಂಧ್ರ ಅಥವಾ ಇನ್ನಾವುದೇ ರೋಗಾಣುಗಳಿಂದ ಸೊಂಕು ತಗುಲಿ ನ್ಯೂಮೋನಿಯಾ ಉಂಟಾಗುತ್ತದೆಎಂದರು.


ನ್ಯೂಮೋನಿಯಾಖಾಯಿಲೆಯುರೋಗಗ್ರಸ್ಥ ವ್ಯಕ್ತಿ ಸೀನಿದಾಗ, ಕೆಮ್ಮಿದಾಗ, ಆತನು ಬಳಸಿದ ಬಟ್ಟೆ,ತಟ್ಟೆ, ಬಟ್ಟಲು, ಲೋಟ, ಚಮಚ, ಕರವಸ್ತ್ರ, ಟವೆಲ್, ಉಡುಪುಗಳನ್ನು ಬಳಸಿದಾಗ ಇತರರಿಗೆ ಹರಡುತ್ತದೆ. ನ್ಯೂಮೋನಿಯಾಕ್ಕೆ ಚಿಕಿತ್ಸೆಯ ಮೂಲಕ ನಿವಾರಿಸಿಕೊಳ್ಳಬಹುದಾಗಿದೆ. ಸ್ವಚ್ಛವಾಗಿ ಕೈತೊಳೆಯುವುದು, ರೋಗಿಗಳಿಂದ ದೂರವಿರುವುದು, ಆರಂಭಿಕ ಹಂತದಲ್ಲಿಯೇ ಖಾಯಿಲೆಯನ್ನು ಗುರ್ತಿಸಿ ಚಿಕಿತ್ಸೆ ಪಡೆಯುವ ಮುಂಜಾಗ್ರತಾ ಕ್ರಮಗಳನ್ನು

# ಸರ್ಕಾರ ಕೂಡಲೇ ಮೆಕ್ಕೆಜೋಳ ಖರೀದಿ ಕೇಂದ್ರ ಆರಂಭಿಸಲಿ

• ಉದಯವಾಹಿನಿ, ಗದಗ

ರಾಜ್ಯ ಸರ್ಕಾರ ಕೂಡಲೇ ಮೆಕ್ಕೆಜೋಳ ಖರೀದಿ ಕೇಂದ್ರ ಆರಂಭಿಸಿ ರೈತರ ಬೇಡಿಕೆಯಂತೆ ಎಂಎಸ್‌ಪಿಗಿಂತ ಹೆಚ್ಚಿನ ಬೆಲೆಗೆ ಖರೀದಿ ಮಾಡಬೇಕು. ಇಲ್ಲದಿದ್ದರೆ ರೈತರು ಕಬ್ಬಿನ ದರಕ್ಕಾಗಿ ಮಾಡಿದ ರೀತಿ ಹೋರಾಟ ಅನಿವಾರ್ಯವಾಗಲಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು. ರಾಜ್ಯದಲ್ಲಿ ಸುಮಾರು 17 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ರೈತರು ಮೆಕ್ಕೆಜೋಳ ಬೆಳೆಯುತ್ತಾರೆ. ಪ್ರತಿ ವರ್ಷ ಮೆಕ್ಕೆಜೋಳ ಬೆಳೆಯುವ ಪ್ರದೇಶ ಹೆಚ್ಚಾಗುತ್ತಿದೆ. ಕಳೆದ ವರ್ಷ 54 ಲಕ್ಷ ಮೆಟ್ರಿಕ್ ಟನ್ ಉತ್ಪಾದನೆಯಾಗಿತ್ತು. ಈ ವರ್ಷ ಕೂಡ 54 ಲಕ್ಷ ಟನ್ ಉತ್ಪಾದನೆಯಾಗಿದೆ. ಎರಡು ಲಕ್ಷ ಹೆಕ್ಟೇರ್ ಪ್ರದೇಶ ಹೆಚ್ಚಿಗೆ ಬಿತ್ತನೆಯಾದರೂ ಇಳುವರಿ ಅಷ್ಟೇ ಬಂದಿದೆ. ಸುಮಾರು 2 ಲಕ್ಷಕ್ಕಿಂತ ಹೆಚ್ಚು ಪ್ರದೇಶದಲ್ಲಿ ಗೋವಿನ ಜೋಳ ನಷ್ಟವಾಗಿದೆ. ಗೋವಿನ ಜೋಳ ನಷ್ಟ ಪರಿಹಾರ ನೀಡುವಲ್ಲಿ ಬಹಳಷ್ಟು ತಾರತಮ್ಯ ನಡೆಯುತ್ತಿದೆ ಎಂದು ಸುದ್ದಿಗಾರರಿಗೆ ತಿಳಿಸಿದರು.

ಸಮೀಕ್ಷೆ ಸರಿಯಾಗಿ ನಡೆಸಿಲ್ಲ. ಕೆಲವು ತಾಲ್ಲೂಕುಗಳಲ್ಲಿ ಬೆಳೆದಿರುವ ಒಟ್ಟು ಪ್ರದೇಶದಲ್ಲಿ ಶೇ 10ರಷ್ಟು ಮಾತ್ರ ನಷ್ಟ ಆಗಿದೆ ಎಂದು ಅತ್ಯಂತ ಅವೈಜ್ಞಾನಿಕ ಮತ್ತು ಸುಳ್ಳಿನಿಂದ ಕೂಡಿರುವ ಸರ್ವೆ ಮಾಡಲಾಗಿದೆ. ಗದಗ ಜಿಲ್ಲೆಯ ಮುಂಡರಗಿ ತಾಲ್ಲೂಕಿನಲ್ಲಿ ಸಮೀಕ್ಷೆ ನಡೆಸಿದರೂ ಒಂದು ಎಕರೆಯೂ ನಷ್ಟವಾಗಿಲ್ಲ ಎಂದು ವರದಿ ಕೊಟ್ಟಿದ್ದಾರೆ. ಈ ರೀತಿಯಾದರೆ ರೈತರಿಗೆ ಬಹಳಷ್ಟು ಅನ್ಯಾಯವಾಗುತ್ತದೆ. 2,400 ಎಂಎಸ್‌ಪಿ ಆಗಿದೆ, ಅದು ಸಾಲುವುದಿಲ್ಲ ಎಂದು ರೈತರು ಹೋರಾಟ ಮಾಡುತ್ತಿದ್ದಾರೆ. ರಾಜ್ಯ ಸರ್ಕಾರ ಕೂಡಲೇ ಖರೀದಿ ಕೇಂದ್ರವನ್ನು ತೆರೆದು, ಖರೀದಿ ಪ್ರಾರಂಭಿಸಬೇಕು ಎಂದು ಆಗ್ರಹಿಸಿದರು. ಕೆಎಂಎಫ್‌ನವರು ಸುಮಾರು 2ರಿಂದ 2.5 ಲಕ್ಷ ಟನ್ ಬಳಕೆ ಮಾಡುತ್ತಾರೆ. ಅದನ್ನು ಖರೀದಿಸಲು ಆದೇಶ ಮಾಡಬೇಕು. ಅವರು ವ್ಯಾಪಾರಸ್ಥರ ಬಳಿ, ಏಜೆಂಟರ ಬಳಿ ಖರೀದಿ ಮಾಡುವ ಬದಲು ರೈತರ ಬಳಿ ಖರೀದಿಸಲು ಹೇಳಬೇಕು. ಅವರು 2.5 ಲಕ್ಷ ಟನ್ ಖರೀದಿ ಮಾಡಿದರೆ ಮಾರುಕಟ್ಟೆಯಲ್ಲಿ ಬೇಡಿಕೆ ಹೆಚ್ಚಾಗುತ್ತದೆ. ದರ ಹೆಚ್ಚಾಗುತ್ತದೆ. ಅದರ ಜತೆಗೆ ರಾಜ್ಯ ಸರ್ಕಾರವೂ ಖರೀದಿ ಪ್ರಾರಂಭ ಮಾಡಬೇಕು. ಇಲ್ಲದಿದ್ದರೆ ರಾಜ್ಯದಲ್ಲಿ ರೈತರು ಸಂಕಷ್ಟಕ್ಕೆ ಸಿಲುಕುತ್ತಾರೆ. ಈಗಾಗಲೇ ರೈತರು ಧರಣಿ ಮಾಡಿ ಮನವಿ ಮಾಡಿದ್ದಾರೆ. ರೈತರ ಬೇಡಿಕೆಯಂತೆ ಎಂಎಸ್‌ಪಿಗಿಂತ ಹೆಚ್ಚಿನ ಬೆಲೆಗೆ ಗೋವಿನಜೋಳ ಖರೀದಿ ಮಾಡಬೇಕು ಎಂದು ಆಗ್ರಹಿಸಿದರು.



## ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ, ರಾಜ್ಯಪಾಲರು ಹಾಗೂ ಸಿಎಂ ಸಿದ್ದರಾಮಯ್ಯನವರಿಗೆ ಪತ್ರ

# ಮತ್ತೆ ಉತ್ತರ ಕರ್ನಾಟಕ ಪ್ರತ್ಯೇಕ ರಾಜ್ಯಕ್ಕೆ ಬೇಡಿಕೆ

• ಉದಯವಾಹಿನಿ, ಬೆಳಗಾವಿ

ಉತ್ತರ ಕರ್ನಾಟಕ ಭಾಗವು ಪ್ರತಿಯೊಂದು ವಲಯದಲ್ಲೂ ನಿರಂತರವಾಗಿ ಅನ್ಯಾಯ, ತಾರತಮ್ಯ ಮತ್ತು ನಿರ್ಲಕ್ಷ್ಯವನ್ನು ಎದುರಿಸುತ್ತಿದೆ. ಈ ಭಾಗದ 15 ಜಿಲ್ಲೆಗಳನ್ನು ಒಳಗೊಂಡ ಪ್ರತ್ಯೇಕ ರಾಜ್ಯ ರಚಿಸಬೇಕು ಎಂದು ಉಲ್ಲೇಖಿಸಿ ಕಾಂಗ್ರೆಸ್ ಶಾಸಕ ಭರಮಗೌಡ (ರಾಜು) ಕಾಗೆ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ, ರಾಜ್ಯಪಾಲರು ಹಾಗೂ ಸಿಎಂ ಸಿದ್ದರಾಮಯ್ಯನವರಿಗೆ ಪತ್ರ ಬರೆದಿದ್ದಾರೆ.

ಉತ್ತರ ಕರ್ನಾಟಕ ಪ್ರತ್ಯೇಕ ರಾಜ್ಯವಾಗಬೇಕು ಎನ್ನುವ ಬೇಡಿಕೆಯನ್ನು ಮತ್ತೆ ರಾಜು ಕಾಗೆಯವರು ಮುನ್ನೆಲೆಗೆ ತಂದಿದ್ದಾರೆ. ಆ ಬೆನ್ನಲ್ಲೇ ರೊಚ್ಚಿಗೆದ್ದ ಉತ್ತರ ಕರ್ನಾಟಕ ಹೋರಾಟ ಸಮಿತಿ, ಉತ್ತರ ಕರ್ನಾಟಕ ವಿಕಾಸ ವೇದಿಕೆಯು ಚಳಿಗಾಲದ ಅಧಿವೇಶನದಲ್ಲಿ ಬೇಡಿಕೆಗಳನ್ನು ಈಡೇರಿಸದಿದ್ದರೆ ಸುವರ್ಣ ವಿಧಾನಸೌಧದ ಮೇಲೆ ಪ್ರತ್ಯೇಕ ರಾಜ್ಯದ ಧ್ವಜಾರೋಹಣದ ಎಚ್ಚರಿಕೆಯನ್ನು ಕೊಟ್ಟಿದೆ.


ಉದಯವಾಹಿನಿ ಚಿತ್ರ

### ಸಹಿ ಸಂಗ್ರಹ ಅಭಿಯಾನಕ್ಕೆ ಬೆಂಬಲ

ಬೀದರ್, ಕಲಬುರಗಿ, ವಿಜಯಪುರ, ಯಾದಗಿರಿ, ಬಾಗಲಕೋಟೆ, ಬೆಳಗಾವಿ, ಧಾರವಾಡ, ಗದಗ, ಕೊಪ್ಪಳ, ರಾಯಚೂರು, ಉತ್ತರ ಕನ್ನಡ, ಹಾವೇರಿ, ವಿಜಯನಗರ, ಬಳ್ಳಾರಿ ಮತ್ತು ದಾವಣಗೆರೆಯನ್ನು ಒಳಗೊಂಡ 15 ಜಿಲ್ಲೆಗಳನ್ನು ಉತ್ತರ ಕರ್ನಾಟಕ ರಾಜ್ಯವನ್ನಾಗಿಸಲು ರಾಷ್ಟ್ರಪತಿ, ಪ್ರಧಾನಿ, ಸಿಎಂಗೆ ಶಾಸಕ ರಾಜು ಕಾಗೆ ಅವರು ನವೆಂಬರ್ 4ರಂದು ಪತ್ರ ಬರೆದಿದ್ದಾರೆ. ಉತ್ತರ ಕರ್ನಾಟಕ ಹೋರಾಟ ಸಮಿತಿಯ ಸಹಿ ಸಂಗ್ರಹ ಅಭಿಯಾನಕ್ಕೆ ಬೆಂಬಲ ಸೂಚಿಸಿದ ಅವರು, ಈಗಾಗಲೇ ಒಂದು ಕೋಟಿಗೂ ಹೆಚ್ಚು ಜನರು ಈ ಬೇಡಿಕೆಗೆ ಸಹಿ ಹಾಕುವ ಮೂಲಕ ಲಿಖಿತ ಒಪ್ಪಿಗೆ ನೀಡಿದ್ದಾರೆ . ಈ ಪ್ರದೇಶದ ಎಲ್ಲಾ ವರ್ಗದ ಜನರು ತಮ್ಮ ಒಟ್ಟಾರೆ ಮತ್ತು ಸರ್ವತೋಮುಖ ಅಭಿವೃದ್ಧಿಗಾಗಿ ಪ್ರತ್ಯೇಕ ರಾಜ್ಯವನ್ನು ಕೇಳುತ್ತಿದ್ದಾರೆ. ಆದ್ದರಿಂದ, ದಯವಿಟ್ಟು ನಮ್ಮ ಮನವಿಯನ್ನು ಪರಿಗಣಿಸಿ ಮತ್ತು ಪ್ರತ್ಯೇಕ ಉತ್ತರ ಕರ್ನಾಟಕ ರಾಜ್ಯ ರಚನೆಗೆ ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಬೇಕೆಂದು ವಿನಂತಿಸುತ್ತೇನೆ ಎಂದು ಶಾಸಕರು ರಾಷ್ಟ್ರಪತಿ, ಪ್ರಧಾನಿ ಹಾಗೂ ಸಿಎಂಗೆ ಬರೆದ ಪತ್ರದಲ್ಲಿ ತಿಳಿಸಿದ್ದಾರೆ.

**ಉಮೇಶ್ ಕತ್ತಿಯವರು ಏನು ಹೇಳಿದ್ದರು?:** ಈ ಹಿಂದೆ ಉಮೇಶ್ ಕತ್ತಿಯವರು ಸಹ ಪ್ರತ್ಯೇಕ ರಾಜ್ಯದ ಬಗ್ಗೆ ಧ್ವನಿ ಎತ್ತಿದ್ದರು. ನಾನು 9 ಬಾರಿ ಶಾಸಕನಾಗಿದ್ದೇನೆ. ಉತ್ತರ ಕರ್ನಾಟಕದ ಜಿಲ್ಲೆಗಳ ಅಭಿವೃದ್ಧಿ ದೃಷ್ಟಿಯಿಂದ ಪ್ರತ್ಯೇಕ ರಾಜ್ಯಕ್ಕೆ ಬೇಡಿಕೆ ಇಡುತ್ತಿದ್ದೇನೆ ಎಂದು ಹೇಳಿದ್ದರು.

ಕರ್ನಾಟಕ ಎರಡು ಭಾಗವಾಗಬೇಕು. ಉತ್ತರ ಕರ್ನಾಟಕದವರು ಕನ್ನಡವನ್ನೇ ಮಾತನಾಡುತ್ತೇವೆ ಎಂದು ಹೇಳಿದ್ದರು. ಅವರ ನಂತರ ರಾಜು ಕಾಗೆಯವರು ಪ್ರತ್ಯೇಕ ರಾಜ್ಯಕ್ಕಾಗಿ ಪತ್ರ ಬರೆದಿರುವುದು ಭಾರಿ ಸಂಚಲನ ಮೂಡಿಸಿದೆ.

### ಹೆಮ್ಮೆಯ ಕನ್ನಡ ರಾಜ್ಯ

**ಕರ್ನಾಟಕ ಏಕೀಕರಣವಾದಾಗಿನಿಂದ ಉತ್ತರ ಕರ್ನಾಟಕದ ಜಿಲ್ಲೆಗಳು ನಿರಂತರವಾಗಿ ಅನ್ಯಾಯ, ತಾರತಮ್ಯ ಮತ್ತು ನಿರ್ಲಕ್ಷ್ಯಕ್ಕೆ ಒಳಗಾಗಿದೆ. ಮಲತಾಯಿ ಧೋರಣೆ ತೋರಲಾಗುತ್ತಿದೆ. ಉತ್ತರ ಕರ್ನಾಟಕ ಪ್ರತ್ಯೇಕ ರಾಜ್ಯವಾದರೆ, ಮತ್ತೊಂದು ಹೆಮ್ಮೆಯ ಕನ್ನಡ ಮಾತನಾಡುವ ರಾಜ್ಯಕ್ಕೆ ಜನ್ಮ ನೀಡುವಂತಾಗುತ್ತದೆ. ಇದು ನಮಗೆಲ್ಲರಿಗೂ ಹೆಮ್ಮೆಯ ವಿಷಯವೂ ಹೌದು. ಉತ್ತರ ಕರ್ನಾಟಕವು ಎಲ್ಲ ರೀತಿಯ ಸಂಪನ್ಮೂಲಗಳಿಂದ ಸಮೃದ್ಧವಾಗಿರುವ ಪ್ರದೇಶವಾಗಿದೆ.**

## ಮಿನಿ ನ್ಯೂಸ್

### ಹೆಸರು ಬೆಳೆ ಖರೀದಿ ಕೇಂದ್ರ ಪ್ರಾರಂಭ ಶಾಸಕ ಚಂದ್ರು ಲಮಾಣಿ ಚಾಲನೆ

• ಉದಯವಾಹಿನಿ, ಶಿರಹಟ್ಟಿ

ರೈತರು ಕೇಂದ್ರ ಸರ್ಕಾರದ ಬೆಂಬಲ ಬೆಲೆ ಹೆಸರು ಖರೀದಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು. ರೈತರಿಗೆ ಬೇಕಾಗುವ ದಾಖಲೆ, ಜಿಪಿಎಸ್ ಬಗ್ಗೆ ಅಧಿಕಾರಿಗಳು ಜಾಗೃತಿಗೊಳಿಸಬೇಕು' ಎಂದು ಶಾಸಕ ಚಂದ್ರು ಲಮಾಣಿ ಹೇಳಿದರು. ಸ್ಥಳೀಯ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ರಾಜ್ಯ ಸಹಕಾರ ಮಾರಾಟ ಮಹಾಮಂಡಳಿ ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ನಿಯಮಿತ ವತಿಯಿಂದ ಹೆಸರು ಬೆಳೆ ಖರೀದಿ ಕೇಂದ್ರಕ್ಕೆ ಚಾಲನೆ ನೀಡಿ ಮಾತನಾಡಿದರು.

ರೈತರಿಗೆ ಪ್ರತಿ ಕ್ವಿಂಟಲ್‌ಗೆ 8768 ದರ ನಿಗದಿ ಪಡಿಸಲಾಗಿದ್ದು, ಒಂದು ಎಕರೆಗೆ 3 ಕ್ವಿಂಟಲ್ ರಂತೆ ಒಬ್ಬ ರೈತರು 15 ಕ್ವಿಂಟಲ್ ಹೆಸರು ಬೆಂಬಲ ಬೆಲೆಯಲ್ಲಿ ಮಾರಾಟ ಮಾಡಲು ಅವಕಾಶ ನೀಡಲಾಗಿದೆ. ರೈತರು ಹೆಚ್ಚಾಗಿ ಗೋವಿನಜೋಳ ಬೆಳೆದಿದ್ದು, ಬೆಂಬಲ ಬೆಲೆಯಲ್ಲಿ ಖರೀದಿಸುವಂತೆ ಮನವಿ ಸಲ್ಲಿಸುತ್ತಿದ್ದಾರೆ.

ಕೇಂದ್ರ ಸರ್ಕಾರ ಬೆಂಬಲ ಬೆಲೆಯಲ್ಲಿ ಗೋವಿನಜೋಳ ಖರೀದಿ ಕೇಂದ್ರ ಆರಂಭಿಸಲು ಅನುಮತಿ ನೀಡಿದ್ದು, ರಾಜ್ಯ ಸರ್ಕಾರ ಅನುಮತಿ ನೀಡಬೇಕಿದೆ ಎಂದರು.

### ದೇಶದ ಪ್ರಗತಿಯಲ್ಲಿ ಯುವಜನಾಂಗದ ಪಾತ್ರ ಅಪಾರ

• ಉದಯವಾಹಿನಿ, ಯಾದಗಿರಿ


ಭಾರತದ ಅಭಿವೃದ್ಧಿಯಲ್ಲಿ ಯುವಜನಾಂಗದ ಪಾತ್ರ ಅಪಾರವಾಗಿದೆ ಎಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ಹೇಳಿದರು. ನಗರದ ಪದವಿ ಮಹಾವಿದ್ಯಾಲಯದಲ್ಲಿ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ 150 ನೇ ಜನ್ಮದಿನಾಚರಣೆ ಅಂಗವಾಗಿ, ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಗೌರವ ಅರ್ಪಿಸಿ ಮಾತನಾಡಿದ ಅವರು, ಭಾರತ ಸಮೃದ್ಧವಾಗಿ ಅಭಿವೃದ್ಧಿ ಪಥದಲ್ಲಿ ಸಾಗಲು ಯುವಜನಾಂಗದ ಸಾಮರ್ಥ್ಯವನ್ನು ಸದ್ಬಳಕೆ ಮಾಡಿಕೊಳ್ಳಬೇಕಾಗಿದೆ. ಈ ದಿಸೆಯಲ್ಲಿ ಇಂತಹ ಏಕತಾ ಪಾದಯಾತ್ರೆಗಳು ಉತ್ತಮ ವೇದಿಕೆಯಾಗಲಿವೆ ಎಂದು ಹೇಳಿದರು. ಎರಡನೇ ವಿಶ್ವ ಯುದ್ಧದಲ್ಲಿ ಹಿರೊಷಿಮಾ-ನಾಗಾಸಾಕಿಗಳ ಮೇಲೆ ಭಯಂಕರ ಬಾಂಬ್ ದಾಳಿಯಾಗಿ, ಇಡೀ ಜಪಾನ್ ದೇಶ ನಲುಗಿ ಹೋಗಿದ್ದ ಸಂದರ್ಭದಲ್ಲಿ ಯುವಜನಾಂಗ ಮೆಟ್ಟಿನಿಂತು, ಆ ದೇಶವನ್ನು ಪುನರ್ ನಿರ್ಮಾಣದಲ್ಲಿ ನೆರವಾದರು. ಕಾರಣ ಭಾರತೀಯ ಯುವಜನಾಂಗ ಕೂಡ ದೇಶ ನಿರ್ಮಾಣದಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳುವಂತೆ ಅವರು ಕರೆ ನೀಡಿದರು. ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ 150ನೇ ಜನ್ಮ ದಿನಾಚರಣೆ ಅರ್ಥಪೂರ್ಣವಾಗಿ ಆಚರಿಸಲು ಈ ರೀತಿಯ ಏಕತಾ ನಡಿಗೆ ಹಮ್ಮಿಕೊಂಡಿರುವುದು ಸಂತಸ ತಂದಿದೆ ಎಂದು ಹೇಳಿದರು.

### ಸಿಪೆಟ್: ವೃತ್ತಿಪರ ತರಬೇತಿಗೆ ಅರ್ಜಿ

• ಉದಯವಾಹಿನಿ, ಚಿತ್ರದುರ್ಗ

ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕೈಗಾರಿಕಾ, ವಾಣಿಜ್ಯ ನಿರ್ದೇಶನಾಲಯ ಹಾಗೂ ಕಾರ್ಪೋರೇಟ್ ಸಾಮಾಜಿಕ ಜವಬ್ದಾರಿ ಯೋಜನೆಯಡಿ ಪಾಲಿಮರ್ ಮತ್ತು ಪ್ಲಾಸ್ಟಿಟ್ ಕ್ಷೇತ್ರದಲ್ಲಿ ಉಚಿತ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಭಾರತ ಸರ್ಕಾರದ ಕೇಂದ್ರಿಯ ಪೆಟ್ರೋಕೆಮಿಕಲ್ಸ್ ತಂತ್ರಜ್ಞಾನ ಸಂಸ್ಥೆ ವತಿಯಿಂದ ಮೈಸೂರಿನ ಸಿಪೆಕ್‌ನಲ್ಲಿ ಎಲ್ಲಾ ವರ್ಗದ ಬಡ ನಿರುದ್ಯೋಗಿ ಯುವಕ ಹಾಗೂ ಯುವಕರಿಗೆ ಪಾಲಿಮರ್ ತಂತ್ರಜ್ಞಾನದಲ್ಲಿ 3 ರಿಂದ 6 ತಿಂಗಳ ಉಚಿತ ತರಬೇತಿಗಳನ್ನು ನೀಡಲಾಗುತ್ತಿದೆ. 18 ರಿಂದ 35 ವರ್ಷದೊಳಗಿನ, 2.5 ಲಕ್ಷದೊಳಗಿನ ಕುಟುಂಬ ಆದಾಯ ಹೊಂದಿರುವ 10 ತರಗತಿ ಉತ್ತೀರ್ಣರಾದ ವಿದ್ಯಾರ್ಥಿಗಳು ತರಬೇತಿ ಪಡೆಯಬಹುದಾಗಿದೆ. ಪ್ಲಾಸ್ಟಿಕ್ ಪ್ರೊಸೆಸಿಂಗ್‌ನಲ್ಲಿ ಅಸಿಸ್ಟೆಂಟ್ ಮೆಷಿನ್ ಅಪರೇಟರ್, ಮೆಷಿನ್ ಅಪರೇಟರ್ ಇಂಜಕ್ಷನ್ ಮೋಲ್ಡಿಂಗ್, ಮೆಷಿನ್ ಆಪರೇಟರ್, ಪ್ರೋಗ್ರಾಮರಗಳಿಗೆ ಕೌಶಲದ ತರಬೇತಿ ನೀಡಲಾಗುವುದು, ತರಬೇತಿ ನಂತರ ಉದ್ಯೋಗಾವಕಾಶವನ್ನು ಕಲ್ಪಿಸಿ ಕೊಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಸಿಪೆಟ್ ಕಛೇರಿ ದೂರವಾಣಿ ಸಂಖ್ಯೆ 9380756024, 9741719645, 9483431968 ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿ ಹಾಗೂ ಅರ್ಜಿ ದಾಖಲಾತಿ ವಿವರಗಳಿಗೆ ವೆಬ್‌ಸೈಟ್ www.cipet.gov.in ಭೇಟಿ ನೀಡಬಹುದು ಎಂದು ತರಬೇತಿ ವಿಭಾಗದ ವ್ಯವಸ್ಥಾಪಕ ಬಿ.ಎನ್. ಮೋಹನ್ ತಿಳಿಸಿದ್ದಾರೆ.

### ತೆರುವಾದ ಸ್ಥಾನಕ್ಕೆ ಉಳಿದ ಅವಧಿಗೆ ಹಣಮಂತರಾವ ನಾಮಪತ್ರ ಸಲ್ಲಿಕೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್‌ನ ಚಂದನಕೇರಾ ಸಾಮಾನ್ಯ ಸಾಲಗಾರರ ಕ್ಷೇತ್ರದ ತೆರುವಾದ ಒಂದು ಸ್ಥಾನಕ್ಕೆ ಉಳಿದ ಅವಧಿಗಾಗಿ ನ.18ರಂದು ನಡೆಯಲ್ಲಿರುವ ಚುನಾವಣೆಗೆ ಬಿಜೆಪಿ ಬೆಂಬಲಿತ ಅಭ್ಯರ್ಥಿ ಹಣಮಂತರಾವ ರಾಜೇಂದ್ರರಾವ ಮಂಗಳವಾರ ನಾಮಪತ್ರ ಸಲ್ಲಿಸಿದರು,ಒಟ್ಟಾರೆ ಚಂದನಕೇರಾ ಸಾಮಾನ್ಯ ಕ್ಷೇತ್ರದಲ್ಲಿ 62ಮತಗಳಿವೆ.

### ಛಲವಾದಿ ಸಮುದಾಯ ಭವನ ನಿರ್ಮಾಣ ಶೀಘ್ರ: ಶಾಸಕ

• ಉದಯವಾಹಿನಿ, ಜಗಳೂರು

ಪಟ್ಟಣದಲ್ಲಿ ಛಲವಾದಿ ಸಮುದಾಯ ಭವನವನ್ನು ಶೀಘ್ರವೇ ನಿರ್ಮಾಣ ಮಾಡಲಾಗುವುದು ಎಂದು ಶಾಸಕ ಬಿ. ದೇವೇಂದ್ರಪ್ಪ ಹೇಳಿದರು. ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ವೀರವನಿತೆ ಓಬವ್ವ ಜಯಂತ್ಯುತ್ಸವದಲ್ಲಿ ಮಾತನಾಡಿದ ಅವರು, ಸಮಾಜಕಲ್ಯಾಣ ಸಚಿವ ಎಚ್.ಸಿ ಮಹಾದೇವಪ್ಪ ಅನುದಾನ ಮಂಜೂರು ಮಾಡಿದ್ದಾರೆ ಎಂದರು. ಒನಕೆ ಓಬವ್ವಳ ಸ್ವಾಮಿನಿಷ್ಠೆ, ಶೌರ್ಯ ಈಗಿನ ಮಹಿಳೆಯರಿಗೆ ಸ್ಫೂರ್ತಿಯಾಗಬೇಕು. ಪುರುಷರ ಸಾಮರ್ಥ್ಯಕ್ಕೆ ಸರಿಸಮಾನವಾಗಿ ಹೋರಾಟ ನಡೆಸಿ ಇತಿಹಾಸದ ಪುಟದಲ್ಲಿ ಸೇರ್ಪಡೆಗೊಂಡಿದ್ದಾರೆ ಎಂದು ಹೇಳಿದರು. ಸರ್ಕಾರದಿಂದ ಆಚರಿಸುವ ಮಹನೀಯರ ಜಯಂತಿಗಳು ಜಾತ್ಯತೀತವಾಗಬೇಕಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ಮಕ್ಕಳ ನಿಮ್ಮ ಸಂಜೆಯನ್ನು ಉಲ್ಲಾಸಮಯವಾಗಿಸುತ್ತಾರೆ. ಮಂಕು ಕವಿದ, ಒತ್ತಡದ ದಿನಕ್ಕೆ ಮಂಗಳ ಹಾಡಲು ಒಂದು ಸಂತೋಷಕೂಟವನ್ನು ಯೋಜಿಸಿ. ಮಕ್ಕಳ ಸಾಂಗತ್ಯ ನಿಮ್ಮ ದೇಹವನ್ನು ಪುನಃಶ್ಚೇತನಗೊಳಿಸುತ್ತದೆ. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ.

**ವೃಷಭ** ನಿರೀಕ್ಷೆಗಳನ್ನು ಪೂರೈಸಲು ವೈಯಕ್ತಿಕ ಸಂಬಂಧ ದುರ್ಬಳಕೆ ಮಾಡುವುದು ನಿಮ್ಮ ಪತ್ನಿಗೆ ಕೋಪ ಬರಿಸುತ್ತದೆ. ನೀವು ವಿವಾಹಿತರಾಗಿದ್ದರೆ ಮಕ್ಕಳ ಬಗ್ಗೆ ವಿಶೇಷಕಾಳಜಿ ವಹಿಸಿ ಏಕೆಂದರೆ ನೀವು ಅದನ್ನು ಮಾಡದಿದ್ದರೆ ಆರೋಗ್ಯವು ಹದಗೆಡಬಹುದು, ಆರೋಗ್ಯದ ಮೇಲೆ ಬಹಳಷ್ಟು ಹಣ ಖರ್ಚು ಮಾಡಬೇಕಾಗುತ್ತದೆ.

**ಮಿಥುನ** ಮಾತನಾಡುವ ಮುನ್ನ ಯೋಚಿಸಿ. ತಿಳಿಯದೆ ನಿಮ್ಮ ಅಭಿಪ್ರಾಯಗಳು ಬೇರೊಬ್ಬರ ಭಾವನೆಗಳಿಗೆ ಧಕ್ಕೆಯುಂಟು ಮಾಡಬಹುದು. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ನಿಮ್ಮ ಮನೆಯ ಪರಿಸರದಲ್ಲಿ ಒಳ್ಳೆಯ ಬದಲಾವಣೆಗಳನ್ನು ಮಾಡುತ್ತೀರಿ.

**ಕರ್ಕಾಟಕ** ಒಳ್ಳೆಯ ಆರೋಗ್ಯ ಹೊಂದಿರುವುದರಿಂದ ಅದು ನಿಮಗೆ ಯಶಸ್ಸು ನೀಡುವ ಸಾಧ್ಯತೆಯಿದೆ. ಆದರೆ ನಿಮ್ಮ ಶಕ್ತಿಯನ್ನು ನಾಶಪಡಿಸುವ ಎಲ್ಲವನ್ನೂ ನೀವಿಂದು ತಪ್ಪಿಸಬೇಕು. ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ನೀವು ಕಲಿಯಬಹುದು, ಈ ಕೌಶಲ್ಯವನ್ನು ಕಲಿತು ಹಣವನ್ನು ಉಳಿಸಬಹುದು.

**ಸಿಂಹ** ಇಂದು ನೀವು ನಿಮ್ಮ ಆರೋಗ್ಯ , ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ಹಣದ ಲಾಭ ನಿಮ್ಮ ನಿರೀಕ್ಷೆಯಂತಿರುವುದಿಲ್ಲ. ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ. ಇಂದು ನೀವು ಕುರುಡು ಪ್ರೀತಿಯನ್ನು ಪಡೆಯಲು ಸಾಧ್ಯವಾಗುತ್ತದೆ.

**ಕನ್ಯಾ** ದುಃಖಿತರಾಗಿ, ಖಿನ್ನರಾಗಿರಬೇಡಿ. ನಿಮ್ಮ ಅವಾಸ್ತವಿಕ ಯೋಜನೆ ಹಣದ ಕೊರತೆಗೆ ಕಾರಣವಾಗುತ್ತದೆ. ನಿಮ್ಮ ಕುಟುಂಬದ ಸದಸ್ಯರು ನಿಮ್ಮ ಪ್ರಯತ್ನ, ಸಮರ್ಪಣೆಯನ್ನು ಪ್ರಶಂಸಿಸುತ್ತಾರೆ ನಿಮ್ಮ ಪ್ರೇಮಿಯೆಡೆಗೆ ಸೇಡು ಹೊಂದುವುದು ಯಾವುದೇ ಫಲ ತರುವುದಿಲ್ಲ? ಅದರ ಬದಲಿಗೆ ನೀವು ಶಾಂತರಾಗಿರಬೇಕು.

**ತುಲಾ** ಮಾತನಾಡುವ ಮುನ್ನ ಯೋಚಿಸಿ. ತಿಳಿಯದೆ ನಿಮ್ಮ ಅಭಿಪ್ರಾಯಗಳು ಬೇರೊಬ್ಬರ ಭಾವನೆಗಳಿಗೆ ಧಕ್ಕೆಯುಂಟು ಮಾಡಬಹುದು. ನಿಮ್ಮ ವೆಚ್ಚಗಳನ್ನು ನಿಯಂತ್ರಿಸಲು ಪ್ರಯತ್ನಿಸಿ, ತುಂಬಾ ಖರ್ಚು ಮಾಡಬೇಡಿ. ಕುಟುಂಬ, ಪ್ರೀತಿಪಾತ್ರರು ತನ್ನ ಮನಸ್ಥಿತಿಯನ್ನು ನಿಮ್ಮ ಮುಂದೆ ಇಡಲು ಸಾಧ್ಯವಾಗುವುದಿಲ್ಲ.

**ವೃಶ್ಚಿಕ** ಜೀವನವನ್ನು ಲಘುವಾಗಿ ತೆಗೆದುಕೊಳ್ಳಬೇಡಿ ನೆನಪಿಡಿ, ಬದುಕಿನ ರಕ್ಷಣೆ ನಿಜವಾದ ಆಣೆ. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಸಾಧ್ಯತೆ ಇದೆ. ನಿಮ್ಮ ಮಾಮ, ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ.

**ಧನಸ್ಸು** ಅಭದ್ರತೆ, ದಿಗ್ಭ್ರಮೆಯ ಭಾವನೆ ತಲೆತಿರುಗುವಿಕೆಯನ್ನು ಉಂಟುಮಾಡಬಹುದು. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು.

**ಮಕರ** ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ. ನೀವು ನಿಮ್ಮ ಕೋಪವನ್ನು ನಿಯಂತ್ರಿಸಿ, ಕಚೇರಿಯಲ್ಲಿ ಎಲ್ಲರೊಂದಿಗೆ ಉತ್ತಮವಾಗಿ ವರ್ತಿಸಿ., ಆಗೇ ನೀವು ಮಾಡದಿದ್ದರೆ ನಿಮ್ಮ ಕೆಲಸ ಹೋಗಬಹುದು. ಸ್ನೇಹಿತರೊಂದಿಗಿನ ಸಂಜೆ ಹೆಚ್ಚು ಮನರಂಜನೀಯವಾಗಿರುತ್ತದೆ.

**ಕುಂಭ** ದೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ನಿಕಟ ಸಂಬಂಧಿಗಳ ಮನೆಗೆ ಹೋಗುವುದರಿಂದ ನಿಮ್ಮ ಆರ್ಥಿಕ ಪರಿಸ್ಥಿತಿ ಹಾಳಾಗಬಹುದು. ಮಕ್ಕಳು ನಿಮ್ಮ ನಿರೀಕ್ಷೆಗಳನ್ನು ಪೂರೈಸಲು ವಿಫಲವಾಗಿ ನಿಮಗೆ ನಿರಾಶೆಯುಂಟುಮಾಡಬಹುದು. ನಿಮ್ಮ ಕನಸು ನನಸಾಗಿಸಲು ನೀವು ಅವರನ್ನು ಪ್ರೋತ್ಸಾಹಿಸಬೇಕು.

**ಮೀನ** ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ, ಆನಂದವನ್ನು ಹಂಚಿಕೊಳ್ಳಿ. ಇಂದು ಷೇರು ಮಾರುಕಟ್ಟೆಯಲ್ಲಿ ಹಣವನ್ನು ಹೂಡಿಕೆ ಮಾಡುವವರು ತಮ್ಮ ಹಣವನ್ನು ಕಳೆದುಕೊಳ್ಳಬಹುದು. ಸಮಯಕ್ಕೆ ನೀವು ಜಾಗರೂಕರಾಗಿದ್ದರೆ ಅದು ಉತ್ತಮ. ಕುಟುಂಬದ ಸದಸ್ಯರು ಬೆಂಬಲ ನೀಡಿದರೂ ಬೇಡಿಕೆಯಿಡುತ್ತಾರೆ.

# ಏಕತಾ ನಡಿಗೆಗೆ ಸಂಸದ ಗೋವಿಂದ ಎಂ ಕಾರಜೋಳ ಚಾಲನೆ

• ಉದಯವಾಹಿನಿ, ಚಿತ್ರದುರ್ಗ

ಸರ್ದಾರ್ ವಲ್ಲಭಾಯಿ ಪಟೇಲ್ ಅವರ 150ನೇ ಜನ್ಮ ದಿನಾಚರಣೆ ಅಂಗವಾಗಿ ಬುಧವಾರ ಆಯೋಜಿಸಲಾದ ಏಕತಾ ನಡಿಗೆಗೆ ಸಂಸದ ಗೋವಿಂದ ಎಂ ಕಾರಜೋಳ ನಗರದ ಹೊಳಲ್ಕೆರೆ ರಸ್ತೆಯಲ್ಲಿನ ಕನಕ ಸರ್ಕಲ್ ಬಳಿ ಚಾಲನೆ ನೀಡಿದರು.

ಮೊದಲಿಗೆ ಸರ್ಧಾರ್ ವಲ್ಲಭಾಯಿ ಪಟೇಲ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದ ಅವರು, ನಂತರ ಹಸಿರು ನಿಶಾನೆ ತೋರುವ ಏಕತಾ ನಡಿಗೆಗೆ ಚಾಲನೆ ನೀಡಿದರು.

ಮೈ ಭಾರತ್ ಸ್ವಯಂ ಸೇವಕರು, ಎನ್‌ಸಿಸಿ ಕೆಡಿಟ್‌ಗಳು, ಎನ್.ಎಸ್.ಎಸ್ ಸ್ವಯಂ ಸೇವಕರು, ಕ್ರೀಡಾಪಟಗಳು, ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಏಕತಾ ನಡಿಗೆಯಲ್ಲಿ ಪಾಲ್ಗೊಂಡಿದ್ದರು. ಕನಕ ವೃತ್ತದಿಂದ ಆರಂಭವಾದ ಏಕತಾ ನಡಿಗೆ ಸಂಗೊಳ್ಳಿ ರಾಯಣ್ಣ ವೃತ್ತ, ಗಾಂಧಿ ವೃತ್ತ, ರಾಣಿ ಚೆನಮ್ಮ ವೃತ್ತ, ಅಂಬೇಡ್ಕರ್ ವೃತ್ತ, ಮದಕರಿ ನಾಯಕ ವೃತ್ತದ ಮೂಲಕ ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣ ತಲುಪಿತು.


ಉದಯವಾಹಿನಿ ಚಿತ್ರ

ಜಿಲ್ಲಾ ಕ್ರೀಡಾಂಗಣದಲ್ಲಿನ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಸಂಸದ ಗೋವಿಂದ ಎಂ ಕಾರಜೋಳ ದೇಶದ ಎಲ್ಲಡೆ ಅಕ್ಟೋಬರ್ 31 ರಿಂದ ನವೆಂಬರ್ 25 ವರೆಗೆ ಸರ್ದಾರ್ ವಲ್ಲಭಾಯ್ ಪಟೇಲ್ ಜನ್ಮದಿನಾಚರಣೆ ಆಚರಿಸಲಾಗುತ್ತಿದೆ. ಇದರ ಅಂಗವಾಗಿ ಮಕ್ಕಳಿಗೆ ವಲ್ಲಭಾಯ್ ಪಟೇಲ್ ಅವರ ಕುರಿತು ಪ್ರಬಂಧ ಸ್ಪರ್ಧೆ, ಚರ್ಚಾ ಸ್ಪರ್ಧೆಗಳನ್ನು ಆಯೋಜಿಸಿ ಜಾಗೃತಿ ಮೂಡಿಸಲಾಗಿದೆ ಎಂದು ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾತನಾಡಿ ಪ್ರತಿಯೊಬ್ಬರು ಸರ್ದಾರ್ ವಲ್ಲಭಾಯ್ ಪಟೇಲ್ ಅವರ ಜೀವನ ಚರಿತ್ರೆಯನ್ನು ಓದಬೇಕು. ಸ್ವಾತಂತ್ರ್ಯ ಹೋರಾಟದಲ್ಲಿ ಅವರ ಕೊಡುಗೆಯನ್ನು ಮಹತ್ವವನ್ನು ಅರಿತುಕೊಳ್ಳಬೇಕು. ಸ್ವಾತಂತ್ರ್ಯ ಬಂದ ನಂತರ ದೇಶದಲ್ಲಿದ್ದ ಎಲ್ಲಾ ರಾಜ ಸಂಸ್ಥಾನಗಳನ್ನು ಒಂದು ಮಾಡುವಲ್ಲಿ ವಲ್ಲಭಾಯ್ ಪಟೇಲ್ ಕೊಡುಗೆ ಮುಖ್ಯವಾಗುವುದು ಎಂದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಮೇರಾ ಯುವ ಭಾರತ್‌ನ ಜಿಲ್ಲಾ ಯುವಜನ ಅಧಿಕಾರಿ ಸ್ನೇಹಲತಾ, ಗಣ್ಯರಾದ ಕೆ.ಟಿ. ಕುಮಾರಸ್ವಾಮಿ ಸೇರಿದಂತೆ ಮತ್ತಿತರು ಉಪಸ್ಥಿತರಿದ್ದರು.

# ಮುಂಗಾರು ಬೆಳೆ ಹಾನಿ, ಕಲಬುರಗಿ ರೈತರಿಗೆ ಮೊದಲ ಕಂತಿನ ಹಣ ಬಿಡುಗಡೆ

## ಅತಿವೃಷ್ಟಿ, ಪ್ರವಾಹದಿಂದ ಹಾನಿಗೀಡಾದ ಮುಂಗಾರಿನ ಬೆಳೆಗೆ ಮೊದಲ ಹಂತದಲ್ಲಿ 268 ಕೋಟಿ ರೂ. ಪರಿಹಾರ ಮಂಜೂರು

• ಉದಯವಾಹಿನಿ, ಕಲಬುರಗಿ

ಅತಿವೃಷ್ಟಿ ಮತ್ತು ಪ್ರವಾಹದಿಂದ ಹಾನಿಗೀಡಾದ ಮುಂಗಾರಿನ ಬೆಳೆಗೆ ಪರಿಹಾರವಾಗಿ ಮೊದಲ ಕಂತಿನಲ್ಲಿ ಜಿಲ್ಲೆಗೆ 268 ಕೋಟಿ ಮಂಜೂರಾಗಿದೆ. ಕನಿಷ್ಠ ಒಂದು ಹೆಕ್ಟೇರ್ ಖುಷ್ಕಿ ಜಮೀನಿನ ಬೆಳೆ ಹಾಳಾದ ಪ್ರತಿ ರೈತರ ಖಾತೆಗೆ 8,500 ರೂ. ಹಣ ಶೀಘ್ರ ಬರಲಿದೆ. ಮುಂಗಾರಿನ ಆಗಸ್ಟ್, ಸೆಪ್ಟೆಂಬರ್‌ನಲ್ಲಿ ಸುರಿದ ಭಾರಿ ಮಳೆ ಹಾಗೂ ಭೀಮೆಯ ನೆರೆಯಿಂದ ಅಪಾರ ಪ್ರಮಾಣದ ಬೆಳೆ ಹಾನಿ ಸಂಭವಿಸಿತ್ತು.

- **ಸುಮಾರು 3.07 ಲಕ್ಷ ಹೆಕ್ಟೇರ್ ಬೆಳೆ ನಷ್ಟಕ್ಕೆ 4,15,989 ರೈತರಿಗೆ ಪ್ರತಿ ಹೆಕ್ಟೇರ್‌ಗೆ ಸಿಗಲಿದೆ 8,500 ರೂ.**
- **ಈ ಬಾರಿ ಆಳಂದ ತಾಲ್ಲೂಕಿನಲ್ಲಿ ಗರಿಷ್ಠ 48,574 ಹೆಕ್ಟೇರ್ ಬೆಳೆ ಹಾನಿ, 41.9 ಕೋಟಿಯಷ್ಟು ಪರಿಹಾರ ಬಿಡುಗಡೆ**

ನಂತರ ಕಂದಾಯ, ಕೃಷಿ ಇಲಾಖೆ ಜಂಟಿ ಸಮೀಕ್ಷೆಯಲ್ಲಿ ಸುಮಾರು 3.07 ಲಕ್ಷ ಹೆಕ್ಟೇರ್ ಬೆಳೆ ಹಾಳಾಗಿದೆ ಎಂದು ರಾಜ್ಯ ಸರಕಾರಕ್ಕೆ ವರದಿ ಸಲ್ಲಿಕೆ ಮಾಡಿದ್ದವು. ಅದರ ಆಧಾರದ ಮೇಲೆ 4,15,989 ರೈತರಿಗೆ ಮೊದಲ ಹಂತದಲ್ಲಿ ಸುಮಾರು 268.33 ಕೋಟಿ ರೂ. ಬಿಡುಗಡೆಯಾಗಿದೆ ಎಂದು ಕೃಷಿ ಇಲಾಖೆ ಅಧಿಕಾರಿಗಳು ಖಚಿತಪಡಿಸಿದ್ದಾರೆ. ರಾಜ್ಯ ಹಾಗೂ ಕೇಂದ್ರ ಸರಕಾರದ ಸಹಯೋಗದಲ್ಲಿ ಮೊದಲ ಹಂತದ ಪರಿಹಾರ ಬಿಡುಗಡೆ ಮಾಡಲಾಗಿದೆ. ಇನ್ನುಳಿದಂತೆ ಎರಡನೇ ಹಂತದ ಹೆಚ್ಚುವರಿ ಪರಿಹಾರವು ಕೂಡ ಶೀಘ್ರ ಬರಲಿದೆ ಎನ್ನುತ್ತಾರೆ ಅಧಿಕಾರಿಗಳು.


ಉದಯವಾಹಿನಿ ಚಿತ್ರ

**ಹೆಚ್ಚು ಮಂಜೂರು**

**ಈ ಬಾರಿ ಆಳಂದ ತಾಲ್ಲೂಕಿನಲ್ಲಿ ಸುಮಾರು 48,574 ಹೇಕ್ಟೇರ್ ಬೆಳೆ ಹಾಳಾಗುವುದರ ಮೂಲಕ ಅತಿ ಹೆಚ್ಚು ಬೆಳೆ ಹಾನಿ ಸಂಭವಿಸಿತ್ತು. ಅದರಂತೆ ಆಳಂದ ತಾಲ್ಲೂಕಿಗೆ ಸುಮಾರು 41.9 ಕೋಟಿ ರೂ. ಪರಿಹಾರ ಮಂಜೂರಾಗಿದೆ. ಇನ್ನು ಶಹಾಬಾದ್‌ನಲ್ಲಿ ಕೇವಲ 6,545 ಹೆಕ್ಟೇರ್ ಬೆಳೆ ಹಾನಿಯಾಗಿದ್ದು, 5.7 ಕೋಟಿ ರೂ. ಪರಿಹಾರ ಮಂಜೂರು ಆಗಿದೆ.**

**ಬರಲಿದೆ ಮತ್ತೊಂದು ಕಂತು:** ಮುಂಗಾರಿನ ಬೆಳೆ ಹಾನಿಗೆ ಎನ್‌ಡಿಆರ್‌ಎಫ್‌ನ ನಿಯಮದಂತೆ, ಪ್ರತಿ ಹೆಕ್ಟೇರ್‌ಗೆ 8500 ರೂ. ಪರಿಹಾರ ನೀಡಬೇಕಿತ್ತು. ಆದರೆ, ಕರ್ನಾಟಕದಲ್ಲಿ ಹಲವು ಜಿಲ್ಲೆಗಳು ಅತಿವೃಷ್ಟಿಗೆ ತುತ್ತಾಗಿದ್ದವು. ಸತತ ಮಳೆಯಿಂದ ಬೆಳೆ ಹಾಳಾಗಿರುವುದನ್ನು ಸೆ.30ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಖುದ್ದಾಗಿ ತಮ್ಮ ಸಂಪುಟದ ಸಚಿವರೊಂದಿಗೆ ವೀಕ್ಷಣೆ ಮಾಡಿದ್ದರು. ನಂತರ ಎನ್‌ಡಿಆರ್‌ಎಫ್ ಪರಿಹಾರದ ಜತೆ ಪ್ರತಿ ಹೆಕ್ಟೇರ್‌ಗೆ 8,500 ರೂ. ಹೆಚ್ಚಿನ ಪರಿಹಾರ ಘೋಷಣೆ ಮಾಡಿ ಹೋಗಿದ್ದರು. ಇದೀಗ ಕೇಂದ್ರ ಮತ್ತು ರಾಜ್ಯ ಸರಕಾರಗಳ ಪರಿಹಾರ ಬಂದಿದೆ. ಇನ್ನೊಂದು ಕಂತಿನಲ್ಲಿಯೂ ಸುಮಾರು 250 ಕೋಟಿ ರೂ. ಪರಿಹಾರ ಬರುವ ಅಂದಾಜಿದೆ.

**ವಾರದೊಳಗೆ ಖಾತೆಗೆ**

**ಬೆಳೆ ಪರಿಹಾರಕ್ಕೆ ಆಯಾ ತಾಲ್ಲೂಕುಗಳಲ್ಲಿ ರೈತರ ಅಂತಿಮ ಪಟ್ಟಿ ಪರಿಷ್ಕರಣೆ ಮತ್ತು ತಹಶೀಲ್ದಾರ್ ಅಪ್ರೂವಲ್ ಕೆಲಸ ನಡೆದಿದೆ. ಎಲ್ಲಾ ತಾಲ್ಲೂಕುಗಳಲ್ಲಿ ಅಪ್ರೂವಲ್ ಆದ ಕೂಡಲೇ ರೈತರ ಖಾತೆಗೆ ಪರಿಹಾರ ಹಣದ ವರ್ಗಾವಣೆ ಶುರುವಾಲಿದೆ. ಕನಿಷ್ಠ ಒಂದು ವಾರದೊಳಗೆ ಎಲ್ಲಾ ಪ್ರಕ್ರಿಯೆ ಮುಗಿದು ಹಣ ಜಮಾ ಶುರುವಾಗಲಿದೆ ಎಂದು ಕೃಷಿ ಇಲಾಖೆ ಅಧಿಕಾರಿಗಳು ವಿಶ್ವಾಸ ವ್ಯಕ್ತಪಡಿಸುತ್ತಾರೆ.**

# ಚಿತ್ರದುರ್ಗ ಸ್ವದೇಶಿ ಮೇಳದಲ್ಲಿ ಜನಾಕರ್ಷಣೆಗೊಂಡ ಚಿತ್ರಪ್ರದರ್ಶನ

• ಉದಯವಾಹಿನಿ, ಚಿತ್ರದುರ್ಗ

ನಗರದ ಮುರುಘರಾಜೇಂದ್ರ ಕ್ರೀಡಾಂಗಣದಲ್ಲಿ ಸ್ವದೇಶಿ ಜಾಗರಣ ಮಂಚ್ ಇವರು ಇದೇ ನವೆಂಬರ್ 12 ರಿಂದ 16ರವರೆಗೆ ಆಯೋಜಿಸಿರುವ ಸ್ವದೇಶಿ ಮೇಳವನ್ನು ಬುಧವಾರ ಬೆಳಿಗ್ಗೆ ಯಾದವ ಮಠದ ಶ್ರೀ ಕೃಷ್ಣಯಾದವನಂದ ಶ್ರೀಗಳು ಗೋವನ್ನು ಪೂಜೆ ಮಾಡುವುದರ ಮೂಲಕ ಚಾಲನೆಯನ್ನು ನೀಡಿದರು.

ದೇಸಿ ಸಂಸ್ಕೃತಿ, ದೇಸಿ ಆಟ, ಆಹಾರ, ಕ್ರೀಡೆ, ಸಾವಯವ ಕೃಷಿ, ಆಯುರ್ವೇದ ಚಿಕಿತ್ಸೆ, ದೇಸಿ ಉತ್ಪನ್ನಗಳ ಮಾರಾಟ, ಪ್ರದರ್ಶನ ಒಳಗೊಂಡ ಸ್ವಾವಲಂಬನೆಯ ಪರಿಕಲ್ಪನೆ ಮೂಡಿಸುವ ಸುಮಾರು 200ಕ್ಕೂ ಹೆಚ್ಚು ಪ್ರದರ್ಶನ ಹಾಗೂ ಮಾರಾಟ ಮಳಿಗೆಗಳನ್ನು ಸ್ಥಾಪಿಸಲಾಗಿದೆ. ಈ ಸ್ವದೇಶಿ ಮೇಳದ ಮುಖ್ಯ ಆಕರ್ಷಣೆಯಾಗಿರುವುದು ಸ್ಥಳೀಯ ಚಿತ್ರ ಕಲಾವಿದರಾದ ನಾಗರಾಜ್ ಬೇದ್ರೆ, ನವೀನ್ ಬೇದ್ರೆ, ಮಾರುತಿ ಇವರು ರಚಿಸಿರುವ ಚಿತ್ರಗಳು ಜನಾಕರ್ಷಣೆಗೊಂಡು ದಾಖಲೆ ಬೆಲೆಯಲ್ಲಿ ಮಾರಾಟ ವಾಗುತ್ತಿವೆ .


ಉದಯವಾಹಿನಿ ಚಿತ್ರ

ಈ ಕುರಿತು ಮಾತನಾಡಿದ ಚಿತ್ರ ಕಲಾವಿದ ನಾಗರಾಜ್ ಬೇದ್ರೆ ಚಿತ್ರ ಪ್ರದರ್ಶನಗಳು ಕಲಾವಿದರಿಗೆ ಕಲೆ ಪ್ರೀತಿ ಮತ್ತು ಸಾಧನೆ ಹೊರಹೊಮ್ಮಿಸುವ ಅವಕಾಶವನ್ನು ಒದಗಿಸುತ್ತವೆ ಸ್ವದೇಶಿ ಮೇಳದಲ್ಲಿ ಚಿತ್ರಪ್ರದರ್ಶನಕ್ಕೆ ಜನರಿಂದ ಅಭೂತಪೂರ್ವ ಬೆಂಬಲ ದೊರೆತಿರುವುದು ಸಂತಸ ತಂದಿದೆ ಎಂದರು.

# ಮುಂದುವರಿದ ಕಬ್ಬು ಬೆಳೆಗಾರರ ಪ್ರತಿಭಟನೆ

• ಉದಯವಾಹಿನಿ, ಹಾವೇರಿ

ಸರ್ಕಾರ ಘೋಷಣೆ ಮಾಡಿದ ಕಬ್ಬಿನ ಬೆಲೆಯನ್ನ ನೀಡಬೇಕು ಎಂದು ಆಗ್ರಹಿಸಿ ಹಾವೇರಿಯಲ್ಲಿ ಕಬ್ಬು ಬೆಳೆಗಾರರ ಪ್ರತಿಭಟನೆ ಮುಂದುವರೆದಿದೆ. ಹಾವೇರಿಯ ಮೈಲಾರ ಮಹಾದೇವಪ್ಪ ವೃತ್ತದಲ್ಲಿ ಪ್ರತಿಭಟನೆ ನಡೆಸಿ ಸರ್ಕಾರದ ಹಾಗೂ ಕಾರ್ಖಾನೆಯ ಮಾಲೀಕರ ವಿರುದ್ಧ ರೈತರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸರ್ಕಾರ 3,300 ರುಪಾಯಿ ಘೋಷಣೆ ಮಾಡಿದೆ. ಅದರೆ ಮೂರು ಕಾರ್ಖಾನೆಗಳು 2,700 ರೂ. ಮತ್ತು 2,800 ರೂ. ಕೊಡಲು ಮುಂದೆ ಬರುತ್ತಿದ್ದಾರೆ. ಸರ್ಕಾರ ಘೋಷಣೆ ಮಾಡಿದ ಕಬ್ಬಿನ ದರ ಕೊಡಬೇಕು ಎಂದು ಆಗ್ರಹಿಸಿದ್ದಾರೆ. ಸರ್ಕಾರ ಜಿಲ್ಲಾಡಳಿತ ಸರ್ಕಾರ ಘೋಷಣೆ ಮಾಡಿದ ದರ ಕೊಡದಿದ್ದರೆ, ಕಾರ್ಖಾನೆಗೆ ಬೀಗ ಹಾಕುವ ಎಚ್ಚರಿಕೆ ನೀಡಿದ್ದಾರೆ.

ಸಂಗೂರು ಸಕ್ಕರೆ ಸಹಕಾರಿ ಸಂಘಕ್ಕೆ ವಾಪಸು ತೆಗೆದುಕೊಂಡರೆ ರೈತರಿಗೆ ಸೂಕ್ತವಾದ ಬೆಲೆ ಕೊಡಬೇಕು. ಕಾರ್ಖಾನೆ ಮಾಲೀಕರು ಹುಲಿ ಹಾಲು ಕುಡಿದಿಲ್ಲ. ಅವರಿಗೆ ಖಡಕ್ ಸೂಚನೆ ನೀಡಬೇಕು. ನಾವು ಯಾವುದೇ ಕಾರಣಕ್ಕೂ ವಾಪಸ್ ಪಡೆಯುವುದಿಲ್ಲ. ಇಲ್ಲದಿದ್ದರೆ ನಾವು ಇಂದು ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಿ ಪ್ರತಿಭಟನೆ ಮಾಡುವುದಾಗಿ ಎಚ್ಚರಿಕೆ ಕೊಟ್ಟಿದ್ದಾರೆ.

# 3,500 ರೂ. ಬೇಕೇ ಬೇಕು ಉಗ್ರ ಸ್ವರೂಪ ಪಡೆದ ಹೋರಾಟ

• ಉದಯವಾಹಿನಿ, ಬಾಗಲಕೋಟೆ

ಕಬ್ಬು ಬೆಳೆಗೆ ಆಗ್ರಹಿಸಿ ಮುಧೋಳ ಭಾಗದ ಕಬ್ಬು ಬೆಳೆದ ರೈತರು ನಡೆಸುತ್ತಿರುವ ಹೋರಾಟ ಈಗ ಉಗ್ರಸ್ವರೂಪವನ್ನು ಪಡೆದುಕೊಂಡಿದೆ. ಮುಧೋಳ ನಗರದ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ನಡೆಯುತ್ತಿದ್ದ ಹೋರಾಟ ತಾಲ್ಲೂಕಿನ ಪ್ರತೀ ಹಳ್ಳಿ ಹಳ್ಳಿಗೂ ವ್ಯಾಪಿಸಿದೆ. ಬೇರೆ ಬೇರೆ ಊರುಗಳಿಗೆ ಸಂಪರ್ಕ ಕಲ್ಪಿಸುವ ತಾಲ್ಲೂಕು ರಸ್ತೆ, ಜಿಲ್ಲಾ ರಸ್ತೆ, ರಾಜ್ಯ ಹೆದ್ದಾರಿ ರಸ್ತೆಗಳನ್ನು ಬಂದ್ ಮಾಡಿ ರೈತರು ಕಬ್ಬಿನ ಬೆಲೆಗಾಗಿ ಪ್ರತಿಭಟನೆ ನಡೆಸಿದ್ದಾರೆ. ಮುಧೋಳ ತಾಲ್ಲೂಕಿನ ಕಸಬಾ ಜಂಬಗಿ ಕ್ರಾಸ್‌ನಲ್ಲಿ ರಾಜ್ಯ ಹೆದ್ದಾರಿ ಬಂದ್ ಮಾಡಿದ ರೈತರು, ರಸ್ತೆಯಲ್ಲಿ ಅಡುಗೆ ಮಾಡಿ, ಉಪಹಾರ ಮಾಡುವ ಮೂಲಕ ನಮ್ಮ ಬದುಕು ಬೀದಿಗೆ ಬಂದಿದೆ ಎಂದು ಪ್ರತಿಭಟನೆಯ ಮೂಲಕ ಆಕ್ರೋಶ ವ್ಯಕ್ತ ಪಡಿಸ್ತಿದ್ದಾರೆ. ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸುತ್ತಿರುವ ರೈತರು ಟನ್ ಕಬ್ಬಿಗೆ 3500 ಸಿಗೋವರೆಗೂ ಹೋರಾಟ ಮಾಡುತ್ತೇವೆ ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡುತ್ತಿದ್ದಾರೆ.

# ಮದ್ಯ ಸೇವಿಸಿದ್ದಕ್ಕೆ ಅಪ್ಪ ಬೈತಾರೆಂದು 13ರ ಬಾಲಕ ಆತ್ಮಹತ್ಯೆ

• ಉದಯವಾಹಿನಿ, ಚಿಕ್ಕಮಗಳೂರು


ಸ್ನೇಹಿತರ ಜೊತೆ ಮದ್ಯ ಸೇವಿಸಿ ಅಪ್ಪನಿಗೆ ಗೊತ್ತಾದ್ರೆ ಬೈಯುತ್ತಾರೆ ಅಂತ 13 ವರ್ಷದ ಬಾಲಕ ಆತ್ಮಹತ್ಯೆಗೆ ಶರಣಾಗಿರುವ ಘಟನೆ ಚಿಕ್ಕಮಗಳೂರು ಜಿಲ್ಲೆ ಎನ್‌ಆರ್‌ಪುರ ತಾಲ್ಲೂಕಿನ ಬಾಳೆಹೊನ್ನೂರು ಸಮೀಪದ ಮೇಲ್ಪಾಲ್ ಗ್ರಾಮದಲ್ಲಿ ನಡೆದಿದೆ. ಮೃತನನ್ನ 13 ವರ್ಷದ ಶರಣ್ ಎಂದು ಗುರುತಿಸಲಾಗಿದೆ. ಶರಣ್ ಮೇಲ್ಪಾಲ್ ಗ್ರಾಮದ ಸರ್ಕಾರಿ ಪ್ರೌಢ ಶಾಲೆಯಲ್ಲಿ 9ನೇ ತರಗತಿ ಓದುತ್ತಿದ್ದ. ಮೇಲ್ಪಾಲ್ ಗ್ರಾಮದಲ್ಲಿ ಅದೇ ಗ್ರಾಮಸ್ಥರ ಮದುವೆ ಕಾರ್ಯಕ್ರಮವಿತ್ತು. ಮದುವೆಗೆ ಶರಣ್ ಸೇರಿ ಪೋಷಕರು ಹೋಗಿದ್ದರು. ಮದ್ವೆ ಮನೆಯಲ್ಲಿ ಶರಣ್ ಸ್ನೇಹಿತರ ಜೊತೆ ಸೇರಿ ಮದ್ಯ ಸೇವಿಸಿದ್ದಾನೆ. ಮದ್ಯ ಸೇವಿಸಿದ ಬಳಿಕ ಕುಡಿದಿರುವುದು ಅಪ್ಪನಿಗೆ ಗೊತ್ತಾದರೆ ಬೈಯುತ್ತಾರೆ ಎಂದು ಮನೆ ಬಳಿಯೇ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ. ಇದನ್ನ ಗಮನಿಸಿದ ಪೋಷಕರು ಕೂಡಲೇ ಆತನನ್ನ ಬಾಳೆಹೊನ್ನೂರು ಸರ್ಕಾರಿ ಆಸ್ಪತ್ರೆಗೆ ಕರೆತಂದಿದ್ದಾರೆ. ಅಷ್ಟರಲ್ಲೇ ಬಾಲಕ ಶರಣ್ ಸಾವನ್ನಪ್ಪಿದ್ದಾನೆ. ಬಾಳೆಹೊನ್ನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬೇಸಿಗೆ ಬೆಳೆಗೂ ನೀರು ಕೊಡೆಂದು ರೈತರ ಪಾದಯಾತ್ರೆ

• ಉದಯವಾಹಿನಿ, ಬಳ್ಳಾರಿ

ತುಂಗಭದ್ರಾ ಅಚ್ಚುಕಟ್ಟು ಪ್ರದೇಶಕ್ಕೆ ಬೇಸಿಗೆ ಬೆಳೆಗೂ ನೀರು ನೀಡಬೇಕೆಂದು ಆಗ್ರಹಿಸಿ ರಾಜ್ಯ ರೈತ ಸಂಘದ ಅಧ್ಯಕ್ಷ ಮಾಧವ ರೆಡ್ಡಿ ನೇತೃತ್ವದಲ್ಲಿ ಬುಧವಾರ ಸಿರುಗುಪ್ಪ ತಾಲ್ಲೂಕಿನ ಕರೂರು ಗ್ರಾಮದಿಂದ ಟಿಬಿ ಡ್ಯಾಂವರೆಗೆ ಪಾದಯಾತ್ರೆ ಆರಂಭಿಸಿದೆ. ಕರೂರಿನಿಂದ ಆರಂಭಗೊಂಡಿರುವ ಪಾದಯಾತ್ರೆ ಕುರುಗೋಡು, ಎಮ್ಮಿಗನೂರು, ಕಂಪ್ಲಿ, ಕಮಲಾಪುರ ಮೂಲಕ ಸಾಗಿ ನ.17ಕ್ಕೆ ತುಂಗಭದ್ರಾ ಜಲಾಶಯದ ಎದುರು ಸೇರಲಿದೆ. ನಂತರ ಅನಿರ್ದಿಷ್ಟಾವಧಿ ಧರಣಿ ನಡೆಯಲಿದೆ.

# ನಕಲಿ ವೈದ್ಯರ ಹಾವಳಿ ತಡೆಗಟ್ಟಿ: ಕರವೇ ಪ್ರತಿಭಟನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ರಾಣೆಬೆನ್ನೂರು

ತಾಲ್ಲೂಕಿನಲ್ಲಿನ ನಕಲಿ ವೈದ್ಯರ ಹಾವಳಿಯನ್ನು ತಡೆಯಬೇಕು ಎಂದು ಒತ್ತಾಯಿಸಿ ಕರವೇ ತಾಲ್ಲೂಕು ಸಮಿತಿ ಪದಾಧಿಕಾರಿಗಳು ಪ್ರತಿಭಟನೆ ನಡೆಸಿದರು. ನಂತರ ತಾಲ್ಲೂಕು ಆರೋಗ್ಯ ಅಧಿಕಾರಿ ಡಾ.ರಾಜೇಶ್ವರಿ ಕದರಮಂಡಲಗಿ ಅವರಿಗೆ ಮನವಿ ಸಲ್ಲಿಸಿದರು.

ಜಿಲ್ಲಾ ಕಾರ್ಮಿಕ ಸಂಘಟನೆ ಅಧ್ಯಕ್ಷ ಮಲ್ಲಿಕಾರ್ಜುನ ತೆಗ್ಗಿನ ಮಾತನಾಡಿ, ಗ್ರಾಮೀಣ ಭಾಗದ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯ ಸಿಬ್ಬಂದಿಯ ಕೊರತೆಯಿಂದಾಗಿ ನಕಲಿ ವೈದ್ಯರ ಹಾವಳಿ ಹೆಚ್ಚಾಗಲು ಕಾರಣವಾಗಿದೆ. ಇವರು ಕೊಡುವ ಚಿಕಿತ್ಸೆಗೆ ಅಮಾಯಕರು ಬಲಿಯಾಗುತ್ತಿದ್ದಾರೆ. ತಮ್ಮ ನೋವು, ಬಾಧೆಗಳನ್ನು ತಾಳಲಾರದೇ ನಕಲಿ ವೈದ್ಯರ ಬಳಿ ಹೋಗಿ ಅವರು ಕೇಳಿದಷ್ಟು ಹಣ ಕೊಟ್ಟು ಅವರು ಕೊಡುವ ಚುಚ್ಚು ಮದ್ದು ಮತ್ತು ಔಷಧಿ ಪಡೆಯುತ್ತಾರೆ ಎಂದು ದೂರಿದರು.

ಇದರಿಂದ ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿನ ಜನತೆ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ಬಡ ಜನರು ಬಲಿಯಾಗುತ್ತಿದ್ದಾರೆ. ನಕಲಿ ವೈದ್ಯರು ಸರ್ಕಾರಿ ನಿಯಮಗಳನ್ನು ಗಾಳಿಗೆ ತೂರಿ ಚಿಕಿತ್ಸೆ ನೀಡಿ ಔಷಧಿ ನೀಡುತ್ತಾರೆ. ತಾಲ್ಲೂಕು ಆರೋಗ್ಯ ಅಧಿಕಾರಿಗಳು ನಕಲಿ ವೈದ್ಯರ ಪರವಾನಗಿ ಮತ್ತು ವಿದ್ಯಾಹರ್ತೆ ಪರಿಸೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ತೀವ್ರ ತರವಾದ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಬಿಎಎಂಎಸ್, ಬಿಎಚ್‌ಎಂಎಸ್ ಓದಿದ ಆಯರ್ವೇದ ವೈದ್ಯರು ಕೂಡ ಆಯುರ್ವೇದ ಔಷಧಿ, ಚಿಕಿತ್ಸೆ ನೀಡುವದನ್ನು ಬಿಟ್ಟು ರೋಗಿಗಳಿಗೆ ಇಂಗ್ಲೀಷ್ ಔಷಧಿ ಬರೆದುಕೊಡುತ್ತಿದ್ದಾರೆ. ಆಯುರ್ವೇದಕ್ಕೆ ಕೇಂದ್ರ ಸರ್ಕಾರ ಸಾಕಷ್ಟು ಒತ್ತು ನೀಡಿದೆ ಎಂದರು.

# ಅಂತ್ಯಸಂಸ್ಕಾರಕ್ಕಾದರೂ ಜಾಗ ನೀಡಿ: ದಲಿತ ಹಕ್ಕುಗಳ ಜಿಲ್ಲಾ ಸಮಿತಿ ಮನವಿ

• ಉದಯವಾಹಿನಿ, ಶಿಗ್ಗಾವಿ:

ಮನೆ ಮತ್ತು ನಿವೇಶನ ರಹಿತ ದಲಿತ ಸಮುದಾಯದ ಜನರಿಗೆ ಮನೆ, ನಿವೇಶನ ವಿತರಣೆ ಮಾಡಬೇಕು ಎಂದು ಆಗ್ರಹಿಸಿ ದಲಿತ ಹಕ್ಕುಗಳ ಜಿಲ್ಲಾ ಸಮಿತಿ ಪದಾಧಿಕಾರಿಗಳು ಮಂಗಳವಾರ ತಹಶೀಲ್ದಾರ್ ಕಚೇರಿ ಮುಂದೆ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಯಲ್ಲಪ್ಪ ಗೋಣೆಣ್ಣವರಿಗೆ ಮನವಿ ಸಲ್ಲಿಸಿದರು. ಡಿವೈಎಫ್‌ಐ ರಾಜ್ಯ ಕಾರ್ಯದರ್ಶಿ ಬಸವರಾಜ ಪೂಜಾರ ಮಾತನಾಡಿ, ಶತಮಾನಗಳಿಂದ ಸಮಾಜದಲ್ಲಿ ಶೋಷಣೆ ಅನುಭವಿಸಿದ ದಲಿತ ಸಮುದಾಯಕ್ಕೆ ಕನಿಷ್ಠ ಘನತೆಯ ಬದುಕು ನಡೆಸಲು ವಸತಿ, ನಿವೇಶನ ಕೊನೆಗೆ ಅಂತ್ಯ ಸಂಸ್ಕಾರ ನಡೆಸಲು ಸ್ಮಶಾನ ಭೂಮಿ ಒದಗಿಸುವಲ್ಲಿ ಸರ್ಕಾರಗಳು ವಿಫಲವಾಗಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.


ಉದಯವಾಹಿನಿ ಚಿತ್ರ

ರಾಜ್ಯದಲ್ಲಿರುವ ದಲಿತ ಸಮುದಾಯದಲ್ಲಿರುವ ಭೂ ಹಿಡುವಳಿದಾರರಿಗೆ ಗಂಗಾ ಕಲ್ಯಾಣ ಕೊಳವೆ ಬಾವಿ ಸೌಕರ್ಯ, ದಲಿತ ಸಮುದಾಯದವರಿಗೆ ಸ್ಮಶಾನ ಇರದ ಎಲ್ಲಾ ಗ್ರಾಮದಲ್ಲಿಯೂ ಸ್ಮಶಾನ ಭೂಮಿ ಒದಗಿಸಲು ಮತ್ತು ಸ್ವಯಂ ಉದ್ಯೋಗಕ್ಕೆ ಆರ್ಥಿಕ ಸಹಾಯ ಒದಗಿಸಬೇಕು ಎಂದು ಒತ್ತಾಯಿಸಿದರು. ಪರಿಶಿಷ್ಟ ಜಾತಿಗಳ ಒಳಮೀಸಲಾತಿ ವರ್ಗೀಕರಣ ಸಮಗ್ರ ಸಮೀಕ್ಷೆಯಲ್ಲಿ ಪರಿಶಿಷ್ಟ ಜಾತಿಗಳು ಅನುಭವಿಸಿರುವ ಸಾಮಾಜಿಕ ತಾರತಮ್ಮ, ದೌರ್ಜನ್ಯಗಳಿಗೆ ಸಂಬಂಧಿಸಿದಂತೆ ಶೇ 75ರಷ್ಟು ಜನರು ಇಂದಿಗೂ ಅಸ್ಪೃಶ್ಯತೆಯನ್ನು ಅನುಭವಿಸುತ್ತಿರುವುದನ್ನು ಗುರುತಿಸಲಾಗಿದೆ. ಅಸ್ಪೃಶ್ಯತೆ ಆಚರಣೆಗಳಲ್ಲಿ ದೇವಾಲಯಗಳ ಪ್ರವೇಶದ ನಿಷೇಧ, ಸಾಮೂಹಿಕ ಆಹಾರ ಸೇವನೆಯಲ್ಲಿ ನಿಷೇಧ, ಪಂಕ್ತಿಬೇಧ, ಪ್ರತ್ಯೇಕ ಟೀ ಲೋಟ ನೀಡುವುದು. ಪ್ರತ್ಯೇಕ ಆಸನ ವ್ಯವಸ್ಥೆ, ಮನೆಗಳಿಗೆ ಪ್ರವೇಶ ನಿಷೇಧ, ರಸ್ತೆಗಳ ಬಳಕೆಗೆ ನಿಷೇಧ, ಸಾರ್ವಜನಿಕ ಸ್ಥಳಗಳಿಗೆ ಪ್ರವೇಶ ನಿಷೇಧ. ಶಾಲೆಗಳಲ್ಲಿ ತಾರತಮ್ಯ , ಜೀತ ಪದ್ಧತಿ ಆಚರಣೆ, ಬಲತ್ಕಾರ ಮತ್ತು ದೌರ್ಜನ್ಯಗಳ ಹೆಸರಿನಲ್ಲಿ ತಾರತಮ್ಯಗಳು, ಜೊತೆಗೆ ಮೇಲ್ಜಾತಿಯ ಅಧಿಕಾರಿಗಳು ದಲಿತರಿಗೆ ಸಿಗಬೇಕಾದ ಸೌಕರ್ಯಗಳನ್ನು ನಿರಾಕರಿಸುವುದು ಸೇರಿದಂತೆ ಅನೇಕ ರೀತಿಯ ಅಸ್ಪೃಶ್ಯತೆ ಮತ್ತು ತಾರತಮ್ಯ ಆಚರಣೆಗಳನ್ನು ಸಂಪೂರ್ಣ ತಡೆಯಬೇಕು ಎಂದು ಆಗ್ರಹಿಸಿದರು. ಜನರು ಇಂದಿಗೂ ಸಹ ಕಲಬುರ್ಗಾ ತಾಲ್ಲೂಕಿನ ಸಂಗನಾಳದಲ್ಲಿ ದಲಿತ ಯುವಕ ಕೂದಲು ಕಟ್ ಮಾಡಿ ಎಂದಿದಕ್ಕೆ ಅಸ್ಪೃಶ್ಯರಿಗೆ ಮಾಡುವುದಿಲ್ಲ ಎಂದು ವಾದ ನಡೆದು ದಲಿತ ಯುವಕನ ಕೊಲೆಯಾಗಿದೆ. ದಲಿತ ಮಹಿಳೆಯರು ದುಪ್ಪಟ್ಟು ದೌರ್ಜನ್ಯ, ಅಪಮಾನ ಮತ್ತು ಲಿಂಗ ತಾರತಮ್ಯಕ್ಕೆ ಒಳಗಾಗುತ್ತಿದ್ದಾರೆ. ದೇವದಾಸಿ ಪದ್ಧತಿ ಈಗಲೂ ಮುಂದುವರೆದಿದೆ. ದೇವದಾಸಿ ಸಮೀಕ್ಷೆಯನ್ನು ನಿಖರವಾಗಿ ನಡೆಸಲು ಆಗ್ರಹಿಸಿದರು.

ಡಿಎಚ್‌ಎಸ್ ಜಿಲ್ಲಾ ಸಂಚಾಲಕ ವೀರಣ್ಣ ಗಡ್ಡಿಯವರ ಮಾತನಾಡಿ, ದಲಿತರು ಸಾಗುವಳಿ ಮಾಡುತ್ತಿರುವ ದರಖಾಸ್ತು ಭೂಮಿ (ಡಿ.ಸಿ. ಭೂಮಿ), ಬಗರ್ ಹುಕ್ಕುಂ ಭೂಮಿಗೆ ಮಂಜೂರಾತಿ ನೀಡಬೇಕು. ಸರ್ಕಾರಿ ಭೂಮಿ, ಗೋಮಾಳ, ಅರಣ್ಯ ಭೂಮಿ ಸಾಗುವಳಿದಾರರಿಗೆ ಹಕ್ಕುಪತ್ರ ನೀಡಬೇಕು. ಸಾಗುವಳಿ ಮಾಡುತ್ತಿರುವ ಪಡ ಭೂಮಿಯನ್ನು ಸಕ್ರಮಗೊಳಿಸಬೇಕು. ಗಂಗಾ ಕಲ್ಯಾಣ ಕೊಳವೆಬಾವಿಗಳಿಗೆ ಅರ್ಜಿ ಸಲ್ಲಿಸಿರುವ ಎಲ್ಲಾ ಅರ್ಜಿದಾರರಿಗೂ ಜೇಷ್ಠತಾ ಪಟ್ಟಿ ಆಧಾರದಲ್ಲಿ ಏಕ ಕಾಲಕ್ಕೆ ಮಂಜೂರು ಮಾಡಿ ಆರ್ಥಿಕ ಸಹಾಯ ನೀಡಬೇಕು ಎಂದು ಒತ್ತಾಯಿಸಿದರು.

## ದಿಲ್ಲಿಯಲ್ಲಿ ಬಾಂಬ್ ಸ್ಫೋಟ ಪ್ರಕರಣ: ಗೃಹ ಸಚಿವ ಅಮಿತ್ ಶಾ ಅವರಿಗೆ ನೈತಿಕತೆ ಇದ್ದರೆ ರಾಜೀನಾಮೆ ಕೊಡಲಿ: ಸಿಎಂ ಆರ್ಥಿಕ ಸಲಹೆಗಾರ

# ಪ್ರಧಾನಿ ಮೋದಿ ಅವರು ದೇಶದ ಕ್ಷಮೆ ಕೇಳಬೇಕು: ಬಸವರಾಜ್ ರಾಯರೆಡ್ಡಿ

• ಉದಯವಾಹಿನಿ, ಕೊಪ್ಪಳ

**ನಮ್ಮಲ್ಲಿ ಡಿಕ್ಟೇಟರ್ ವ್ಯವಸ್ಥೆ ಇಲ್ಲ**

ದೆಹಲಿಯಲ್ಲಿ ನಡೆದ ಭೀಕರ ಬಾಂಬ್ ಸ್ಫೋಟವು ಅಮಾನವೀಯ ಕೃತ್ಯವಾಗಿದೆ ಸಿಎಂ ಆರ್ಥಿಕ ಸಲಹೆಗಾರ ಬಸವರಾಜ್ ರಾಯರೆಡ್ಡಿ ಖಂಡಿಸಿದ್ದಾರೆ. ನಗರದಲ್ಲಿ ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದರು. ಉಮರ್ ಅಬ್ದಲ್ ವಿದ್ಯಾವಂತ ವ್ಯಕ್ತಿ, ವೈದ್ಯರಾಗಿರುವ ಅವರು ಇಂತಹ ಕೃತ್ಯಕ್ಕೆ ಕೈಹಾಕಿರುವುದು ನಾಚಿಕೆಗೇಡಿತನ. ಡಾಕ್ಟರ್ ಆಗಿ ಇಂತಹ ಹೀನ ಕೃತ್ಯ ಮಾಡುತ್ತಾನೆ ಅಂದರೆ ಅವರು ಮನುಷ್ಯರಲ್ಲ'' ಎಂದು ಹೇಳಿದರು. ಅಲ್ಲದೆ, ಈ ವಿಚಾರದಲ್ಲಿ ಕೇಂದ್ರ ಸರಕಾರದ ಇಂಟಲಿಜೆನ್ಸ್ ಸಂಪೂರ್ಣವಾಗಿ ವಿಫಲವಾಗಿದೆ. ದೆಹಲಿಯಲ್ಲಿ ಉಗ್ರ ಚಟುವಟಿಕೆ ನಡೆಯಬೇಕಾದರೆ ಇಂಟಲಿಜೆನ್ಸ್ ಇಲಾಖೆ ಏಕೆ ಅದಕ್ಕೆ ಆಗದೇ ಇದ್ದರೆ ಆ ಇಲಾಖೆಯೇ ತೆಗೆದು ಹಾಕಬೇಕು ಎಂದು ಕಿಡಿಕಾರಿದರು. ದೆಹಲಿಯಲ್ಲಿ ರಾಜ್ಯ ಸರಕಾರವೂ ಬಿಜೆಪಿ ಪಕ್ಷದ್ದೆ. ಗೃಹ ಸಚಿವ ಅಮಿತ್ ಶಾ ಅವರಿಗೆ ನೈತಿಕತೆ ಇದ್ದರೆ ರಾಜೀನಾಮೆ ಕೊಡಬೇಕು. ಪ್ರಧಾನಿ ಮೋದಿ ಅವರು ದೇಶದ ಕ್ಷಮೆ ಕೇಳಬೇಕು. ಮೃತ ಕುಟುಂಬಗಳಿಗೆ ಹತ್ತು ಲಕ್ಷ ಕೋಟಿ ಕೊಟ್ಟರೂ ಜೀವ ಮರಳಿ ಬರುವುದಿಲ್ಲ ಎಂದರು. ಪಾಕಿಸ್ತಾನವನ್ನು ಟೆರರಿಸ್ಟ್ ಸ್ಟೇಟ್ ಎಂದು ಘೋಷಿಸುವ ಧೈರ್ಯ ಪ್ರಧಾನಿ ಮೋದಿಯವರಿಗೆ ಇದೆಯಾ ಬರಿ ಮಾತುಗಳು ಸಾಲದು. ಇದು ಇಂಟಲಿಜೆನ್ಸ್ ಫೆಲ್ಯೂರ್, ಎಂದು ಹೇಳಿದರು. ಬಳಿಕ ಬಿಹಾರ ಚುನಾವಣೆಯ ಹಿನ್ನಲೆಯಲ್ಲಿ ಈ ಘಟನೆ ನಡೆದ ಸಮಯದ ಮೇಲೂ ಅನುಮಾನವನ್ನು ರಾಯರಡ್ಡಿ ವ್ಯಕ್ತಪಡಿಸಿದರು. ಬಿಹಾರ ಚುನಾವಣೆ ಸಮಯದಲ್ಲಿ ಹೀಗೆ ಆಗಿದ್ದೇಕೆ? ನನಗೆ ಈ ವಿಚಾರದಲ್ಲಿ ಅನುಮಾನ ಇದೆ. ಅವರೇನು ಗೆಲ್ಲೋಕೆ ಆಗಲ್ಲ ಅಂತಾ ಹೀಗೆ ಮಾಡಿದ್ರಾ? ಎನ್ನುವ ಪ್ರಶ್ನೆ ನನ್ನದು ಎಂದು ರಾಯರೆಡ್ಡಿ ಹೇಳಿದರು. ಬಿಜೆಪಿ ಹಾಗೂ ಪ್ರಧಾನ ಮಂತ್ರಿಗಳು ಸ್ವಚ್ಛ ಅಲ್ಲ. ಅವರು ಅಧಿಕಾರಕ್ಕಾಗಿ ಏನಬೇಕಾದರೂ ಮಾಡುತ್ತಾರೆ. ದೇಶದ ಜನ ಈ ವಿಫಲತೆಯನ್ನು ಕ್ಷಮಿಸುವುದಿಲ್ಲ,''



**ನಾನು ಸಿದ್ದರಾಮಯ್ಯ ಪರನೇ**

**ಹೈಕಮಾಂಡ್ ಸಿಎಂ ಬದಲಾವಣೆ ಮಾಡಲು ಬಯಸಿದರೂ ಶಾಸಕರ ಅಭಿಪ್ರಾಯ ಕೇಳಲೇಬೇಕು. 2023ರ ಶಾಸಕಾಂಗ ಸಭೆಯಲ್ಲಿ ನಾವು ಬಹುಮತದಿಂದ ಸಿದ್ದರಾಮಯ್ಯರನ್ನು ಆಯ್ಕೆ ಮಾಡಿದ್ದೇವೆ. ಐದು ವರ್ಷ ಅವರೇ ಸಿಎಂ, ಎಂದು ಸ್ಪಷ್ಟಪಡಿಸಿದರು. ಇನ್ನೂ ಡಿಕೆಶಿ ಅವರು ನಮ್ಮ ಪಕ್ಷದ ಅಧ್ಯಕ್ಷರು. ಅವರು ಸಿಎಂ ಸ್ಥಾನ ಕೇಳಿದ್ರಲ್ಲಿ ಯಾವ ತಪ್ಪಿಲ್ಲ. ಆದರೆ, ನಾನು ಸ್ಪಷ್ಟವಾಗಿ ಸಿದ್ದರಾಮಯ್ಯ ಪರ. ಮಂತ್ರಿಯಾಗುತ್ತೇನೋ ಬಿಡುತ್ತೇನೋ ಗೊತ್ತಿಲ್ಲ, ಆದರೆ, ನಾನು ಸಿದ್ದರಾಮಯ್ಯ ಪರನೇ, ಎಂದರು.**

ಎಂದು ಬಸವರಾಜ್ ರಾಯರೆಡ್ಡಿ ಹೇಳಿದರು.

**ಸಿಎಂ ಸಿದ್ದರಾಮಯ್ಯ ದೆಹಲಿ ಭೇಟಿ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನ. 15 ರಂದು ದೆಹಲಿಗೆ ತೆರಳಲಿದ್ದಾರೆ. ಈ ಭೇಟಿಯು ಸಂಪುಟ ಪುನರ್‌ರಚನೆಗಾಗಿ ಅಲ್ಲ, ಬದಲಿಗೆ ಹಿರಿಯ ಕಾಂಗ್ರೆಸ್ ನಾಯಕ ಕಪಿಲ್ ಸಿಬಲ್ ಅವರ ಪುಸ್ತಕ ಬಿಡುಗಡೆ ಕಾರ್ಯಕ್ರಮಕ್ಕೆ ಆಗಿದೆ. ಸಿಎಂ ಅವರೊಂದಿಗೆ ನಾನೂ ದೆಹಲಿಗೆ ಹೋಗುತ್ತಿದ್ದೇನೆ. ಅದು ಮಂತ್ರಿ ಆಯ್ಕೆ ಅಥವಾ ಸಂಪುಟ ಬದಲಾವಣೆ ಕುರಿತ ಚರ್ಚೆಗೆ ಅಲ್ಲ. ಮಂತ್ರಿಗಳನ್ನು ನೇಮಕ ಮಾಡುವ ಅಧಿಕಾರ ಮುಖ್ಯಮಂತ್ರಿ ಮತ್ತು ಪಕ್ಷದ ವರಿಷ್ಠರದ್ದು. ನಾನು ಶಾಸಕನಾಗಿ 40 ವರ್ಷ ಆಯ್ತು. ನನಗೆ ಈಗ ಯಾರನ್ನೂ ಮಂತ್ರಿ ಸ್ಥಾನ ಕೊಡಿ ಎಂದು ಕೇಳಬೇಕಾದ ಅಗತ್ಯ ಇಲ್ಲ. ಆದರೆ, ನನಗೆ ಮಂತ್ರಿ ಸಿಗುವ ಕುರಿತಂತೆ ಸಿಎಂ ನೋಡೋಣ ಎಂದಿದ್ದಾರೆ.

ಸಂವಿಧಾನ ಪ್ರಕಾರ 26 ವರ್ಷ ವಯಸ್ಸಾದರೂ ಸಿಎಂ ಅಥವಾ ಪಿಎಂ ಆಗಬಹುದು. ಹೀಗಾಗಿ ಹಿರಿತನ, ಕೌಶಲ್ಯ ಎನ್ನುವುದು ನಿರ್ಣಾಯಕವಾಗಿಲ್ಲ. ನನ್ನ ಪ್ರಕಾರ ಸಿಎಂ ಬದಲಾವಣೆ ಪ್ರಶ್ನೆಯೇ ಇಲ್ಲ. ಮಾಧ್ಯಮಗಳಲ್ಲಿ ಯಾರೋ ಏನೋ ಹೇಳುತ್ತಾರೆ. ಆದರೆ, ನಮ್ಮ ಪಕ್ಷದಲ್ಲಿ ಆಂತರಿಕ ಪ್ರಜಾಪ್ರಭುತ್ವ ಇದೆ. ನಮ್ಮಲ್ಲಿ ಡಿಕ್ಟೇಟರ್ ವ್ಯವಸ್ಥೆ ಇಲ್ಲ, ಅದನ್ನು ಬಿಜೆಪಿ ಹುಟ್ಟುಹಾಕಿದೆ,'' ಎಂದರು.

**ಕೊಪ್ಪಳ ಗಣಿಗಾರಿಕಾ ಇಲಾಖೆಯ ಅಧಿಕಾರಿಗಳ ವಿರುದ್ಧ ಪತ್ರ ಬರೆದಿರುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಹೌದು, ನಾನು ಪತ್ರ ಬರೆದಿದ್ದೇನೆ. ಇನ್ನೆರಡು ಮೂರು ದಿನಗಳಲ್ಲಿ ಕ್ರಮವಾಗುತ್ತದೆ. ಇದು ದೊಡ್ಡ ವಿಷಯ ಅಲ್ಲ, ಆದರೆ ಆಡಳಿತದಲ್ಲಿ ಬದಲಾವಣೆ ಅಗತ್ಯ. ಇಡೀ ವ್ಯವಸ್ಥೆ ಹಾಳಾಗಿದೆ, ಈ ವಿಚಾರಕ್ಕೆ ಮುಖ್ಯಮಂತ್ರಿಯವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಸಿಎಂ ಇಲಾಖೆಯ ಅಧಿಕಾರಿಗಳ ಜತೆ ಮಾತಾಡಿದ್ದಾರೆ. ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತದೆ.**

**– ಬಸವರಾಜ್ ರಾಯರೆಡ್ಡಿ ಸಿಎಂ ಆರ್ಥಿಕ ಸಲಹೆಗಾರ**

ಇಸ್ಲಾಮಾಬಾದ್ ಸ್ಫೋಟಕ್ಕೆ ಭಾರತವೇ ಕಾರಣ ಎಂದ ಪಾಕ್ ಪ್ರಧಾನಿಗೆ ತಿರುಗೇಟು ನೀಡಿದ ಭಾರತೀಯ ವಿದೇಶಾಂಗ ಇಲಾಖೆ

# ಪಾಕಿಸ್ತಾನದ ಆರೋಪ ಆಧಾರ ರಹಿತ ಎಂದ ಭಾರತದ ವಿದೇಶಾಂಗ ಸಚಿವಾಲಯ



**ನವದೆಹಲಿ:** ಭಾರತವು ಪಾಕಿಸ್ತಾನದ ಆರೋಪಗಳನ್ನು ತಳ್ಳಿಹಾಕಿದೆ. ಇತ್ತೀಚೆಗೆ ಇಸ್ಲಾಮಾಬಾದ್ ಜಿಲ್ಲಾ ನ್ಯಾಯಾಲಯದ ಬಳಿ ನಡೆದಿದ್ದ ಕಾರು ಬಾಂಬ್ ದಾಳಿಯಲ್ಲಿ 12 ಮಂದಿ ಸಾವನ್ನಪ್ಪಿದ್ದರು. ಈ ಘಟನೆಗೆ ಭಾರತವನ್ನು ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ದೂಷಿಸಿದ್ದರು. ಆದರೆ, ಭಾರತದ ವಿದೇಶಾಂಗ ಸಚಿವಾಲಯ ಈ ಆರೋಪಗಳನ್ನು ಆಧಾರರಹಿತ ಮತ್ತು ಹುಸಿಯಾದ ಎಂದು ಕರೆದಿದೆ. ಪಾಕಿಸ್ತಾನವು ತನ್ನ ದೇಶದ ರಾಜಕೀಯ, ಸಂವಿಧಾನಿಕ ಬಿಕ್ಕಟ್ಟಿನಿಂದ ಗಮನವನ್ನು ಬೇರೆಡೆಗೆ ಸೆಳೆಯಲು ಈ ರೀತಿ ಸುಳ್ಳು ಕಥೆಗಳನ್ನು ಹೆಣೆಯುತ್ತಿದೆ ಎಂದು ಭಾರತ ಹೇಳಿದೆ. ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಅವರು ಇತ್ತೀಚೆಗೆ ನಡೆದ ಎರಡು ಘಟನೆಗಳಿಗೆ, ಅಂದರೆ ಇಸ್ಲಾಮಾಬಾದ್ ನಲ್ಲಿ ನಡೆದ ದಾಳಿ ಮತ್ತು ಮತ್ತೊಂದು ಕ್ಯಾಡೆಟ್ ಕಾಲೇಜಿನಲ್ಲಿ ನಡೆದ ದಾಳಿಗೆ ಭಾರತವೇ ಕಾರಣ ಎಂದು ಹೇಳಿದ್ದರು. ಮಂಗಳವಾರ ಮಧ್ಯಾಹ್ನ ಇಸ್ಲಾಮಾಬಾದ್ ನ ಜಿ-11 ಪ್ರದೇಶದ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ಬಳಿ ಕಾರು ಸ್ಫೋಟಗೊಂಡು ಕನಿಷ್ಠ 12 ಜನರು ಸಾವನ್ನಪ್ಪಿದ್ದರು ಮತ್ತು ಸುಮಾರು 30 ಮಂದಿ ಗಾಯಗೊಂಡಿದ್ದರು. ಇದು ದೆಹಲಿಯ ರೆಡ್ ಫೋರ್ಟ್ ಮೆಟ್ರೋ ನಿಲ್ದಾಣದ ಬಳಿ ನಡೆದಿದ್ದ ಕಾರು ಸ್ಫೋಟದ ಮರುದಿನವೇ ನಡೆದಿತ್ತು.

ಪಾಕಿಸ್ತಾನ ಪ್ರಧಾನಿಯ ಆರೋಪಕ್ಕೆ ಪ್ರತಿಕ್ರಿಯೆ ನೀಡಿರುವ ಭಾರತದ ವಿದೇಶಾಂಗ ಸಚಿವಾಲಯದ ವಕ್ತಾರ ರಾಂಧೀರ್ ಜೈಸ್ವಾಲ್, ಅವರ ಹೇಳಿಕೆಗೆ ತಿರುಗೇಟು ನೀಡಿರುವ ಭಾರತದ ವಿದೇಶಾಂಗ ಇಲಾಖೆ, ಪಾಕಿಸ್ತಾನದಲ್ಲೀಗ ಅಲ್ಲಿನ ಸೇನಾಧಿಕಾರಿ, ಪ್ರಧಾನಿಗೆ ಆಗಿಬರುತ್ತಿಲ್ಲ. ಸೇನಾಧಿಕಾರಿಯು ಪ್ರಧಾನಿಯವರ ಅಧಿಕಾರವನ್ನು ಕಸಿಯಲು ಪ್ರಯತ್ನಿಸುತ್ತಿದ್ದಾರೆ. ಪಾಕಿಸ್ತಾನದ ಜನತೆಯ ಗಮನವನ್ನು ಬೇರೆಡೆ ಸೆಳೆಯಲು ಅಲ್ಲಿನ ಪ್ರಧಾನಿ ಇಂಥ ಆರೋಪಗಳನ್ನು ಮಾಡುತ್ತಿದ್ದಾರೆ ಎಂದಿದ್ದಾರೆ.


ಅವರು ಇನ್ನೂ ಹೇಳಿದ್ದೇನೆಂದರೆ, ಅಂತರರಾಷ್ಟ್ರೀಯ ಸಮುದಾಯವು ಪಾಕಿಸ್ತಾನದ ಪರಿಸ್ಥಿತಿಯ ಬಗ್ಗೆ ಚೆನ್ನಾಗಿ ಅರಿತಿದೆ, ಪಾಕಿಸ್ತಾನದ ಈ ನಿರಾಶೆಯುಳ್ಳ ದಾರಿ ತಪ್ಪಿಸುವ ತಂತ್ರಗಳಿಗೆ ಮರುಳಾಗುವುದಿಲ್ಲ. ಈ ಹೇಳಿಕೆಗಳು ಪಾಕಿಸ್ತಾನದ ಆಂತರಿಕ ಸಮಸ್ಯೆಗಳಿಂದ ಗಮನವನ್ನು ಬೇರೆಡೆಗೆ ತಿರುಗಿಸುವ ಪ್ರಯತ್ನ ಎಂದು ಭಾರತ ಬಲವಾಗಿ ನಂಬಿದೆ.

**ಆಸಿಮ್ ಮುನೀರ್‌ಗೆ 'ರಕ್ಷಣಾ ಪಡೆಗಳ ಮುಖ್ಯಸ್ಥ ಹುದ್ದೆ ನೀಡಲು ಮುಂದಾದ ಪಾಕ್:** ಭಾರತದಲ್ಲಿನ ರಕ್ಷಣಾ ಪಡೆಗಳ ಮುಖ್ಯಸ್ಥರ ಮಾದರಿಯಲ್ಲೇ, ಪಾಕಿಸ್ತಾನವು ತನ್ನ ಸೇನೆ, ವಾಯುಪಡೆ ಮತ್ತು ನೌಕಾಪಡೆಗಳ ನಡುವೆ ಉತ್ತಮ ಹೊಂದಾಣಿಕೆ ಮೂಡಿಸಲು ರಕ್ಷಣಾ ಪಡೆಗಳ ಮುಖ್ಯಸ್ಥ ಹುದ್ದೆಯನ್ನು ಸೃಷ್ಟಿಸಲು ಸಂವಿಧಾನ ತಿದ್ದುಪಡಿ ತಂದಿದೆ. ಭಾರತದ 'ಆಪರೇಷನ್ ಸಿಂಧೂರ್' ಕಾರ್ಯಾಚರಣೆಯ ವೇಳೆ ಪಾಕಿಸ್ತಾನಕ್ಕೆ ಆದ ಹಿನ್ನಡೆಯ ಕಾರಣದಿಂದ ಈ ನಿರ್ಧಾರವು ರಾಜಕೀಯವಾಗಿ ಮಹತ್ವ ಪಡೆದಿದೆ. ಈ ಹೊಸ, ಉನ್ನತ ಹುದ್ದೆಗೆ ಹಾಲಿ ಸೇನಾ ಮುಖ್ಯಸ್ಥ ಜನರಲ್ ಅಸಿಮ್ ಮುನೀರ್ ಅವರು ಏರುವ ಸಾಧ್ಯತೆ ಇದ್ದು, ಇದು ಪಾಕಿಸ್ತಾನದ ಸೇನಾ ಶ್ರೇಣಿಯಲ್ಲಿ ಮಹತ್ವದ ಮತ್ತು ರಚನಾತ್ಮಕ ಬದಲಾವಣೆಯನ್ನು ತರಲಿದೆ.

### ಹೊಟ್ಟೆಗೂ ಹಿಟ್ಟಿಲ್ಲ


**ಪಾಕಿಸ್ತಾನದಲ್ಲಿ ತೀವ್ರ ಗೋಧಿ ಹಿಟ್ಟಿನ ಕೊರತೆ ಕಾಣಿಸಿಕೊಂಡಿದ್ದು, ಅದರಲ್ಲೂ ಮುಖ್ಯವಾಗಿ ರಾವಲ್ಪಿಂಡಿ, ಇಸ್ಲಾಮಾಬಾದ್‌ನಂತಹ ಪ್ರಮುಖ ನಗರಗಳಲ್ಲಿ ಗೋಧಿಯ ಬಿಕ್ಕಟ್ಟು ಎದುರಾಗಿದೆ. ಪರಿಸ್ಥಿತಿ ಹದಗೆಡಲು ಪ್ರಮುಖ ಕಾರಣವೆಂದರೆ, ಪಾಕಿಸ್ತಾನದ ಪಂಜಾಬ್ ಪ್ರಾಂತ್ಯದ ಸ್ಥಳೀಯ ಸರ್ಕಾರದ ಆಹಾರ ಇಲಾಖೆಯು ದೇಶದ ಇತರ ಭಾಗಗಳಿಗೆ ರವಾನಿಸುತ್ತಿದ್ದ ಗೋಧಿ ಪೂರೈಕೆಯನ್ನು ಸ್ಥಗಿತಗೊಳಿಸಿರುವುದು. ಇದರ ಪರಿಣಾಮವಾಗಿ ಗೋಧಿ ಹಿಟ್ಟು, ಮೈದಾ ಮತ್ತು ಇಡೀ ಗೋಧಿಯ ಬೆಲೆಗಳು ಗಗನಕ್ಕೇರಿವೆ.**

### ಪಾಕಿಸ್ತಾನ ರಹಸ್ಯವಾಗಿ ಪರಮಾಣು ಪರೀಕ್ಷೆ ನಡೆಸುತ್ತಿದೆ: ರಾಜನಾಥ್ ಸಿಂಗ್



**ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಪಾಕಿಸ್ತಾನ, ರಷ್ಯಾ, ಚೀನಾ ಮತ್ತು ಉತ್ತರ ಕೊರಿಯಾ ಪರಮಾಣು ಪರೀಕ್ಷೆಗಳನ್ನು ನಡೆಸುತ್ತಿವೆ ಎಂಬ ಹೇಳಿಕೆಗೆ ಭಾರತದ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಪ್ರತಿಕ್ರಿಯಿಸಿದ್ದಾರೆ. ಭಾರತವು ತನ್ನ ನಿಲುವನ್ನು ಸೂಕ್ತ ಸಮಯದಲ್ಲಿ ಸ್ಪಷ್ಟಪಡಿಸಲಿದೆ. ದೇಶದ ಭದ್ರತೆಗೆ ಸಂಬಂಧಿಸಿದ ಯಾವುದೇ ನಿರ್ಧಾರಗಳನ್ನು ಭಯ ಅಥವಾ ಹೊರಗಿನ ಒತ್ತಡದಿಂದ ತೆಗೆದುಕೊಳ್ಳುವುದಿಲ್ಲ ಎಂದು ಸಚಿವರು ದೃಢವಾಗಿ ಹೇಳಿದ್ದಾರೆ.**

## ಕೆನಡಾ ವಿದೇಶಾಂಗ ಸಚಿವೆ ಜತೆ ಜೈಶಂಕರ್ ಮಾತುಕತೆ




**ಒಟ್ಟಾವಾ:** ನಯಾಗರಾದಲ್ಲಿ ನಡೆದ ಜಿ7 ವಿದೇಶಾಂಗ ಸಚಿವರ ಸಭೆಯ ಹೊರತಾಗಿ ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರು ಕೆನಡಾದ ಪ್ರತಿರೂಪಿ ಅನಿತಾ ಆನಂದ್ ಅವರನ್ನು ಭೇಟಿ ಮಾಡಿ ದ್ವಿಪಕ್ಷೀಯ ಪಾಲುದಾರಿಕೆಯನ್ನು ಮತ್ತಷ್ಟು ಪುನರ್ನಿರ್ಮಿಸಲು ಎದುರು ನೋಡುತ್ತಿದ್ದೇನೆ ಎಂದು ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಜೈಶಂಕರ್ ಅವರು ಜಿ7 ವಿದೇಶಾಂಗ ಸಚಿವರ ಸಭೆಯನ್ನು ಆಯೋಜಿಸಿದ್ದಕ್ಕಾಗಿ ಆನಂದ್ ಅವರನ್ನು ಅಭಿನಂದಿಸುವುದಾಗಿ, 2025ರ ಹೊಸ ಮಾರ್ಗಸೂಚಿಯ ಅನುಷ್ಠಾನದಲ್ಲಿನ ಪ್ರಗತಿಯನ್ನು ಶ್ಲಾಘಿಸುವುದಾಗಿ ಹೇಳಿದ್ದಾರೆ.

ಜಿ7 ವಿದೇಶಾಂಗ ಸಚಿವರ ಸಭೆಯಲ್ಲಿ ವಿದೇಶಾಂಗ ಸಚಿವರ ಭಾಗವಹಿಸುವಿಕೆಯು ಜಾಗತಿಕ ಸವಾಲುಗಳನ್ನು ಎದುರಿಸುವಲ್ಲಿ,ಅಂತರರಾಷ್ಟ್ರೀಯ ವೇದಿಕೆಗಳಲ್ಲಿ ಜಾಗತಿಕ ದಕ್ಷಿಣದ ಧ್ವನಿಯನ್ನು ಬಲಪಡಿಸುವಲ್ಲಿ ಅಂತರರಾಷ್ಟ್ರೀಯ ಪಾಲುದಾರರೊಂದಿಗೆ ಕೆಲಸ ಮಾಡುವ ಭಾರತದ ನಿರಂತರ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ವಿದೇಶಾಂಗ ಸಚಿವಾಲಯ (ಎಂಇಎ) ತಿಳಿಸಿದೆ. ಜಿ7 ಸಭೆಗೆ ಕೆನಡಾ ಆಹ್ವಾನಿಸಿರುವ ಸಂಪರ್ಕ ಪಾಲುದಾರ ರಾಷ್ಟ್ರಗಳಲ್ಲಿ ಆಸ್ಟ್ರೇಲಿಯಾ, ಬ್ರೆಜಿಲ್, ಭಾರತ, ಸೌದಿ ಅರೇಬಿಯಾ, ಮೆಕ್ಸಿಕೊ, ದಕ್ಷಿಣ ಕೊರಿಯಾ, ದಕ್ಷಿಣ ಆಫ್ರಿಕಾ ಮತ್ತು ಉಕ್ರೇನ್ ಸೇರಿವೆ.ಕಳೆದ ವಾರ ಕೆನಡಾವು ಜಿ7 ಸಭೆಯು ಸಮುದ್ರ ಭದ್ರತೆ ಮತ್ತು ಸಮೃದ್ಧಿ, ಆರ್ಥಿಕ ಸ್ಥಿತಿಸ್ಥಾಪಕತ್ವ, ಇಂಧನ ಭದ್ರತೆ ಮತ್ತು ನಿರ್ಣಾಯಕ ಖನಿಜಗಳು ಸೇರಿದಂತೆ ಜಾಗತಿಕ ಆರ್ಥಿಕ ಮತ್ತು ಭದ್ರತಾ ಸವಾಲುಗಳನ್ನು ಚರ್ಚಿಸುತ್ತದೆ ಎಂದು ಹೇಳಿದೆ. ಆನಂದ್ ಭಾರತಕ್ಕೆ ಭೇಟಿ ನೀಡಿದ ಒಂದು ತಿಂಗಳ ನಂತರ ಜೈಶಂಕರ್ ಅವರ ಕೆನಡಾ ಪ್ರವಾಸ ಬಂದಿದೆ, ಈ ಸಮಯದಲ್ಲಿ ಎರಡೂ ಕಡೆಯವರು ವ್ಯಾಪಾರ, ನಿರ್ಣಾಯಕ ಖನಿಜಗಳು, ಇಂಧನ ಕ್ಷೇತ್ರಗಳಲ್ಲಿ ಸಂಬಂಧಗಳನ್ನು ಹೆಚ್ಚಿಸಲು ಮಹತ್ವಾಕಾಂಕ್ಷೆಯ ಮಾರ್ಗಸೂಚಿಯನ್ನು ಅನಾವರಣಗೊಳಿಸಿದರು. ತಮ್ಮ ಸಭೆಯಲ್ಲಿ, ಜಾಗತಿಕ ಆರ್ಥಿಕ ವಾಸ್ತವತೆಗಳು ಮತ್ತು ಪರಸ್ಪರರ ಕಾರ್ಯತಂತ್ರದ ಆದ್ಯತೆಗಳು ಪರಿಗಣಿಸಿ ದ್ವಿಪಕ್ಷೀಯ ವ್ಯಾಪಾರ, ಹೂಡಿಕೆಯ ಕುರಿತು ಸಚಿವ ಮಟ್ಟದ ಚರ್ಚೆಗಳನ್ನು ಆರಂಭಿಕ ದಿನಾಂಕದಂದು ಪ್ರಾರಂಭಿಸಲು ಇಬ್ಬರು ವಿದೇಶಾಂಗ ಸಚಿವರು ಒಪ್ಪಿಕೊಂಡರು.

> **ನಮ್ಮ ದ್ವಿಪಕ್ಷೀಯ ಪಾಲುದಾರಿಕೆಯ ಮತ್ತಷ್ಟು ಪುನರ್ನಿರ್ಮಾಣವನ್ನು ಎದುರು ನೋಡುತ್ತಿದ್ದೇವೆ, ವ್ಯಾಪಾರ, ಇಂಧನ, ಭದ್ರತೆ, ಜನರಿಂದ ಜನರಿಗೆ ಸಂಬಂಧಗಳ ಮೇಲಿನ ಸಹಕಾರ ಕುರಿತು ಇಬ್ಬರು ನಾಯಕರು ಚರ್ಚಿಸಿದ್ದಾರೆ.**
> **-ಅನಿತಾ ಆನಂದ್, ಕೆನಡಾದ ಪ್ರತಿರೂಪಿ**


## ಟರ್ಕಿ ಸೇನಾ ವಿಮಾನ ಪತನ, 20 ಮಂದಿ ಸಾವು



**ಅಂಕಾರಾ:** ಟರ್ಕಿ ಸೇನೆಗೆ ಸೇರಿದ ಸರಕು ಸಾಗಾಣಿಕಾ ವಿಮಾನವೊಂದು ದುರಂತ ಪತನಕ್ಕೀಡಾಗಿದ್ದು, ವಿಮಾನದಲ್ಲಿದ್ದ 20 ಮಂದಿ ಸಾವನ್ನಪ್ಪಿದ್ದಾರೆ ಎಂದು ತಿಳಿದುಬಂದಿದೆ. ಅಜರ್ಬೈಜಾನ್‌ನಿಂದ ಟರ್ಕಿಗೆ ವಾಪಸಾಗುತ್ತಿದ್ದ ಟರ್ಕಿ ಸೇನೆಯ ಅ-130 ಸಾರಿಗೆ ವಿಮಾನ ಜಾರ್ಜಿಯಾದಲ್ಲಿ ಪತನವಾಗಿದೆ. ಈ ದುರಂತದಲ್ಲಿ ವಿಮಾನದಲ್ಲಿದ್ದ 20 ಮಂದಿ ಸಿಬ್ಬಂದಿ ಮತ್ತು ಪ್ರಯಾಣಿಕರು ಮೃತಪಟ್ಟಿದ್ದಾರೆ ಎಂದು ಅಲ್ಲಿನ ರಕ್ಷಣಾ ಸಚಿವಾಲಯ ಮಾಹಿತಿ ನೀಡಿದೆ. ಮೂಲಗಳ ಪ್ರಕಾರ ವಿಮಾನವು ಅಜೆರ್ಬೈಜಾನ್‌ನ ಗಂಜಾ ವಿಮಾನ ನಿಲ್ದಾಣದಿಂದ ಹೊರಟು ಟರ್ಕಿಗೆ ತೆರಳುತ್ತಿತ್ತು. ಜಾರ್ಜಿಯಾದ ಗಡಿಯ ಸಮೀಪದಲ್ಲಿ ಆ ವಿಮಾನವು ಪೈಲಟ್ ನಿಯಂತ್ರಣ ಕಳೆದುಕೊಂಡು ಪತನವಾಗಿದೆ.

ಜಾರ್ಜಿಯಾ-ಅಜೆರ್ಬೈಜಾನ್ ಗಡಿಯಿಂದ ಸುಮಾರು ಐದು ಕಿಲೋಮೀಟರ್ ದೂರದಲ್ಲಿರುವ ಸಿಘ್ನಾಘಿ ಪ್ರಾಂತ್ಯದಲ್ಲಿಯೇ ಆ ವಿಮಾನ ಪತವಾಗಿರುವುದಾಗಿ ರಕ್ಷಣಾ ಇಲಾಖೆ ತಿಳಿಸಿದೆ. ಜಾರ್ಜಿಯಾದ ವಾಯು ಸಂಚಾರ ನಿಯಂತ್ರಣ ಸೇವೆಗಳ ಪ್ರಕಾರ, ವಿಮಾನವು ಜಾರ್ಜಿಯಾ ವಾಯುಪ್ರದೇಶವನ್ನು ಪ್ರವೇಶಿಸಿದ ತಕ್ಷಣ ರಡಾರ್‌ನಿಂದ ಕಣ್ಮರೆಯಾಗಿದೆ. ತುರ್ತು ಸೇವೆಗಳಿಂದ ಅಪಘಾತದ ಬಗ್ಗೆ ಮಾಹಿತಿ ಪಡೆದ ನಂತರ ಅವರು ಕಾರ್ಯಾಚರಣೆಗಳನ್ನು ಪ್ರಾರಂಭಿಸಿದ್ದಾರೆ. ಟರ್ಕಿ ಸಿ-130 ವಿಮಾನವು ಜಾರ್ಜಿಯಾ ವಾಯುಪ್ರದೇಶವನ್ನು ಪ್ರವೇಶಿಸಿದ ಕೆಲವೇ ನಿಮಿಷಗಳಲ್ಲಿ, ಕಂಟ್ರೋಲ್ ರೂಂನೊಂದಿಗೆ ಎಲ್ಲಾ ರೀತಿಯ ಸಂವಹನಗಳನ್ನು ಕಡಿತಗೊಂಡವು. ಕನಿಷ್ಟಪಕ್ಷ ಅದರಲ್ಲಿನ ಪೈಲಟ್ ಗಳಿಗೆ ತುರ್ತು ಸಂದೇಶಗಳನ್ನು ಕಳುಹಿಸುವುದಕ್ಕೂ ಸಮಯ ಸಿಕ್ಕಿಲ್ಲ ಎಂದೆನಿಸುತ್ತದೆ. ಅಷ್ಟು ಬೇಗ ಆ ವಿಮಾನ ಪತನವಾಗಿದೆ ಎಂದು ತಜ್ಞರು ತಿಳಿಸಿದ್ದಾರೆ.

## ಉದ್ಘಾಟನೆಯಾದ ಕೆಲ ತಿಂಗಳಲ್ಲೇ ಕುಸಿದ ಸೇತುವೆ



**ಬೀಜಿಂಗ್:** ಚೀನಾದಲ್ಲಿ ಸಂಭವಿಸಿದ ಭೀಕರ ಭೂಕುಸಿತದಲ್ಲಿ ಇತ್ತೀಚೆಗಷ್ಟೇ ಉದ್ಘಾಟನೆಯಾದ ಬೃಹತ್ ಸೇತುವೆ ಕುಸಿತವಾಗಿದೆ. ನೈಋತ್ಯ ಚೀನಾದ ಸಿಚುವಾನ್ ಪ್ರಾಂತ್ಯದಲ್ಲಿ ಇತ್ತೀಚೆಗೆ ಉದ್ಘಾಟನೆಗೊಂಡ ಹಾಂಗ್ಕಿ ಸೇತುವೆ ಕುಸಿದು ಬಿದ್ದಿದ್ದು, ಸೇತುವೆ ಕುಸಿತದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ವೈರಲ್ ಆಗುತ್ತಿದೆ. ಸ್ಥಳೀಯ ಅಧಿಕಾರಿಗಳ ಪ್ರಕಾರ, ಚೀನಾದ ಹೃದಯಭಾಗವನ್ನು ಟಿಬೆಟ್‌ನೊಂದಿಗೆ ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿಯ ಭಾಗವಾಗಿರುವ ಸೇತುವೆಯು ಮಧ್ಯಾಹ್ನ ಸರಣಿ ಭೂಕುಸಿತ ಸಂಭವಿಸಿದೆ. ಆದಾಗ್ಯೂ, ಘಟನೆಯಲ್ಲಿ ಯಾವುದೇ ಸಾವುನೋವುಗಳು ವರದಿಯಾಗಿಲ್ಲ. ಮೇರ್ಕಾಂಗ್ ನಗರದ ಶುವಾಂಗ್‌ಜಿಯಾಂಗ್‌ಕೌ ಜಲವಿದ್ಯುತ್ ಕೇಂದ್ರದ ಬಳಿ ಈ ಘಟನೆ ಸಂಭವಿಸಿದೆ. ಸಾಮಾಜಿಕ ಮಾಧ್ಯಮದಲ್ಲಿ ಪ್ರಸಾರವಾಗುತ್ತಿರುವ ವೀಡಿಯೊದಲ್ಲಿ ಬೆಟ್ಟದ ಇಳಿಜಾರು ದಿಢೀರ್ ಕುಸಿಯಲು ಪ್ರಾರಂಭಿಸಿದೆ. ಈ ವೇಳೆ ಧೂಳು, ಶಿಲಾಖಂಡರಾಶಿಗಳು ಬೀಳುತ್ತಿರುವುದು ದಾಖಲಾಗಿದೆ. ಬಳಿಕ ಕೆಲವೇ ಸೆಕೆಂಡುಗಳಲ್ಲಿ ಹಾಂಗ್ಕಿ ಸೇತುವೆ ಮೇಲೆ ಶಿಲಾಖಂಡಗಳ ರಾಶಿ ಬಿದ್ದಿವೆ. ಇದರಿಂದಾಗಿ ಸೇತುವೆಯ ಕಂಬಗಳು ನೋಡ ನೋಡುತ್ತಲೇ ಕುಸಿಯುತ್ತಾ ಸಾಗಿವೆ. ಬಳಿಕ ಸೇತುವೆ ನದಿಗೆ ಬಿದ್ದಿದೆ. ಭೂಕುಸಿತದ ತೀವ್ರತೆಗೆ ರಸ್ತೆಗಳೂ ಕೂಡ ಬಿರುಕು ಬಿಟ್ಟಿದ್ದು, ಮುಂಜಾಗ್ರತಾ ಕ್ರಮವಾಗಿ ಸಂಭಾವ್ಯ ಅಪಾಯವನ್ನು ಸೂಚಿಸುವ ಭೂಪ್ರದೇಶ ಬದಲಾಗುತ್ತಿರುವ ಚಿಹ್ನೆಗಳನ್ನು ಪತ್ತೆ ಹಚ್ಚಿದ ನಂತರ 758 ಮೀಟರ್ ಉದ್ದದ ಸೇತುವೆಯನ್ನು ಎಲ್ಲಾ ಸಂಚಾರಕ್ಕೆ ಮುಚ್ಚಿದ್ದಾರೆ ಎಂದು ರಾಯಿಟರ್ಸ್ ವರದಿ ಮಾಡಿದೆ. ಪ್ರಾಥಮಿಕ ಅಂದಾಜಿನ ಪ್ರಕಾರ, ಕಡಿದಾದ ಪರ್ವತ ಇಳಿಜಾರುಗಳಲ್ಲಿ ಭೂವೈಜ್ಞಾನಿಕ ಅಸ್ಥಿರತೆ ಮತ್ತು ಭೂಕುಸಿತಗಳು ಕುಸಿತಕ್ಕೆ ಕಾರಣವಾಗಿವೆ. ಹಾನಿಯನ್ನು ನಿರ್ಣಯಿಸಲು ಮತ್ತು ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ತುರ್ತು, ರಕ್ಷಣಾ ತಂಡಗಳನ್ನು ಸ್ಥಳಕ್ಕೆ ಕಳುಹಿಸಲಾಗಿದೆ.

## ಗಣರಾಜ್ಯೋತ್ಸವ ಸಂದರ್ಭದಲ್ಲಿ ಸ್ಫೋಟಕ್ಕೆ ತಯಾರಿ ನಡೆಸಿದ್ದ ಉಗ್ರರು



**ನವದೆಹಲಿ:** ಮುಂದಿನ ಜ.26ರಂದು ಕೆಂಪುಕೋಟೆಯಲ್ಲಿ ನಡೆಯಬೇಕಿದ್ದ ಗಣರಾಜ್ಯೋತ್ಸವದ ಸಂದರ್ಭದಲ್ಲಿ ಬಾಂಬ್ ಸ್ಫೋಟಿಸುವುದು ಉಗ್ರರ ಗುರಿಯಾಗಿತ್ತು ಎನ್ನುವ ಬೆಚ್ಚಿಬೀಳಿಸುವ ವರದಿ ಬಹಿರಂಗಗೊಂಡಿದೆ. ದೆಹಲಿ ಸ್ಫೋಟ ಪ್ರಕರಣದಲ್ಲಿ ಕೆಲವು ಉಗ್ರರನ್ನು ಬಂಧಿಸಿ ವಿಚಾರಣೆ ನಡೆಸುತ್ತಿರುವ ಎನ್‌ಐಎ ಅಧಿಕಾರಿಗಳಿಗೆ ಬಂಧಿತರು ತಮ ಕಾರ್ಯಾಚರಣೆಯ ಬಗ್ಗೆ ಬಾಯಿಬಿಟ್ಟಿದ್ದಾರೆ ಎಂದು ತಿಳಿದುಬಂದಿದೆ.

ದೆಹಲಿ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಶಂಕಿತರ ವಿಚಾರಣೆ ನಡೆಸುವಾಗ ಹಲವು ವಿಚಾರಗಳು ಬಹಿರಂಗಗೊಂಡಿವೆ. ಜ. 26ರಂದು ಗಣರಾಜ್ಯೋತ್ಸವದ ದಿನ ಕೆಂಪುಕೋಟೆಯನ್ನು ಗುರಿಯಾಗಿಸಿಕೊಂಡು ದಾಳಿ ನಡೆಸುವುದು ಉಗ್ರರ ಯೋಜನೆಯಾಗಿತ್ತು ಎಂಬುದು ತಿಳಿದುಬಂದಿದೆ. ದೆಹಲಿ ಸ್ಫೋಟ ಪ್ರಕರಣದಲ್ಲಿ ಪ್ರಮುಖ ಆರೋಪಿ ಮುಜಮ್ಮಿಲ್ ತನಿಖಾಧಿಕಾರಿಗಳಿಗೆ ತಿಳಿಸಿರುವ ಪ್ರಕಾರ, ಆ ಪ್ರದೇಶದಲ್ಲಿ ನಡೆದ ಸ್ಫೋಟಕ್ಕೂ ಮೊದಲು ತಾನು, ಉಮರ್ ಕೆಂಪು ಕೋಟೆಯಿಂದ ಹಿಂದಿರುಗಿ ಬಂದಿದ್ದೆವು. ಮೊದಲು ಕೆಂಪುಕೋಟೆಯನ್ನು ಗುರಿಯಾಗಿಸಿ ದಾಳಿ ಮಾಡುವ ಯೋಜನೆಯಿತ್ತು ಹಾಗಾಗಿ ಹಲವು ಬಾರಿ ಕೆಂಪು ಕೋಟೆಯ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಓಡಾಡಿದ್ದೆವು ಎಂದು ತಿಳಿಸಿದ್ದಾನೆ. ಈ ದೀಪಾವಳಿಯಂದು ಜನದಟ್ಟಣೆ ಇರುವ ಸ್ಥಳದ ಮೇಲೆ ದಾಳಿ ಮಾಡುವ ಯೋಜನೆಯಿತ್ತು ಎಂದು ಆತ ಪೊಲೀಸರಿಗೆ ತಿಳಿಸಿದ್ದಾನೆ, ಆದರೆ ಅದನ್ನು ಕಾರ್ಯಗತಗೊಳಿಸಲು ಸಾಧ್ಯವಾಗಲಿಲ್ಲ ಎಂದು ಮೂಲಗಳು ತಿಳಿಸಿವೆ. ಫರಿದಾಬಾದ್‌ನ ಅಲ್ ಫಲಾಹ್ ವಿಶ್ವವಿದ್ಯಾಲಯದಲ್ಲಿ ಮುಜಮ್ಮಿಲ್ ಅವರ ಸಹಾಯಕ ಮತ್ತು ಸಹೋದ್ಯೋಗಿ ಉಮರ್ ಕೆಂಪು ಕೋಟೆ ಮೆಟ್ರೋ ನಿಲ್ದಾಣದ ಬಳಿಯ ಟ್ರಾಫಿಕ್ ಸಿಗ್ನಲ್ ಬಳಿ ಕಾರು ಸ್ಫೋಟಗೊಂಡು ಸಾವನ್ನಪ್ಪಿದ್ದಾನೆ ಎಂದು ಹೇಳಲಾಗುತ್ತಿದೆ. ಈಗ ಎನ್‌ಐಎ ತಂಡವು ಇದರ ಹಿಂದೆ ಪಾಕಿಸ್ತಾನ ಅಥವಾ ಬೇರೆ ಯಾರಾದರೂ ಇದ್ದಾರೆಯೇ ಎಂದು ಕಂಡುಹಿಡಿಯಲು ಪ್ರತಿಯೊಂದು ಅಂಶವನ್ನು ಪರಿಶೀಲಿಸುತ್ತದೆ. ಏತನ್ಮಧ್ಯೆ, ಮಾಧ್ಯಮ ವರದಿಗಳ ಪ್ರಕಾರ, ಭಯೋತ್ಪಾದಕರ ಯೋಜನೆ ದೊಡ್ಡದಾಗಿತ್ತು. ದೀಪಾವಳಿ ಹಬ್ಬದಂದು ದೆಹಲಿಯನ್ನು ಭಯಗೊಳಿಸಲು ದುಷ್ಟ ಶಕ್ತಿಗಳು ಸಂಚು ರೂಪಿಸಿದ್ದವು.

ಆ ಸಂಚು ವಿಫಲವಾದ ನಂತರ, ಭಯೋತ್ಪಾದಕರು ಜ. 26, ಅಂದರೆ ಗಣರಾಜ್ಯೋತ್ಸವವನ್ನು ಆರಿಸಿಕೊಂಡರು, ಆದರೆ ಅದಕ್ಕೂ ಮೊದಲು ಅಹಮದಾಬಾದ್, ಫರಿದಾಬಾದ್, ಜಮ್ಮು, ಕಾಶ್ಮೀರದಲ್ಲಿ ಪೊಲೀಸರು ತೆಗೆದುಕೊಂಡ ತ್ವರಿತ ಕ್ರಮವು ಈ ಆಟವನ್ನು ಹಾಳು ಮಾಡಿತು ಎನ್ನಲಾಗಿದೆ. ಇದರ ನಂತರ, ಬಂಧನಕ್ಕೆ ಹೆದರಿ, ಬಾಂಬ್ ಸ್ಫೋಟದಲ್ಲಿ ಸಾವನ್ನಪ್ಪಿದ ಭಯೋತ್ಪಾದಕ ಡಾ. ಮೊಹಮ್ಮದ್ ಉಮರ್ ಈ ಯೋಜನೆಯನ್ನು ರೂಪಿಸಿ ಕೆಂಪು ಕೋಟೆಯ ಬಳಿ ಸ್ಫೋಟ ನಡೆಸಿದ್ದಾನೆ. ಅತ್ಯಂತ ಆಶ್ಚರ್ಯಕರ ವಿಷಯವೆಂದರೆ ಘಟನೆ ನಡೆದ 24 ಗಂಟೆಗಳ ನಂತರವೂ ಯಾವುದೇ ಭಯೋತ್ಪಾದಕ ಸಂಘಟನೆಯು ಇದರ ಹೊಣೆಯನ್ನು ಹೊತ್ತುಕೊಂಡಿಲ್ಲ.

## ಟೆರರ್ ಹಬ್ ಅಲ್-ಫಲಾಹ್ ವಿವಿ ಮೇಲೆ ತೀವ್ರ ನಿಗಾ



**ಫರಿದಾಬಾದ್:** ದೆಹಲಿ ಕಾರ್ ಬಾಂಬ್ ಸ್ಫೋಟ ಪ್ರಕರಣದ ನಂತರ ಹರಿಯಾಣದ ಫರಿದಾಬಾದ್ ಜಿಲ್ಲೆಯ ಮುಸ್ಲಿಂ ಪ್ರಾಬಲ್ಯದ ಧೌಜ್ ಗ್ರಾಮದ ಅಲ್-ಫಲಾಹ್ ವಿಶ್ವವಿದ್ಯಾಲಯ ಮತ್ತು ಅದರ 76 ಎಕರೆ ವಿಸ್ತಾರವಾದ ಕ್ಯಾಂಪಸ್ ತೀವ್ರ ನಿಗಾಕ್ಕೆ ಒಳಪಟ್ಟಿದೆ. ಶಿಕ್ಷಿತ ವ್ಯಕ್ತಿಗಳು ಪಾಕಿಸ್ತಾನ ಬೆಂಬಲಿತ ಹ್ಯಾಂಡ್ಲರ್ ಆಜ್ಞೆಯ ಮೇರೆಗೆ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಕಂಡುಬಂದ ನಂತರ, ವಿಶ್ವವಿದ್ಯಾನಿಲಯವು ಅಂತಹ ವ್ಯಕ್ತಿಗಳಿಗೆ ಹೇಗೆ ಸುರಕ್ಷಿತ ಸ್ವರ್ಗವಾಯಿತು ಎಂಬುದನ್ನು ತನಿಖಾಧಿಕಾರಿಗಳು ಪರಿಶೀಲಿಸುತ್ತಿದ್ದಾರೆ. ವಿಶ್ವವಿದ್ಯಾಲಯದ ವೆಬ್‌ಸೈಟ್ ಪ್ರಕಾರ, ಇದನ್ನು ಹರಿಯಾಣ ಖಾಸಗಿ ವಿಶ್ವವಿದ್ಯಾಲಯಗಳ ಕಾಯ್ದೆಯಡಿಯಲ್ಲಿ ಹರಿಯಾಣ ಶಾಸಕಾಂಗ ಸಭೆ ಸ್ಥಾಪಿಸಿತು. ಇದು 1997ರಲ್ಲಿ ಇಂಜಿನಿಯರಿಂಗ್ ಕಾಲೇಜಾಗಿ ಪ್ರಾರಂಭ ಆಯಿತು. 2013ರಲ್ಲಿ, ಅಲ್-ಫಲಾಹ್ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯ ಅನುದಾನ ಆಯೋಗದ ರಾಷ್ಟ್ರೀಯ ಮೌಲ್ಯಮಾಪನ ಮತ್ತು ಮಾನ್ಯತಾ ಮಂಡಳಿಯಿಂದ ಎ ವರ್ಗದ ಮಾನ್ಯತೆಯನ್ನು ಪಡೆಯಿತು. 2014ರಲ್ಲಿ, ಹರಿಯಾಣ ಸರ್ಕಾರ ಇದಕ್ಕೆ ವಿಶ್ವವಿದ್ಯಾಲಯದ ಸ್ಥಾನಮಾನವನ್ನು ನೀಡಿತು. ಅಲ್-ಫಲಾಹ್ ವೈದ್ಯಕೀಯ ಕಾಲೇಜು ಕೂಡ ವಿಶ್ವವಿದ್ಯಾಲಯದೊಂದಿಗೆ ಸಂಯೋಜಿತವಾಗಿದೆ.ಹಲವಾರು ತಜ್ಞರ ಪ್ರಕಾರ, ಅಲ್-ಫಲಾಹ್ ವಿಶ್ವವಿದ್ಯಾಲಯವು ತನ್ನ ಆರಂಭಿಕ ವರ್ಷಗಳಲ್ಲಿ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಅಲಿಗಢ ಮುಸ್ಲಿಂ ವಿಶ್ವವಿದ್ಯಾಲಯ ಮತ್ತು ಜಾಮಿಯಾ ಮಿಲಿಯಾ ಇಸ್ಲಾಮಿಯಾಗಳಿಗೆ ಅತ್ಯುತ್ತಮ ಪರ್ಯಾಯವಾಗಿ ತನ್ನನ್ನು ತಾನು ಪ್ರಸ್ತುತಪಡಿಸಿಕೊಂಡಿತು. ದೆಹಲಿಯ ಜಾಮಿಯಾ ಮಿಲಿಯಾ ಇಸ್ಲಾಮಿಯಾದಿಂದ ಕೇವಲ 30 ಕಿಲೋಮೀಟರ್ ದೂರದಲ್ಲಿರುವ ಈ ವಿಶ್ವವಿದ್ಯಾಲಯವನ್ನು 1995 ರಲ್ಲಿ ಸ್ಥಾಪಿಸಲಾದ ಅಲ್-ಫಲಾಹ್ ಚಾರಿಟೇಬಲ್ ಟ್ರಸ್ಟ್ ನಿರ್ವಹಿಸುತ್ತದೆ. ಜವಾದ್ ಅಹ್ಮದ್ ಸಿದ್ದಿಕಿ ಟ್ರಸ್ಟ್‌ನ ಅಧ್ಯಕ್ಷರಾಗಿದ್ದಾರೆ. ಮುಫ್ತಿ ಅಬ್ದುಲ್ಲಾ ಖಾಸಿಮಿ ಎಂಎ ಉಪಾಧ್ಯಕ್ಷರಾಗಿದ್ದಾರೆ ಮತ್ತು ಮೊಹಮ್ಮದ್ ವಾಜಿದ್ ಡಿಎಂಇ ಕಾರ್ಯದರ್ಶಿಯಾಗಿದ್ದಾರೆ.ಅಲ್-ಫಲಾಹ್ ವಿಶ್ವವಿದ್ಯಾಲಯದ ಪ್ರಸ್ತುತ ರಿಜಿಸ್ಟ್ರಾರ್ ಪ್ರೊ (ಡಾ) ಮೊಹಮ್ಮದ್ ಪರ್ವೇಜ್. ಡಾ. ಭೂಪಿಂದರ್ ಕೌರ್ ಆನಂದ್ ಇದರ ಉಪಕುಲಪತಿ.

ಹುಂಡೈ ಐ20 ಕಾರಿನ ಚಕ್ರಗಳ ಹಿಂದೆ ಇದ್ದ ಶಂಕಿತ ಪುಲ್ವಾಮಾ ಮೂಲದ ವೈದ್ಯ ಮೊಹಮ್ಮದ್ ಉಮರ್ ನಬಿ ಅಲ್-ಫಲಾಹ್ ವಿಶ್ವವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರಾಗಿದ್ದರು.

ಜೈಶ್-ಎ-ಮೊಹಮ್ಮದ್ ಮತ್ತು ಅನ್ಸಾರ್ ಘಜ್ವತ್-ಉಲ್-ಹಿಂದ್, ಕಾಶ್ಮೀರ, ಹರಿಯಾಣ, ಉತ್ತರ ಪ್ರದೇಶವನ್ನು ವ್ಯಾಪಿಸಿರುವ ವೈಟ್-ಕಾಲರ್ ಭಯೋತ್ಪಾದನಾ ಮಾಡ್ಯೂಲ್ ಅನ್ನು ಪತ್ತೆಹಚ್ಚುವುದರೊಂದಿಗೆ ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದ ಮೂವರು ವೈದ್ಯರು ಸೇರಿದಂತೆ ಎಂಟು ಜನರನ್ನು ಬಂಧಿಸಿ 2,900 ಕಿಲೋಗ್ರಾಂಗಳಷ್ಟು ಸ್ಫೋಟಕಗಳನ್ನು ವಶಪಡಿಸಿಕೊಂಡ ಕೆಲವೇ ಗಂಟೆಗಳ ನಂತರ ಈ ಸ್ಫೋಟ ಸಂಭವಿಸಿದೆ. ಬಂಧಿತರಲ್ಲಿ ಒಬ್ಬರಾದ ಡಾ. ಮುಜಮ್ಮಿಲ್ ಗನ್ನೈ ಅವರು ಕೂಡ ಅಲ್-ಫಲಾಹ್ ವಿಶ್ವವಿದ್ಯಾಲಯದಲ್ಲಿ ಶಿಕ್ಷಕರಾಗಿದ್ದರು.

## ಎಕ್ಸಿಟ್ ಪೋಲ್ ಭವಿಷ್ಯವಾಣಿ ಸುಳ್ಳು: ತೇಜಸ್ವಿ ಯಾದವ್



**ಪಾಟ್ನಾ:** ಬಿಹಾರದಲ್ಲಿ ಎನ್‌ಡಿಎ ಮತ್ತೆ ಅಧಿಕಾರಕ್ಕೆ ಬರುತ್ತದೆ ಎಂಬ ಚುನಾವಣೋತ್ತರ ಸಮೀಕ್ಷೆಯ ಭವಿಷ್ಯವಾಣಿಗಳನ್ನು ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಬುಧವಾರ ತಳ್ಳಿಹಾಕಿದ್ದಾರೆ.

ಇಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ವಿರೋಧ ಪಕ್ಷಗಳ ಇಂಡಿಯಾ ಬಣವು ರಾಜ್ಯದಲ್ಲಿ ಸರ್ಕಾರ ರಚಿಸುತ್ತದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಚುನಾವಣೋತ್ತರ ಸಮೀಕ್ಷೆಗಳು ಏನೇನೂ ಅಲ್ಲ. ಈ ರೀತಿಯ ಊಹೆಗಳನ್ನು ಬಿಜೆಪಿಯ ಉನ್ನತ ನಾಯಕತ್ವದ ನಿರ್ದೇಶನದ ಮೇರೆಗೆ ಮಾಡಲಾಗಿದೆ ಎಂದು ಆರ್‌ಜೆಡಿ ನಾಯಕ ಆರೋಪಿಸಿದ್ದಾರೆ.

ವಿವಿಧ ಸಂಸ್ಥೆಗಳು ನಡೆಸಿದ ಎಕ್ಸಿಟ್ ಪೋಲ್ ಸಮೀಕ್ಷೆಗಳು ರಾಜ್ಯದಲ್ಲಿ ಎನ್‌ಡಿಎ ಸರ್ಕಾರ ಮತ್ತೆ ಅಧಿಕಾರಕ್ಕೆ ಬರಲಿದೆ. ವಿರೋಧ ಪಕ್ಷಗಳ ಮಹಾಘಟಬಂಧನ್‌ಗೆ ಕಡಿಮೆ ಸ್ಥಾನಗಳು, ಮಾಜಿ ಚುನಾವಣಾ ತಂತ್ರಜ್ಞ ಪ್ರಶಾಂತ್ ಕಿಶೋರ್ ಅವರ ಜನ ಸುರಾಜ್ ಪಕ್ಷಕ್ಕೆ ನಿರಾಶಾದಾಯಕ ಪ್ರದರ್ಶನವಾಗಿರಲಿದೆ ಎಂದು ಭವಿಷ್ಯ ನುಡಿದಿವೆ.

ಇಂಡಿಯಾ ಬಣವು ಬಹುಮತದೊಂದಿಗೆ ಸರ್ಕಾರ ರಚಿಸಲಿದೆ. ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಹೆಚ್ಚಿನ ಮತದಾರರು ಮತದಾನದಲ್ಲಿ ತೊಡಗಿಕೊಂಡಿರುವುದು ಸರ್ಕಾರದಲ್ಲಿ ಬದಲಾವಣೆಯನ್ನು ಬಯಸುತ್ತಾರೆ ಎಂಬುದನ್ನು ಸೂಚಿಸುತ್ತದೆ. ಅವರು ಮಹಾಘಟಬಂಧನ್ ಪರವಾಗಿ ಮತ ಚಲಾಯಿಸಿದ್ದಾರೆ. ನಾವು ನವೆಂಬರ್ 18 ರಂದು ಪ್ರಮಾಣವಚನ ಸ್ವೀಕರಿಸುತ್ತೇವೆ ಎಂದು ಆರ್‌ಜೆಡಿ ನಾಯಕ ಹೇಳಿದ್ದಾರೆ. ಬಿಹಾರದಲ್ಲಿ ಆಡಳಿತಾರೂಢ ಸರ್ಕಾರವನ್ನು ಬದಲಾಯಿಸಲು ಸುಮಾರು 72 ಲಕ್ಷ ಹೆಚ್ಚುವರಿ ಮತದಾರರು ಮತ ಚಲಾಯಿಸಿದ್ದಾರೆ.

ಬಿಜೆಪಿ ನಾಯಕರು ಖಂಡಿತವಾಗಿಯೂ ಎಣಿಕೆ ಪ್ರಕ್ರಿಯೆಯನ್ನು ವಿಳಂಬಗೊಳಿಸಲು ಪ್ರಯತ್ನಿಸುತ್ತಾರೆ. ನಾವು ಯಾವುದೇ ಕಾರಣಕ್ಕೂ ಇದು ಸಂಭವಿಸಲು ಬಿಡುವುದಿಲ್ಲ. ನಾವು ಅವರ ಚಟುವಟಿಕೆಗಳ ಮೇಲೆ ನಿಗಾ ಇಡುತ್ತಿದ್ದೇವೆ ಎಂದು ಅವರು ಪುನರುಚ್ಚರಿಸಿದರು. ಬಿಹಾರದಲ್ಲಿ ನಡೆದ ಎರಡನೇ ಮತ್ತು ಅಂತಿಮ ಹಂತದ ವಿಧಾನಸಭಾ ಚುನಾವಣೆಯಲ್ಲಿ ದಾಖಲೆಯ ಶೇ 69 ರಷ್ಟು ಮತದಾನವಾಗಿದೆ.

## ಮಿನಿ ನ್ಯೂಸ್

### ದೇಶದ ಹಲವೆಡೆ ವಿಧ್ವಂಸಕ ಕೃತ್ಯಕ್ಕೆ ಸ್ಕೆಚ್ ಹಾಕಿದ್ದ ಉಗ್ರ ಕ್ರಿಮಿಗಳು



**ನವದೆಹಲಿ:** ರಾಷ್ಟ್ರ ರಾಜಧಾನಿ ದೆಹಲಿ ಗಡಿಗೆ ಹೊಂದಿಕೊಂಡಿರುವ ಫರೀದಾಬಾದ್‌ನಲ್ಲಿ ಪೊಲೀಸರು ವಶಪಡಿಸಿಕೊಂಡಿರುವ ಸ್ಫೋಟಕ ವಸ್ತುಗಳು, ದೇಶದ ವಿವಿಧೆಡೆ ವಿಧ್ವಂಸಕ ಕೃತ್ಯಕ್ಕೆ ಬಳಸಲು ಉಗ್ರರು ಸಂಚು ರೂಪಿಸಿದ್ದರು ಎಂಬುದು ಗೊತ್ತಾಗಿದೆ. ಫರೀದಾಬಾದ್‌ನಲ್ಲಿ ನಡೆದ ದಾಳಿ ತಡೆ ಕಾರ್ಯಾ ಚರಣೆಯಲ್ಲಿ ಪೊಲೀಸರು ಹಾಗೂ ತನಿಖಾ ಸಂಸ್ಥೆಗಳು ಸುಮಾರು 2,900 ಕಿಲೋಗ್ರಾಂ ಸ್ಫೋಟಕ ಸಾಮಗ್ರಿ, ಆಧುನಿಕ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಂಡಿವೆ.

ತನಿಖೆಯಿಂದ ಈ ವಸ್ತುಗಳು ರಾಷ್ಟ್ರದ ಹೃದಯ ಭಾಗದಲ್ಲೇ ಬೃಹತ್ ದಾಳಿ ನಡೆಸುವ ಉದ್ದೇಶದ ಭಾಗವಾಗಿದ್ದವು ಎಂಬುದು ಸ್ಪಷ್ಟವಾಗಿದೆ. ಈ ಸಂಚು ಒಬ್ಬ ವೈದ್ಯರ ನಿವಾಸದಿಂದ ನೇರವಾಗಿ ಸಂಪರ್ಕ ಹೊಂದಿತ್ತು. ಶಿಕ್ಷಣ ಪಡೆದ ವ್ಯಕ್ತಿಗಳು ಉಗ್ರ ಚಟುವಟಿಕೆಯಲ್ಲಿ ತೊಡಗಿರುವುದು ತನಿಖಾ ಸಂಸ್ಥೆಗಳಿಗೆ ಹೊಸ ಸವಾಲು. ಅಧಿಕಾರಿಗಳ ಪ್ರಕಾರ, ಇದು ಹೊಸ ಮಾದರಿಯ ಉಗ್ರ ಚಟುವಟಿಕೆ ವೈಟ್ ಕಾಲರ್ ಜಿಹಾದ್ ಆಗಿದೆ. ಹಾಗಾಗಿ ಫರೀದಾಬಾದ್ ಕೇವಲ ಕಾಕತಾಳೀಯ ಘಟನೆಯಲ್ಲ. ಇದು ಪೂರ್ವನಿಯೋಜಿತ ಭಯೋತ್ಪಾದಕ ಕೃತ್ಯ. ವೈದ್ಯರ ನಿವಾಸದಿಂದ 2,900 ಕಿಲೋ ಗ್ರಾಮ್ ನಷ್ಟು ಸ್ಫೋಟಕ, ಶಸ್ತ್ರಾಸ್ತ್ರಗಳು ಪತ್ತೆಯಾಗಿತ್ತು. ಬಿಜೆಪಿಯ ರಚನಾತಕ ಬುದ್ಧಿಮತ್ತೆ ಉಗ್ರರ ವಿಧ್ವಂಸಕ ಷಡ್ಯಂತ್ರವನ್ನು ವಿಫಲಗೊಳಿಸಿದೆ. ಪ್ರಧಾನಿ ನರೇಂದ್ರಮೋದಿಯವರ ನೇತೃತ್ವದಲ್ಲಿ ಭಯೋತ್ಪಾದಕ ಕೃತ್ಯಗಳು ನಡೆಯುವುದಕ್ಕೆ ಮೊದಲೇ ನಿರ್ಮೂಲನೆಯಾಗುತ್ತದೆ. ಮೋದಿಯವರ ನೇತೃತ್ವದಲ್ಲಿ ಭದ್ರತಾ ಏಜೆನ್ಸಿಗಳು ನಿರ್ಭೀತಿಯಿಂದ, ಸರ್ವ ಸ್ವಾತಂತ್ರ್ಯದಿಂದ ಕಾರ್ಯ ನಿರ್ವಹಿಸುತ್ತಿವೆ. ಅಲ್ಲಿ ಯಾವುದೇ ರಾಜಕೀಯ ಮಧ್ಯಪ್ರವೇಶ ಇರುವುದಿಲ್ಲ. ಭಾರತದ ವಿರುದ್ಧದ ಯಾವುದೇ ಬೆದರಿಕೆಯನ್ನು ಮಟ್ಟ ಹಾಕಲಾಗುತ್ತಿದೆ.

### ದಾಖಲೆ ಇಲ್ಲದೆ ಕಾರಿನಲ್ಲಿ ಸಾಗಿಸುತ್ತಿದ್ದ 1 ಕೋಟಿ ರೂ. ನಗದು ವಶ

**ಚಂಡೀಗಢ:** ಯಾವುದೇ ದಾಖಲೆ ಇಲ್ಲದೆ ಕಾರಿನಲ್ಲಿ ಸಾಗಿಸುತ್ತಿದ್ದ 1 ಕೋಟಿ ರೂ. ನಗದು ಹಣವನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ರೋಹ್ಟಕ್‌ನಲ್ಲಿ ಪೊಲೀಸರು ತಪಾಸಣೆಯ ಸಮಯದಲ್ಲಿ ಕಾರಿನಿಂದ 1 ಕೋಟಿ ರೂ. ನಗದು ಪತ್ತೆಯಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ದೆಹಲಿಯಲ್ಲಿ ಕಾರು ಸ್ಫೋಟದ ಘಟನೆ ಹಿನ್ನೆಲೆಯಲ್ಲಿ ಪೊಲೀಸರು ಕಟ್ಟೆಚ್ಚರ ವಹಿಸಿ ವಾಹನಗಳ ತಪಾಸಣೆ ಸಂರ್ಭದಲ್ಲಿ ಈ ಹಣ ಪತ್ತೆಯಾಗಿದೆ ಎಂದು ರೋಹ್ಟಕ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ಎಸ್. ಭೋರಿಯಾ ಹೇಳಿದ್ದಾರೆ.

ಶಿವಾಜಿ ಕಾಲೋನಿ ಪೊಲೀಸ್ ಠಾಣೆಯ ಉಸ್ತುವಾರಿ ಇನ್ಸ್‌ಪೆಕ್ಟರ್ ರಾಕೇಶ್ ಸೈನಿ ನೇತೃತ್ವದ ಪೊಲೀಸ್ ತಂಡವು ಜಜ್ಜರ್‌ನಿಂದ ಕಾರಿನಲ್ಲಿ ಬರುತ್ತಿದ್ದ ನಾಲ್ವರು ಪುರುಷರೊಂದಿಗೆ ತಡೆದಿದ್ದರೆ. ಪರಿಶೀಲಿಸಿದಾಗ, ಹಿಂದೆ ಕುಳಿತಿದ್ದ ಇಬ್ಬರು ಪ್ರಯಾಣಿಕರು ಹೊಂದಿದ್ದ ಬಾಗ್ ನಲ್ಲಿ ತಲಾ 500, 100 ಮತ್ತು 200 ರೂಪಾಯಿ ನೋಟುಗಳ ಬಂಡಲ್‌ಗಳು ಪತ್ತೆಯಾಗಿದೆ ಒಟ್ಟು ನಗದು 1 ಕೋಟಿ ರೂ. ಇಒತ್ತು ಎಂದಿದ್ದರೆ. ನಾಲ್ವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ ಮತ್ತು ಆದಾಯ ತೆರಿಗೆ ಇಲಾಖೆಗೂ ಮಾಹಿತಿ ನೀಡಲಾಗಿದೆ ಎಂದು ಅಧಿಕಾರಿ ಹೇಳಿದರು.

### ಹರಿಯಾಣ ಮೂಲದ ಮೂವರು ಮುಸ್ಲಿಂ ಧರ್ಮ ಬೋಧಕರು ವಶಕ್ಕೆ

**ಶ್ರೀನಗರ:** ಕಾರ್ ಸ್ಫೋಟ ಪ್ರಕರಣ ಸಂಬಂಧ ತನಿಖೆಯನ್ನು ಮತ್ತಷ್ಟು ಚುರುಕುಗೊಳಿಸಿರುವ ಅಧಿಕಾರಿಗಳ ಸಂಶಯದ ಮೇರೆಗೆ ಹರಿಯಾಣ ಮೂಲದ ಮೂವರು ಮುಸ್ಲಿಂ ಧರ್ಮ ಬೋಧಕರನ್ನು ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿದ್ದಾರೆ. ತನಿಖಾಧಿಕಾರಿಗಳು ವಶಕ್ಕೆ ಪಡೆದಿರುವುದಕ್ಕೂ ಹಾಗೂ ಸೋಮವಾರ ಸಂಜೆ ದೆಹಲಿಯ ಕೆಂಪುಕೋಟೆ ಸಮೀಪದ ರೈಲು ನಿಲ್ದಾಣದ ಬಳಿ ಸಂಭವಿಸಿದ ಐ20 ಹುಂಡೈ ಕಾರು ಪ್ರಕರಣಕ್ಕೂ ಸಂಬಂಧವಿದೆಯೇ ಎಂಬುದು ದೃಢಪಟ್ಟಿಲ್ಲ. ಈಗಾಲೇ ತನಿಖಾಧಿಕಾರಿಗಳ ವಶದಲ್ಲಿರುವ ಕೆಲವು ಶಂಕಿತ ಉಗ್ರರ ಹೇಳಿಕೆ ಆಧಾರದ ಮೇಲೆ ಮಿಂಚಿನ ಕಾರ್ಯಾಚರಣೆ ನಡೆಸಿರುವ ಅಧಿಕಾರಿಗಳು ಮೂವರು ಮುಸ್ಲಿಂ ಧರ್ಮ ಬೋಧಕರನ್ನು ವಶಕ್ಕೆ ಪಡೆದು ವಿಚಾರಣೆಗೆ ಒಳಪಡಿಸಿದ್ದಾರೆ ಎಂದು ವಿಶ್ವಾಸನೀಯ ಮೂಲಗಳು ತಿಳಿಸಿವೆ. ಹರಿಯಾಣದ ಮೇವಾತ್ ಮೂಲದ ಧರ್ಮ ಬೋಧಕ ಮೌಲ್ವಿ ಇಶ್ತಿಯಾಕ್‌ನನ್ನು ವಶಕ್ಕೆ ಪಡೆಯಲಾಗಿದ್ದು, ಇದರೊಂದಿಗೆ ಬಂಧನಕ್ಕೊಳಗಾಗಲಿರುವ ಒಂಬತ್ತನೇ ಆರೋಪಿಯಾಗಿದ್ದಾನೆ. ಫರೀದಾಬಾದ್‌ನ ಅಲ್ ಫಲಾಹ್ ವಿಶ್ವವಿದ್ಯಾಲಯದ ಆವರಣದಲ್ಲಿ ಬಾಡಿಗೆ ಮನೆಯಲ್ಲಿ ಈತ ವಾಸಿಸುತ್ತಿದ್ದ. ಈತನ ಮನೆಯಿಂದಲೇ ಪೊಲೀಸರು 2,500 ಕೆ.ಜಿಗೂ ಹೆಚ್ಚು ಅಮೋನಿಯಂ ನೈಟ್ರೇಟ್, ಪೊಟ್ಯಾಷಿಯಂ ಕ್ಲೋರೇಟ್ ಮತ್ತು ಸಲ್ಫರ್ ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.


# ಅಧ್ಯಕ್ಷರ ಕೈ ಸುಟ್ಟಿತೇ H-1B ವೀಸಾ ಸಮರ?

## ಅಮೆರಿಕದಲ್ಲಿ ಪ್ರತಿಭೆಗಳ ಕೊರತೆ ಒಪ್ಪಿಕೊಂಡ ಡೊನಾಲ್ಡ್ ಟ್ರಂಪ್, ಯೂಟರ್ನ್ ಹೊಡೆದ್ರಾ ಅಮೆರಿಕಾ ಅಧ್ಯಕ್ಷ ಟ್ರಂಪ್?


**ವಾಷಿಂಗ್ಟನ್:** ಅಮೆರಿಕಾದಲ್ಲಿ ಬದುಕು ಕಟ್ಟಿಕೊಳ್ಳುವ ಮಹಾದಾಸೆಯಿಂದ ಉದ್ಯೋಗ ಹರಸಿ ಹೋಗುವ ವಲಸಿಗರ ಮೇಲೆ ಅಮೆರಿಕ ಅಧ್ಯಕ್ಷರಿಗಿದ್ದ ಕಡುಕೋಪ ಯಾಕೋ ತಣ್ಣಗಾದಂತೆ ಕಾಣುತ್ತಿದೆ. ಪ್ರತಿಭಾನ್ವಿತ ವಲಸಿಗರ ಮೇಲೆ H-1B ವೀಸಾ ಸೇರಿದಂತೆ ಕಠಿಣ ನಿರ್ಬಂಧಗಳನ್ನು ಹೇರುತ್ತಾ ಅಮೆರಿಕದ ಉದ್ಯೋಗ ಕನಸು ಕೇವಲ ಅಮೆರಿಕನ್ನರಿಗೆ ಮಾತ್ರ ಎನ್ನುತ್ತಿದ್ದ ಟ್ರಂಪ್ ಈಗ ತನ್ನ ನಿಲುವನ್ನು ಬದಲಾಯಿಸಿ ಅಮೆರಿಕದಲ್ಲಿ ಪ್ರತಿಭಾನ್ವಿತ ಕೆಲಸಗಾರರ ಕೊರತೆ ಇದೆ ಎಂದು ಒಪ್ಪಿಕೊಳ್ಳುವುದು ಮಾತ್ರವಲ್ಲ, ವಿದೇಶದಿಂದ ಪ್ರತಿಭೆಗಳನ್ನು ತರಬೇಕಾಗಿದೆ ಎಂದು ಹೇಳಿದ್ದಾರೆ.

**ಅಮೆರಿಕಾಗೆ ವಿದೇಶಿ ಪ್ರತಿಭೆಗಳ ಅಗತ್ಯವಿದೆ ಎಂದು ಒಪ್ಪಿಕೊಂಡ ಟ್ರಂಪ್:** ಈ ಕುರಿತು ಫಾಕ್ಸ್ ನ್ಯೂಸ್ ಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಟ್ರಂಪ್ ನುರಿತ ವಲಸೆ ಕಾರ್ಮಿಕರ ಮಹತ್ವವನ್ನು ಸಮರ್ಥಿಸಿಕೊಂಡಿದ್ದು, ಯಾವುದೇ ಒಂದು ದೇಶ 10 ಶತಕೋಟಿ ಡಾಲರ್ ಹೂಡಿಕೆ ಮಾಡಿ, ಕಾರ್ಖಾನೆ ನಿರ್ಮಿಸಲು ಹೊರಟಿದೆ, ಮತ್ತು ಐದು ವರ್ಷಗಳಿಂದ ಕೆಲಸ ಮಾಡದ ನಿರುದ್ಯೋಗಿಗಳನ್ನು ಕರೆತಂದು, ಅವರನ್ನು ಕ್ಷಿಪಣಿಗಳನ್ನು ತಯಾರಿಸಲು ಬಿಡುವುದಕ್ಕೆ ಸಾಧ್ಯವಿಲ್ಲ. ಅದು ಹಾಗೆ ಕೆಲಸ ಮಾಡುವುದಿಲ್ಲ ಎಂದು ಉದಾಹರಣೆ ನೀಡುವ ಮೂಲಕ ಸಂಕೀರ್ಣವಾದ ಉತ್ಪಾದನೆ ಮತ್ತು ರಕ್ಷಣಾ ಕ್ಷೇತ್ರಗಳಂತಹ ಕೆಲಸಗಳಿಗೆ ದೀರ್ಘಕಾಲ ನಿರುದ್ಯೋಗಿಗಳಾಗಿರುವ ಅಮೆರಿಕನ್ನರನ್ನು ತರಬೇತಿ ನೀಡದೆ ನೇಮಿಸಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

ಇನ್ನು ಈ ಬೆನ್ನಲ್ಲೇ ಈಗ ಟ್ರಂಪ್ ಅಮೆರಿಕಾಗೆ ವಿದೇಶಿ ಪ್ರತಿಭೆಗಳ ಅವಶ್ಯಕತೆ ಇದೆ. ಅಮೆರಿಕಾಗೆ ನುರಿತ ವಲಸಿಗರನ್ನು ಕರೆದುಕೊಳ್ಳಲು ನಾವು ಬಯಸುತ್ತೇವೆ ಎಂದಿರುವುದು ಯಾವುದೋ ಒಂದು ಮೂಲೆಯಲ್ಲಿ ಟ್ರಂಪ್ ತನ್ನ ಹಿಂದಿನ ಕಠಿಣ ನಿಲುವುಗಳಿಂದ ಅಮೆರಿಕಾದ ಆರ್ಥಿಕ ಪರಿಣಾಮಗಳ ಕುರಿತು ಈಗ ಎಚ್ಚೆತ್ತು ತಮ್ಮ ದೇಶವನ್ನು ಗ್ರೇಟ್ ನೇಷನ್ ಮಾಡುತ್ತಿರುವ ವಲಸಿಗರ ಮೇಲೆ ಹೃದಯವನ್ನು ಸ್ವಲ್ಪ ಮೃದುಗೊಳಿಸಿದಂತೆ ಕಾಣುತ್ತಿದೆ.



> **ಸಂದರ್ಶನಕಾರರು ನಮ್ಮಲ್ಲೂ ಪ್ರತಿಭೆಗಳಿವೆ ಎಂದಾಗ ಅದಕ್ಕೆ ನೇರವಾಗಿ ಉತ್ತರಿಸಿದ ಟ್ರಂಪ್ ನಮ್ಮಲ್ಲಿ ಕೆಲವು ಕ್ಷೇತ್ರಗಳಲ್ಲಿ ಪ್ರತಿಭೆಗಳಿಲ್ಲ ಮತ್ತು ಜನರು ಕಲಿಯಬೇಕಾಗಿದೆ ಎಂದು ಒಪ್ಪಿಕೊಂಡಿದ್ದಾರೆ.**
> **ಇನ್ನು, H-1B ವೀಸಾದ ಕುರಿತು ಮಾತನಾಡುತ್ತಾ ನಾವು ಪ್ರತಿಭಾನ್ವಿತ ವಲಸಿಗರನ್ನು ಅಮೆರಿಕಾಗೆ ಕರೆತರುವ ಅನಿವಾರ್ಯತೆ.**
> **- ಡೊನಾಲ್ಡ್ ಟ್ರಂಪ್ ಅಮೆರಿಕಾ ಅಧ್ಯಕ್ಷ**




### ಅಮೆರಿಕಾದ ವೀಸಾ ನಿರ್ಬಂಧಗಳಿಂದ ಭಾರತೀಯರಿಗೆ ಭಾರಿ ಪೆಟ್ಟು

**ಇನ್ನು ಟ್ರಂಪ್ ಎರಡನೇ ಬಾರಿಗೆ ಅಧಿಕಾರಕ್ಕೆ ಬಂದಾಗಿನಿಂದಲೂ ಅನುಸರಿಸುತ್ತಿದ್ದ ಕಠಿಣ ವಲಸೆ ನೀತಿಗಳಿಂದ ಅಮೆರಿಕಾಗೆ ಹೋಗಲು ಬಯಸುವ ಭಾರತೀಯರ ಮೇಲೆ ಅತಿಹೆಚ್ಚು ಪರಿಣಾಮ ಬೀಳತೊಡಗಿತ್ತು. 2024ರ ವರದಿಯ ಪ್ರಕಾರ ಅಮೆರಿಕಾದ H-1B ವೀಸಾವನ್ನು ಬಹುತೇಕ ಶೇ.70% ಭಾರತೀಯರೇ ಪಡೆದುಕೊಳ್ಳುತ್ತಿದ್ದರು. ಆದರೆ ಸೆಪ್ಟಂಬರ್‌ನಲ್ಲಿ ಹಿಂದೆ ಟ್ರಂಪ್ ಆಡಳಿತವು ಅಮೆರಿಕಾಗೆ ವಲಸೆ ಹೋಗುವಲು ಸಲ್ಲಿಸುವ ಹೊಸ H-1B ವೀಸಾ ಅರ್ಜಿಗಳ ಮೇಲೆ 100,000 ಭಾರಿ ಶುಲ್ಕವನ್ನು ವಿಧಿಸಿದ್ದರು. ಇದರಿಂದ ಭಾರತೀಯತಿಗೆ ಭಾರಿ ಹೊಡೆತ ಬಿದ್ದಿತ್ತು. ಇನ್ನು ಇತ್ತಿಚೇಗೆ ಅಮೆರಿಕದ ಕನಸು ಕೇವಲ ಅಮೆರಿಕನ್ನರಿಗೆ ಮಾತ್ರ ಎಂದು ಹೇಳುವ ಮೂಲಕ ವೀಸಾ ನಿರ್ಬಂಧಗಳನ್ನು ಮತ್ತಷ್ಟು ಹೆಚ್ಚಿಸುವ ಸುಳಿವು ನೀಡಿದ್ದರು. ಅಲ್ಲದೆ ಕಳೆದ ವಾರವಷ್ಟೆ ಪ್ರಾಜೆಕ್ಟ್ ಫೈರ್ ವಾಲ್ ಎಂಬ ಹೆಸರಿನಲ್ಲಿ H-1B ವೀಸಾ ದುರ್ಬಳಕೆಗಳ ಕಡಿವಾಣ ಹಾಕಲು ಕಾರ್ಯಾಚರಣೆ ಪ್ರಾರಂಭಿಸಿತ್ತು.**

# ನ. 28ಕ್ಕೆ ಬಿಡುಗಡೆ ಆಗಲಿದೆ 'ಜಿಎಸ್‌ಟಿ' ಸಿನಿಮಾ

ಸೃಜನ್ ಲೋಕೇಶ್ ಅವರು ನಿರ್ದೇಶನ ಮಾಡಿರುವ ಚೊಚ್ಚಲ ಸಿನಿಮಾ 'ಜಿಎಸ್‌ಟಿ' ಬಿಡುಗಡೆಗೆ ಸಜ್ಜಾಗಿದೆ. ಉಪೇಂದ್ರ ಅವರು ಈ ಸಿನಿಮಾದ ಟ್ರೇಲರ್ ಬಿಡುಗಡೆ ಮಾಡಿ ಶುಭಕೋರಿದ್ದಾರೆ. ಚಿತ್ರತಂಡ ಸುದ್ದಿಗೋಷ್ಠಿ ಮಾಡಿದೆ. ಇದು ಹಾರರ್ ಸಿನಿಮಾ ಆದರೂ ಕೂಡ ನಗು ಇರಲಿದೆ ಎಂದು ಸೃಜನ್ ಲೋಕೇಶ್ ಅವರು ಹೇಳಿದ್ದಾರೆ. ನಟ, ನಿರೂಪಕ ಸೃಜನ್ ಲೋಕೇಶ್ ಅವರು ಇದೇ ಮೊದಲ ಬಾರಿಗೆ ನಿರ್ದೇಶನ ಮಾಡಿದ್ದಾರೆ. ಆ ಸಿನಿಮಾಗೆ




'ಜಿಎಸ್‌ಟಿ' ಎಂದು ಶೀರ್ಷಿಕೆ ಇಡಲಾಗಿದೆ. ಎಲ್ಲಾ ಕೆಲಸಗಳನ್ನು ಮುಗಿಸಿಕೊಂಡಿರುವ ಈ ಸಿನಿಮಾ ಈಗ ಬಿಡುಗಡೆಗೆ ಸಜ್ಜಾಗಿದೆ. 'ಸಂದೇಶ್ ಪ್ರೊಡಕ್ಷನ್ಸ್' ಮೂಲಕ ಸಂದೇಶ್ ಎನ್. ಅವರು ನಿರ್ಮಾಣ ಮಾಡಿದ್ದಾರೆ. ಸಂದೇಶ್ ನಾಗರಾಜ್ ಅವರು ಈ ಚಿತ್ರವನ್ನು ಅರ್ಪಿಸುತ್ತಿದ್ದಾರೆ. ನವೆಂಬರ್ 28ರಂದು ಈ ಸಿನಿಮಾ ಬಿಡುಗಡೆ ಆಗಲಿದೆ. ಇತ್ತೀಚೆಗೆ ಟ್ರೇಲರ್ ಬಿಡುಗಡೆ ಆಗಿದೆ. 'ರಿಯಲ್ ಸ್ಟಾರ್' ಉಪೇಂದ್ರ ಅವರು ಟ್ರೇಲರ್ ರಿಲೀಸ್ ಮಾಡಿದರು. ಪ್ರಿಯಾಂಕಾ ಉಪೇಂದ್ರ ಅವರು ಹಾಡಿನ ಪ್ರೋಮೋ ರಿಲೀಸ್ ಮಾಡಿ ಶುಭ ಹಾರೈಸಿದರು. ಈ ಕಾರ್ಯಕ್ರಮಕ್ಕೆ ನಟಿ ತಾರಾ ಅನುರಾಧ ಅವರು ಮುಖ್ಯ ಅತಿಥಿಯಾಗಿ ಆಗಮಿಸಿದ್ದರು. ಈ ವೇಳೆ ಸೃಜನ್ ಲೋಕೇಶ್ ಮಾತನಾಡಿದರು. ಇದು ನಾನು ಕಂಡ ಕನಸು. ಅದನ್ನು ನನಸು ಮಾಡಿದವರು ನಿರ್ಮಾಪಕ ಸಂದೇಶ್. ನಾನು ಈ ಸಿನಿಮಾ ಮೂಲಕ ನಿರ್ದೇಶಕನಾಗಿದ್ದೇನೆ.

ನಮ್ಮ ತಾತಾ ಸುಬ್ಬಯ್ಯ ನಾಯ್ಡು ಅವರು ಭಕ್ತ ಪ್ರಹ್ಲಾದ ಸಿನಿಮಾದಲ್ಲಿ ನಮ್ಮ ತಂದೆ ಲೋಕೇಶ್ ಅವರನ್ನು ಬಾಲನಟನಾಗಿ ತೆರೆಗೆ ತಂದರು. ಬಳಿಕ ನಮ್ಮ ತಂದೆ ನಿರ್ದೇಶನದ ಬುಜಂಗಯ್ಯನ ದಶಾವತಾರ ಚಿತ್ರದ ಮೂಲಕ ಬಾಲನಟನಾಗಿ ನಾನು ಚಿತ್ರರಂಗಕ್ಕೆ ಬಂದೆ. ಈಗ ನನ್ನ ಮಗ ಸುಕೃತ್ ನನ್ನ ಮೊದಲ ನಿರ್ದೇಶನದಲ್ಲಿ ಬೆಳ್ಳಿತೆರೆ ಪ್ರವೇಶಿಸಿದ್ದಾನೆ ಎಂದು ಸೃಜನ್ ಹೇಳಿದರು. ಇದು ಹಾರಾರ್ ಸಿನಿಮಾ ಆದರೂ ನಗುವೇ ಪ್ರಧಾನ. ಯಾವುದೇ ಸಂದೇಶ ನೀಡದೇ ನಗುವಿನ ಮೂಲಕ ಜನರ ಮನಸ್ಸನ್ನು ಗೆಲ್ಲಲ್ಲಿದ್ದೇನೆ. ಲೋಕೇಶ್ ಮ್ಯೂಸಿಕ್ ಎಂಬ ಮ್ಯೂಸಿಕ್ ಸಂಸ್ಥೆ ಸಹ ಆರಂಭಿಸಿದ್ದೇನೆ. ಅದರಲ್ಲಿ ನಮ್ಮ ಸಿನಿಮಾದ ಹಾಡುಗಳು ಬಿಡುಗಡೆ ಆಗಲಿದೆ. ಯಾರು ಊಹಿಸಲಾಗದ ಕ್ಲೈಮ್ಯಾಕ್ಸ್ ಇದೆ' ಎಂದಿದ್ದಾರೆ ಸೃಜನ್ ಲೋಕೇಶ್.




# ಕಸಿ ಮಾಡಿಸಿದ್ದ ಸ್ತನ ತೆಗೆಸಲು ಮುಂದಾದ ಶೆರ್ಲಿನ್

ಅಡಿಯಿಂದ ಮುಡಿಯವರೆಗೂ ದೇಹದ ಎಲ್ಲಾ ಭಾಗಗಳಿಗೂ ಪ್ಲಾಸ್ಟಿಕ್ ಸರ್ಜರಿ ಮಾಡಿಸಿಕೊಂಡೇ ಫೇಮಸ್ ಆಗ್ತಿರೋ ಒಂದಿಷ್ಟು ನಟಿಯರು ಇದ್ದಾರೆ. ಅದ್ರಲ್ಲೂ ಬಾಲಿವುಡ್‌ನಲ್ಲಿ ಬ್ಯೂಟಿಗಳು ಎಂದುಕರೆಸಿಕೊಳ್ಳುತ್ತಿರುವ ಬಹುತೇಕ ನಟಿ ಮಣಿಗಳದ್ದೂ ಇದೇ ಸ್ಥಿತಿ. ದೇಹದ ಒಂದಲ್ಲೊಂದು ಭಾಗಗಳಿಗೆ ಇವರು ಕತ್ತರಿ ಹಾಕಿಸಿಕೊಂಡವರೇ.

ನಟಿ ಶ್ರೀದೇವಿಯ ಮೂಗಿನ ಸರ್ಜರಿಯಿಂದ ಹಿಡಿದು ನಟಿ ಶೆರ್ಲಿನ್ ಚೋಪ್ರಾ, ರಾಖಿ ಸಾವಂತ್ ರಂಥ ನಟಿಯರು ದೇಹದ ಭಾಗಕ್ಕೇ ಕತ್ತರಿ ಹಾಕಿಸಿಕೊಂಡವರೇ. ಇತ್ತೀಚೆಗೆ ಸೋಷಿಯಲ್ ಮೀಡಿಯಾ ಸ್ಟಾರ್ ಉರ್ಫಿ ಜಾವೇದ್, ಎರಡು ತಿಂಗಳ ಒಳಗೆ ನನಗೆ ದೊಡ್ಡ ಸ್ತನಗಳು ಬೇಕು ಅಂತ ಡಾಕ್ಟರ್ ಮುಂದೆ ಸಿಲಿಕಾನ್ ಸ್ತನ ಹಿಡಿದುಕೊಂಡು ಕುಳಿತಿದ್ದ ಪ್ರಸಂಗವೂ ಕಣ್ಣಮುಂದಿದೆ. ಈ ನಡುವೆ ಬಾಲಿವುಡ್ ಬ್ಯೂಟಿಯರಲ್ಲಿ ಒಬ್ಬರಾದ ನಟಿ ಶೆರ್ಲಿನ್ ಚೋಪ್ರಾ, ಅಚ್ಚರಿ ನಿರ್ಧಾರವೊಂದನ್ನ ಕೈಗೊಂಡಿದ್ದಾರೆ. ದೇಹದ ಹಲವು ಭಾಗಗಳಲ್ಲಿ ಅತೀವ ನೋವು ಕಾಣಿಸಿಕೊಂಡ ಹಿನ್ನೆಲೆ ಬ್ರೆಸ್ಟ್ ಇಂಪ್ಲಾಂಟ್ ಅನ್ನು ಶಸ್ತ್ರಚಿಕಿತ್ಸೆ ಮೂಲಕ ತೆಗೆಸಲು ನಿರ್ಧರಿಸಿದ್ದಾರೆ.

ಹೌದು ಶೆರ್ಲಿನ್ ಕಳೆದ ಕೆಲವು ದಿನಗಳಿಂದ ನಿರಂತರ ಬೆನ್ನು ನೋವು, ಎದೆ ನೋವು, ಭುಜದ ನೋವು ಮತ್ತು ಎದೆಯ ಭಾರದ ಸಮಸ್ಯೆಗಳಿಂದ ಬಳಲುತ್ತಿದ್ದರು. ವೈದ್ಯಕೀಯ ತಪಾಸಣೆ ಬಳಿಕ ಇದು ಬ್ರೆಸ್ಟ್ ಇಂಪ್ಲಾಂಟ್ ಅಥವಾ ಸ್ತನ ಕಸಿಯಿಂದಾಗಿರುವ ಪರಿಣಾಮ ಎಂಬುದು ಗೊತ್ತಾಯಿತು. ಹೀಗಾಗಿ ಕಸಿ ಮಾಡಿಸಿದ್ದ ಸ್ತನದ ಭಾಗವನ್ನ ತೆಗೆಸಲು ನಿರ್ಧರಿಸಿದ್ದಾರೆ.

# ಕೆಡಿಗೆ ಜೋಡಿಯಾದ ಕೀರ್ತಿ ಸುರೇಶ್ ಆ್ಯಕ್ಷನ್ ಪ್ರಿನ್ಸ್ ಜೊತೆ ಮಲಯಾಳಂ ಚೆಲುವೆ



ಕೆಡಿ ಸಿನಿಮಾ ಮೂಲಕ ಭಾರೀ ನಿರೀಕ್ಷೆ ಮೂಡಿಸಿರುವಂತಹ ಧ್ರುವ ಸರ್ಜಾ ಈಗ ಅದರ ರಿಲೀಸ್‌ಗೆ ಮೊದಲೇ ಮತ್ತೊಂದು ಸಿನಿಮಾದ ಸಿದ್ಧತೆಯಲ್ಲಿದ್ದಾರೆ. ಕೆಡಿ ಸಿನಿಮಾ ರಿಲೀಸ್‌ಗೂ ಮೊದಲೆ ಮತ್ತೊಂದು ಚಿತ್ರಕ್ಕೆ ಸಜ್ಜಾದ ಧ್ರುವ ಸರ್ಜಾ ಅವರು ಮತ್ತೊಂದು ಭರ್ಜರಿ ಸಿನಿಮಾ ಮೂಲಕ ಬರಲಿದ್ದಾರೆ. ಕೆಡಿ ಪೋಸ್ಟ್ ಪ್ರೊಡಕ್ಷನ್ ಕೆಲಸದಲ್ಲಿ ಚಿತ್ರತಂಡ ಬ್ಯುಸಿಯಾಗಿದ್ದು ಕೆಡಿ ಕೆಲಸ ಮುಗಿಸಿ ಧ್ರುವ ಹೊಸ ಚಿತ್ರಕ್ಕೆ ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ ಎನ್ನಲಾಗಿದೆ. ಇದೇ ತಿಂಗಳ 18ಕ್ಕೆ ಧ್ರುವ ಸರ್ಜಾ ನೂತನ ಚಿತ್ರಕ್ಕೆ ಮುಹೂರ್ತ ನಿಗದಿಯಾಗಿದ್ದು ಬಸವನಗುಡಿಯ ದೊಡ್ಡಗಣಪತಿ ದೇವಸ್ಥಾನದಲ್ಲಿ ಧ್ರುವ ಸಿನಿಮಾ ಮುಹೂರ್ತ ನಡೆಯಲಿದೆ. ಕೆರೆಬೇಟೆ ಚಿತ್ರದ ಮೂಲಕ ಭರವಸೆ ಮೂಡಿಸಿರುವ ರಾಜುಗುರು ನಿರ್ದೇಶನದಲ್ಲಿ ಧ್ರುವ ನಟನೆ ಮೂಡಿ ಬರಲಿದೆ. ಧ್ರುವ ಚಿತ್ರ ನಿರ್ಮಾಣ ಮಾಡ್ತಿರುವ ಮುಂಬೈ ಮೂಲದ ಗೋಲ್ಡ್ ಮೈನ್ಸ್ ಬಂಡವಾಳ ಹೂಡಲಿದ್ದಾರೆ. ಧ್ರುವ ಹೊಸ ಚಿತ್ರಕ್ಕೆ ನಾಯಕಿಯಾಗಿ ಪ್ಯಾನ್ ಇಂಡಿಯಾ ನಾಯಕಿಯಾಗಿ ಕೀರ್ತಿ ಸುರೇಶ್ ಜೋಡಿಯಾಗಲಿದ್ದಾರೆ ಎನ್ನಲಾಗಿದೆ. ಮೊದಲ ಬಾರಿಗೆ ಕನ್ನಡ ಚಿತ್ರರಂಗಕ್ಕೆ ಬರ್ತಿರುವ ಕೀರ್ತಿ ಸುರೇಶ್ ಈಗಾಗಲೇ ಮಲಯಾಳಂ, ತೆಲುಗು, ತಮಿಳು, ಹಿಂದಿ ಸಿನಿಮಾಗಳಲ್ಲಿ ನಟಿಸಿ ಸೈ ಎನಿಸಿಕೊಂಡಿದ್ದಾರೆ. ಈಗ ಅವರು ಕನ್ನಡದಲ್ಲೂ ಮಿಂಚೋಕೆ ರೆಡಿಯಾಗಿದ್ದಾರೆ.

**ನಟನ ಬರ್ತ್‌ಡೇಗೆ ಬಂದಿದ್ದ ಸ್ಪೆಷಲ್ ಕೆಡಿ ಪೋಸ್ಟರ್:** ಹಿನ್ನೆಲೆಯಲ್ಲಿಯೇ ಕೆಡಿ ಚಿತ್ರದ ಹೊಸ ಪೋಸ್ಟರ್ ಹೊರ ಬಂದಿದೆ. ಇದರಲ್ಲಿ ಧ್ರುವ ಲುಕ್ ಕಂಪ್ಲೀಟ್ ಚೇಂಜ್ ಆಗಿದೆ. ಶಾರ್ಟ್ ಹೇರ್ ಸ್ಟೈಲ್ ಇದೆ. ರಕ್ತಸಿಕ್ತ ಮಚ್ಚು ಇದೆ. ಹೆಗಲ ಮೇಲೆ ಚಳಿಗೆ ಬಳಕೆ ಮಾಡೋ ಮಫ್ಲರ್ ಇದೆ. ಕಾಗದದಲ್ಲಿರೋದನ್ನ ಚಪ್ಪರಿಸಿ ತಿನ್ನುತ್ತಿದ್ದಾರೆ. ಆದರೆ, ಇದೇ ಧ್ರುವ ಸರ್ಜಾ ಹಿಂದೆ ಒಂದಷ್ಟು ಜನ ಇದ್ದಾರೆ. ಎಲ್ಲರ ಕೈಯಲ್ಲೂ ಕಂದೀಲು ಇದೆ. ಧ್ರುವ ಸರ್ಜಾ ಪಕ್ಕದಲೂ ಒಂದು ಲಾಟೀನು ಇದೆ. ಈ ಎಲ್ಲಾ ವಿಷಯ ಇರೋ ಕೆಡಿ ಚಿತ್ರದ ಹೊಸ ಪೋಸ್ಟರ್ ಎಲ್ಲರ ಗಮನ ಸೆಳೆದಿತ್ತು.

ಧ್ರುವ ಜನ್ಮ ದಿನಕ್ಕೆ ಹೊಸ ಪೋಸ್ಟರ್ ಬಿಟ್ಟಿದ್ದರು. ಧ್ರುವ ಸರ್ಜಾ ಕೆಡಿ ಪೋಸ್ಟರ್ ಭಯಂಕರವಾಗಿಯೇ ಇದೆ. ಶಾರ್ಟ್ ಹೇರ್ ಅಲ್ಲಿಯೇ ಧ್ರುವ ಇಲ್ಲಿ ಕಾಣಿಸಿಕೊಂಡಿದ್ದಾರೆ. ಇಡೀ ರಾತ್ರಿ ಗಸ್ತು ಹೊಡೆಯೋಕೆ ಹೊರಟವರ ರೀತಿನೇ ಕಾಣಿಸುತ್ತಿದ್ದಾರೆ. ಊಟ ಮಾಡಿಯೇ ಹೋಗ್ತಿದ್ದಾರೆ ಅನಿಸುತ್ತದೆ.




# 3800 ಮಕ್ಕಳ ಹೃದಯ ಶಸ್ತ್ರಚಿಕಿತ್ಸೆ ಮಾಡಿಸಿ ಗಿನ್ನೆಸ್ ದಾಖಲೆ ಮಾಡಿದ ಪಲಕ್



ಖ್ಯಾತ ಗಾಯಕಿ ಪಲಕ್ ಮುಚ್ಚಲ್ ಅವರ ಸುಮಧುರ ಕಂಠಕ್ಕೆ ಕೋಟ್ಯಂತರ ಅಭಿಮಾನಿಗಳು ಫಿದಾ ಆಗಿದ್ದಾರೆ. ಕೇವಲ ಹಾಡಿನಿಂದ ಮಾತ್ರವಲ್ಲದೇ ಜನಪರ ಕಾರ್ಯಗಳಿಂದಲೂ ಪಲಕ್ ಮುಚ್ಚಲ್ ಅವರು ಜನಮನ ಗೆದ್ದಿದ್ದಾರೆ. ಚಿಕ್ಕ ವಯಸ್ಸಿನಿಂದಲೂ ಅವರು ಚಾರಿಟಿ ಕೆಲಸಗಳನ್ನು ಮಾಡುತ್ತಾ ಬಂದಿದ್ದಾರೆ. ಈವರೆಗೂ 3800 ಬಡಮಕ್ಕಳ ಮಕ್ಕಳ ಹೃದಯ ಶಸ್ತ್ರ ಚಿಕಿತ್ಸೆಗೆ ನೆರವಾಗುವ ಮೂಲಕ ಪಲಕ್ ಮುಚ್ಚಲ್ ಅವರು ಗಿನ್ನೆಸ್ ದಾಖಲೆ ಬರೆದಿದ್ದಾರೆ. ಅವರ ಈ ಕಾರ್ಯಕ್ಕೆ ಎಲ್ಲರೂ ಮೆಚ್ಚುಗೆ ಸೂಚಿಸುತ್ತಿದ್ದಾರೆ. ಬಹುಭಾಷೆಯಲ್ಲಿ ಹಾಡುವ ಮೂಲಕ ಪಲಕ್ ಮುಚ್ಚಲ್ ಅವರು ಅಪಾರ ಜನಪ್ರಿಯತೆ ಪಡೆದಿದ್ದಾರೆ. ಕನ್ನಡದಲ್ಲಿ ಕೂಡ ಅವರು ಅನೇಕ ಸೂಪರ್ ಹಿಟ್ ಗೀತೆಗಳಿಗೆ ಧ್ವನಿ ಆಗಿದ್ದಾರೆ.

ಅಧ್ಯಕ್ಷ ಸಿನಿಮಾದ 'ಸುಮ್ ಸುಮ್ನೇ..ಅಯೋಗ್ಯ' ಚಿತ್ರದ 'ಏನಮ್ಮಿ ಏನಮ್ಮಿ..' ಮುಂತಾದ ಹಾಡುಗಳ ಮೂಲಕ ಕನ್ನಡ ಚಿತ್ರರಂಗದಲ್ಲೂ ಪಲಕ್ ಮುಚ್ಚಲ್ ಅವರು ಹೆಸರು ಮಾಡಿದ್ದಾರೆ. ಅವರ ಹೃದಯವಂತಿಕೆ ಬಗ್ಗೆ ಅಭಿಮಾನಿಗಳಿಗೆ ಹೆಚ್ಚು ಹೆಮ್ಮೆ ಇದೆ. 'ಪಲಕ್ ಪಲಾಶ್ ಚಾರಿಟೆಬಲ್ ಫೌಂಡೇಶನ್' ಮೂಲಕ ಪಲಕ್ ಮುಚ್ಚಲ್ ಅವರು ಸಾವಿರ ಮಕ್ಕಳ ಹೃದಯ ಶಸ್ತ್ರಚಿಕಿತ್ಸೆಗೆ ಆರ್ಥಿಕ ನೆರವು ನೀಡಿದ್ದಾರೆ. ಭಾರತದ ಹಾಗೂ ವಿದೇಶದಲ್ಲಿ ಇರುವ ಬಡ ಮಕ್ಕಳ ಹಾರ್ಟ್ ಸರ್ಜರಿಗೆ ಅವರು ನೆರವಾಗಿದ್ದಾರೆ. ಬಾಲಕಿ ಆಗಿದ್ದಾಗಿನಿಂದಲೂ ಪಲಕ್ ಮುಚ್ಚಲ್ ಅವರು ಈ ಕಾರ್ಯ ಮಾಡುತ್ತಾ ಬಂದಿದ್ದಾರೆ.

# 'ತಿಥಿ' ಖ್ಯಾತಿಯ ಗಡ್ಡಪ್ಪ ನಿಧನ



ಅಸ್ತಮಾ ಜೊತೆ ಹೃದಯ ಸಂಬಂಧಿ ಕಾಯಿಲೆಯಿಂದ ಬಳಲುತ್ತಿದ್ದ ಗಡ್ಡಪ್ಪ ತಿಂಗಳ ಹಿಂದಷ್ಟೇ ಮನೆಯಲ್ಲೇ ಎಡವಿ ಬಿದ್ದು ಸೊಂಟಕ್ಕೆ ಬಲವಾಗಿ ಪೆಟ್ಟು ಮಾಡಿಕೊಂಡಿದ್ದರು. ಇದೀಗ ಚಿಕಿತ್ಸೆ ಫಲಕಾರಿಯಾಗದೇ ವಿಧಿವಶರಾಗಿದ್ದಾರೆ. ಮಂಡ್ಯ ಜಿಲ್ಲೆಯ ನೊದೆ ಕೊಪ್ಪಲು ಗ್ರಾಮದ ಗಡ್ಡಪ್ಪ ನಿಜ ಹೆಸರು ಚನ್ನೇಗೌಡ. 'ತಿಥಿ' ಸಿನಿಮಾದಲ್ಲಿ ಗಡ್ಡಪ್ಪ ಪಾತ್ರದ ಬಳಿಕ ಗಡ್ಡಪ್ಪ ಹೆಸರಿನಿಂದಲೇ ಗುರುತಿಸಿಕೊಂಡಿದ್ದರು.

ಇವರಿಗೆ 89 ವರ್ಷ ವಯಸ್ಸಾಗಿತ್ತು, ಹಲವು ಪ್ರಶಸ್ತಿಗಳನ್ನ ಬಾಚಿಕೊಂಡ 'ತಿಥಿ' ಸಿನಿಮಾದಲ್ಲಿ ಬೇರೆಲ್ಲ ಪಾತ್ರಕ್ಕಿಂತ ಹೆಚ್ಚು ಮಿಂಚಿದ್ದ ಪಾತ್ರವೇ ಗಡ್ಡಪ್ಪ ಕ್ಯಾರೆಕ್ಟರ್. ವೃದ್ಯಾಪ್ಯದಲ್ಲಿ ರಾತ್ರೋರಾತ್ರಿ ಸ್ಟಾರ್ ಆಗಿದ್ದವರು ಗಡ್ಡಪ್ಪ. ತಿಥಿ ಚಿತ್ರದ ಬಳಿಕ ತರ್ಲೆ ವಿಲೇಜ್, ಜಾನಿ ಮೇರಾ ನಾವ್, ಹಳ್ಳಿ ಪಂಚಾಯಿತಿ ಸೇರಿದಂತೆ ಒಟ್ಟೂ 10 ಚಿತ್ರಗಳಲ್ಲಿ ಗಡ್ಡಪ್ಪ ನಟಿಸಿದ್ದಾರೆ. ಸ್ವಗ್ರಾಮ ನೊದೆಕೊಪ್ಪಲು ಗ್ರಾಮದಲ್ಲಿ ಗಡ್ಡಪ್ಪ ಅಂತ್ಯಕ್ರಿಯೆ ನಡೆದಿದೆ.



# ಮೊದಲ ಟೆಸ್ಟ್‌ಗೂ ಮುನ್ನ ಧ್ರುವ್ ಜುರೆಲ್‌ಗೆ ಸಿಹಿ ಸುದ್ದಿ ನೀಡಿದ ಕೋಚ್

ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ಎರಡು ಪಂದ್ಯಗಳ ಟೆಸ್ಟ್ ಸರಣಿಯು ನವೆಂಬರ್ 14 ರಂದು ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ಆರಂಭವಾಗಲಿದೆ. ಉಭಯ ತಂಡಗಳ ನಡುವಿನ ಮೊದಲ ಟೆಸ್ಟ್‌ಗೆ ಟೀಂ ಇಂಡಿಯಾದ ಪ್ಲೇಯಿಂಗ್ 11 ಹೇಗಿರಲಿದೆ ಎಂಬುದು ಎಲ್ಲರಲ್ಲೂ ಕುತೂಹಲ ಮೂಡಿಸಿದೆ. ಏಕೆಂದರೆ ರಿಷಭ್ ಪಂತ್ ಆಗಮನದಿಂದ ವಿಕೆಟ್‌ಕೀಪರ್ ಬ್ಯಾಟ್ಸ್‌ಮನ್ ಧ್ರುವ್ ಜುರೆಲ್ ತಂಡದಿಂದ ಹೊರಬೀಳಬಹುದು ಎನ್ನಲಾಗುತ್ತಿತ್ತು. ಆದರೀಗ ಜುರೆಲ್ ಆಡುವ ಬಗ್ಗೆ ತಂಡದ ಸಹಾಯಕ ಕೋಚ್ ರಯಾನ್ ಟೆನ್ ಡೋಸ್ಚೇಟ್ ಸ್ಪಷ್ಟನೆ ನೀಡಿದ್ದಾರೆ. ಆ ಪ್ರಕಾರ, ಪ್ರಸ್ತುತ ಉತ್ತಮ ಫಾರ್ಮ್‌ನಲ್ಲಿರುವ ಧ್ರುವ್ ಜುರೆಲ್ ಮೊದಲ ಟೆಸ್ಟ್ ಪಂದ್ಯದಲ್ಲಿ ಆಡುವುದು ಖಚಿತವಾಗಿದೆ.

**ಉತ್ತಮ ಫಾರ್ಮ್‌ನಲ್ಲಿರುವ ಧ್ರುವ್ ಜುರೆಲ್:** ನವೆಂಬರ್ 12 ರ ಬುಧವಾರ ಈಡನ್ ಗಾರ್ಡನ್ಸ್ ಕ್ರೀಡಾಂಗಣದಲ್ಲಿ ನಡೆದ ಟೀಂ ಇಂಡಿಯಾದ ಎರಡನೇ ಅಭ್ಯಾಸ ಸೆಷನ್‌ಗೂ ಮುನ್ನ ಪತ್ರಿಕಾಗೋಷ್ಠಿಯಲ್ಲಿ ತಂಡದ ಆಡುವ ಹನ್ನೊಂದರ ಬಳಗದ ಬಗ್ಗೆ ಮಾತನಾಡಿದ ಸಹಾಯಕ ಕೋಚ್ ಟೆನ್ ಡೋಸ್ಚೇಟ್, ನಮಗೆ ಸಂಯೋಜನೆಯ ಬಗ್ಗೆ ಸ್ಪಷ್ಟನೆ ಇದೇ ಎಂದು ನಾನು ಭಾವಿಸುತ್ತೇನೆ. ಕಳೆದ ಆರು ತಿಂಗಳುಗಳಲ್ಲಿ ಧ್ರುವ್ ಜುರೆಲ್ ಆಡಿದ ರೀತಿ ಮತ್ತು ಕಳೆದ ವಾರ ಬೆಂಗಳೂರಿನಲ್ಲಿ ಅವರು ಬಾರಿಸಿದ ಎರಡು ಶತಕಗಳನ್ನು ನೋಡಿದರೆ, ಅವರು ಈ ವಾರ ಆಡುವುದು ಖಚಿತ' ಎಂದಿದ್ದಾರೆ.

ಕಳೆದ ವರ್ಷವಷ್ಟೇ ಟೀಂ ಇಂಡಿಯಾ ಪರ ಟೆಸ್ಟ್ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿದ್ದ ಜುರೆಲ್ ಆರಂಭದಲ್ಲಿ ಹೇಳಿಕೊಳ್ಳುವಂತಹ ಪ್ರದರ್ಶನ ನೀಡಿರಲಿಲ್ಲ. ಆದರೆ ಇತ್ತೀಚೆಗೆ ವೆಸ್ಟ್ ಇಂಡೀಸ್ ವಿರುದ್ಧ ನಡೆದ ತವರು ಸರಣಿಯಲ್ಲಿ ರಿಷಭ್ ಪಂತ್ ಅನುಪಸ್ಥಿತಿಯಲ್ಲಿ ವಿಕೆಟ್ ಕೀಪಿಂಗ್ ಜವಾಬ್ದಾರಿಯನ್ನು ವಹಿಸಿಕೊಂಡ ಅವರು, ತಮ್ಮ ಚೊಚ್ಚಲ ಟೆಸ್ಟ್ ಶತಕ ಸೇರಿದಂತೆ 3 ಇನ್ನಿಂಗ್ಸ್‌ಗಳಲ್ಲಿ 175 ರನ್ ಬಾರಿಸಿದ್ದರು. ನಂತರ ನಡೆದಿದ್ದ ದಕ್ಷಿಣ ಆಫ್ರಿಕಾ ಎ ವಿರುದ್ಧದ ಎರಡನೇ ಟೆಸ್ಟ್ ಪಂದ್ಯದ ಎರಡೂ ಇನ್ನಿಂಗ್ಸ್‌ಗಳಲ್ಲಿ ಜುರೆಲ್ ಶತಕ ಬಾರಿಸಿದ್ದರು.


**ನಿತೀಶ್ ಕಾಯಲೇಬೇಕು:** ಆದಾಗ್ಯೂ, ಟೀಂ ಇಂಡಿಯಾದ ಸ್ಟಾರ್ ವಿಕೆಟ್ ಕೀಪರ್ ರಿಷಭ್ ಪಂತ್ ಈ ಸರಣಿಯಲ್ಲಿ ಮತ್ತೆ ತಂಡಕ್ಕೆ ಮರಳುತ್ತಿರುವುದರಿಂದ ಜುರೆಲ್ ವಿಕೆಟ್ ಕೀಪರ್ ಆಗಿ ಆಡುವುದಿಲ್ಲ. ಪಂತ್ ಈ ಜವಾಬ್ದಾರಿಯನ್ನು ಹೊರಲಿದ್ದು, ಜುರೆಲ್ ಕೇವಲ ಬ್ಯಾಟ್ಸ್‌ಮನ್ ಆಗಿ ಆಡಲಿದ್ದಾರೆ. ಇವರಿಬ್ಬರಲ್ಲದೆ ಕೆಎಲ್ ರಾಹುಲ್ ಕೂಡ ತಂಡದಲಿದ್ದು, ಅವರು ಕೂಡ ವಿಕೆಟ್ ಕೀಪಿಂಗ್ ಮಾಡಬಲ್ಲರು. ಇದರರ್ಥ ಮೊದಲ ಟೆಸ್ಟ್‌ಗೆ ಭಾರತ ತಂಡದಲ್ಲಿ ಮೂವರು ವಿಕೆಟ್ ಕೀಪರ್‌ಗಳು ಕಾಣಿಸಿಕೊಳ್ಳಲಿದ್ದಾರೆ. ಜುರೆಲ್ ಪ್ಲೇಯಿಂಗ್ 11ನಲ್ಲಿ ಸ್ಥಾನ ಪಡೆಯುವುದು ಖಚಿತವಾಗಿರುವುದರಿಂದ ಯುವ ಆಲ್ ರೌಂಡರ್ ನಿತೀಶ್ ಕುಮಾರ್ ರೆಡ್ಡಿ ಹೊರಗುಳಿಯ ಬೇಕಾಗಬಹುದು ಎಂದು ಟೆನ್ ಡೋಸ್ಚೇಟ್ ಬಹಿರಂಗಪಡಿಸಿದ್ದಾರೆ. ನಿತೀಶ್ ಈ ಹಿಂದೆ ವೆಸ್ಟ್ ಇಂಡೀಸ್ ವಿರುದ್ಧದ ಟೆಸ್ಟ್ ಸರಣಿಯ ಭಾಗವಾಗಿದ್ದರು.

ಟೆಸ್ಟ್ ಪಂದ್ಯ ಆಡುವುದು ಖಚಿತ

# ಟೀಂ ಇಂಡಿಯಾವನ್ನು ಅವರ ನೆಲದಲ್ಲೇ ಮಣಿಸುತ್ತೇವೆ: ಕೇಶವ್

ಆರು ವರ್ಷಗಳ ಕಾಯುವಿಕೆಯ ನಂತರ ಕೋಲ್ಕತ್ತಾದ ಈಡನ್ ಗಾರ್ಡನ್ಸ್ ಕ್ರೀಡಾಂಗಣಕ್ಕೆ ಟೆಸ್ಟ್ ಕ್ರಿಕೆಟ್ ಮರಳುತ್ತಿದೆ. ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ಟೆಸ್ಟ್ ಸರಣಿಯು ನವೆಂಬರ್ 14, ಶುಕ್ರವಾರ ಈ ಐತಿಹಾಸಿಕ ಮೈದಾನದಲ್ಲಿ ಪ್ರಾರಂಭವಾಗಲಿದೆ. ಅಲ್ಲದೆ ಭಾರತ ಮತ್ತು ದಕ್ಷಿಣ ಆಫ್ರಿಕಾ 15 ವರ್ಷಗಳ ನಂತರ ಈಡನ್ ಗಾರ್ಡನ್ಸ್‌ನಲ್ಲಿ ಮುಖಾಮುಖಿಯಾಗಲಿವೆ. ಆ ಪಂದ್ಯದಲ್ಲಿ ಟೀಂ ಇಂಡಿಯಾ ಸುಲಭ ಜಯ ಸಾಧಿಸಿತ್ತು. ಆದರೆ ಈ ಬಾರಿ ಅದು ಅಷ್ಟು ಸುಲಭವಲ್ಲ ಎಂದು ತೋರುತ್ತಿದೆ. ಇದಕ್ಕೆ ಕಾರಣ ಸರಣಿ ಆರಂಭಕ್ಕೂ ಮುನ್ನವೇ ಭಾರತ ಮೂಲದ ದಕ್ಷಿಣ ಆಫ್ರಿಕಾ ಕ್ರಿಕೆಟ್ ತಂಡದಲ್ಲಿರುವ ಸ್ಪಿನ್ನರ್ ಕೇಶವ್ ಮಹಾರಾಜ್ ನೀಡಿರುವ ಹೇಳಿಕೆ.

**ಭಾರತವನ್ನು ಸೋಲಿಸಲು ಎದುರು ನೋಡುತ್ತಿದೆ:** ವಾಸ್ತವವಾಗಿ ದಕ್ಷಿಣ ಆಫ್ರಿಕಾ ತಂಡವು 15 ವರ್ಷಗಳಿಂದ ಭಾರತದಲ್ಲಿ ಟೆಸ್ಟ್ ಪಂದ್ಯವನ್ನು ಗೆದ್ದಿಲ್ಲ. ಹೀಗಾಗಿ ಈ ಪ್ರವಾಸವನ್ನು ಗೆಲುವಿನೊಂದಿಗೆ ಆರಂಭಿಸಬೇಕೆಂಬ ಇರಾದೆಯಲ್ಲಿರುವ ದಕ್ಷಿಣ ಆಫ್ರಿಕಾ ತಂಡಕ್ಕೆ ತಂಡದ ಪ್ರಮುಖ ಸ್ಪಿನ್ನರ್ ಕೇಶವ್ ಮಹಾರಾಜ್ ಹೇಳಿಕೆ ಮತ್ತಷ್ಟು ಬಲ ತುಂಬಿದೆ. ಈ ಸರಣಿಗ ಬಗ್ಗೆ ಮಾತನಾಡಿರುವ ಮಹಾರಾಜ್, ನಮ್ಮ ತಂಡವು ಭಾರತದಲ್ಲಿ ಭಾರತವನ್ನು ಸೋಲಿಸಲು ನಿಜವಾಗಿಯೂ ಎದುರು ನೋಡುತ್ತಿದೆ. ಬಹುಶ ಅತ್ಯಂತ ಕಠಿಣ ಪ್ರವಾಸಗಳಲ್ಲಿ ಒಂದಾಗಿದೆ. ಇದು ನಮ್ಮ ಅತಿದೊಡ್ಡ ಟೆಸ್ಟ್ ಸರಣಿಗಳಲ್ಲಿ ಒಂದಾಗಿದೆ ಎಂದು ನಾವು ಭಾವಿಸುತ್ತೇವೆ. ನಮ್ಮನ್ನು ನಾವು ನಿರ್ಣಯಿಸಿಕೊಳ್ಳಲು ಇದು ಉತ್ತಮ ಅವಕಾಶವಾಗಿರುತ್ತದೆ. ನಾವು ಎಲ್ಲಿದ್ದೇವೆ ಎಂಬುದನ್ನು ಕಂಡುಹಿಡಿಯಲು ಇದು ನಮಗೆ ಅವಕಾಶವನ್ನು ನೀಡುತ್ತದೆ. ನಾವು ಉಪಖಂಡದ ಇತರ ಭಾಗಗಳಲ್ಲಿ ಗೆಲ್ಲಲು ಪ್ರಾರಂಭಿಸಿದ್ದೇವೆ, ನಮ್ಮ ತಂಡದಲ್ಲಿ ಭಾರತದಲ್ಲಿ ನಿಜವಾಗಿಯೂ ಗೆಲ್ಲಬೇಕೆಂಬ ಬಲವಾದ ಹಸಿವು ಮತ್ತು ಬಯಕೆ ಇದೆ. ನಾವು ಪಾಕಿಸ್ತಾನದಲ್ಲಿ ನೋಡಿದಂತೆ ಇಲ್ಲಿನ ಪರಿಸ್ಥಿತಿಗಳು ಸ್ಪಿನ್ನರ್‌ಗಳಿಗೆ ಅನುಕೂಲಕರವಾಗಿರುತ್ತವೆ ಎಂದು ನಾನು ಭಾವಿಸುವುದಿಲ್ಲ. ವಿಕೆಟ್‌ಗಳು ಉತ್ತಮವಾಗಿರುತ್ತವೆ ಮತ್ತು ಆಟ ಮುಂದುವರೆದಂತೆ ಸ್ಪಿನ್ ಬೌಲರ್‌ಗಳಿಗೆ ಸಹಾಯ ಮಾಡುತ್ತದೆ ಎಂದು ನಾನು ಭಾವಿಸುತ್ತೇನೆ.




# ತ್ರಿಕೋನ ಸರಣಿಗೆ ಭಾರತದ 2 ತಂಡಗಳು ಪ್ರಕಟ ಅನ್ವಯ್ ದ್ರಾವಿಡ್‌ಗೆ ಅವಕಾಶ



ಭಾರತದ ಹಿರಿಯ ಕ್ರಿಕೆಟ್ ತಂಡವು ನವೆಂಬರ್ 14 ರಿಂದ ದಕ್ಷಿಣ ಆಫ್ರಿಕಾ ವಿರುದ್ಧ ಎರಡು ಪಂದ್ಯಗಳ ಟೆಸ್ಟ್ ಸರಣಿಯನ್ನು ಆಡಲಿದೆ. ಎಸಿಸಿ ಪುರುಷರ ಏಷ್ಯಾ ಕಪ್ ರೈಸಿಂಗ್ ಸ್ಟಾರ್ಸ್ ಲೀಗ್ ಕೂಡ ಕತಾರ್‌ನ ದೋಹಾದಲ್ಲಿ ಪ್ರಾರಂಭವಾಗಲಿದೆ. ಇದೆಲ್ಲದರ ನಡುವೆ, ಇನ್ನೂ ಎರಡು ಭಾರತೀಯ ತಂಡಗಳು ಮೈದಾನದಲ್ಲಿ ಕಾಣಿಸಿಕೊಳ್ಳಲಿವೆ. ವಾಸ್ತವವಾಗಿ ಅಫ್ಘಾನಿಸ್ತಾನ ಅಂಡರ್ -19 ಕ್ರಿಕೆಟ್ ತಂಡವು ಭಾರತ ಪ್ರವಾಸ ಕೈಗೊಳ್ಳಲಿದೆ. ಈ ಅವಧಿಯಲ್ಲಿ ತ್ರಿಕೋನ ಸರಣಿ ನಡೆಯಲಿದೆ. ಈ ಸರಣಿಯಲ್ಲಿ ಅಫ್ಘಾನಿಸ್ತಾನ ಅಂಡರ್ -19, ಭಾರತ ಅಂಡರ್ -19 ಎ ಮತ್ತು ಬಿ ತಂಡಗಳು ಭಾಗವಹಿಸಲಿವೆ. ಇದಕ್ಕಾಗಿ ಬಿಸಿಸಿಐನ ಜೂನಿಯರ್ ಆಯ್ಕೆ ಸಮಿತಿ ಎರಡು ಪ್ರತ್ಯೇಕ ತಂಡಗಳನ್ನು ಪ್ರಕಟಿಸಿದೆ. ಈ ತ್ರಿಕೋನ ಸರಣಿಯು ನ. 17 ರಂದು ಪ್ರಾರಂಭವಾಗಲಿದೆ. ಸರಣಿಯ ಸ್ವರೂಪವು ಡಬಲ್ ರೌಂಡ್-ರಾಬಿನ್ ಸ್ವರೂಪವಾಗಿರುತ್ತದೆ, ಅಂದರೆ ಪ್ರತಿ ತಂಡವು ನಾಲ್ಕು ಪಂದ್ಯಗಳನ್ನು ಆಡುತ್ತದೆ. ನಂತರ ಅಗ್ರ ಎರಡು ತಂಡಗಳು ಫೈನಲ್‌ನಲ್ಲಿ ಆಡುತ್ತವೆ.

# ಒಂದೇ ಒಂದು ಪಂದ್ಯವನ್ನಾಡದೆ ಬಾಬರ್ ಆಝಂ ಹಿಂದಿಕ್ಕಿದ ಕೊಹ್ಲಿ

ಐಸಿಸಿ ಹೊಸ ಏಕದಿನ ಬ್ಯಾಟಿಂಗ್ ಶ್ರೇಯಾಂಕವನ್ನು ಬಿಡುಗಡೆ ಮಾಡಿದ್ದು, ಈ ಪಟ್ಟಿಯಲ್ಲಿ ಕೆಲವೊಂದು ಅಚ್ಚರಿಯ ಬದಲಾವಣೆಗಳು ಕಂಡುಬಂದಿವೆ. ಭಾರತದ ಮಾಜಿ ನಾಯಕ ರೋಹಿತ್ ಶರ್ಮಾ 781 ಅಂಕಗಳೊಂದಿಗೆ ನಂಬರ್ ಒನ್ ಸ್ಥಾನದಲ್ಲಿ ಮುಂದುವರೆದಿದ್ದಾರೆ. ಆದಾಗ್ಯೂ, ಪಾಕಿಸ್ತಾನದ ಅನುಭವಿ ಬ್ಯಾಟರ್ ಬಾಬರ್ ಆಝಂ ತಮ್ಮ ಕಳಪೆ ಫಾರ್ಮ್‌ನಿಂದಾಗಿ ಹಿಂಬಡ್ತಿ ಪಡೆದಿದ್ದು, ಇತ್ತ ಒಂದೇ ಒಂದು ಪಂದ್ಯವನ್ನು ಆಡದ ವಿರಾಟ್ ಕೊಹ್ಲಿ ಮುಂಬಡ್ತಿ ಪಡೆದಿದ್ದಾರೆ. ಇತ್ತೀಚಿನ ಏಕದಿನ ಶ್ರೇಯಾಂಕದಲ್ಲಿ, ರೋಹಿತ್ ನಂತರ, ಅಫ್ಘಾನಿಸ್ತಾನದ ಇಬ್ರಾಹಿಂ ಜದ್ರಾನ್ 764 ಅಂಕಗಳೊಂದಿಗೆ ಎರಡನೇ ಸ್ಥಾನದಲ್ಲಿದ್ದಾರೆ. ನ್ಯೂಜಿಲೆಂಡ್‌ನ ಡ್ಯಾರಿಲ್ ಮಿಚೆಲ್ 746 ಅಂಕಗಳೊಂದಿಗೆ ಮೂರನೇ ಸ್ಥಾನದಲ್ಲಿದ್ದಾರೆ. ಭಾರತ ಏಕದಿನ ತಂಡದ ಹಾಲಿ ನಾಯಕ ಶುಭ್‌ಮನ್ ಗಿಲ್ 745 ಅಂಕಗಳೊಂದಿಗೆ ನಾಲ್ಕನೇ ಸ್ಥಾನದಲ್ಲಿದ್ದಾರೆ. ಏತನ್ಮಧ್ಯೆ, ವಿರಾಟ್ ಕೊಹ್ಲಿ ಈಗ 725 ಅಂಕಗಳೊಂದಿಗೆ ಐದನೇ ಸ್ಥಾನವನ್ನು ತಲುಪಿದ್ದಾರೆ. ಗಮನಾರ್ಹವಾಗಿ, ಆಸ್ಟ್ರೇಲಿಯಾ ವಿರುದ್ಧದ ಏಕದಿನ ಸರಣಿಯ ನಂತರ, ಅವರು ಯಾವುದೇ ಏಕದಿನ ಪಂದ್ಯಗಳನ್ನು ಆಡಿಲ್ಲ, ಅಥವಾ ಅವರ ಅಂಕಗಳು ಬದಲಾಗಿಲ್ಲ. ಆದರೂ ಹಿಂದಿನ ಶ್ರೇಯಾಂಕದಲ್ಲಿ ಆರನೇ ಸ್ಥಾನದಲ್ಲಿದ್ದ ಕೊಹ್ಲಿ ಇದೀಗ ಐದನೇ ಸ್ಥಾನವನ್ನು ತಲುಪಿದ್ದಾರೆ. ವಾಸ್ತವವಾಗಿ, ಕಳಪೆ ಫಾರ್ಮ್‌ನೊಂದಿಗೆ ಹೋರಾಡುತ್ತಿರುವ ಬಾಬರ್ ಆಝಂ ಏಕದಿನ ರ್‍ಯಾಂಕಿಂಗ್‌ನಲ್ಲಿ ಎರಡು ಸ್ಥಾನಗಳನ್ನು ಕುಸಿದಿದ್ದಾರೆ. 709 ರೇಟಿಂಗ್ ಪಾಯಿಂಟ್‌ಗಳನ್ನು ಹೊಂದಿರುವ ಬಾಬರ್ ಇದೀಗ ಐದನೇ ಸ್ಥಾನದಿಂದ ಏಳನೇ ಸ್ಥಾನಕ್ಕೆ ಕುಸಿದಿದ್ದಾರೆ. ಇದರರ್ಥ ವಿರಾಟ್ ಜೊತೆಗೆ, ಶ್ರೀಲಂಕಾದ ಚರಿತ್ ಅಸಲಂಕಾ ಕೂಡ ಒಂದು ಸ್ಥಾನ ಏರಿಕೆಯಾಗಿ ಏಳನೇ ಸ್ಥಾನದಿಂದ ಆರನೇ ಸ್ಥಾನಕ್ಕೆ ಏರಿದ್ದಾರೆ.

ಇನ್ನು ಬೌಲರ್‌ಗಳ ಏಕದಿನ ಶ್ರೇಯಾಂಕದಲ್ಲಿ, ರಶೀದ್ ಖಾನ್ ಮೊದಲ ಸ್ಥಾನದಲ್ಲಿದ್ದರೆ, ದಕ್ಷಿಣ ಆಫ್ರಿಕಾದ ಕೇಶವ್ ಮಹಾರಾಜ್ ಎರಡನೇ ಸ್ಥಾನದಲ್ಲಿದ್ದಾರೆ. ಏತನ್ಮಧ್ಯೆ, ಇಂಗ್ಲೆಂಡ್‌ನ ಸ್ಟಾರ್ ವೇಗಿ ಜೋಫ್ರಾ ಆರ್ಚರ್ ಎರಡು ಸ್ಥಾನಗಳನ್ನು ಏರಿ ಮೂರನೇ ಸ್ಥಾನಕ್ಕೆ ತಲುಪಿದ್ದಾರೆ. ಟೀಂ ಇಂಡಿಯಾದ ಗೂಗ್ಲಿ ಸ್ಪಿನ್ನರ್ ಕುಲ್ದೀಪ್ ಯಾದವ್ ಕೂಡ 7ನೇ ಸ್ಥಾನದಿಂದ ಆರನೇ ಸ್ಥಾನಕ್ಕೆ ಏರಿದ್ದಾರೆ. ಪ್ರಸ್ತುತ, ಕುಲ್ದೀಪ್ ಯಾದವ್ ಟಾಪ್ 10 ರಲ್ಲಿರುವ ಏಕೈಕ ಭಾರತೀಯ ಬೌಲರ್ ಆಗಿದ್ದಾರೆ. ಅವರ ನಂತರ ರವೀಂದ್ರ ಜಡೇಜಾ 13 ನೇ ಸ್ಥಾನದಲ್ಲಿ ಮತ್ತು ಮೊಹಮ್ಮದ್ ಸಿರಾಜ್ 16 ನೇ ಸ್ಥಾನದಲ್ಲಿದ್ದಾರೆ.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966